ಸಂಪುಟ: 04 ಸಂಚಿಕೆ: 258 ಪುಟಗಳು: 08 ಭಾನುವಾರ 01 ಡಿಸೆಂಬರ್ 2024
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833
₹5

**ಮುಂಜಾನೆ ಮಾತು**

ನಮಗೆ ಎರಡು ಕೈಗಳು ಇರುವುದು ಏಕೆಂದರೆ, ಒಂದು ಕೈ ನಮ್ಮನ್ನು ನಾವು ಕಾಪಾಡಿಕೊಳ್ಳಲು. ಇನ್ನೊಂದು ಕೈ ನಮ್ಮನ್ನು ನಂಬಿದವರನ್ನು ಕಾಪಾಡಲು..!

# ಉದಯ ವಾಹಿನಿ


ಸರ್ವ ಸಮಾನತೆಯ
ಕನ್ನಡ ದಿನಪತ್ರಿಕೆ

## ಧಾರ್ಮಿಕ ಸೌಧಕ್ಕೆ ಮುನ್ನುಡಿ ಹಿಂದೂ ಪರ ಕಾರ್ಯ

### 10 ಕೋಟಿ ರೂ. ವೆಚ್ಚದಲ್ಲಿ ಧಾರ್ಮಿಕ ಸೌಧ ನಿರ್ಮಾಣದ ನೀಲನಕ್ಷೆ ಸಿದ್ಧ

- ಧಾರ್ಮಿಕ ಸೌಧದ ನೀಲನಕ್ಷೆ ಕೋಟಿ ಕೋಟಿ ಹಿಂದೂಗಳ ದೇಣಿಗೆ ಹಣ ನಿರ್ವಹಣೆಗೆ ಧಾರ್ಮಿಕ ಸೌಧ ನಿರ್ಮಾಣ
- ಹಿಂದೂ ವಿರೋಧಿ ಎನಿಸಿಕೊಳ್ಳುವವರ ಹಿಂದೂ ಪರ ಕಾರ್ಯ
- ಸಚಿವ ರಾಮಲಿಂಗಾ ರೆಡ್ಡಿ ಇಚ್ಛಾಶಕ್ತಿಯಿಂದ ಆಸ್ತಿಕರ ಕನಸು ಸಾಕಾರ
- ಹೊಯ್ಸಳ ಶೈಲಿಯಲ್ಲಿ ಧಾರ್ಮಿಕ ಸೌಧ ನಿರ್ಮಾಣಕ್ಕೆ ಮುನ್ನುಡಿ





• ಉದಯವಾಹಿನಿ, ಬೆಂಗಳೂರು

ಎಂ.ಎಸ್. ಬಿಲ್ಡಿಂಗ್ ಎದುರುಗಡೆ ಇರುವ ಜಾಗದಲ್ಲಿ 10 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಲು ಉದ್ದೇಶಿಸಿರುವ ಹೊಯ್ಸಳ ಶೈಲಿಯ ಧಾರ್ಮಿಕ ಸೌಧದ ನೀಲನಕ್ಷೆ ಸಿದ್ಧವಾಗಿದೆ. ಎಂ.ಎಸ್. ಬಿಲ್ಡಿಂಗ್ ಎದುರುಗಡೆಯ ರಾಮಾಂಜನೇಯ ಸ್ವಾಮಿ ದೇವಸ್ಥಾನ ಹಿಂಭಾಗ ಇರುವ ಮುಜರಾಯಿ ಇಲಾಖೆಯ 26 ಗುಂಟೆ ಜಾಗದಲ್ಲಿ 6ಗುಂಟೆ ದೇವಸ್ಥಾನವಿದ್ದು, ಉಳಿದ 20 ಗುಂಟೆ ಜಾಗದಲ್ಲಿ ರಾಜ್ಯದ ಮುಜರಾಯಿ ಇಲಾಖೆ ಸ್ವಂತ ಕಟ್ಟಡ ನಿರ್ಮಾಣ ಮಾಡಲಿದೆ. ಹೊಯ್ಸಳ ಶೈಲಿಯಲ್ಲಿ ಧಾರ್ಮಿಕ ಸೌಧವನ್ನು ನಿರ್ಮಾಣ ಮಾಡಲಿದೆ. ನಾಲ್ಕು ಅಂತಸ್ತಿನ ಕಟ್ಟಡ ಇದಾಗಿರಲಿದೆ.

**ಕಟ್ಟಡದ ವಿಶೇಷವೇನು..?**

**26 ಗುಂಟೆ ಜಾಗದಲ್ಲಿ 6 ಗುಂಟೆ ಜಾಗವನ್ನು ದೇವಸ್ಥಾನದ ವ್ಯಾಪ್ತಿಗೆ ಮೀಸಲಿರಿಸಿ, ಉಳಿದ 20 ಗುಂಟೆ ಜಾಗದಲ್ಲಿ ಕಟ್ಟಡ ನಿರ್ಮಾಣ ಮಾಡಲಾಗುತ್ತದೆ. ಗೌಂಡ್ ಫ್ಲೋರ್ ಸೇರಿ ನಾಲ್ಕು ಅಂತಸ್ತುಗಳ ಕಟ್ಟಡ, ಮೀಟಿಂಗ್ ಹಾಲ್, ಸಭಾಭವನ ನಿರ್ಮಾಣ, ಆಯುಕ್ತರ ಕಾರ್ಯಾಲಯ, ನೆಲಮಹಡಿಯಲ್ಲಿ ಪಾರ್ಕಿಂಗ್ ವ್ಯವಸ್ಥೆ ನಿರ್ಮಾಣ ಮಾಡಲಾಗುತ್ತದೆ.**

ಮುಜರಾಯಿ ಸಚಿವ ರಾಮಲಿಂಗರೆಡ್ಡಿ ಅವರ ಅಧ್ಯಕ್ಷತೆಯಲ್ಲಿ ನಡೆದ ಧಾರ್ಮಿಕ ದತ್ತಿ ಇಲಾಖೆ ಪರಿಷತ್ ಸಭೆಯಲ್ಲಿ ಕಟ್ಟಡ ನಿರ್ಮಾಣ ಮಾಡಲು ನಿರ್ಧರಿಸಲಾಗಿತ್ತು. ಇದೀಗ ನೀಲನಕ್ಷೆ ಎಲ್ಲವೂ ಸಿದ್ಧವಾಗಿದ್ದು, ಅತಿ ಶೀಘ್ರದಲ್ಲೇ ಕಟ್ಟಡ ನಿರ್ಮಾಣ ಕಾರ್ಯ ಪ್ರಾರಂಭವಾಗಲಿದೆ ಎಂದು ಇಲಾಖೆ ಮಾಹಿತಿ ನೀಡಿದೆ. ಈಗಿರುವ ಧಾರ್ಮಿಕ ದತ್ತಿ ಇಲಾಖೆ ಕಚೇರಿ ಮಿಂಟೋ ಆಸ್ಪತ್ರೆ ಎದುರುಗಡೆ ಇದ್ದು, ಪ್ರತಿ ತಿಂಗಳು ಸುಮಾರು 11 ಲಕ್ಷ ಬಾಡಿಗೆ ನೀಡಲಾಗುತ್ತಿದೆ. ಸ್ವಾತಂತ್ರ್ಯ ನಂತರ ಇಲಾಖೆ ಪ್ರಾರಂಭವಾದದಿಂದ ಇಲ್ಲಿಯವರೆಗೂ ಯಾವುದೇ ಸ್ವಂತ ಕಟ್ಟಡ ಕಚೇರಿ ಇಲ್ಲ. ರಾಜ್ಯದಲ್ಲಿ, ಬೆಂಗಳೂರಿನಲ್ಲಿ ನೂರಾರು ಎಕರೆಗಳು ದೇವಸ್ಥಾನದ ಮುಜರಾಯಿ ಇಲಾ ಖೆಯ ಆಸ್ತಿಗಳಿದ್ದರೂ ಮುಜರಾಯಿ ಇಲಾಖೆಗೆ ಸ್ವಂತ ಕಟ್ಟಡ ಇಲ್ಲ. ಹೀಗಾಗಿ ಸ್ವಂತ ಕಟ್ಟಡ ನಿರ್ಮಾಣಕ್ಕೆ ತೀರ್ಮಾನಿಸಲಾಗಿದೆ. ಪಕ್ಕದಲ್ಲಿರುವ ರಾಮಾಂಜನೇಯ ದೇವಸ್ಥಾನದಲ್ಲಿ ಕಾರ್ಯನಿರ್ವಹಿಸು ತ್ತಿರುವ ಇಬ್ಬರು ಅರ್ಚಕರಿಗೆ ಎರಡು ಡಬಲ್ ಬೆಡ್‌ರೂಮ್ ಮನೆಗಳನ್ನು ನಿರ್ಮಾಣ ಮಾಡಿಕೊಡಲಾಗುವುದು.

ದೇವಸ್ಥಾನದ ಖರ್ಚುಗಳು ಹಾಗೂ ದೇವಸ್ಥಾನ ಮುಂದೆ ಇರುವ ಯೋಗ ಶಾಲೆ, ಪಾಕಶಾಲೆಯನ್ನು ನವೀಕರಣ ಮಾಡಲಾಗುವುದು. ದೇವಸ್ಥಾನದ ಖರ್ಚು ವೆಚ್ಚವನ್ನು ಮುಜರಾಯಿ ಇಲಾಖೆ ಭರಿಸಲಿದೆ ಎಂದು ಮಾಹಿತಿ ನೀಡಿದೆ.

**ಮುಜರಾಯಿ ಇಲಾಖೆಗೆ ಸ್ವಂತ ಕಟ್ಟಡ ಇಲ್ಲ**

**ಧಾರ್ಮಿಕ ಭವನದ ಲೇಔಟ್**

ಧಾರ್ಮಿಕ ಭವನದ ಮೊದಲ ಮಹಡಿಯಲ್ಲಿ ಕೋರ್ಟ್ ಹಾಲ್, ಆಯುಕ್ತರ ಕಚೇರಿ, ಸರ್ವೆ ಇಲಾಖೆ, ಹೆಚ್.ಕ್ಯು ಮತ್ತು ಕ್ಯೂಎ ಕಚೇರಿಗಳು ಇರುತ್ತವೆ. ಆಗಮ ಸೆಕ್ಷನ್ ಆಫೀಸರ್, ಐಟಿ ವಿಭಾಗ, ಇಂಜಿನಿಯರಿಂಗ್ ವಿಭಾಗ, ಮೀಟಿಂಗ್ ಹಾಲ್, ಎಚ್ ಕ್ಯೂ ಒಂದು ಚೇಂಬರ್,ಕ್ಯೂಐ 1ಎರಡನೇ ಮಹಡಿಯಲ್ಲಿ ಇರುತ್ತದೆ. ಮೂರನೇ ಮಹಡಿಯಲ್ಲಿ ತೆರೆದ ಕಚೇರಿ ಸಭಾಂಗಣ, ಸುಪರ್ಡಿಯಂಟ್ 1-5 ಕಚೇರಿಗಳು, ಡಿಜಿಟಲ್ ಲೈಬ್ರರಿ, ಆರ್‌ಡಿಪಿಆರ್, ದಾಖಲೆಗಳು ಇರುತ್ತವೆ. ನಾಲ್ಕನೇ ಮಹಡಿಯಲ್ಲಿ ಸಭಾಂಗಣವಿರುತ್ತದೆ. ನೆಲ ಮಹಡಿಯಲ್ಲಿ ಪಾರ್ಕಿಂಗ್ ವ್ಯವಸ್ಥೆ ಇರುತ್ತದೆ. ಪಕ್ಕದ ರಾಮಾಂಜನೇಯ ದೇವಸ್ಥಾನದಲ್ಲಿ ಕಾರ್ಯನಿರ್ವಹಿಸುತ್ತಿರುವ ಇಬ್ಬರು ಅರ್ಚಕರಿಗೆ ಎರಡು ಡಬಲ್ ಬೆಡ್ ರೂಂ ಮನೆಗಳನ್ನು ನಿರ್ಮಿಸಿಕೊಡಲಾಗುವುದು. ದೇವಸ್ಥಾನದ ಖರ್ಚು ವೆಚ್ಚ ಹಾಗೂ ದೇವಸ್ಥಾನದ ಮುಂಭಾಗದಲ್ಲಿರುವ ಯಾಗಶಾಲೆ, ಪಾಕಶಾಲೆ ಜೀರ್ಣೋದ್ಧಾರ ಮಾಡಲಾಗುವುದು. ದೇವಸ್ಥಾನದ ವೆಚ್ಚವನ್ನು ಮುಜರಾಯಿ ಇಲಾಖೆ ಭರಿಸಲಿದೆ ಎಂದು ತಿಳಿಸಲಾಗಿದೆ.

**ಧಾರ್ಮಿಕ ಸೌಧ ರೂಪುರೇಷೆ**

ಧಾರ್ಮಿಕ ಸೌಧದ ಮೊದಲನೆಯ ಮಹಡಿಯಲ್ಲಿ ಕೋರ್ಟ್ ಹಾಲ್, ಕಮಿಷನರ್ ಕಚೇರಿ, ಸರ್ವೆ ಇಲಾಖೆ , ಹೆಚ್‌ಕ್ಯೂ ಮತ್ತು QA ಕಚೇರಿಗಳು ಇರಲಿವೆ. ಎರಡನೇ ಮಹಡಿಯಲ್ಲಿ ಆಗಮ ಸೆಕ್ಷನ್ ಆಫೀಸರ್, ಐಟಿ ಸೆಕ್ಷನ್, ಇಂಜಿನಿಯರಿಂಗ್ ಸೆಕ್ಷನ್, ಮೀಟಿಂಗ್ ಹಾಲ್, ಹೆಚ್‌ಕ್ಯೂ ಒನ್ ಚೇಂಬರ್, QA1 ಇರಲಿದೆ. ಮೂರನೇ ಮಹಡಿಯಲ್ಲಿ ಓಪನ್ ಆಫೀಸ್ ಹಾಲ್, SUPERDIENT 1-5 ಕಚೇರಿಗಳು, ಡಿಜಿಟಲ್ ಲೈಬ್ರರಿ, ಆರ್‌ಡಿಪಿಆರ್, ರೆಕಾರ್ಡ್ಸ್ ಇರಲಿವೆ. ನಾಲ್ಕನೆಯ ಮಹಡಿಯಲ್ಲಿ ಆಡಿಟೋರಿಯಂ ಇರಲಿದೆ. ನೆಲಮಹಡಿಯಲ್ಲಿ ಪಾರ್ಕಿಂಗ್ ವ್ಯವಸ್ಥೆ ಇರಲಿದೆ.

- ಮುಜರಾಯಿ ಇಲಾಖೆಯ ಧಾರ್ಮಿಕ ಸೌಧವು ನಾಲ್ಕು ಅಂತಸ್ತಿನ ಕಟ್ಟಡವಾಗಿದ್ದು ನೆಲಮಹಡಿಯಲ್ಲಿ ಪಾರ್ಕಿಂಗ್ ವ್ಯವಸ್ಥೆ ಮಾಡಲಾಗುತ್ತದೆ.
- ಮೊದಲನೆಯ ಮಹಡಿಯಲ್ಲಿ ಕೋರ್ಟ್ ಹಾಲ್, ಆಯುಕ್ತರ ಕಚೇರಿ, ಮುಜರಾಯಿ ಇಲಾಖೆಯ ಸರ್ವೆ ವಿಭಾಗ, ಹಿರಿಯ ಅಧಿಕಾರಿಗಳ ಕಚೇರಿಗಳ ನಿರ್ವಹಣೆಗೆ ಕೋಣೆಗಳನ್ನು ನಿರ್ಮಿಸಲಾಗುತ್ತದೆ.
- ಎರಡನೆಯ ಮಹಡಿಯಲ್ಲಿ ಆಗಮ ಸೆಕ್ಷನ್ ಆಫೀಸರ್, ಐಟಿ ಸೆಕ್ಷನ್, ಇಂಜಿನಿಯರಿಂಗ್ ಸೆಕ್ಷನ್, ಮೀಟಿಂಗ್ ಹಾಲ್ ಹಾಗೂ ಎಚ್ ಕ್ಯೂ ಒನ್ ಚೇಂಬರ್ ನಿರ್ಮಾಣ ಮಾಡಲಾಗುತ್ತದೆ.

## ಹನುಮಮಾಲೆ ಧರಿಸಲಿರುವ ವಿಜಯೇಂದ್ರ

• ಉದಯವಾಹಿನಿ, ಕೊಪ್ಪಳ

ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರು ಡಿ. 12ರಂದು ಹನುಮಮಾಲೆ ಧರಿಸಿ ಜಿಲ್ಲೆಯ ಗಂಗಾವತಿ ತಾಲ್ಲೂಕಿನ ಅಂಜನಾದ್ರಿಯಲ್ಲಿ ನಡೆಯುವ ಹನುಮಮಾಲೆ ವಿಸರ್ಜನೆ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ ಅಂದು ಪಂಪಾ ಸರೋವರದಲ್ಲಿ ಅವರು ಮಾಲೆ ಧರಿಸುವರು. ಈ ಕುರಿತು ಶನಿವಾರ ಪತ್ರಿಕಾಗೋಷ್ಠಿಯಲ್ಲಿ ಮಾಹಿತಿ ನೀಡಿದ ಶಾಸಕ ಜನಾರ್ದನ ರೆಡ್ಡಿ 'ವಿಜಯೇಂದ್ರ ಕಳೆದ ವರ್ಷವೇ ಮಾಲೆ ಧರಿಸಬೇಕಿತ್ತು. ಆಗ ಸಾಧ್ಯವಾಗಿರಲಿಲ್ಲ ಈಗ ರಾಜ್ಯಾಧ್ಯಕ್ಷರ ಜೊತೆಗೆ ಪಕ್ಷದ ಯುವ ಘಟಕದ ಎಲ್ಲಾ ಜಿಲ್ಲೆಗಳ ಪ್ರಮುಖರು ಮಾಲೆ ಧರಿಸಿ ಅಂಜನಾದ್ರಿಗೆ ಬರಲಿದ್ದಾರೆ ಎಂದು ತಿಳಿಸಿದರು.

ಪ್ರತಿವರ್ಷ ಹನುಮಮಾಲೆ ವಿಸರ್ಜನೆ ದಿನ ಒಪ್ಪೊತ್ತು ಮಾತ್ರ ಊಟ ನೀಡಲಾಗುತ್ತಿತ್ತು. ಈ ಬಾರಿ ಡಿ. 11ರಿಂದ 13ರ ತನಕ ಮೂರೂ ಹೊತ್ತು ಪ್ರಸಾದದ ವ್ಯವಸ್ಥೆ ಮಾಡಲಾಗಿದೆ. ಗಂಗಾವತಿಯಿಂದ ಅಂಜನಾದ್ರಿಗೆ 6 ತೆರಳುವ ಮಾರ್ಗದಲ್ಲಿ ರಸ್ತೆ ಅಭಿವೃದ್ಧಿ ಪಡಿಸಲಾಗುತ್ತಿದೆ' ಎಂದು ಹೇಳಿದರು. ಅಂಜನಾದ್ರಿ ಅಭಿವೃದ್ಧಿಗೆ ಬಿಜೆಪಿ ಸರ್ಕಾರ ಮೊದಲು 100 ಕೋಟಿ ಘೋಷಿಸಿತ್ತು. ನಂತರ ಅಧಿಕಾರಕ್ಕೆ ಬಂದ ಕಾಂಗ್ರೆಸ್ 100 ಕೋಟಿ ಮತ್ತು ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿಯಿಂದ 40 ಕೋಟಿ ಹೀಗೆ ಒಟ್ಟು 240 ಕೋಟಿ ಅನುದಾನವಿದೆ. ಸರ್ಕಾರ ಹಾಗೂ ಖಾಸಗಿ ಸಹಭಾಗಿತ್ವದಲ್ಲಿ ಅಂಜನಾದ್ರಿ ಕ್ಷೇತ್ರ ಅಭಿವೃದ್ಧಿ ಮಾಡಲಾಗುವುದು ಎಂದರು.

## ಒಂದು ತಿಂಗಳ ಮೊದಲೇ ರಿಪೋರ್ಟ್ ಕಾರ್ಡ್ ಸಲ್ಲಿಸಿದ ಬೋಸರಾಜು

• ಉದಯವಾಹಿನಿ, ಮಡಿಕೇರಿ

ಸಂಪುಟ ಪುನಾರಚನೆ ಕುರಿತು ಚರ್ಚೆಗಳು ನಡೆಯುತ್ತಿರುವ ಹೊತ್ತಿನಲ್ಲೇ ಸಚಿವ ಸ್ಥಾನ ಉಳಿಸಿಕೊಳ್ಳಲು ಎನ್.ಎಸ್ ಬೋಸರಾಜು ಮುಂದಾಗಿದ್ದಾರೆ. ರಾಜ್ಯದಲ್ಲಿ ಸಚಿವರ ಕಾರ್ಯವೈಖರಿಯ ಬಗ್ಗೆ ಹೈಕಮಾಂಡ್ ರಿಪೋರ್ಟ್ ಕಾರ್ಡ್ ಕೇಳಿದ ಹಿನ್ನೆಲೆ ಒಂದು ತಿಂಗಳಿಗೂ ಮೊದಲೇ ಸಲ್ಲಿಸಿದ್ದಾರೆ. ಈ ಕುರಿತು ಮಾತನಾಡಿರುವ ಸಚಿವರು, ನನ್ನ ಕೆಲಸದ ಬಗ್ಗೆ ಹೈಕಮಾಂಡ್‌ಗೆ ರಿಪೋರ್ಟ್ ಕಾರ್ಡ್ ಸಲ್ಲಿಸಿದೇನೆ. ನನ್ನ ಇಲಾಖೆ ವ್ಯಾಪ್ತಿಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನದ ಕೆಲಸ, ಪಕ್ಷ ಸಂಘಟನೆ ಹಾಗೂ ಜಿಲ್ಲಾವಾರು ಭೇಟಿ ಸೇರಿದಂತೆ ಹಲವಾರು ಪ್ರಶ್ನೆಗಳನ್ನು ಹೈಕಮಾಂಡ್ ಕೇಳಿತ್ತು. ಸಮಗ್ರವಾಗಿ ಉತ್ತರಿಸಿ ಕಾರ್ಡ್ ಕಳಿಸಿದ್ದೇನೆ. ಇಡೀ ರಾಜ್ಯದಲ್ಲಿ ನೀವೆ ಮೊದಲು ಕಳುಹಿಸಿದ್ದು, ಅಂತ ಹೈಕಮಾಂಡ್ ಹೇಳಿದೆ ಎಂದು ತಿಳಿಸಿದ್ದಾರೆ.

ನನ್ನಂತೆ ಎಲ್ಲಾ ಸಚಿವರ ರಿಪೋರ್ಟ್ ಕಾರ್ಡನ್ನು ಹೈಕಮಾಂಡ್ ಕೇಳಿದೆ. ಮುಂದೆ ಹೈಕಮಾಂಡ್ ನಿರ್ಧಾರಕ್ಕೆ ಅನುಗುಣವಾಗಿ ಸಚಿವ ಸಂಪುಟ ವಿಸ್ತರಣೆಯಾಗುತ್ತೆ. ಪಕ್ಷದ ವರಿಷ್ಠರ ನಿರ್ಧಾರಕ್ಕೆ ಬದ್ಧವಾಗಿ ನಾವು ನಡೆದುಕೊಳ್ಳುತ್ತೇವೆ ಎಂದು ಹೇಳಿದ್ದಾರೆ.

## ಮುಸ್ಲಿಮರಿಗೆ ಮತದಾನದ ಹಕ್ಕಿಲ್ಲದಂತೆ ಮಾಡ್ಬೇಕು ಅಂದಿದ್ದ ಸ್ವಾಮೀಜಿಗೆ ನೋಟಿಸ್

• ಉದಯವಾಹಿನಿ, ಬೆಂಗಳೂರು

ಮುಸ್ಲಿಮರಿಗೆ ಮತದಾನದ ಹಕ್ಕು ಇಲ್ಲದಂತೆ ಮಾಡಬೇಕು ಎಂದು ಕರೆ ನೀಡಿದ್ದ ಪ್ರಕರಣಕ್ಕೆ ಸಂಬಂಧಿಸಿದಂತೆ ವಿಶ್ವ ಒಕ್ಕಲಿಗರ ಮಹಾಸಂಸ್ಥಾನ ಮಠದ ಚಂದ್ರಶೇಖರ ಸ್ವಾಮೀಜಿಗೆ ಉಪ್ಪಾರಪೇಟೆ ಪೊಲೀಸರಿಂದ ನೊಟೀಸ್ ಹೊರಡಿಸಿದ್ದಾರೆ. ಡಿಸೆಂಬರ್ 2 ರಂದು ಬೆಳಗ್ಗೆ 11 ಗಂಟೆಗೆ ಪೊಲೀಸ್ ಠಾಣೆಯಲ್ಲಿ ವಿಚಾರಣೆಗೆ ಹಾಜರಾಗುವಂತೆ ನೊಟೀಸ್ ಜಾರಿಗೊಳಿಸಿದ್ದಾರೆ.

ಸೈಯ್ಯದ್ ಅಬ್ಬಾಸ್ ಎಂಬವರು ಸ್ವಾಮೀಜಿ ಹೇಳಿಕೆಯನ್ನು ಖಂಡಿಸಿ ದೂರು ನೀಡಿದ್ದರು. ದೂರಿನ ಆಧಾರದ ಮೇಲೆ ಬಿಎನ್‌ಎಸ್ ಸೆಕ್ಷನ್ 299 (ಯಾವುದೇ ಧರ್ಮವನ್ನು ಅಪಮಾನಗೊಳಿಸಿ ಅವರ ಧಾರ್ಮಿಕ ಭಾವನೆಗಳಿಗೆ ಆಘಾತ ಉಂಟುಮಾಡುವ ಉದ್ದೇಶದಿಂದ ಬುದ್ಧಿಪೂರ್ವಕವಾಗಿ ಮತ್ತು ದ್ವೇಷ ಭಾವನೆಯಿಂದ ಮಾಡಿದ ಕೃತ್ಯ) ಅಡಿ ಉಪ್ಪಾರಪೇಟೆ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿತ್ತು.

## ನಕ್ಸಲೈಟನ್ನು ಬೇರು ಸಮೇತ ಕಿತ್ತುಹಾಕಬೇಕು: ಲಕ್ಷ್ಮೀ ಹೆಬ್ಬಾಳ್ಕರ್

• ಉದಯವಾಹಿನಿ, ಉಡುಪಿ

ನಕ್ಸಲೈಟನ್ನು ಬೇರು ಸಮೇತ ಕಿತ್ತುಹಾಕಬೇಕು. ಇದು ರಾಜ್ಯ ಸರ್ಕಾರ, ಕೇಂದ್ರ ಸರ್ಕಾರದ ನಿಲುವು. ಎನ್ ಕೌಂಟರ್ ಬಗ್ಗೆ ಪರ ವಿರೋಧ ಚರ್ಚೆ ಎಲ್ಲಾ ಸಂದರ್ಭದಲ್ಲಿ ಇರುತ್ತದೆ ಎಂದು ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಹೇಳಿದ್ದಾರೆ. ಉಡುಪಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಕ್ಸಲ್ ವಿಕ್ರಂಗೌಡ ಎನ್‌ಕೌಂಟರ್ ಪ್ರಕರಣಕ್ಕೆ ಸಂಬಂಧಿಸಿದಂತೆ ಪ್ರತಿಕ್ರಿಯೆ ನೀಡಿದ್ದಾರೆ. ಕಾನೂನು ಪ್ರಕಾರ ಕಾನೂನು ಚೌಕಟ್ಟಿನಲ್ಲಿ ಪೊಲೀಸರು ಕ್ರಮ ಕೈಗೊಂಡಿದ್ದಾರೆ. ನಕ್ಸಲೈಟ್‌ಗಳನ್ನು ಕಟ್ಟಿ ಹಾಕಬೇಕು. ಇದು ಸರ್ಕಾರದ ನಿರ್ಧಾರ. ಕೂಂಬಿಂಗ್ ಮಾಡುವ ಸಂದರ್ಭದಲ್ಲಿ ಈ ಘಟನೆ ನಡೆದಿದೆ ಎಂದು ತಿಳಿಸಿದರು. ವಿಕ್ರಂಗೌಡ ಬಳಿ ಕೂಡ ಶಸ್ತ್ರಾಸ್ತ್ರಗಳು ಇತ್ತು. ವಿಕ್ರಂ ಗೌಡ ಒಂದು ಬಾರಿ ಫೈರಿಂಗ್ ಮಾಡಿದ್ದಾರೆ. ಪ್ರತಿ ದಾಳಿ ಮಾಡದಿದ್ದರೆ ಪೊಲೀಸರ ಪ್ರಾಣಹಾನಿ ಆಗುತ್ತಿತ್ತು. ಸರ್ಕಾರ ಕಾನೂನು ಚೌಕಟ್ಟಿನಲ್ಲಿ ಕೆಲಸ ಮಾಡಿದೆ. ಸಂಶಯ ಇದ್ದವರಿಗೆ ಮತ್ತೆ ಸ್ಪಷ್ಟನೆ ಕೊಡಲು ನಾವು ತಯಾರಿದ್ದೇವೆ. ನ್ಯಾಯಾಂಗ ತನಿಖೆಗೆ ಒತ್ತಾಯ ಕೇಳಿಬರುತ್ತಿದೆ. ನ್ಯಾಯಾಂಗ ತನಿಖೆಗೆ ಕೊಡುವುದು ಸರ್ಕಾರದ ತೀರ್ಮಾನ. ಈ ಬಗ್ಗೆ ಮುಖ್ಯಮಂತ್ರಿಗಳು ಗೃಹ ಸಚಿವರ ಬಳಿ ಮಾತನಾಡುತ್ತೇನೆ ಎಂದರು.

## ಕಾಂಗ್ರೆಸ್‌ನಲ್ಲಿ ಒಬ್ಬ ವ್ಯಕ್ತಿಯ ಷಡ್ಯಂತ್ರದಿಂದ ಹೊರಬಂದೆ: ಶಾಸಕ

• ಉದಯವಾಹಿನಿ, ಬೆಳಗಾವಿ



ಕಾಂಗ್ರೆಸ್ ಪಕ್ಷದಲ್ಲಿದ್ದಾಗ ನನಗೆ ಪಕ್ಷ ಯಾವುದೇ ರೀತಿ ಕೆಟ್ಟದ್ದು ಮಾಡಿರಲಿಲ್ಲ. ಆದರೆ ಆ ಪಕ್ಷದಲ್ಲಿದ್ದಾಗ ಒಬ್ಬ ವ್ಯಕ್ತಿಯ ಷಡ್ಯಂತರದಿಂದ ನಾನು ಕಾಂಗ್ರೆಸ್‌ನಿಂದ ಹೊರ ಬಂದು ಬಿಜೆಪಿಗೆ ಸೇರಿದ್ದೇನೆ.

ಆದರೆ ಬಿಜೆಪಿಯಲ್ಲಿ ಇದ್ದಾಗಲೂ ನನ್ನ ಮೇಲೆ ಷಡ್ಯಂತರ ಮಾಡಿದ್ದರು ಎಂದು ಬಿಜೆಪಿ ಶಾಸಕ ರಮೇಶ್ ಜಾರಕಿಹೊಳಿ ತಿಳಿಸಿದರು.

ಬೆಳಗಾವಿ ಜಿಲ್ಲೆಯ ಗೋಕಾಕ್‌ನಲ್ಲಿ ಮಾತನಾಡಿದ ಅವರು, ಕಾಂಗ್ರೆಸ್‌ನಲ್ಲಿದ್ದಾಗ ಎಲ್ಲರೂ ಸೇರಿ ಷಡ್ಯಂತರ ಮಾಡಿದರಿಂದ ಕಾಂಗ್ರೆಸ್ ಪಕ್ಷದಿಂದ ಹೊರಬಂದೆ. ಬಳಿಕ ಬಿಜೆಪಿ ಸೇರಿಕೊಂಡೆ ಆದರೆ ಬಿಜೆಪಿಯಲ್ಲಿ ಬೆಳೆಯುತ್ತಿದ್ದಂತೆ ಇಲ್ಲೂ ಕೂಡ ಷಡ್ಯಂತರ ಮಾಡಿದರು. ಅದಕ್ಕೂ ನಾನು ಹೆದರಲಿಲ್ಲ ಎಂದು ಬೆಳಗಾವಿ ಜಿಲ್ಲೆಯ ಗೋಕಾಕ್ ನಲ್ಲಿ ಶಾಸಕ ರಮೇಶ್ ಜಾರಕಿಹೊಳಿ ಹೇಳಿದರು. ಜನರಿಗೆ ಮೋಸ ಮಾಡಿದ್ದರೆ ಹೆದರುತ್ತಿದ್ದ ಆದರೆ ಸಿಡಿಗೆ ಹೆದರಲ್ಲ ಎಂದಿದ್ದೆ. ನನಗೆ ಧೈರ್ಯ ಹೇಳಲು ಬಂದಿದ್ದ ಸ್ವಾಮೀಜಿಗಳಿಗೆ ನಾನು ಹೇಳಿದ್ದೆ. ನನ್ನ ವಿರುದ್ಧ ವೈಯಕ್ತಿಕ ಷಡ್ಯಂತರ ನಡೆದಿದೆ ಅಂತ ಹೇಳಿದ್ದ. ಒಡೆದು ಆಳುವ ನೀತಿಯಿಂದ ಹಿಂದುಳಿದ ಸಮುದಾಯಗಳಿಗೆ ಧಕ್ಕೆಯಾಗಿದೆ. ಕೊನೆಗಳಿಗೆಯಲ್ಲಿ ಹಿಂದುಳಿದ ಸಮುದಾಯ ಒಂದಾಗಿದೆ. ಎಸ್ಟಿ, ಕುರುಬರು, ಉಪ್ಪಾರ ಸೇರಿದಂತೆ ಹಿಂದುಳಿದ ಸಮಾಜ ಶೇಕಡ 74 ರಷ್ಟಿದೆ ಕೇವಲ 26 ಪರ್ಸೆಂಟ್ ಇರುವ ಜನರು ಜನ ನಮ್ಮನ್ನು ಒಡೆದು ಆಳುತ್ತಿದ್ದಾರೆ. 74% ಇರುವ ಹಿಂದುಳಿದ ಸಮುದಾಯಕ್ಕೆ ನ್ಯಾಯ ಸಿಗಬೇಕು ಇಲ್ಲವಾದರೆ ನಾನು ಬಂಡಾಯ ಏಳುತ್ತೇನೆ. ಈವರೆಗೂ ನಮಗೆ ಎಲ್ಲರೂ ಮೋಸ ಮಾಡಿದ್ದಾರೆ. ಕುರುಬರು ಉಪ್ಪಾರ ಸುಣಗಾರ ಸಮಾಜದವರು ಅಧಿಕಾರಕ್ಕೆ ಬರಬೇಕು. ಓಬಿಸಿ ಗಿಂತ ಎಸ್‌ಟಿಗೆ ಹೆಚ್ಚಿನ ಪ್ರಮಾಣ ಬರಬೇಕು ಅನ್ನೋದು ನನ್ನ ಬೇಡಿಕೆ.

ನನ್ನ ಜೊತೆ ನೀವು ಕೈಜೋಡಿಸಿ ಅಂತ ಸ್ವಾಮೀಜಿ ಅವರಿಗೆ ಕೇಳಿದ್ದೇನೆ. ನಾನೀಗ ಬಿಜೆಪಿಯಲ್ಲಿದ್ದೇನೆ ಅಂದು ಅನಿವಾರ್ಯವಾಗಿ ಬಿಜೆಪಿ ಹೋಗಿದ್ದೇನೆ. ಕಾಂಗ್ರೆಸ್ ನಲ್ಲಿ ಐದು ಬಾರಿ ಬಿಜೆಪಿಯಲ್ಲಿ ಎರಡು ಬಾರಿ ಶಾಸಕನಾಗಿದ್ದೇನೆ. ನನಗೆ ಕಾಂಗ್ರೆಸ್ ಪಕ್ಷ ಯಾವುದೇ ರೀತಿಯ ಕೆಟ್ಟದ್ದನ್ನು ಮಾಡಿರಲಿಲ್ಲ ಎಂದು ತಿಳಿಸಿದರು.

## ಯಾರು ಕಣ್ಣೀರು ಹಾಕಬಾರದು, ಸತ್ತಿಲ್ಲ ಸೋತಿದ್ದೇವೆ ಅಷ್ಟೇ

• ಉದಯವಾಹಿನಿ, ರಾಮನಗರ



ಯಾರು ಕಣ್ಣೀರು ಹಾಕಬಾರದು ನಾವು ಸತ್ತಿಲ್ಲ ಸೋತಿದ್ದೇವೆ ಅಷ್ಟೇ. ಜೆಡಿಎಸ್ ಕಾರ್ಯಕರ್ತರು ಯಾರು ಧೃತಿಗೆಡಬಾರದು. ಸೋತ ಬಳಿಕವೂ ಇಷ್ಟೊಂದು ಪ್ರಮಾಣದಲ್ಲಿ ಜನ ಸೇರುತ್ತಾರೆ ಎಂದು ಊಹಿಸಿರಲಿಲ್ಲ ಎಂದು ಚನ್ನಪಟ್ಟಣ ವಿಧಾನಸಭಾ ಉಪಚುನಾವಣೆಯ ಪರಾಜಿತ ಅಭ್ಯರ್ಥಿ ನಿಖಿಲ್ ಕುಮಾರಸ್ವಾಮಿ ತಿಳಿಸಿದರು.

ಶನಿವಾರ ರಾಮನಗರ ಜಿಲ್ಲೆಯ ಚೆನ್ನಪಟ್ಟಣದಲ್ಲಿ ಜೆಡಿಎಸ್ ಕೃತಜ್ಞತಾ ಕಾರ್ಯಕ್ರಮದಲ್ಲಿ ನಿಖಿಲ್ ಕುಮಾರಸ್ವಾಮಿ ಹೇಳಿಕೆ ನೀಡಿದರು. ಮೂರು ಚುನಾವಣೆ ಸೋತಿರಬಹುದು ಆದರೆ ಎದೆಗುಂದಿಲ್ಲ ಎದೆ ಗುಂದೊದು ಇಲ್ಲ. ಸೋತ ಬಳಿಕವೂ ಇಷ್ಟು ಜನ ಸೇರುತ್ತಾರೆಂದು ಊಹೆ ಮಾಡಿರಲಿಲ್ಲ. ಚನ್ನಪಟ್ಟಣ ಕಾರ್ಯಕರ್ತರು ಧೃತಿಗೆಡುವುದಿಲ್ಲ. ಯಾರು ಕಣ್ಣೀರು ಹಾಕಬಾರದು ನಾವು ಸತ್ತಿಲ್ಲ ಸೋತಿದ್ದೇವೆ ಅಷ್ಟೇ. ಜೆಡಿಎಸ್ ಪಕ್ಷವನ್ನು ಯಾರು ಮುಗಿಸಲು ಸಾಧ್ಯವಿಲ್ಲ. ನಾನು ಸೋತಿದ್ದೇನೆ ಅಂತ ನನ್ನ ಮಾತನ್ನು ವಾಪಸ್ ಪಡೆಯಲ್ಲ. ಉಪಚುನಾವಣೆಯ ಫಲಿತಾಂಶ ಯಾರು ನಿರೀಕ್ಷೆ ಮಾಡಿರಲಿಲ್ಲ.

ಕಾರ್ಯಕರ್ತರು ಹಗಲು ರಾತ್ರಿ ಉತ್ಸಾಹದಿಂದ ಕೆಲಸ ಮಾಡಿದ್ದಾರೆ. ಜಯಮುತ್ತು ತಮ್ಮ ಮಾತನ್ನು ವಾಪಸ್ ತೆಗೆದುಕೊಳ್ಳಬೇಕು. ಈ ಫಲಿತಾಂಶದಿಂದ ಎಲ್ಲರೂ ಹೊರಬರಬೇಕಿದೆ. ಜೆಡಿಎಸ್ ಅಭಿಮಾನಿಗಳು, ಇಡೀ ಸರ್ಕಾರವನ್ನು ಎದುರಿಸಿದ್ದಾರೆ. ಕುಮಾರಸ್ವಾಮಿ ರೈತರು ರಾಜ್ಯದ ಜನರಿಗಾಗಿ ದುಡಿಯುತ್ತಿದ್ದಾರೆ. ಕುಮಾರಸ್ವಾಮಿ ಹೋರಾಟಕ್ಕೆ ಬೆಂಬಲವಾಗಿ ನಿಂತಿದ್ದು ರಾಮನಗರ. ಚನ್ನಪಟ್ಟಣದಲ್ಲಿ ನಿಖಿಲ್ ಹೇಳಿಕೆ ನೀಡಿದರು.

## ಪಡಿತರ ವಿತರಣೆಗೆ ಸರ್ವರ್ ಸಮಸ್ಯೆ ಕೈಕಟ್ಟಿ ಕುಳಿತ ರಾಜ್ಯ ಸರ್ಕಾರ

• ಉದಯವಾಹಿನಿ ಬೆಂಗಳೂರು



ರಾಜ್ಯದ್ಯಂತ ಅನ್ನಭಾಗ್ಯ ಯೋಜನೆ ಅಡಿಯಲ್ಲಿ ವಿತರಣೆ ಆಗುತ್ತಿರುವ ಪಡಿತರ ವಿತರಣೆಗೆ ತಿಂಗಳ ಕೊನೆಯ ದಿನವಾದ ಶನಿವಾರ ಸರ್ವರ್ ಸಮಸ್ಯೆ ಏರ್ಪಟ್ಟಿದ್ದರಿಂದ ಇನ್ನೂ ಬಾಕಿ ಉಳಿದಿರುವ ಲಕ್ಷಾಂತರ ಪಡಿತರ ಚೀಟಿಗಳಿಗೆ ಪಡಿತರ ಧಾನ್ಯಗಳು ವಿತರಣೆಯಾಗದೆ ನ್ಯಾಯಬೆಲೆ ಅಂಗಡಿ ಮಾಲೀಕರು ಮತ್ತು ಕಾಡುದಾರರ ಮಧ್ಯೆ ಘರ್ಷಣೆಗೂ ಕಾರಣವಾಯಿತು ರಾಜ್ಯದ ನ್ಯಾಯಬೆಲೆ ಅಂಗಡಿ ಮಾಲೀಕರು ಸಾಮಾಜಿಕ ಜಾಲತಾಣಗಳ ಮುಖಾಂತರ ಆಹಾರ ಇಲಾಖೆ ಸಚಿವರಿಗೆ, ಮುಖ್ಯಮಂತ್ರಿಗಳಿಗೆ ಸರ್ವರ್ ಸರಿಪಡಿಸುವಂತೆ ಮನವಿ ಮಾಡುತ್ತಿರುವುದು ಪತ್ರಿಕೆಯ ಗಮನಕ್ಕೆ ಬಂದಿತು ಇದರಿಂದ ಪಡಿತರ ನ್ಯಾಯಬೆಲೆ ಅಂಗಡಿ ಮಾಲೀಕರು ಈ ಒತ್ತಡದಿಂದ ಮಾಲೀಕರ ಆರೋಗ್ಯದ ಮೇಲೆಯೂ ಸಹ ಪರಿಣಾಮ ಬೀರುತ್ತಿದ್ದು ತುಂಬಾ ತೊಂದರೆ ಕಳೆದ ಎರಡು ತಿಂಗಳಿಂದ ಈಚೆಗೆ ಸರ್ವರ್ ಸಮಸ್ಯೆ ತುಂಬಾ ಬಿಗುಡಾಯಿಸಿದೆ ರಾಜ್ಯದ ಮೂಲೆ ಮೂಲೆಗಳಿಂದ ನ್ಯಾಯಬೆಲೆ ಅಂಗಡಿ ಮಾಲೀಕರು ಪತ್ರಿಕೆ ಕಚೇರಿಗೆ ದೂರವಾಣಿ ಸರ್ಕಾರದ ಗಮನಕ್ಕೆ ಸಮಸ್ಯೆಯನ್ನು ತಂದು ಬಗೆಹರಿಸಬೇಕೆಂದು ಮನವಿ ಮಾಡಿದರು

ಈ ಸಮಸ್ಯೆಯ ಬಗ್ಗೆ ಆಹಾರ ಇಲಾಖೆ ಉನ್ನತ ಅಧಿಕಾರಿಗಳ ಗಮನಕ್ಕೆ ತಂದರು ಸಹ ಸಂಜೆಯವರೆಗೂ ಸಹ ಸರ್ವರ್ ಸಮಸ್ಯೆ ಬಗೆಹರಿಯದೆ ಉಳಿದಿದ್ದು ಮಾತ್ರ ಆಹಾರ ಇಲಾಖೆ ವೈಫಲ್ಯವನ್ನು ಎತ್ತಿ ತೋರಿಸುತ್ತಿದೆ

ತಾಲ್ಲೂಕು ಮಟ್ಟದಲ್ಲಿ ನ್ಯಾಯ ಬೆಲೆ ಅಂಗಡಿ ಮಾಲೀಕರು ಆಹಾರ ಇಲಾಖೆಯ ನಿರೀಕ್ಷಕರು ಆಹಾರ ಇಲಾಖೆಯ ಶಿರಸ್ತೆದಾರರು ಡಾಟಾ ಎಂಟ್ರಿ ಆಪರೇಟರ್‌ಗಳು ಶನಿವಾರ ಸಂಜೆವರೆಗೂ ಸಹ ಪಡಿತರ ಕಾರ್ಡ್‌ದಾರರಿಗೆ ನ್ಯಾಯಬೆಲೆ ಅಂಗಡಿ



ಮಾಲೀಕರಿಗೆ ಉತ್ತರಿಸಿ ಸರ್ಕಾರದ ವಿರುದ್ಧ ತೀವ್ರ ಬೇಸರಗೊಂಡರು

ಸಾಮಾಜಿಕ ಕಳಕಳಿಯುಳ್ಳ ಮುಖ್ಯಮಂತ್ರಿ ಸಿದ್ದರಾಮಯ್ಯ ತಮ್ಮ ಜನಪ್ರಿಯ ಯೋಜನೆಯದ ಅನ್ನ ಭಾಗ್ಯ ಯೋಜನೆ ಅಡಿಯಲ್ಲಿ ರಾಜ್ಯಾದ ಕೋಟ್ಯಾಂತರ ಬಿಪಿಎಲ್ ಕಾರ್ಡುದಾರರಿಗೆ 20,000ಕ್ಕೂ ಹೆಚ್ಚು ನ್ಯಾಯಬೆಲೆ ಅಂಗಡಿ ಮಾಲೀಕರಿಗೆ ಸರಳ ಪಡಿತರ ವಿತರಣೆಗೆ ವ್ಯವಸ್ಥೆ ಮಾಡಿಸಬೇಕಾಗಿದೆ ಪ್ರತಿ ತಿಂಗಳು ಉಂಟಾಗುವ ಈ ಸರ್ವರ್ ಗೊಂದಲವನ್ನು ಕೂಡಲೇ ಬಗೆಹರಿಸಬೇಕಾಗಿದೆ ಆಹಾರ ಇಲಾಖೆ ಅಧಿಕಾರಿಗಳು ಪ್ರತಿ ತಿಂಗಳು ಒಂದೊಂದು ಕಾನೂನನ್ನು ರೂಪಿಸುವುದನ್ನು ನಿಲ್ಲಿಸಬೇಕಾಗಿದೆ ಇವರು ರೂಪಿಸುವ ಕಾನೂನಿನಿಂದ ಪರಿಸರ ವ್ಯವಸ್ಥೆ ಅವ್ಯವಸ್ಥೆ ಆಗಲಿದೆ ಇದರಿಂದ ಸರ್ಕಾರಕ್ಕೆ ಕೆಟ್ಟ ಹೆಸರು ತರುವಲ್ಲಿ ಅಧಿಕಾರಿಗಳೇ ಕಾರಣರಾಗುತ್ತಾರೆಂದು ಕೆಲವು ನೋಂದ ನ್ಯಾಯಬೆಲೆ ಅಂಗಡಿ ಮಾಲೀಕರು ತಮ್ಮ ಹೆಸರನ್ನು ಹೇಳಲು ಇಚ್ಛಿಸದೆ ಹಿಡಿ ಶಾಪ ಹಾಕುತ್ತಿದ್ದಾರೆ

## ಸಚಿವ ದಿನೇಶ್ ಗುಂಡೂರಾವ್ ಮೇಲೆ ಕ್ರಮ ಕೈಗೊಳ್ಳಲು ಕೇಂದ್ರ ಸಚಿವೆ ಆಗ್ರಹ

### ▶▶ ಆಸ್ಪತ್ರೆಗೆ ಹೋಗುವ ಸಾರ್ವಜನಿಕರು ಬದುಕಿ ವಾಪಸ್ ಬರುವುದಿಲ್ಲ ಎಂಬ ಪರಿಸ್ಥಿತಿ ನಿರ್ಮಾಣ ▶▶ ಮುಖ್ಯಮಂತ್ರಿ, ಸಚಿವರ ದುಡ್ಡಿನ ಆಸೆಗೆ ಬಡವರು ಬಲಿ

• ಉದಯವಾಹಿನಿ, ಬೆಂಗಳೂರು

**ಆತಂಕಕ್ಕೆ ಈಡು ಮಾಡಿದೆ**

ಕರ್ನಾಟಕದಲ್ಲಿ ಆರೋಗ್ಯ ಇಲಾಖೆಗೆ ಅನಾರೋಗ್ಯ ಬಡಿದಿದೆ ಎಂದು ಕೇಂದ್ರ ಸಚಿವೆ ಕು.ಶೋಭಾ ಕರಂದ್ಲಾಜೆ ಅವರು ಆಕ್ಷೇಪಿಸಿದರು. ದೆಹಲಿಯಲ್ಲಿ ಶನಿವಾರ ಮಾಧ್ಯಮ ಪ್ರತಿನಿಧಿಗಳ ಜೊತೆ ಮಾತನಾಡಿದ ಅವರು, ಆರೋಗ್ಯ ಇಲಾಖೆಯು ಭ್ರಷ್ಟಾಚಾರ, ಸ್ವಜನಪಕ್ಷಪಾತ, ನಿರ್ಲಕ್ಷ್ಯ, ದುರಹಂಕಾರದಿಂದ ತುಂಬಿತುಳುಕಿ ಇವತ್ತು ನಮ್ಮ ರಾಜ್ಯದ ಮಹಿಳೆಯರ ಮತ್ತು ಮಕ್ಕಳ ಸಾವಿಗೆ ಕಾರಣವಾಗುತ್ತಿದೆ ಎಂದು ಅವರು ಟೀಕಿಸಿದರು. ಲೋಕಾಯುಕ್ತದವರು ಆಸ್ಪತ್ರೆಗಳಿಗೆ ಭೇಟಿ ನೀಡಿ ಛೀಮಾರಿ ಹಾಕಿದ್ದಾರೆ. ಹಲವಾರು ತಜ್ಞರ ತಂಡಗಳು ಆಸ್ಪತ್ರೆಗಳು ಸರಿಯಾಗಿ ನಡೆಯುತ್ತಿಲ್ಲ ಎಂದು ವರದಿ ಕೊಟ್ಟಿವೆ. ಆಸ್ಪತ್ರೆಗೆ ಹೋಗುವ ಸಾರ್ವಜನಿಕರು ಬದುಕಿ ವಾಪಸ್ ಬರುವುದಿಲ್ಲ ಎಂಬ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಆತಂಕ ವ್ಯಕ್ತಪಡಿಸಿದರು. ಆಸ್ಪತ್ರೆಗಳಲ್ಲಿ ಆಗುವ ಸಾವು ಕರ್ನಾಟಕವನ್ನು ಆತಂಕಕ್ಕೆ ಈಡು ಮಾಡಿದೆ. ಕರ್ನಾಟಕದಲ್ಲಿ ಹೆರಿಗೆ ಆಸ್ಪತ್ರೆಗಳಲ್ಲಿ ಆಗುವ ಸಾವನ್ನು ಸರಕಾರ ಮುಚ್ಚಿಡುತ್ತಿದೆ. ಒಂದೆಡೆ ಬಾಣಂತಿಯರ ಸಾವು, ಮತ್ತೊಂದೆಡೆ ಮಕ್ಕಳ ಸಾವು ಸಂಭವಿಸುತ್ತಿದೆ ಎಂದು ವಿವರಿಸಿದರು. ಬಳ್ಳಾರಿ ನಮ್ಮ ಕಣ್ಣಿಗೆ ಕಾಣುವ ಉದಾಹರಣೆಯಷ್ಟೇ ಬಳ್ಳಾರಿಯಲ್ಲಿ ಒಟ್ಟು 5 ಸಾವಾಗಿದೆ. ಸಿಸೇರಿಯನ್ ಆದಂಥ ಹೆಣ್ಮಕ್ಕಳು ಅವರಿಗೆ ಕೊಟ್ಟ ಗ್ಲುಕೋಸ್ ಕಾರಣಕ್ಕಾಗಿ ಮೃತಪಟ್ಟಿದ್ದಾರೆ. ರಾಜೀವ್ ಗಾಂಧಿ ವಿವಿ ಮತ್ತು ಇತರ ವೈದ್ಯರ ತಂಡಗಳು ಇದೇ ಕಾರಣಕ್ಕಾಗಿ ಸಾವು ಸಂಭವಿಸಿದೆ ಎಂದು ವರದಿ ನೀಡಿವೆ ಎಂದು ತಿಳಿಸಿದರು. ಮುಖ್ಯಮಂತ್ರಿ ಸಚಿವರ ದುಡ್ಡಿನ ಆಸೆಗೆ ಬಡವರು ಬಲಿ ಈ ಗ್ಲುಕೋಸ್ ಸರಬರಾಜು ಬೇಡ ಎಂದರೂ ಅದನ್ನೇ ಪೂರೈಸಲಾಗುತ್ತಿದೆ. ಒಂದೆಡೆ ಶರಣಪ್ರಕಾಶ್ ಪಾಟೀಲ್ ಅವರು ನಮ್ಮ ಆಸ್ಪತ್ರೆ ಮುಂದೆ ಇರುವ ಕೇಂದ್ರ ಸರಕಾರದ ಜನೌಷಧಿ ಕೇಂದ್ರವನ್ನೂ ಮುಚ್ಚುತ್ತೇನೆ ಎನ್ನುತ್ತಾರೆ. ಅಂದರೆ ಇವರೇನು ಮಾಡಲು



**ನಿಗದಿತ ಕಂಪೆನಿಯ 2ನೇ ಬ್ಯಾಚಿನ ಗ್ಲುಕೋಸ್ ಬ್ಯಾನ್ ಮಾಡಲು ಕೇಂದ್ರ ಸರಕಾರ ತಿಳಿಸಿದ್ದರೂ ರಾಜ್ಯ ಸರಕಾರದ ಸುತ್ತೋಲೆ ಹೋದರೂ ಆಸ್ಪತ್ರೆಗಳಿಗೆ ಇದು ಹೇಗೆ ಬಂತು? ಅವನ್ನೇ ನಮ್ಮ ಬಾಣಂತಿ ಹೆಣ್ಮಕ್ಕಳಿಗೆ ಹೇಗೆ ಕೊಟ್ಟರು? ಇದರ ಹಿಂದಿರುವ ಕೈವಾಡ ಯಾವುದು? ಈ ಕಂಪೆನಿಯ ನಿರ್ದೇಶಕರು, ಹಿನ್ನೆಲೆ ಸಿಗುತ್ತಿಲ್ಲ ಎಂದು ಆಕ್ರೋಶ ಹೊರಹಾಕಿದರು. ಶೆಲ್ ಕಂಪೆನಿ ಮೂಲಕ ನಕಲಿ ಔಷಧಿ ಮಾರಾಟ ಮಾಡುತ್ತಿದ್ದಾರೆ. ಇದು ಬಹಳ ಆಶ್ಚರ್ಯ ಮತ್ತು ದುಃಖ ತರುತ್ತಿದೆ ಎಂದು ನುಡಿದರು. ಕರುಣೆ ಇಲ್ಲದ, ನಿರ್ದಯಿ ಸರಕಾರ ಸಿದ್ದರಾಮಯ್ಯರ ಸರಕಾರ ನಿರ್ದಯಿ ಸರಕಾರವಾಗಿದೆ. ಕರುಣೆ ಇಲ್ಲದ ಕೊಲೆಗಡುಕರ ಸರಕಾರವಾಗಿದೆ**

**-ಶೋಭಾ ಕರಂದ್ಲಾಜೆ , ಕೇಂದ್ರ ಸಚಿವೆ**

ಹೊರಟಿದ್ದಾರೆ? ಮತ್ಯಾವುದೋ ದಂಧೆ ಮಾಡಲು ಹೊರಟಿದ್ದೀರಿ. ಇನ್ಯಾವುದೋ ಶೆಲ್ ಕಂಪೆನಿಗೆ ಟೆಂಡರ್ ಕೊಡಲು ಹೊರಟಿದ್ದೀರಿ ಎಂದು ಕು.ಶೋಭಾ ಕರಂದ್ಲಾಜೆ ಅವರು ಆಕ್ಷೇಪ ವ್ಯಕ್ತಪಡಿಸಿದರು. ಕೇಂದ್ರ ಸರಕಾರದ ಜನೌಷಧಿ, ಸೌಲಭ್ಯಗಳನ್ನು ತೆಗೆದುಕೊಳ್ಳಲು ನೀವು ಸಿದ್ಧರಿಲ್ಲ, ನೀವೇ ಸ್ವಂತ ಟೆಂಡರ್ ಕರೆದು, ಭ್ರಷ್ಟಾಚಾರ ಮಾಡಿ ಪರ್ಸೆಂಟೇಜ್ ಹೊಡೆಯಲು ಮುಂದಾಗಿದ್ದೀರಿ. ಕಾಂಗ್ರೆಸ್ ಸರಕಾರದ ಮುಖ್ಯಮಂತ್ರಿಗಳ, ಮಂತ್ರಿಗಳ ದುಡ್ಡಿನ ಆಸೆಗೆ ನಮ್ಮ ಬಡವರು ಇವತ್ತು ಬಲಿಯಾಗುತ್ತಿದ್ದಾರೆ ಎಂದು ಬೇಸರ ವ್ಯಕ್ತಪಡಿಸಿದರು. ಸಚಿವ ದಿನೇಶ್ ಗುಂಡೂರಾವ್ ಮೇಲೆ ಕ್ರಮ ಕೈಗೊಳ್ಳಬೇಕು ಎಂದು ಅವರು ಸಿದ್ದರಾಮಯ್ಯರನ್ನು ಆಗ್ರಹಿಸಿದರು. ಬಡವರು, ಹಿಂದುಳಿದವರು, ದಲಿತರ ಪರ ಎಂದು ಮುಖ್ಯಮಂತ್ರಿಗಳು ಭಾಷಣ ಮಾಡಿದರೆ ಸಾಲದು; ಕಳಕಳಿ ಇರಬೇಕಲ್ಲವೇ? ಆ ಹೆಣ್ಮಕ್ಕಳ ಕುಟುಂಬಕ್ಕೆ ಸತ್ತಿರುವ ಹೆಣ್ಮಕ್ಕಳ ಶಿಶುವಿಗೆ ಯಾರು ಗತಿ ಎಂದು ಪ್ರಶ್ನಿಸಿದರು. ದುರ್ಘಟನೆಗಳ ಕುರಿತು ತನಿಖೆ ನಡೆಸಬೇಕು ಮತ್ತು ಸತ್ತ ಬಾಣಂತಿಯರ, ಮಕ್ಕಳ ಕುಟುಂಬಕ್ಕೆ ಪರಿಹಾರ ಕೊಡಿ ಎಂದು ಒತ್ತಾಯಿಸಿದರು.

**ನಾನೇ ಕೆ.ಆರ್.ಪುರ ಆಸ್ಪತ್ರೆಗೆ ಭೇಟಿ**

ಸರಕಾರಿ ಆಸ್ಪತ್ರೆಗಳಲ್ಲಿ ಸೌಲಭ್ಯಗಳಿಲ್ಲ, ಔಷಧಿ ಸರಿಯಾಗಿ ಇಲ್ಲ, ಶಸ್ತ್ರಚಿಕಿತ್ಸೆಗೆ ಉಪಕರಣ ಸರಿಯಾಗಿ ಬರುವುದಿಲ್ಲ, ವೈದ್ಯರಿಲ್ಲ ಕಂಪ್ಯೂಟರ್ ಸಿಬ್ಬಂದಿಗಳೂ ಇಲ್ಲ. ಇದೆಲ್ಲಕ್ಕೂ ದಿನೇಶ್ ಗುಂಡೂರಾವ್ ಅವರು ನೇರ ಹೊಣೆ ಹೊರಬೇಕು ಎಂದು ಒತ್ತಾಯಿಸಿದರು. ಕೇವಲ ಮಧ್ಯ ಕರ್ನಾಟಕದಲ್ಲಿ ಜನವರಿಯಿಂದ 111 ನವಜಾತ ಶಿಶುಗಳು ಸಾವನ್ನಪ್ಪಿದ ಮಾಹಿತಿ ಸಿಕ್ಕಿದೆ. ಸಿಸೇರಿಯನ್ ಆದ 27 ತಾಯಂದಿರು ಇದೇ ಭಾಗದಲ್ಲಿ ಮೃತಪಟ್ಟಿದ್ದಾರೆ. ಸರಕಾರ ಏನು ಮಾಡುತ್ತಿದೆ ಎಂಬುದು ನಮ್ಮ ಮುಂದಿರುವ ಪ್ರಶ್ನೆ ಎಂದು ಆತಂಕ ವ್ಯಕ್ತಪಡಿಸಿದರು.

**ಈ ದಿನದ ದರ** | ಪೆಟ್ರೋಲ್: 103.44 ₹/L | ಡೀಸೆಲ್ : 89.97 ₹/L | ಬಂಗಾರ: ₹7,800/Gram24ct ₹7,150/Gram22ct | ಬೆಳ್ಳಿ: ₹91.50/Gram



## ಸಿದ್ಧಸೂಕ್ತಿ

**ಡಾ ಆರೂಢಭಾರತೀ ಸ್ವಾಮೀಜಿ**
**ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ**
**ರಾಮೋಹಳ್ಳಿ**

### ಅಕಾಮಸ್ಯ ಕ್ರಿಯಾ ಕಾಚಿತ್

ದೃಶ್ಯತೇ ನೇಹ ಕರ್ಹಿಚಿತ್.
ಯದ್ಯದ್ಧಿ ಕುರುತೇ ಕಿಂಚಿತ್
ತತ್ತತ್ಕಾಮಸ್ಯ ಚೇಷ್ಟಿತಮ್.
ಮನುಸ್ಮೃತಿಯ ಎರಡನೆಯ ಅಧ್ಯಾಯದ ಶ್ಲೋಕ. ಆಶೆ ಇಲ್ಲದವನಿಂದ ಯಾವ ಕಾಲಕ್ಕೂ ಯಾವುದೇ ಕ್ರಿಯೆ ನಡೆಯದು. ಮಾನಸಿಕ ಹಾಗೂ ದೈಹಿಕ ಕಾರ್ಯಪ್ರವೃತ್ತಿಯುಳ್ಳವನು ನನಗೆ ಆಶೆ ಇಲ್ಲ ಎನ್ನಲಾಗದು. ಏನನ್ನು ಮಾಡುತ್ತಾನೆಯೋ ಅದೆಲ್ಲವೂ ಆಶೆಯ ಚೇಷ್ಟೆ. ಆಶೆ ಇರಬಾರದೆಂದಲ್ಲ. ಅದು ಮಿತವಾಗಿರಲಿ, ಅಮಿತವಾಗಿದ್ದರೂ ಅದನ್ನು ಈಡೇರಿಸಿಕೊಳ್ಳಲು ಅಡ್ಡದಾರಿಯ ಹೆಜ್ಜೆ ಇರದಿರಲಿ, ಗೌರವದ ಹದ್ದು ಮೀರದಿರಲಿ. ಆಶೆ ಇದ್ದರಷ್ಟೇ ಸಾಲದು ಈಡೇರಲು ಕೆಲಸ ಮಾಡಬೇಕು. ಆಶೆ ಬಿಟ್ಟರೂ ಸಾಲದು ಬದುಕು ನಡೆಯದು.


# ಮಠಕ್ಕೂ ಮುಸ್ಲಿಂ ಭಕ್ತರಿದ್ದಾರೆ, ನಾನೂ ಮುಸ್ಲಿಂ ಮದುವೆಗಳಿಗೆ ಹೋಗ್ತಿನಿ

## ನಗರದ ಫ್ರೀಡಂ ಪಾರ್ಕ್‌ನಲ್ಲಿ ಭಾರತೀಯ ಕಿಸಾನ್ ಸಂಘದ ನೇತೃತ್ವದಲ್ಲಿ ನಡೆದ ಪ್ರತಿಭಟನೆ

• **ಉದಯವಾಹಿನಿ, ಬೆಂಗಳೂರು**

ಭಾರತ ಸರ್ವಧರ್ಮಗಳ ದೇಶ. ನಮ್ಮ ಮಠಕ್ಕೂ ಮುಸ್ಲಿಂ ಭಕ್ತರಿದ್ದಾರೆ, ನಾನೂ ಮುಸ್ಲಿಂ ಸಮುದಾಯದ ಮದುವೆಗಳಿಗೆ ಹೋಗ್ತಿನಿ ಎಂದು ವಿಶ್ವ ಒಕ್ಕಲಿಗರ ಮಹಾಸಂಸ್ಥಾನ ಮಠದ ಚಂದ್ರಶೇಖರ ಸ್ವಾಮೀಜಿ ಯೂಟರ್ನ್ ಹೊಡೆದಿದ್ದಾರೆ.
ಚಂದ್ರಶೇಖರ ಸ್ವಾಮೀಜಿ ಹೇಳಿದ್ದು ಏನು

ನಗರದ ಫ್ರೀಡಂ ಪಾರ್ಕ್‌ನಲ್ಲಿ ಭಾರತೀಯ ಕಿಸಾನ್ ಸಂಘದ ನೇತೃತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ ಭಾಗಿಯಾಗಿ ಮಾತನಾಡಿದ್ದ ಅವರು ಪಾಕಿಸ್ತಾನದಲ್ಲಿ ಬೇರೆಯವರಿಗೆ ಮತ ಹಾಕುವ ಅಧಿಕಾರವಿಲ್ಲ. ಅದೇ ರೀತಿ ನಮ್ಮ ಭಾರತದಲ್ಲಿಯೂ ಮುಸ್ಲಿಮರಿಗೆ ಮತದಾನ ಮಾಡುವ ಹಕ್ಕಿಲ್ಲದಂತೆ ಮಾಡಿದರೆ ಅವರು ಅವರ ಪಾಡಿಗಿರುತ್ತಾರೆ. ಖಂಡಿತವಾಗಿಯೂ ಎಲ್ಲರೂ ನೆಮ್ಮದಿಯಾಗಿ ಇರಲು ಸಾಧ್ಯ. ದೇಶದಲ್ಲಿ ವಕ್ಫ್ ಮಂಡಳಿಯೇ ಇಲ್ಲದಂತೆ ಮಾಡಬೇಕು. ವಕ್ಫ್ ಮಂಡಳಿಯೇ ಇಲ್ಲದಂತೆ ಮಾಡಿದರೆ ಆಗ ಭಾರತೀಯರೆಲ್ಲರೂ ನೆಮ್ಮದಿಯಿಂದ ಇರಲು ಸಾಧ್ಯವಾಗಲಿದೆ. ರೈತರ ಜಮೀನು ಉಳಿಸಲು ಎಲ್ಲರೂ ಒಂದಾಗಿ ಹೋರಾಟ ನಡೆಸುವ ತುರ್ತು ಸಂದರ್ಭ ಎದುರಾಗಿದೆ. ಸರ್ಕಾರ ಹೋದರೂ ತೊಂದರೆ ಇಲ್ಲ. ವಕ್ಫ್ ಮಂಡಳಿ ರದ್ದು ಮಾಡುವ ನಿರ್ಧಾರ ತೆಗೆದುಕೊಳ್ಳಬೇಕು ಎಂದು ಹೇಳಿದ್ದರು. ಮುಸ್ಲಿಮರಿಗೆ ಮತದಾನದ ಹಕ್ಕು


ಉದಯವಾಹಿನಿ ಚಿತ್ರ

> **ನನಗಿಂತ ಮೊದಲು ಇತಂಹ ಅನೇಕ ಹೇಳಿಕೆಗಳು ಬಂದಿದೆ. ನಾನು ಹೇಳಿದ ಕೂಡ್ಲೇ ಮತದಾನದಿಂದ ಹಿಂದೆ ಸರಿಸೋಕೆ ಆಗುತ್ತಾ ಅದಕ್ಕೆ ಅಂತಾ ಸಂವಿಧಾನವಿದೆ. ರೈತರಿಗೆ ಒಳ್ಳೆಯದು ಆಗಬೇಕು ಅನ್ನೋದಷ್ಟೇ ನನ್ನ ಉದ್ದೇಶ. ನನ್ನ ಆರೋಗ್ಯ ಸರಿಯಿಲ್ಲ. ಆರ್. ಅಶೋಕ್, ಅಶ್ವಥ್ ನಾರಾಯಣ್ ಬಂದಿದ್ರು, ನಿಮ್ಮ ಪರವಾಗಿ ಇದ್ದೇವೆ ಅಂತ ಹೇಳಿದ್ರು. ಕಾನೂನಿನಲ್ಲಿ ಏನ್ ಆಗಿತ್ತೋ ನೋಡೋಣ. ಯಾಕ್ ಹೀಗೆ ಮಾಡ್ತಿದ್ದಾರೆ ಗೊತ್ತಿಲ್ಲ. ಮುಂದೇನಾಗುತ್ತೋ, ಆ ದೇವರು ನಡೆಸಿದಂತೆ ಆಗುತ್ತೆ ಎಂದು ನುಡಿದಿದ್ದಾರೆ.**

ಇಲ್ಲದಂತೆ ಮಾಡಬೇಕು ಎಂದು ಕರೆ ನೀಡಿದ್ದ ಪ್ರಕರಣಕ್ಕೆ ಸಂಬಂಧಿಸಿದಂತೆ ಚಂದ್ರಶೇಖರ ಸ್ವಾಮೀಜಿಗೆ ಉಪ್ಪಾರಪೇಟೆ ಪೊಲೀಸರಿಂದ ನೊಟೀಸ್ ಹೊರಡಿಸಿದ್ದಾರೆ. ಡಿಸೆಂಬರ್ 2 ರಂದು ಬೆಳಗ್ಗೆ 11 ಗಂಟೆಗೆ ಪೊಲೀಸ್ ಠಾಣೆಯಲ್ಲಿ ವಿಚಾರಣೆಗೆ ಹಾಜರಾಗುವಂತೆ ನೊಟೀಸ್ ಜಾರಿಗೊಳಿಸಿದ್ದಾರೆ. ಈ ಕುರಿತು ಪಬ್ಲಿಕ್ ಟಿವಿ ಜೊತೆಗೆ ಸ್ವಾಮೀಜಿ ಮಾತನಾಡಿದ್ದಾರೆ. ಜೈಲಿಗೆ ಹಾಕ್ತರಾ ಹಾಕ್ಲಿ ಬಿಡಿ, ಅಲ್ಲೇ ಇರ್ತಿನಿ. ದೇವರ ಮೇಲೆ ಬರ ಹಾಕಿದ್ದೀನಿ, ರೈತರ ಪರ ಹೋರಾಟದಲ್ಲಿ ಭಾಗಿಯಾಗಿದ್ದೆ. ರೈತರು ಭೂಮಿ ಕಳೆದುಕೊಳ್ಳದಕ್ಕೆ ವಿರೋಧಿಸಿ ಮಾತಾನಾಡಿದ್ದೆ. ಮಾತಿನ ಭರಾಟೆಯಲ್ಲಿ ಮುಸ್ಲಿಮರ ಮತದಾನದ ಬಗ್ಗೆ ಹೇಳಿದ್ದೆ. ಅದು ಉದ್ದೇಶ ಪೂರ್ವಕವಾಗಿ ಹೇಳಿದ ಮಾತಲ್ಲ. ಆ ಬಗ್ಗೆ ಮರುದಿನವೇ ಪತ್ರಿಕಾ ಹೇಳಿಕೆ ನೀಡಿದ್ದೆ. ಇದನ್ನ ಇಲ್ಲಿಗೆ ಬಿಟ್ಟು ಬಿಡಿ, ಭಾರತ ಎಲ್ಲಾ ಧರ್ಮದವರ ದೇಶ. ನಮ್ಮ ಮಠಕ್ಕೂ ಮುಸ್ಲಿಂ ಭಕ್ತರಿದ್ದಾರೆ, ನಾನು ಸಹ ಮುಸ್ಲಿಂ ಸಮುದಾಯದ ಮದುವೆಗಳಿಗೆ ಹೋಗ್ತಿನಿ. ಇದಾದ್ಮೇಲೆ ಯಾಕೇ ದೂರು ದಾಖಲಿಸಿಕೊಂಡಿದ್ದಾರೋ ಗೊತ್ತಿಲ್ಲ ಎಂದು ಯೂಟರ್ನ್ ಹೊಡೆದಿದ್ದಾರೆ.

### ವಿಚಾರಣೆಗೆ ಹೋಗಲ್ಲ, ಅವ್ರೇ ಇಲ್ಲಿಗೆ ಬರಲಿ

**ನೋಟಿಸ್ ನೀಡಿರೋದು ಗೊತ್ತಿಲ್ಲ, ನನಗೆ ಆರೋಗ್ಯ ಸರಿಯಿಲ್ಲ, ನಾನು ವಿಶ್ರಾಂತಿಯಲ್ಲಿದ್ದೆ. ನಿನ್ನೆ ಕೆಲ ನಾಯಕರು ಬಂದು ನಾವಿದ್ದೇವೆ ಅಂತಾ ಹೇಳಿದ್ರು. ನಾನು ಯಾವುದರ ಬಗ್ಗೆಯೂ ಚಿಂತೆ ಮಾಡ್ತಿಲ್ಲ. ವಕ್ಫ್ ಬ್ಯಾನ್ ಮಾಡಿ ಅಂತ ನಾನು ಹೇಳೇ ಇಲ್ಲ. ರೈತರ ಭೂಮಿ ರೈತರಿಗೆ ನೀಡಿ ಅಂತಾ ಹೇಳಿದ್ದೇನೆ. ಸರ್ಕಾರ ಯಾಕೇ ಹೀಗೆ ಮಾಡ್ತಿದೆ ಒಂದು ಸಮುದಾಯದವರನ್ನ ಓಲೈಕೆ ಮಾಡೋದು ಸರಿಯಲ್ಲ. ವಿಚಾರಣೆಗೆ ಹೋಗಲು ಆಗೋಲ್ಲ, ಅವ್ರೇ ಇಲ್ಲೇ ಬಂದ್ರೇ ನನ್ನ ಹೇಳಿಕೆಗೆ ಸ್ಪಷ್ಟನೆ ನೀಡ್ತೇನೆ ಎಂದಿದ್ದಾರೆ.**

> **ಭಾರತ ದೇಶದ ಪ್ರಜೆಗಳಾದ ನಾವು, ಸಂವಿಧಾನ ಬದ್ಧರಾಗಿ ಈ ದೇಶದಲ್ಲಿ ಜೀವನ ಮಾಡುತ್ತಿದ್ದೇವೆ. ಆದರೆ ಚಂದ್ರಶೇಖರ ಸ್ವಾಮೀಜಿ ಅವರು ಮುಸ್ಲಿಂ ಧರ್ಮದವರನ್ನು ಗುರಿಯಾಗಿಸಿಕೊಂಡು ಅವರ ಭಾವನೆಗಳಿಗೆ ನೋವುಂಟಾಗುವಂತೆ ಮತ್ತು ಎಲ್ಲಾ ಮುಸ್ಲಿಂ ಜನಾಂಗದವರನ್ನು ಶತ್ರು ದೇಶದವರಿಗೆ ಹೋಲಿಸಿ ಮಾತನಾಡುವ ಮೂಲಕ ಜನರಿಗೆ ಅವಮಾನ ಮಾಡಿರುತ್ತಾರೆ**

## ಪುನೀತ್ ಹೃದಯ ಜ್ಯೋತಿ ಯೋಜನೆ: 5,989 ರೋಗಿಗಳಿಗೆ ಯಶಸ್ವಿ ಹೃದಯದ ಚಿಕಿತ್ಸೆ!

• **ಉದಯವಾಹಿನಿ, ಬೆಂಗಳೂರು**

ಹೃದಯಾಘಾತ ಸಂದರ್ಭದಲ್ಲಿ ಜನರ ಪ್ರಾಣ ರಕ್ಷಣೆ ಮಾಡುವ ನಿಟ್ಟಿನಲ್ಲಿ ಕಳೆದ ವರ್ಷ ಜಾರಿಗೆ ತಂದಿರುವ ಡಾ. ಪುನೀತ್ ರಾಜ್ ಕುಮಾರ್ ಹೃದಯ ಜ್ಯೋತಿ ಯೋಜನೆ ಹಲವರ ಮನೆ ಬೆಳಗಿದೆ. ಹೌದು, ಡಾ. ಪುನೀತ್ ರಾಜ್ ಕುಮಾರ್ ಹೃದಯ ಜ್ಯೋತಿ ಯೋಜನೆಯಡಿ ಇದುವರೆಗೆ 3 ಲಕ್ಷಕ್ಕೂ ಹೆಚ್ಚು ಮಂದಿಗೆ ಇಸಿಜಿ ಪರೀಕ್ಷೆ ಮಾಡಿ, 5,989 ತೀವ್ರ ಹೃದಯಾಘಾತ ಪ್ರಕರಣಗಳನ್ನು ಪತ್ತೆ ಹಚ್ಚಿ ರೋಗಿಗಳಿಗೆ ಯಶಸ್ವಿ ಚಿಕಿತ್ಸೆ ನೀಡಲಾಗಿದೆ. ಹೃದಯಾಘಾತಕ್ಕೆ ಒಳಗಾದ ರೋಗಿಗಳ ಪಾಲಿಗೆ ಸಂಜೀವಿನಿಯಾಗಿರುವ ಟೆನೆಕ್ಟ್ ಪ್ಲಸ್ ಇಂಜೆಕ್ಷನ್ 348 ಮಂದಿ ಜೀವ ಉಳಿಸಿದೆ. ಪುನೀತ್ ರಾಜ್ ಕುಮಾರ್ ಹೃದಯ ಜ್ಯೋತಿ ಯೋಜನೆ ಸೇರಿದಂತೆ ಇನ್ನು ಹಲವು ಯೋಜನೆ ಮೂಲಕ ಜನರ ಆರೋಗ್ಯ ಕಾಪಾಡುವ ಪ್ರಯತ್ನ ನಿರಂತರವಾಗಿ ಸಾಗಲಿದೆ.

## ಶಿಕ್ಷಕಿಗೆ ಲೈಂಗಿಕ ಕಿರುಕುಳ ನೀಡಿದ ಆರೋಪ

• **ಉದಯವಾಹಿನಿ, ಬೆಂಗಳೂರು**

ಶಿಕ್ಷಕಿಯೊಬ್ಬರ ಮೇಲೆ ಲೈಂಗಿಕ ದೌರ್ಜನ್ಯ ಎಸಗಿರುವ ಆರೋಪದ ಹಿನ್ನೆಲೆಯಲ್ಲಿ ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯ ಕಾರ್ಯದರ್ಶಿ ಸ್ಥಾನದಿಂದ ಗುರಪ್ಪನಾಯ್ಡು ಅವರನ್ನು 6 ವರ್ಷಗಳ ಕಾಲ ಉಚ್ಚಾಟನೆ ಮಾಡಿ ಕೆಪಿಸಿಸಿ ಶಿಸ್ತು ಸಮಿತಿ ಅಧ್ಯಕ್ಷ ರಹಮಾನ್ ಖಾನ್ ಆದೇಶ ಹೊರಡಿಸಿದ್ದಾರೆ. ಬೆಂಗಳೂರಿನ ಬಿಜಿಎಸ್ ಬೂಮ್ ಫೀಲ್ಡ್ ಶಾಲೆಯ ಶಿಕ್ಷಕಿಯೊಬ್ಬರ ಮೇಲೆ 2021ರ ಮಾರ್ಚ್ 1ರಿಂದ 2023ರ ಆಗಸ್ಟ್ 15ರವರೆಗೆ ನಾಯ್ಡು ಲೈಂಗಿಕ ಕಿರುಕುಳ ನೀಡಿದ್ದಾರೆ ಎಂದು ಮಹಿಳೆ ದೂರಿನಲ್ಲಿ ಆರೋಪಿಸಿದ್ದರು.ಈ ಪ್ರಕರಣಕ್ಕೆ ಸಂಬಂಧಪಟ್ಟಂತೆ ವಿರುದ್ಧ ಚೆನ್ನಮ್ಮನ ಕೆರೆ ಅಚ್ಚುಕಟ್ಟು ಪೊಲೀಸ್ ಠಾಣೆಯಲ್ಲಿ ಮಹಿಳೆ ದೂರು ದಾಖಲಿಸಿದ್ದರು, ಇದೀಗ ಮಹಿಳೆ ನೀಡಿದ ದೂರಿನ ಆದಾರದ ಮೇಲೆ ಪೊಲೀಸರು ತನಿಖೆ ನಡೆಸುತ್ತಿದ್ದಾರೆ.

## ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣಗಳು ಸೇರಿ ರಾಜ್ಯಾದ್ಯಂತ 254 ನಮ್ಮ ಕ್ಲಿನಿಕ್ ಆರಂಭ

• **ಉದಯವಾಹಿನಿ, ಬೆಂಗಳೂರು**

ರಾಜ್ಯ ಸರ್ಕಾರವು ಮತ್ತೊಂದು ಸಿಹಿಸುದ್ದಿ ನೀಡಿದ್ದು, ರಾಜ್ಯಾದ್ಯಂತ ಹೊಸದಾಗಿ 254 ನಮ್ಮ ಕ್ಲಿನಿಕ್ ಗಳನ್ನು ಆರಂಭಿಸಲು ನಿರ್ಧರಿಸಿದೆ. ಈ ಕುರಿತು ಸಚಿವ ದಿನೇಶ್ ಗುಂಡೂರಾವ್ ಮಾಹಿತಿ ನೀಡಿದ್ದು ಆರೋಗ್ಯ ಸೇವೆಯನ್ನು ಸಾರ್ವಜನಿಕರಿಗೆ ಮತ್ತಷ್ಟು ಸಮೀಪಕ್ಕೆ ಕೊಂಡೊಯ್ಯುವ ನಿಟ್ಟಿನಲ್ಲಿ ರಾಜ್ಯಾದ್ಯಂತ ಹೊಸದಾಗಿ 254 ನಮ್ಮ ಕ್ಲಿನಿಕ್‌ಗಳನ್ನು 108.36 ಕೋಟಿ ರೂ. ವೆಚ್ಚದಲ್ಲಿ ಪ್ರಾರಂಭಿಸಲು ಸಚಿವ ಸಂಪುಟ ಅನುಮೋದನೆ ನೀಡಿದೆ. ಕೆಎಸ್‌ಆರ್‌ಟಿಸಿ ನಿಲ್ದಾಣಗಳಲ್ಲಿ 39, ನಗರದ ಹಿಂದುಳಿದ ಪ್ರದೇಶಗಳಲ್ಲಿ 215 ಕೇಂದ್ರಗಳನ್ನು ಪ್ರಾರಂಭಿಸಲಾಗುತ್ತಿದೆ ಎಂದು ತಿಳಿಸಿದ್ದಾರೆ. ಸದರಿ ಯೋಜನೆಯಿಂದ ಲಕ್ಷಾಂತರ ಬಸ್ ಪ್ರಯಾಣಿಕರು, ನಗರ ಪ್ರದೇಶದ ದುರ್ಬಲ ವರ್ಗದವರು ಪ್ರಾಥಮಿಕ ಹಂತದ ಚಿಕಿತ್ಸೆ ಪಡೆಯಲು ನೆರವಾಗಲಿದ್ದು, ಆರೋಗ್ಯಕರ ಕರ್ನಾಟಕ ನಿರ್ಮಿಸುವತ್ತ ಮತ್ತೊಂದು ಹೆಜ್ಜೆಯಾಗಿದೆ ಎಂದರು.

## ಪಾಕ್ ಪ್ರಜೆಗಳ ಬಂಧನ ಕೇಸ್ ರೂ.1,350ಕ್ಕೂ ಹೆಚ್ಚು ಪುಟಗಳ ಚಾರ್ಜ್‌ಶೀಟ್ ಸಲ್ಲಿಕೆ

• **ಉದಯವಾಹಿನಿ, ಬೆಂಗಳೂರು**

ಹೊರವಲಯದಲ್ಲಿ ಪಾಕ್ ಪ್ರಜೆಗಳ ಬಂಧನ ಪ್ರಕರಣಕ್ಕೆ ಸಂಬಂಧಿಸಿದಂತೆ ತನಿಖೆ ಪೂರ್ಣಗೊಳಿಸಿದ ಜಿಗಣಿ ಪೊಲೀಸರು ಕೋರ್ಟ್‌ಗೆ ದೋಷಾರೋಪ ಪಟ್ಟಿ ಸಲ್ಲಿಸಿದ್ದಾರೆ. ಸುಮಾರು 1,350ಕ್ಕೂ ಹೆಚ್ಚು ಪುಟಗಳ ಚಾರ್ಜ್‌ಶೀಟ್ ಸಲ್ಲಿಕೆ ಮಾಡಲಾಗಿದ್ದು.. 18 ಆರೋಪಿಗಳ ವಿರುದ್ಧ ಚಾರ್ಜ್‌ಶೀಟ್ ಸಲ್ಲಿಸಿದ್ದಾರೆ. ಇನ್ನು ಪೊಲೀಸರ ತನಿಖೆ ವೇಳೆ ಹಲವು ಮಹತ್ವದ ವಿಚಾರಗಳು ಬೆಳಕಿಗೆ ಬಂದಿದೆ. ಹಣ ವರ್ಗಾವಣೆ, ಅಕ್ರಮವಾಗಿ ಭಾರತಕ್ಕೆ ಎಂಟ್ರಿ, ಉದ್ಯೋಗ, ಧರ್ಮ ಬೋಧನೆ ವಿಚಾರಗಳನ್ನು ಪೊಲೀಸರು ಬಯಲಿಗೆಳೆದಿದ್ದಾರೆ. ಬಂಧಿತ 18 ಮಂದಿಯೂ ಪಾಕ್ ಮೂಲದ ಪ್ರಜೆಗಳಾಗಿದ್ದು, ದೇಶದಿಂದ ಬಹಿಷ್ಕರಿಸಲ್ಪಟ್ಟಿದ್ದರು. ಹಾಗಾಗಿಯೇ ಕಳೆದ ಮೂರ್ನಾಲ್ಕು ವರ್ಷಗಳ ಹಿಂದೆಯೇ ಭಾರತಕ್ಕೆ ಬಂದು ಬೇರೆ ಬೇರೆ ರಾಜ್ಯಗಳಲ್ಲಿ ವಾಸ ಮಾಡುತ್ತಿದ್ದರು. ಹೆಚ್ಚಾಗಿ ದೆಹಲಿ, ಕರ್ನಾಟಕದ ಬೆಂಗಳೂರು (ಆನೇಕಲ್ ಸಮೀಪದ ಜಿಗಣಿ, ಪೀಣ್ಯದಲ್ಲಿ) ದಾವಣಗೆರೆಯಲ್ಲಿ ನೆಲೆಸಿದ್ದರು. ಅಕ್ರಮವಾಗಿ ಭಾರತಕ್ಕೆ ಬಂದಿದ್ದ ಇವರು, ತಮ್ಮದೇ ಯೂಟ್ಯೂಬ್ ಚಾನೆಲ್ ತೆರೆದು ಧರ್ಮ ಬೋಧನೆ ಮಾಡುತ್ತಿದ್ದರು. ಎಲ್ಲಾ ಅಂಶಗಳನ್ನು ಆಧರಿಸಿ ತನಿಖೆ ನಡೆಸಿದ್ದ ಪೊಲೀಸರು ಹಲವು ಮಹತ್ವದ ಸಾಕ್ಷ್ಯಗಳನ್ನು ಕಲೆಹಾಕಿದ್ದರು. ವೇಳೆ ಪಾಕ್ ಪ್ರಜೆಗಳು ಸೇರಿದಂತೆ ಹಲವು ಮಂದಿಯ ಹೇಳಿಕೆ ದಾಖಲು ಮಾಡಲಾಗಿದೆ. ತಾಂತ್ರಿಕ ಸಾಕ್ಷ್ಯಗಳು, ಸಿಡಿಆರ್ ರಿಪೋರ್ಟ್, ಟವರ್ ಡಂಪ್, ಯೂಟ್ಯೂಬ್ ಚಾನೆಲ್ ವಿವರಗಳನ್ನ ಕಲೆಹಾಕಿದ್ದು, ಚಾರ್ಜ್‌ಶೀಟ್‌ನಲ್ಲಿ ಉಲ್ಲೇಖಿಸಿದ್ದಾರೆ.

## ಪ್ರೌಢಶಾಲೆ ಶಿಕ್ಷಕರಿಗೆ ರಾಜ್ಯಮಟ್ಟದ ಸಹಪಠ್ಯ ಚಟುವಟಿಕೆ ಸ್ಪರ್ಧೆ

• **ಉದಯವಾಹಿನಿ, ಬೆಂಗಳೂರು**

ಪ್ರಾಥಮಿಕ ಮತ್ತು ಪ್ರೌಢ ಶಾಲಾ ಶಿಕ್ಷಕರಿಗೆ ರಾಜ್ಯ ಮಟ್ಟದ ಸಹಪಠ್ಯ ಚಟುವಟಿಕೆ ಸ್ಪರ್ಧೆಗೆ ಶಿಕ್ಷಣ ಇಲಾಖೆಯು ವೇಳಾಪಟ್ಟಿ ಪ್ರಕಟಿಸಿ ಆದೇಶ ಹೊರಡಿಸಿದೆ. ಕರ್ನಾಟಕ ರಾಜ್ಯ ಶಿಕ್ಷಕರ ಕಲ್ಯಾಣ ನಿಧಿಯ ವತಿಯಿಂದ 2024-25ನೇ ಸಾಲಿನಲ್ಲಿ ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರಿಗೆ ಪ್ರತ್ಯೇಕವಾಗಿ ನಡೆಸಲಾಗುವ ರಾಜ್ಯಮಟ್ಟದ ಸಹಪಠ್ಯ ಚಟುವಟಿಕೆಗಳ ಸ್ಪರ್ಧೆಗಳನ್ನು ಕಿ: 26-12-2024 2 27-12-202400 ನಡೆಸಲು ನಿರ್ಧರಿಸಲಾಗಿದೆ. ರಾಜ್ಯಮಟ್ಟದ ಕಾರ್ಯಕ್ರಮಕ್ಕೆ ಅನುದಾನವನ್ನು ಉಪನಿರ್ದೇಶಕರು(ಆಡಳಿತ), ಶಾ.ಶಿ.ಇ. ಶಿವಮೊಗ್ಗ ಜಿಲ್ಲೆ ಇವರಿಗೆ ಅನುಬಂಧ-1(ಬಿ) ರಂತೆ ಬಿಡುಗಡೆ ಮಾಡಿದೆ. ಜಿಲ್ಲಾ ಹಂತದಲ್ಲಿ ಪ್ರಥಮ ಸ್ಥಾನ ಪಡೆದ ಶಿಕ್ಷಕರ ವಿವರಗಳನ್ನು ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಆಡಳಿತ), ಶಾ.ಶಿ.ಇ. ರವರು ಉಲ್ಲೇಖ-1ರ ಸುತ್ತೋಲೆಯಲ್ಲಿ ಲಗತ್ತಿಸಿರುವ ಅನುಬಂಧ-2(ಎ) ಹಾಗೂ 2(ಬಿ) ನಮೂನೆಯಲ್ಲಿ ಭರ್ತಿಮಾಡಿ ಉಪನಿರ್ದೇಶಕರು(ಆಡಳಿತ), ಶಾ.ಶಿ.ಇ. ಶಿವಮೊಗ್ಗ ರವರಿಗೆ ಸಲ್ಲಿಸುವಂತೆ ತಿಳಿಸಿದೆ. ಉಳಿದ ಎಲ್ಲಾ ನಿಯಮಗಳನ್ನು ಉಲ್ಲೇಖದಲ್ಲಿನ ಸುತ್ತೋಲೆಯಲ್ಲಿ ತಿಳಿಸಿರುವಂತೆ ಕಟ್ಟುನಿಟ್ಟಾಗಿ ಪಾಲಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸುವಂತೆ ತಿಳಿಸಿದೆ.

## ಪಾಲಿಕೆಯ ದಕ್ಷಿಣ ವಲಯ ವ್ಯಾಪ್ತಿಯಲ್ಲಿ ಪಾದಚಾರಿ ಮಾರ್ಗ ತೆರವು ಕಾರ್ಯಾಚರಣೆ

• **ಉದಯವಾಹಿನಿ, ಬೆಂಗಳೂರು**

ಪಾಲಿಕೆಯ ದಕ್ಷಿಣ ವಲಯ ವ್ಯಾಪ್ತಿಯಲ್ಲಿ ವಲಯ ಆಯುಕ್ತ ರವರ ನೇತೃತ್ವದಲ್ಲಿ ಪಾದಚಾರಿ ಮಾರ್ಗ ಅತಿಕ್ರಮಣ ತೆರವು ಕಾರ್ಯಾಚರಣೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ದಕ್ಷಿಣ ವಲಯ ವ್ಯಾಪ್ತಿಯಲ್ಲಿ ಬರುವ ಹಲವು ವಾರ್ಡ್‌ಗಳಲ್ಲಿ ಫುಟ್ಪಾತ್ ಅತಿಕ್ರಮಣ ತೆರವು ಕಾರ್ಯಾಚರಣೆಯನ್ನು ನಡೆಸಲಾಯಿತು.

ಪಾಲಿಕೆಯು ಪ್ರತಿ ವಾರ ಸಾರ್ವಜನಿಕ ಕುಂದು ಕೊರತೆಗಳನ್ನು ಆಲಿಸುವ ಸಭೆ ನಡೆಸುತ್ತಿದ್ದು, ಈ ಸಭೆಗಳಲ್ಲಿ ಸಾರ್ವಜನಿಕರು ವ್ಯಕ್ತಪಡಿಸುತ್ತಿದ್ದಂತಹ ಸಮಸ್ಯೆಗಳಲ್ಲಿ ಫುಟ್ಪಾತ್ ಅತಿಕ್ರಮಣವು ಹೆಚ್ಚಾಗಿ ಕೇಳಿಬರುತ್ತಿದ್ದಂತಹ ಸಮಸ್ಯೆಯಾಗಿತ್ತು.

ಈ ಹಿನ್ನೆಲೆಯಲ್ಲಿ ಪಾಲಿಕೆಯ ದಕ್ಷಿಣ ವಲಯ ವ್ಯಾಪ್ತಿಯಲ್ಲಿ ಬರುವ ಕತ್ತರಿಗುಪ್ಪೆ, ಆಡುಗೋಡಿ, ಹನುಮಂತನಗರ, ಗಣೇಶ ಮಂದಿರ, ಚಿಕ್ಕಲ್ಲಸಂದ್ರ ಗವಿಗಂಗಾಧರೇಶ್ವರ ಹಾಗೂ ಇನ್ನಿತರೆ ಪ್ರದೇಶಗಳಲ್ಲಿನ ರಸ್ತೆಗಳಲ್ಲಿ ವಾಣಿಜ್ಯ ಮಳಿಗೆಗಳು ಹಾಗೂ ಬೀದಿ ಬದಿ ವ್ಯಾಪಾರಿಗಳು ಪಾದಚಾರಿ ಮಾರ್ಗಗಳನ್ನು



ಉದಯವಾಹಿನಿ ಚಿತ್ರ

ಅತಿಕ್ರಮಿಸಿರುವುದನ್ನು ತೆರವುಗೊಳಿಸುವ ಕಾರ್ಯವನ್ನು ಪಾಲಿಕೆಯ ದಕ್ಷಿಣ ವಲಯ ಆಯುಕ್ತರವರ ನೇತೃತ್ವದಲ್ಲಿ ಕೈಗೊಳ್ಳಲಾಯಿತು.

ಪಾದಚಾರಿ ಮಾರ್ಗಗಳಲ್ಲಿ ಅತಿಕ್ರಮಣ ಮಾಡಲಾಗಿದ್ದಂತಹ ತಳ್ಳು ಗಾಡಿಗಳು, ಕಬ್ಬು ಹಿಂಡುವ ಯಂತ್ರಗಳು, ಪೋಲ್/ಫಲಕಗಳು ಹಾಗೂ ಇತರೆ ಸಾಮಗ್ರಿಗಳನ್ನು ಕಾರ್ಯಾಚರಣೆ ಸಮಯದಲ್ಲಿ ತೆರವುಗೊಳಿಸಲಾಯಿತು.

## ಬಿಜೆಪಿ ನಾಯಕರು ಯಾಕೆ ವಕ್ಫ್ ವಿಚಾರ ಪ್ರಸ್ತಾಪಿಸುತ್ತಿಲ್ಲ: ಜಮೀರ್ ಪ್ರಶ್ನೆ


• **ಉದಯವಾಹಿನಿ, ಬೆಂಗಳೂರು**

ರಾಜ್ಯದ ಉಪ ಚುನಾವಣೆ ಮತ್ತು ಅನ್ಯ ರಾಜ್ಯಗಳ ವಿಧಾನಸಭಾ ಚುನಾವಣೆ ಸಂದರ್ಭದಲ್ಲಿ ವಕ್ಫ್ ವಿವಾದ ಪ್ರಸ್ತಾಪಿಸುತ್ತಿದ್ದ ಬಿಜೆಪಿ ನಾಯಕರು ಚುನಾವಣೆ ನಂತರ ಯಾಕೆ ಮೌನವಾಗಿದ್ದಾರೆ ಎಂದು ವಸತಿ, ಹಿಂದುಳಿದ ಮತ್ತು ಅಲ್ಪ ಸಂಖ್ಯಾತರ ಅಭಿವೃದ್ಧಿ ಹಾಗೂ ವಕ್ಫ್ ಸಚಿವ ಜಮೀರ್ ಅಹಮದ್ ಖಾನ್ ಪ್ರಶ್ನಿಸಿದ್ದಾರೆ.

ಚಾಮರಾಜಪೇಟೆ ವಿಧಾನಸಭಾ ಕ್ಷೇತ್ರದಲ್ಲಿ ಬಹುಕೋಟಿ ಮೊತ್ತದ ವಿವಿಧ ಕಾಮಗಾರಿಗಳಿಗೆ ಅವರು ಚಾಲನೆ ನೀಡಿದರು.

ಬಿಬಿಎಂಪಿ ಮಾಜಿ ಸದಸ್ಯ ಹಾಗೂ ಹಿರಿಯ ಕಾಂಗ್ರೆಸ್ ಮುಖಂಡ ಚಂದ್ರಶೇಖರ್ ಅಪ್ಪೋಡು ಹಾಗೂ ಬಿಬಿಎಂಪಿ ಮಾಜಿ ಸದಸ್ಯರಾದ ಕೋಕಿಲಾ ಚಂದ್ರಶೇಖರ್ ನೇತೃತ್ವದಲ್ಲಿ ಆಯೋಜಿಸಲಾದ ಕಾರ್ಯಕ್ರಮದಲ್ಲಿ ವಿವಿಧ ಕಾಮಗಾರಿಗಳಿಗೆ ಭೂಮಿ ಪೂಜೆ ನೆರವೇರಿಸಿ ಮಾತನಾಡಿದ ಅವರು, ಚುನಾವಣೆ ಸಂದರ್ಭದಲ್ಲಿ ಬಿಜೆಪಿ ನಾಯಕರು ಎಲ್ಲಾ ಕಡೆ ವಕ್ಫ್ ಎಂದು ಅನಗತ್ಯವಾಗಿ ಹುಯಿಲೆಬ್ಬಿಸಿದರು. ಚುನಾವಣೆ ಮುಗಿದ ನಂತರ ತೆಪ್ಪಗಾಗಿದ್ದಾರೆ ಎಂದರು. ಬಿಜೆಪಿಗೆ ಅಭಿವೃದ್ಧಿ ಬೇಕಾಗಿಲ್ಲ. ಹಿಂದು ಮುಸ್ಲಿಂ ಎಂದು ಸಂಘರ್ಷ ಮೂಡಿಸುವುದೇ ಅವರ ಕಾಯಕವಾಗಿದೆ. ಬಡವರ ಪರವಾಗಿ ಕೆಲಸ ಮಾಡುತ್ತಿರುವುದು ಕಾಂಗ್ರೆಸ್ ಮಾತ್ರ. ಆದರೆ ಬಡವರ ಕೆಲಸಗಳಿಗೂ ಬಿಜೆಪಿ ಅಡ್ಡಿ ಮಾಡುತ್ತಿದೆ. ಗ್ಯಾರೆಂಟಿ ಯೋಜನೆಗಳನ್ನು ಜಾರಿ ಮಾಡಿರುವುದನ್ನು ಸಹಿಸಿಕೊಳ್ಳಲು ಅವರಿಗೆ ಸಾಧ್ಯವಾಗುತ್ತಿಲ್ಲ. ಜನರನ್ನು ದಾರಿ ತಪ್ಪಿಸುತ್ತಿದ್ದಾರೆ ಎಂದರು.

ಬಹುದಿನಗಳ ಕನಸಾಗಿದ್ದ ನೀರು ಸರಬರಾಜು ಮತ್ತು ಒಳಚರಂಡಿ ಕಾಮಗಾರಿಗೆ ಭೂಮಿ ಪೂಜೆ ನೆರವೇರಿ, ಚಾಮರಾಜಪೇಟೆಯ ರಸ್ತೆಗಳಿಗೆ ಹೊಸ ರೂಪ ನೀಡುವ ಉದ್ದೇಶದಿಂದ ಒಟ್ಟು 57.64 ಕೋಟಿ ರೂಪಾಯಿ ಮೊತ್ತದ ವೈಟ್ ಟ್ಯಾಪಿಂಗ್ ಕಾಮಗಾರಿಯನ್ನು ಕೈಗೊಂಡಿರುವುದು ತಮಗೆ ಸಂತಸ ತಂದಿದೆ ಎಂದು ಸಚಿವರು ಹೇಳಿದರು. ಕಾರ್ಯಕ್ರಮದಲ್ಲಿ ಯುವ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ರಾಜೀವ್ ಹಾಗೂ ಹಿರಿಯ ಮುಖಂಡರು ಉಪಸ್ಥಿತರಿದ್ದರು.


ಉದಯವಾಹಿನಿ ಚಿತ್ರ

**ಬಹುಕೋಟಿ ಮೊತ್ತದ ವಿವಿಧ ಕಾಮಗಾರಿಗಳಿಗೆ ಚಾಲನೆ**

> **ಹಿಂದಿನ ಬಿಜೆಪಿ ಸರ್ಕಾರದಲ್ಲಿ ಬಡವರಿಗೆ ಒಂದೇ ಒಂದು ಮನೆ ಕಟ್ಟಿ ಕೊಟ್ಟಿಲ. ಕೇಂದ್ರ ಸರ್ಕಾರ ಬಡವರ ಮನೆ ನಿರ್ಮಾಣಕ್ಕೆ ಸಬ್ಸಿಡಿ ನೀಡಿ ಸರ್ಕಾರದ ನೆರವಿ ಮೊತ್ತದಲ್ಲಿ ಜಿ ಎಸ್ ಟಿ ರೂಪದಲ್ಲಿ ಶೇ 18 ರಷ್ಟು ತೆರಿಗೆ ವಸೂಲಿ ಮಾಡುತ್ತಿದೆ. ಬಡವರ ವಿರೋಧಿ ಧೋರಣೆಯನ್ನು ಅನುಸರಿಸುತ್ತಿದೆ ಎಂದು ವಾಗ್ದಾಳಿ ನಡೆಸಿದರು.**

## ಸರ್ಕಾರಿ ಆಸ್ಪತ್ರೆಗಳಲ್ಲಿ ಐವಿ ರಿಂಗರ್ ಲ್ಯಾಕ್ಟೇಟ್ ಬಳಕೆಗೆ ನಿಷೇಧ

• **ಉದಯವಾಹಿನಿ, ಬೆಂಗಳೂರು**

ಮುಂಜಾಗ್ರತೆ ಕ್ರಮವಾಗಿ ರಾಜ್ಯಾದ್ಯಂತ ಸರ್ಕಾರಿ ಆಸ್ಪತ್ರೆಗಳಲ್ಲಿ ಐವಿ ರಿಂಗರ್ ಲ್ಯಾಕ್ಟೇಟ್ ಬಳಕೆಯನ್ನ ತಡೆಹಿಡಿಯಲಾಗಿದೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಹೇಳಿದ್ದಾರೆ.

ಬಳ್ಳಾರಿ ಜಿಲ್ಲಾಸ್ಪತ್ರೆಯಲ್ಲಿ ಬಾಣಂತಿಯರ ಸಾವುಗಳ ಕುರಿತು ಬೆಂಗಳೂರಿನಲ್ಲಿ ಮಾಧ್ಯಮದವರಿಗೆ ಪ್ರತಿಕ್ರಿಯಿಸಿದ ಸಚಿವರು, ಐವಿ ದ್ರಾವಣ ಬಗ್ಗೆ ಅನುಮಾನಗಳು ವ್ಯಕ್ತ ವಾಗಿರುವ ಹಿನ್ನೆಲೆಯಲ್ಲಿ ಮುಂಜಾಗ್ರತೆಯ ದೃಷ್ಟಿಯಿಂದ ಈ ಕ್ರಮ ಕೈಗೊಳ್ಳಲಾಗಿದೆ ಎಂದು ಸ್ಪಷ್ಟಪಡಿಸಿದರು.

ರಿಂಗರ್ ಲ್ಯಾಕ್ಟೇಟ್ ಗ್ಲುಕೋಸ್ ಅನ್ನ ಈ ಹಿಂದಿನಿಂದಲು ಆಸ್ಪತ್ರೆಗಳಲ್ಲಿ ಬಳಕೆ ಮಾಡುತ್ತಾ ಬರಲಾಗುತ್ತಿದೆ. ಈ ಬಾರಿಯೂ ಔಷಧ ಸರಬರಾಜು ನಿಗಮಕ್ಕೆ 192 ಬ್ಯಾಚ್‌ಗಳಲ್ಲಿ ಐವಿ ದ್ರಾವಣ ಪೂರೈಕೆಯಾಗಿತ್ತು. ಇದರ ಬಳಕೆ ಸಂದರ್ಭದಲ್ಲಿ ಎರಡು ಬ್ಯಾಚ್ ಗಳ ಬಗ್ಗೆ ಕೆಲವು ಅನುಮಾನಗಳು ವ್ಯಕ್ತವಾದಾಗ ಮುಂಜಾಗ್ರತೆ ದೃಷ್ಟಿಯಿಂದ ಸಂಪೂರ್ಣವಾಗಿ ಎಲ್ಲಾ 192 ಬ್ಯಾಚ್‌ಗಳ ದ್ರಾವಣವನ್ನ ಆಸ್ಪತ್ರೆಗಳಲ್ಲಿ ಬಳಸದಂತೆ ತಡೆಹಿಡಿಯಲಾಗಿತ್ತು. ಆ ಬಳಿಕ ಕಂಪನಿಯವರು ಹೈ ಕೋರ್ಟ್ ನಿಂದ ಆದೇಶ ಪಡೆದ ಹಿನ್ನೆಲೆಯಲ್ಲಿ ಸೆಂಟ್ರಲ್ ಡ್ರಗ್ ಲ್ಯಾಬರೋಟರಿಯಲ್ಲಿ ಟೆಸ್ಟಿಂಗ್ ನಡೆದಾಗ ದ್ರಾವಣ ಬಳಸಬಹುದು ಎಂಬ ವರದಿ ಬಂತು. ಸಿ.ಡಿ.ಎಲ್ ನವರ ವರದಿ ಹಿನ್ನೆಲೆಯಲ್ಲಿ ರಾಜ್ಯದಲ್ಲಿ ತಜ್ಞರ ತಾಂತ್ರಿಕ ಸಮಿತಿ ರಚಿಸಿ ಟೆಸ್ಟಿಂಗ್ ನಡೆಸಿ ಸ್ಟ್ಯಾಂಡರ್ಡ್ ಕ್ವಾಲಿಟಿಯ ಕೆಲವು ಬ್ಯಾಚ್ ಗಳ ದ್ರಾವಣವನ್ನ ಬಳಸಲು ಅವಕಾಶ ಮಾಡಿ ಕೊಡಲಾಗಿತ್ತು.

ಹಲವು ಸರ್ಕಾರಿ ಆಸ್ಪತ್ರೆಗಳಲ್ಲಿ ದ್ರಾವಣದ ಬಳಕೆಯಾಗಿದ್ದು, ಬಳ್ಳಾರಿ ಜಿಲ್ಲಾಸ್ಪತ್ರೆಯಲ್ಲಿ ಮಾತ್ರ ಅನುಮಾನಗಳು ವ್ಯಕ್ತವಾಗಿವೆ.

> **ಬಳ್ಳಾರಿ ಆಸ್ಪತ್ರೆಗೆ ಪೂರೈಕೆಯಾದ ಬ್ಯಾಚ್‌ಗಳನ್ನ ಅನರೋಬಿಕ್ ಟೆಸ್ಟ್ ಗೆ ಕಳಿಸಿದ್ದೇವೆ. ಬಾಣಂತಿಯರ ಸಾವಿಗೆ ಐವಿ ದ್ರಾವಣವೂ ಒಂದು ಕಾರಣವಾಗಿರಬಹುದಾ ಅಥವಾ ಇಲ್ಲಾವಾ ಎಂಬುದು ಅನರೋಬಿಕ್ ಟೆಸ್ಟ್ ನಲ್ಲಿ ಸ್ಪಷ್ಟತೆ ಸಿಗಲಿದೆ. ವಾರದಲ್ಲಿ ಈ ಟೆಸ್ಟಿಂಗ್ ವರದಿ ಬರಲಿದೆ. ಆ ಬಳಿಕ ಐವಿ ದ್ರಾವಣ ಬಳಕೆ ಬಗ್ಗೆ ಅಂತಿಮ ನಿರ್ಧಾರ ಕೈಗೊಳ್ಳಲಾಗುವುದು. ಅಲ್ಲಿಯ ವರೆಗೆ ಮುಂಜಾಗ್ರತೆ ಕ್ರಮವಾಗಿ ಐವಿ ರಿಂಗರ್ ಲ್ಯಾಕ್ಟೇಟ್ ಬಳಕೆಯನ್ನ ರಾಜ್ಯಾದ್ಯಂತ ತಡೆಹಿಡಿಯಲಾಗಿದೆ. ನಮಗೆ ಪ್ರತಿಯೊಂದು ಜೀವವು ಮುಖ್ಯ. ಈ ರೀತಿಯ ಅನುಮಾನಗಳು ವ್ಯಕ್ತವಾದಾಗ ಮುನ್ನೆಚ್ಚರಿಕೆ ವಹಿಸಬೇಕಾಗುತ್ತದೆ. ಈ ಹಿನ್ನೆಲೆಯಲ್ಲಿ ಐವಿ ರಿಂಗರ್ ಲ್ಯಾಕ್ಟೇಟ್ ಬಳಸದಂತೆ ಎಲ್ಲಾ ಆಸ್ಪತ್ರೆಗಳಿಗೆ ಸೂಚಿಸಲಾಗಿದೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಹೇಳಿದರು.**


ಉದಯವಾಹಿನಿ ಚಿತ್ರ

**192 ಬ್ಯಾಚ್ ಗಳಲ್ಲಿ ಐವಿ ದ್ರಾವಣ ಪೂರೈಕೆ**

## ಟೆಸ್ಕೊ ಗ್ರೂಪ್‌ನ ಹೊಸ ವಿತರಣಾ ಕೇಂದ್ರ: ಎಂ.ಬಿ. ಪಾಟೀಲ

• **ಉದಯವಾಹಿನಿ,ಹೊಸಕೋಟೆ**

ಬೆಂಗಳೂರಿನಲ್ಲಿ ತನ್ನ ಕಾರ್ಯಾಚರಣೆ ವಿಸ್ತರಿಸಲು ಮತ್ತು ಹೊಸಕೋಟೆಯಲ್ಲಿ ಹೊಸ ವಿತರಣಾ ಕೇಂದ್ರ ಸ್ಥಾಪಿಸಲು ಟೆಸ್ಕೊ ಉದ್ದೇಶಿಸಿದ್ದು, ಇದರಿಂದ 16,500 ಉದ್ಯೋಗಗಳು ಸೃಷ್ಟಿಯಾಗಲಿವೆ' ಎಂದು ಕೈಗಾರಿಕಾ ಸಚಿವ ಎಂ. ಬಿ. ಪಾಟೀಲ ಅವರು ತಿಳಿಸಿದ್ದಾರೆ.

ಇನ್ವೆಸ್ಟ್ ಕರ್ನಾಟಕದ ಅಂತರರಾಷ್ಟ್ರೀಯ ರೋಡ್ ಷೋದ ಭಾಗವಾಗಿ ಸಚಿವರು ಲಂಡನ್‌ನಲ್ಲಿ ಎರಡನೆ ದಿನ ರೋಲ್ಸ್ ರಾಯ್ಸ್, ಮಗೆಲ್ಲನ್ ಏರೋಸ್ಪೇಸ್, ಟೆಸ್ಕೊ ಮತ್ತು ಪಿಯರ್ಸನ್ ಕಂಪನಿಗಳ ಮುಖ್ಯಸ್ಥರ ಜೊತೆ ಸಮಾಲೋಚನೆ ನಡೆಸಿದ ನಂತರ ಈ ಮಾಹಿತಿ ನೀಡಿದ್ದಾರೆ. ಬೆಂಗಳೂರಿನಲ್ಲಿ ತನ್ನ ವಹಿವಾಟು ವಿಸ್ತರಿಸಲು 1,500 ಉದ್ಯೋಗಿಗಳನ್ನು ನೇಮಕ ಮಾಡಿಕೊಳ್ಳಲು ಉದ್ದೇಶಿಸಿರುವ ಟೆಸ್ಕೊ ಗ್ರೂಪ್, ಹೊಸಕೋಟೆಯಲ್ಲಿ ಹೊಸ ವಿತರಣಾ ಕೇಂದ್ರ ಸ್ಥಾಪಿಸಲಿದೆ. ಇದರಿಂದ 16,500 ಉದ್ಯೋಗ ಅವಕಾಶಗಳು ಸೃಷ್ಟಿಯಾಗಲಿವೆ. ಕರ್ನಾಟಕದ ವೈಮಾಂತರಿಕ್ಷ-ರಕ್ಷಣೆ, ವಾಹನ ತಯಾರಿಕೆ ಹಾಗೂ ಶಿಕ್ಷಣ ಕ್ಷೇತ್ರಗಳಲ್ಲಿ ಬಂಡವಾಳ ಹೂಡಿಕೆಗೆ ಇರುವ ಅವಕಾಶಗಳನ್ನು ಸಚಿವರು ಇಂಗ್ಲೆಂಡ್ ಉನ್ನತ ಜಾಗತಿಕ ಕಂಪನಿಗಳಿಗೆ ಮನವರಿಕೆ ಮಾಡಿಕೊಟ್ಟಿದ್ದಾರೆ. ರಾಜ್ಯದಲ್ಲಿನ ಸದೃಢ ಮೂಲಸೌಲಭ್ಯ, ಉದ್ಯಮ ಪೂರಕ ವಾತಾವರಣ ಮತ್ತು 'ಕ್ವಿನ್ ಸಿಟಿ' ಯೋಜನೆಗಳಂತಹ ದೂರದೃಷ್ಟಿಯ ಉಪಕ್ರಮಗಳನ್ನು ಪರಿಚಯಿಸಿದ್ದಾರೆ. ರೋಲ್ಸ್ ರಾಯ್ಸ್ ಗ್ರೂಪ್ ಜೊತೆಗಿನ ಸಭೆಯಲ್ಲಿ ಸಚಿವ ಪಾಟೀಲ ಅವರು ಏರೋಸ್ಪೇಸ್ ಮತ್ತು ರಕ್ಷಣೆ ವಲಯದಲ್ಲಿ ಕರ್ನಾಟಕದಲ್ಲಿ ಲಭ್ಯ ಅವಕಾಶಗಳನ್ನು ಪರಿಚಯಿಸಿದರು. ಕರ್ನಾಟಕಕ್ಕೆ ಸಂಬಂಧಿಸಿದ ಕಂಪನಿಯ ಬದ್ಧತೆಯನ್ನು ಮೆಗೆಲ್ಲನ್ ಏರೊಸ್ಪೇಸ್ ಪುನರುಚ್ಚರಿಸಿದೆ. ಜಾಗತಿಕ ವೈಮಾಂತರಿಕ್ಷ ಕೇಂದ್ರವಾಗಿ ಸಿನಿಮಾ ರಾಜ್ಯದ ಸ್ಥಾನವನ್ನು ಮತ್ತಷ್ಟು ಬಲಪಡಿಸಲಿರುವ ಕಂಪನಿಯ ವಿಸ್ತರಣಾ ಯೋಜನೆಗಳಿಗೆ ರಾಜ್ಯ ಸರ್ಕಾರದ ಸಂಪೂರ್ಣ ಬೆಂಬಲ ನೀಡುವುದಾಗಿ ಸಚಿವರು ಭರವಸೆ ನೀಡಿದ್ದಾರೆ. ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆಯ ಪ್ರಧಾನ ಕಾರ್ಯದರ್ಶಿ ಡಾ. ಎಸ್. ಸೆಲ್ವಕುಮಾರ್, ಕೈಗಾರಿಕಾ ಇಲಾಖೆ ಆಯುಕ್ತರಾದ ಶ್ರೀಮತಿ ಗುಂಜನ್ ಕೃಷ್ಣ ಅವರು ಉದ್ಯಮಿಗಳ ಜೊತೆಗಿನ ಸಮಾಲೋಚನೆಗಳಲ್ಲಿ ಭಾಗವಹಿಸಿದ್ದರು.


ಉದಯವಾಹಿನಿ ಚಿತ್ರ

> **ಇದಕ್ಕೆ ಕಂಪನಿಯ ನಾಯಕತ್ವವು ಮೆಚ್ಚುಗೆ ಸೂಚಿಸಿದೆ. ಇಂಗ್ಲೆಂಡ್ ಪ್ರಮುಖ ಶೈಕ್ಷಣಿಕ ಕಂಪನಿಯಾಗಿರುವ ಪಿಯರ್ಸನ್ ಗ್ರೂಪ್, ಕೃತಕ ಬುದ್ಧಿಮತ್ತೆ (ಎಐ) ಆಧಾರಿತ ಕಲಿಕೆಯ ಪರಿಹಾರಗಳನ್ನು ಮತ್ತು ಪಾಲುದಾರಿಕೆಗಳನ್ನು ಬಲಪಡಿಸುವ ಮೂಲಕ ಭಾರತದಲ್ಲಿ ತನ್ನ ಕಾರ್ಯಾಚರಣೆಗಳನ್ನು ವಿಸ್ತರಿಸಲು ಆಸಕ್ತಿ ವ್ಯಕ್ತಪಡಿಸಿದೆ.**

# ಡಿಸೆಂಬರ್ 2ರಂದು ರಾಜ್ಯವ್ಯಾಪಿ ಹೋರಾಟಕ್ಕೆ ಕರೆ

## ವಿಶೇಷ ಚೇತನರ ಅನುದಾನಕ್ಕೂ ಸರ್ಕಾರ ಕೊಕ್ಕೆ ರೂ. 80% ರಷ್ಟು ಅನುದಾನ ಕಡಿತ ಆರೋಪ!

• **ಉದಯವಾಹಿನಿ, ಬೆಂಗಳೂರು**

ರಾಜ್ಯ ಸರ್ಕಾರ ಗ್ಯಾರಂಟಿ ಯೋಜನೆಗಳಿಗೆ ಹಣ ನೀಡೋ ಬರದಲ್ಲಿ ಉಳಿದ ಎಲ್ಲಾ ಅಭಿವೃದ್ಧಿ ಕಾರ್ಯಗಳ ಬಗ್ಗೆ ಗಮನವೇ ಹರಿಸುತ್ತಿಲ್ಲ ಅನ್ನೋ ಆರೋಪಗಳು ಮತ್ತೊಮ್ಮೆ ಕೇಳಿಬಂದಿದೆ. ಈಗ ಸರ್ಕಾರ ಅಂಗವಿಕಲರ ಅನುದಾನಕ್ಕೂ ಕೊಕ್ಕೆ ಹಾಕಿದ್ದು ಕಳೆದ ವರ್ಷಕ್ಕಿಂತ 80% ರಷ್ಟು ಅನುದಾನ ಕಡಿತ ಮಾಡಿದೆ ಅಂತಾ ವಿಕಲಚೇತರ ಫೆಡರೇಷನ್ ಧ್ವನಿ ಎತ್ತಿದೆ.

ನಮ್ಮ ಯೋಜನೆಗಳಿಗೆ ನೀಡಬೇಕಾದ ಅನುದಾನವನ್ನ ನೀಡಿ ಎಂದು ಮನವಿ ಮಾಡಿದ್ದಾರೆ. ಸರ್ಕಾರ ನಮ್ಮ ಮನವಿಯನ್ನ ಪೂರೈಸದೆ ಹೋದ್ರೆ ಇದೇ ಡಿಸೆಂಬರ್ 2ರಿಂದ ಹೋರಾಟ ಮಾಡುತ್ತೇವೆ ಎಂದು ಎಚ್ಚರಿಕೆ ಸಹ ನೀಡಿದ್ದಾರೆ.

ಈ ಕುರಿತು ರಾಷ್ಟ್ರೀಯ ವಿಕಲಚೇತನರ ಫೆಡರೇಷನ್ ಕರ್ನಾಟಕ ಶಾಖೆಯ ವ್ಯವಸ್ಥಾಪಕ ಹೇಮಂತ್ ಮಾತನಾಡಿದ್ದಾರೆ. ರಾಜ್ಯ ಸರ್ಕಾರ ಗ್ಯಾರಂಟಿ ಯೋಜನೆಗಳನ್ನ ನೀಡುವ ಬರದಲ್ಲಿ ಅಂಗವಿಕಲರಿಗೆ ಅನ್ಯಾಯ ಮಾಡ್ತಿದೆ.

ರಾಜ್ಯದಲ್ಲಿರೋ ಅಂಗವಿಕಲರು ಸೇವಾಸಿಂಧು ಮೂಲಕ ಅನುದಾನಕ್ಕೆ ಅರ್ಜಿ ಹಾಕಿದ್ರೂ, ಅನುಕೂಲವಾಗ್ತಿಲ್ಲ, ವ್ಹೀಲ್ ಚೇರ್ ಆಗಿರಬಹುದು, ಲ್ಯಾಪ್‌ಟ್ಯಾಪ್ ಆಗಿರಬಹುದು ಹೀಗೆ ಎಲ್ಲಾ ಸ್ಕೀಮ್‌ಗೂ ತೊಡಕಾಗಿದೆ. ಈ ಬಗ್ಗೆ ಸಿಎಂ, ಡಿಸಿಎಂಗೂ ಮನವಿ ಮಾಡಿದ್ದೇವೆ. ಇದೇ ಡಿಸೆಂಬರ್ 3 ಅಂಗವಿಕಲರ ದಿನಾಚರಣೆ ಇದೆ. ಸರ್ಕಾರ ಡಿಸೆಂಬರ್ 2ರೊಳಗೆ ಅನುದಾನ ನೀಡದೇ ಹೋದ್ರೇ ಅಂದಿನಿಂದಲೇ ಪ್ರತಿಭಟನೆ ಮಾಡುತ್ತೇವೆ ಅಂತಾ ಹೇಳಿದ್ದಾರೆ. ಸರ್ಕಾರ ಕಳೆದ ವರ್ಷ 40 ಕೋಟಿ ರೂ. ಅನುದಾನ ಕೊಟ್ಟಿದೆ. ಆದ್ರೆ ಈ ವರ್ಷ ಕೇವಲ 10 ಕೋಟಿ ರೂ. ಕೊಟ್ಟಿದ್ದು, ಶೇ.80 ರಷ್ಟು ಅನುದಾನ ಕಡಿತಗೊಳಿಸಿದೆ. ಆದ್ರೆ, ಗ್ಯಾರಂಟಿಗಳಿಗೆ 58,000 ಕೋಟಿ ರೂ. ಮೀಸಲಿಟ್ಟಿದೆ. ರಾಜ್ಯ ಸರ್ಕಾರ ಯಾವುದೇ ಕಾರಣಗಳನ್ನ ನೀಡುತ್ತಿಲ್ಲ, ಗ್ಯಾರಂಟಿ ಸ್ಕೀಂನಿಂದ ಸರ್ಕಾರಕ್ಕೆ ಹಣದ ಕೊರತೆ ಉಂಟಾಗಿ, ನಮ್ಮ ಯೋಜನೆಗಳಿಗೆ ಕತ್ತರಿ ಹಾಕಿರಬಹುದು. ಕೆಲ ವರ್ಷಗಳಿಂದ ಯೋಜನೆ ಮುಂದುವರಿಸಿಕೊಂಡು ಬರಲಾಗ್ತಿದೆ. ಹೊಸ ಯೋಜನೆಗಳನ್ನ ಘೋಷಿಸಿಲ್ಲ. ಕಳೆದ ವರ್ಷ 54 ಕೋಟಿ ರೂ. ವೆಚ್ಚದಲ್ಲಿ 4 ಸಾವಿರ ವೆಹಿಕಲ್ ನೀಡಿದ್ರು, 400 ಲ್ಯಾಪ್ ಟಾಪ್ ಅಂಧ ವಿದ್ಯಾರ್ಥಿಗಳಿಗೆ ನೀಡಿದ್ರು. 183 ಬ್ರೈಲ್ ಕಿಟ್ ಕೊಟ್ಟಿದ್ದಾರೆ. ಈ ವರ್ಷದ ಅನುದಾನದಲ್ಲಿ 350 ವೆಹಿಕಲ್ ಕೊಡಬಹುದು, 30 ಲ್ಯಾಪ್‌ಟಾಪ್, 130 ಬ್ರೈಲ್ ಕಿಟ್ ನೀಡಬಹುದು. ಆದ್ರೆ ಸರ್ಕಾರದಿಂದ ಯಾವುದೇ ಸ್ಪಂದನೆ ಸಿಕ್ಕಿಲ್ಲ. ಎಲ್ಲಾ ಶಾಸಕರಿಗೆ ಮನವಿ ಕೊಟ್ಟಿದ್ದೆ, ಅವರೂ ಸ್ಪಂದಿಸಿಲ್ಲ. ಹಾಗಾಗಿ ಡಿಸೆಂಬರ್ 2ರಂದು ರಾಜ್ಯಾದ್ಯಂತ ಪ್ರತಿಭಟನೆಗೆ ನಿರ್ಧರಿಸಲಾಗಿದೆ. ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲೂ ಪ್ರತಿಭಟನೆ ನಡೆಯಲಿದೆ ಎಂದು ಎಚ್ಚರಿಸಿದ್ದಾರೆ.



ಉದಯವಾಹಿನಿ ಚಿತ್ರ

### 2023-24ರ ವರ್ಷದಲ್ಲಿ ಬಿಡುಗಡೆಯಾದ ಅನುದಾನರೂ. ಯೋಜನೆ- ಹಣ ಬಿಡುಗಡೆ- ಫಲಾನುಭವಿಗಳ ಸಂಖ್ಯೆ

- ಯಂತ್ರಚಾಲಿತ ದ್ವಿಚಕ್ರವಾಹನ ರೂ. 3980 ಲಕ್ಷ ರೂ ರೂ. 4000 ಫಲಾನುಭವಿಗಳು
- ಟಾಕಿಂಗ್ ಲ್ಯಾಪ್‌ಟಾಪ್ ರೂ. 397.43 ಲಕ್ಷ ರೂ. ರೂ. 411 ಫಲಾನುಭವಿಗಳು
- ಬ್ಯಾಟರಿ ಆಪರೇಟಿವ್ ವ್ಹೀಲ್‌ಚೇರ್ ರೂ. 499.20 ಲಕ್ಷ ರೂ. ರೂ. 520 ಫಲಾನುಭವಿಗಳು
- ಬ್ರೈಲ್‌ಕಿಟ್ ರೂ. 44.03 ಲಕ್ಷ ರೂ. ರೂ. 183 ಫಲಾನುಭವಿಗಳು
- ಹೊಲಿಗೆ ಯಂತ್ರ ರೂ. 19.95 ಲಕ್ಷ ರೂ. ರೂ. 179 ಫಲಾನುಭವಿಗಳು
- ಸಾಧನ ಸಲಕರಣೆ ರೂ. 145.34ಲಕ್ಷ ರೂ. ರೂ. 266 ಫಲಾನುಭವಿಗಳು

### 2024-25ನೇ ಸಾಲಿನಲ್ಲಿ ಸರ್ಕಾರ ಮೀಸಲಿಟ್ಟ ಅನುದಾನ ಸಲ್ಲಿಕೆಯಾಗಿರುವ ಅರ್ಜಿಗಳು

- ಯಂತ್ರಚಾಲಿತ ದ್ವಿಚಕ್ರವಾಹನ ರೂ. 350 ಲಕ್ಷ ರೂ. ರೂ. ಅರ್ಜಿಗಳ ಸಂಖ್ಯೆ ರೂ. 9,744
- ಟಾಕಿಂಗ್ ಲ್ಯಾಪ್‌ಟಾಪ್ ರೂ. 30 ಲಕ್ಷ ರೂ. ರೂ. ಅರ್ಜಿಗಳ ಸಂಖ್ಯೆ 553
- ಬ್ಯಾಟರಿ ಆಪರೇಟೆಡ್ ವ್ಹೀಲ್‌ಚೇರ್ ರೂ. ಅರ್ಜಿಗಳ ಸಂಖ್ಯೆ 350
- ಬ್ರೈಲ್‌ಕಿಟ್ ರೂ. 35 ಲಕ್ಷ ರೂ. ರೂ. ಅರ್ಜಿಗಳ ಸಂಖ್ಯೆ 311
- ಹೊಲಿಗೆ ಯಂತ್ರ ರೂ. 25 ಲಕ್ಷ ರೂ. ರೂ. ಅರ್ಜಿಗಳ ಸಂಖ್ಯೆ 862
- ಸಾಧನ ಸಲಕರಣೆ ರೂ. 100 ಲಕ್ಷ ರೂ. ರೂ. ಅರ್ಜಿಗಳ ಸಂಖ್ಯೆ 5,173

ಉದಯವಾಹಿನಿ
ಪ್ರಾದೇಶಿಕ
ಭಾನುವಾರ 01 ಡಿಸೆಂಬರ್ 2024
03

# ಚನ್ನಪಟ್ಟಣ ಸೋಲಿನ ಹೊಣೆ ನಾನೇ ಹೊರುತ್ತೇನೆ: ಹೆಚ್.ಡಿ.ಕುಮಾರಸ್ವಾಮಿ

## ನಾವು ಮಾಡಿದ ಕೆಲ ವಿಳಂಬದ ನಿರ್ಧಾರವೂ ಇದಕ್ಕೆ ಕಾರಣ, ಮುಂದಿನ ದಿನಗಳಲ್ಲಿ ಎಲ್ಲವನ್ನೂ ಸರಿಪಡಿಸಿಕೊಂಡು ಕೆಲಸ ಮಾಡ್ತೇವೆ

• **ಉದಯವಾಹಿನಿ ರಾಮನಗರ**

ಚನ್ನಪಟ್ಟಣ ಉಪಚುನಾವಣೆಯ ಸೋಲಿನ ಹೊಣೆ ಕಾರ್ಯಕರ್ತರದು, ಮುಖಂಡರದ್ದಲ್ಲ, ಈ ಬೈ ಎಲೆಕ್ಷನ್ ಸೋಲಿನ ಜವಾಬ್ದಾರಿಯನ್ನ ನಾನು ವೈಯಕ್ತಿಕವಾಗಿ ತೆಗೆದುಕೊಳ್ತೇನೆ. ನಾವು ಮಾಡಿದ ಕೆಲ ವಿಳಂಬದ ನಿರ್ಧಾರವೂ ಇದಕ್ಕೆ ಕಾರಣ ಆಗಿರಬಹುದು. ಮುಂದಿನ ದಿನಗಳಲ್ಲಿ ಎಲ್ಲವನ್ನೂ ಸರಿಪಡಿಸಿಕೊಂಡು ಕೆಲಸ ಮಾಡ್ತೇವೆ ಎಂದು ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಹೇಳಿದರು.

ಮಂಡ್ಯ ಲೋಕಸಭೆಗೆ ನಿಖಿಲ್ ನಿಲ್ಲಬೇಕು ಅಂತಾ ಸಾರಾ ಮಹೇಶ್ ಒತ್ತಡ ಹಾಕಿದ್ರು. ಆಗ ನಿಖಿಲ್ ನಾನು ಸ್ಪರ್ಧೆ ಮಾಡಲ್ಲ ಅಂದ್ರು. ರಾಮನಗರ ಜಿಲ್ಲೆಯಲ್ಲೇ ಮುಂದಿನ ಹೋರಾಟ ಮಾಡ್ತೀನಿ ಅಂದಿದ್ರು. ಆ ಒತ್ತಡದಲ್ಲಿ ನಾನು ಮಂಡ್ಯದಲ್ಲಿ ಸ್ಪರ್ಧೆ ಮಾಡಿದೆ. ನಿಖಿಲ್ ಅಧಿಕಾರಕ್ಕಾಗಿ ನಿಂತಿದ್ರೆ ಮಂಡ್ಯದಲ್ಲಿ ನಿಂತು ಗೆಲ್ತಿದ್ರು. ಆದರೆ ದೇವರ ಇಚ್ಛೆ ಎಂದು ಬೇಸರ ವ್ಯಕ್ತಪಡಿಸಿದರು.

ನಮ್ಮನ್ನ ಟೂರಿಂಗ್ ಟಾಕೀಸ್ ಅಂತಾರೆ. ರಾಜ್ಯದಲ್ಲಿ ಯಾವುದೇ ಕಡೆ ನಿಂತು ಗೆದ್ದು ಬರೋ ಶಕ್ತಿ ಇದೆ, ಅದು ದೇವೇಗೌಡರ ಕುಟುಂಬಕ್ಕೆ ಮಾತ್ರ. ಈ ಚುನಾವಣೆಯಲ್ಲಿ ನಿಖಿಲ್ ಸ್ಪರ್ಧೆ ಅನಿರೀಕ್ಷಿತ. ಅವರನ್ನೇ ನಿಲ್ಲಿಸಬೇಕು ಅನ್ನೋದಿದ್ದಿದ್ರೆ ನಾನು ಕ್ಷೇತ್ರದಿಂದ ಹೋದಾಗಲೇ ನಿಖಿಲ್‌ಗೆ ವೇದಿಕೆ ಸಿದ್ಧ ಮಾಡ್ತಿದ್ದೆ. ಕಾಂಗ್ರೆಸ್ ಅಧಿಕಾರ ದುರುಪಯೋಗ ಮಾಡಿಕೊಂಡು ಅಧಿಕಾರಕ್ಕೆ ಬಂದಿದೆ. ಈಗ ಗೆದ್ದಿರೋ ಅಭ್ಯರ್ಥಿ ಯಾವ ರೀತಿ ನಾಟಕ ಆಡಿದ್ರೂ ಗೊತ್ತಿದೆ.

> **ನಿಮ್ಮ ಪ್ರಿಯಾಂಕಾ ಗಾಂಧಿ ಸಂವಿಧಾನದ ಪ್ರತಿ ಹಿಡಿದು ಪ್ರಮಾಣ ವಚನ ಸ್ವೀಕರಿಸಿದ್ದಾರೆ. ಇಲ್ಲಿ ಸ್ಥಳೀಯ ಸಂಸ್ಥೆಗಳ ಚುನಾವಣೆ ಮಾಡ್ತಿಲ್ಲ. ನೀವು ಸಂವಿಧಾನದ ಆಶಯ ಉಳಿಸ್ತೀರಾ? ನಿಮ್ಮ ಸಚಿವರಿಗೆ ಮಾನ ಮರ್ಯಾದೆ ಇದ್ಯಾ? ಯಾವುದೊ ಮೆಡಿಷನ್ ಕೊಟ್ಟು ಬಳ್ಳಾರಿಯಲ್ಲಿ ಬಾಣಂತಿಯರು ಸಾವನ್ನಪ್ಪಿದ್ದಾರೆ. ಸರ್ಕಾರದ ಯಾರಾದ್ರೂ ಪ್ರತಿನಿಧಿ ಹೋಗಿದ್ದೀರಾ? ನಿಮಗೆ ನಾಚಿಕೆ ಆಗಲ್ವಾ ಎಂದು ವಾಗ್ದಾಳಿ ನಡೆಸಿದರು** -ಹೆಚ್.ಡಿ.ಕುಮಾರಸ್ವಾಮಿ


ಉದಯವಾಹಿನಿ ಚಿತ್ರ

### ಜಾತಿ ರಾಜಕೀಯ ಮಾಡಿಲ್ಲ

**ದೇವೇಗೌಡರ ಕುಟುಂಬದ ಮೇಲಿನ ಒಕ್ಕಲಿಗರ ಪ್ರೀತಿ ಕಿತ್ತು ಹಾಕಲು ಇನ್ನೂ 10 ಜನ್ಮ ಎತ್ತಿ ಬಂದ್ರೂ ಸಾಧ್ಯವಿಲ್ಲ. ದೇವೇಗೌಡರು ಪ್ರಧಾನಿ, ಸಿಎಂ ಆಗಲು ಈ ಸಮುದಾಯ ಕಾರಣ. ಆದರೆ ನಾವು ಯಾವತ್ತೂ ಜಾತಿ ರಾಜಕೀಯ ಮಾಡಿಲ್ಲ. ನಮ್ಮ ಬಗ್ಗೆ ಮಾತನಾಡುವ ಈ ಮಹಾನುಭಾವರು ನಿಮ್ಮ ಆತ್ಮಕ್ಕೆ ಪ್ರಶ್ನೆ ಮಾಡಿಕೊಳ್ಳಿ ಎಂದು ತಿರುಗೇಟು ನೀಡಿದರು.**

ಎಲ್ಲದಕ್ಕೂ ಮುಂದಿನ ಚುನಾವಣೆಯಲ್ಲಿ ಉತ್ತರ ಕೊಡ್ತೇವೆ. ಸಿಪಿವೈ, ದೇವೇಗೌಡರು ರಾಜಕೀಯ ಬಿಡಲಿ ಅಂತಾರೆ. ಸಿದ್ದರಾಮಯ್ಯ ಪ್ರಧಾನಿ ಮೋದಿ ಭೇಟಿ ಬಳಿಕ ಮಣ್ಣಿನ ಮಕ್ಕಳು ಅಂತಾ ನಮ್ಮ ಬಗ್ಗೆ ಮಾತನಾಡಿದ್ದಾರೆ.

ಅವರಿಗೆ ನನ್ನ ಮೇಲೆ ಎಷ್ಟು ಭಯ ಇದೆ ನೋಡಿ. ಇಲ್ಲಿನ ಮಹಾನುಭಾವ ದೇವೇಗೌಡರ ರಾಜಕೀಯ ನಿವೃತ್ತಿ ಪಡೆಯಲಿ ಅಂತಾರೆ. ದೇವೇಗೌಡರ ಧ್ವನಿ ಇಲ್ಲದಿದ್ರೆ ರಾಜ್ಯ ಎಲ್ಲಿ ಇರ್ತಿತ್ತು ಗೊತ್ತಾ ಎಂದು ಕಿಡಿಕಾರಿದರು.

**ದೇವೇಗೌಡರು ಪ್ರಧಾನಿ, ಸಿಎಂ ಆಗಲು ಒಕ್ಕಲಿಗ ಸಮುದಾಯ ಕಾರಣ**

ಈಗ ಯಾವುದೋ ಸಿದ್ದರಾಮೋತ್ಸವ ಮಾಡ್ತಾರಂತೆ. ಯಾವ ಉದ್ದೇಶಕ್ಕೆ ಮಾಡ್ತೀರಿ. ಏನು ಸಾಧನೆ ಮಾಡಿದ್ದೀರಿ ಅಂತಾ ಉತ್ಸವ ಮಾಡ್ತೀರಿ. ಒಂದೂವರೆ ವರ್ಷದ ಸರ್ಕಾರದಲ್ಲಿ ಆ ಸಮುದಾಯಕ್ಕೆ ಏನು ಮಾಡಿದ್ದೀರಿ? ಸಿದ್ದರಾಮಯ್ಯ ದಲಿತರಿಗೆ ಏನು ಯೋಜನೆ ಕೊಟ್ಟಿದ್ದೀರಿ. ವಾಲ್ಮೀಕಿ ಸಮುದಾಯದ ಹಣ ನುಂಗಿದ್ದೀರಿ. ಈಗ ಭೋವಿ ಸಮುದಾಯದ ಹಣ ತಿಂತಿದ್ದೀರಿ. ಈ ಸರ್ಕಾರಕ್ಕೆ ನಾಚಿಕೆ ಆಗಲ್ವಾ? ಜೆಡಿಎಸ್ ಮುಗಿಸೋದಕ್ಕೆ ಹಾಸನದಲ್ಲಿ ಸಮಾವೇಶ ಮಾಡ್ತಿದ್ದೀರಾ? ದಲಿತರಿಗೆ ಏನು ಕೊಡುಗೆ ನೀಡಿದ್ದೀರಿ ಹೇಳಿ. ಆ ಸಮುದಾಯಕ್ಕೆ ಯಾವಾಗ ಬುದ್ಧಿ ಬರುತ್ತೋ ಗೊತ್ತಿಲ್ಲ.

ಈ ಮೂರು ಬೈ ಎಲೆಕ್ಷನ್ ಮೇಲೆ ಫಲಿತಾಂಶದಿಂದ ಎಲ್ಲಾ ನಿರ್ಧಾರ ಆಗಲ್ಲ. ಈಗ 138 ಸ್ಥಾನದಲ್ಲಿದ್ದೀರಿ. ಮುಂದಿನ ಚುನಾವಣೆಯಲ್ಲಿ ಕೇವಲ 38 ಸ್ಥಾನ ಗೆದ್ದು ತೋರಿಸಿ.

ಈಗ ಗೆದ್ದಿರೋ ಆಸಾಮಿ ನಮಗೂ, ಬಿಜೆಪಿಗೂ ಟೋಪಿ ಹಾಕಿ ಹೋದ್ರು. ನಮ್ಮನ್ನ ರಣಹೇಡಿ ಅಂದವ್ರೆ. ದೇವೇಗೌಡರ ಕುಟುಂಬ ರಣಧೀರರ ರೀತಿ ಹೋರಾಟ ಮಾಡ್ತಾರೆ. ನಿಮಗೋಸ್ಕರ ನಿಖಿಲ್ ಕುಮಾರಸ್ವಾಮಿ ಇಲ್ಲಿ ಬಂದು ತಲೆ ಕೊಟ್ಟ. ಕಾರ್ಯಕರ್ತರ ಉಳಿಸಲು ಸ್ಪರ್ಧೆ ಮಾಡಿದ. ನಿಖಿಲ್ ಕುಮಾರಸ್ವಾಮಿ ರಣ ಧೀರನಾಗಿ ಹೋರಾಟ ಮಾಡಲು ಸ್ಪರ್ಧೆ ಮಾಡಿದ. ಏನೋ ಜೆಡಿಎಸ್ ಮುಗಿಸ್ತೀನಿ ಅಂತಾರೆ. ಈ ಪಕ್ಷ ಉಳಿದಿರೋದೆ ಒಕ್ಕಲಿಗ ಸಮಾಜದಿಂದ. ಮಂಡ್ಯದಲ್ಲಿ ಗೆಲ್ಲಲು ಈ ಸಮುದಾಯ ಕಾರಣ.

---

# ಮೋಟಾರ್ ವಾಹನ ಕಾಯ್ದೆಗಳ ಬಗ್ಗೆ ಅರಿವು

• **ಉದಯವಾಹಿನಿ ಮುಳಬಾಗಿಲು**

ಆಟೋ ಟ್ಯಾಕ್ಸಿ ಟೆಂಪೋ ಲಾರಿ ಬಸ್ಸು ಮತ್ತಿತರೆ ವಾಹನಗಳ ಚಾಲಕರು ಮತ್ತು ಕಾರ್ಮಿಕರು ರಾಜ್ಯ ಮತ್ತು ಕೇಂದ್ರ ಸರ್ಕಾರದ ಸೌಲಭ್ಯಗಳನ್ನು ಪಡೆದುಕೊಂಡು ಆರ್ಥಿಕವಾಗಿ ಮುಂದುವರೆಯಬೇಕೆಂದು ಕರ್ನಾಟಕ ಪ್ರದೇಶ ಅಸಂಘಟಿತ ಕಾರ್ಮಿಕ ಪರಿಷತ್ ರಾಜ್ಯಾಧ್ಯಕ್ಷ ಕೆ.ವಿ.ಸುರೇಶ್ ಕುಮಾರ್ ಕರೆ ನೀಡಿದರು.

ನಗರದ ಸರ್ಕಾರಿ ನೌಕರರ ಭವನದಲ್ಲಿ ಕಾರ್ಮಿಕ ಇಲಾಖೆ ಸಾರಿಗೆ ಇಲಾಖೆ ಆಟೋ ಮತ್ತಿತರೆ ಚಾಲಕರ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ಮೋಟಾರ್ ವಾಹನ ಕಾಯ್ದೆಗಳ ಬಗ್ಗೆ ಅರಿವು ಕಾರ್ಯಕ್ರಮದಲ್ಲಿ ಮಾತನಾಡಿದರು. ವಾಹನಗಳನ್ನು ಖರೀದಿಸಲು ಖಾಸಗಿ ಹಣಕಾಸು ಸಂಸ್ಥೆಗಳಿಗೆ ಮೊರೆ ಹೋಗದೆ ರಾಷ್ಟ್ರೀಕೃತ ಬ್ಯಾಂಕುಗಳಲ್ಲಿ ಸಾಲ ಮಾಡಿ ವಾಹನಗಳನ್ನು ಖರೀದಿ ಮಾಡಬೇಕೆಂದು ತಿಳಿಸಿದರಲ್ಲದೆ ಮೋಟಾರ್ ವಾಹನ ಕಾಯ್ದೆ ಬಗ್ಗೆ ಪ್ರತಿಯೊಬ್ಬರು ಕಾನೂನಿನ ಅರಿವು


ಉದಯವಾಹಿನಿ ಚಿತ್ರ

**ವಾಹನ ಪರವಾನಿಗೆ ಮತ್ತು ಬ್ಯಾಡ್ಜನ್ನು ಹೊಂದಿರಬೇಕು**

ಪಡೆಯಬೇಕೆಂದು ಹೇಳಿದರು.

ಕಾರ್ಮಿಕ ಇಲಾಖೆ ನಿರೀಕ್ಷಕಿ ಆಶಾರಾಣಿ ಮಾತನಾಡಿ, ಪ್ರತಿಯೊಬ್ಬ ವಾಹನ ಚಾಲಕರು ವಾಹನ ಪರವಾನಿಗೆ ಮತ್ತು ಬ್ಯಾಡ್ಜನ್ನು ಹೊಂದಿರಬೇಕು ಆರ್ ಟಿ ಓ ಕಚೇರಿಯಲ್ಲಿ ಬ್ಯಾಡ್ಜ್ ಪಡೆದುಕೊಂಡು ಜಾಗರೂಕತೆಯಿಂದ ವಾಹನ ಚಾಲನೆಯನ್ನು ಮಾಡಬೇಕು ಯಾವುದೇ ಅಪಘಾತಗಳು ನಡೆದಂತೆ ಎಚ್ಚರಿಕೆಯಿಂದ ಕರ್ತವ್ಯವನ್ನು ನಿರ್ವಹಿಸಿ ಪ್ರಯಾಣಿಕರ ರಕ್ಷಣೆಗೆ ಮುಂದಾಗಬೇಕೆಂದು ಕಿವಿಮಾತು ಹೇಳಿದರು. ಸಾರಿಗೆ ಇಲಾಖೆ ಅಧೀಕ್ಷಕ ದೇವರಾಜ್ ಮಾತನಾಡಿ ಇಲಾಖೆಯಿಂದ ಸಿಗುವ ಸೌಲಭ್ಯಗಳ ಬಗ್ಗೆ ಮಾಹಿತಿ ನೀಡಿದರು ಇದೇ ವೇಳೆ

> **ಕೋಲಾರ ಜಿಲ್ಲೆ ಸೇರಿದಂತೆ ರಾಜ್ಯಾದ್ಯಂತ ಸಂಘಟನೆಯಿಂದ ಚಾಲಕರು ಮತ್ತು ಕಾರ್ಮಿಕರ ಸಂಘಟನೆ ಮಾಡಲಾಗುತ್ತಿದ್ದು ಪ್ರತಿಯೊಬ್ಬರು ಈ ಶ್ರಮ ಕಾರ್ಡನ್ನು ಪಡೆದುಕೊಂಡು ಸರ್ಕಾರದ ಸೌಲಭ್ಯಗಳನ್ನು ಬಳಸಿಕೊಳ್ಳಬೇಕೆಂದು ಕಿವಿಮಾತು ಹೇಳಿದರು** -ಕೆ.ವಿ.ಸುರೇಶ್

ಆಟೋ ಮತ್ತಿತರೆ ಚಾಲಕರಿಗೆ ಮತ್ತು ಕಾರ್ಮಿಕರಿಗೆ ಈ ಶ್ರಮ ಕಾಡುಗಳನ್ನು ವಿತರಿಸಲಾಯಿತು.

ಕರ್ನಾಟಕ ರಾಜ್ಯ ಖಾಸಗಿ ಬಸ್ ಚಾಲಕರ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಮಂಜುನಾಥ್, ಕರ್ನಾಟಕ ಪ್ರದೇಶ ಅಸಂಘಟಿತ ಕಾರ್ಮಿಕ ಪರಿಷತ್ ಕಚೇರಿಯ ಕಾರ್ಯದರ್ಶಿ ಕೆ.ಎಸ್. ವಿಜಯಕುಮಾರ್, ಪತ್ರಕರ್ತ ಬಿ.ದೇವಾನಂದ್, ಆಟೋ ಇನಿಯನ್ ಮುಖಂಡ ತಬ್ರಾಜ್ ಪಾಷ ಇದ್ದರು.

---

# ಸರ್ಕಾರಿ ಶಾಲಾ ಮಕ್ಕಳಿಗೆ ಉಚಿತ ಸೈಕಲ್ ವಿತರಣೆ

• **ಉದಯವಾಹಿನಿ ಮಾಲೂರು**

ಸರ್ಕಾರದ ಅನುದಾನಗಳ ಜೊತೆಗೆ ಸಿಎಸ್ಆರ್ ಅನುದಾನಗಳನ್ನು ತಂದು ತಾಲ್ಲೂಕಿನ ಸರ್ಕಾರಿ ಶಾಲೆಗಳ ಅಭಿವೃದ್ಧಿಗೆ ಶ್ರಮಿಸುತ್ತಿರುವ ಬಿಇಒ ಚಂದ್ರಕಲಾ ಅವರ ಕಾರ್ಯ ಶ್ಲಾಘನೀಯ ಎಂದು ಶಾಸಕ ಕೆ.ವೈ.ನಂಜೇಗೌಡ ಅಭಿಪ್ರಾಯಪಟ್ಟರು. ಪಟ್ಟಣದ ಶಿಕ್ಷಣ ಇಲಾಖೆಯ ಬಿಇಒ ಕಚೇರಿಯಲ್ಲಿ ಹಮ್ಮಿಕೊಂಡಿದ್ದ ಜನಪಥ್ ಸಂಸ್ಥೆಯಿಂದ ಅರ್ಹ ಮಕ್ಕಳಿಗೆ ಸೈಕಲ್ ವಿತರಣೆ ಕಾರ್ಯಕ್ರಮದಲ್ಲಿ ಮಾತನಾಡಿದರು.

ಎಲ್ಲಾ ಕೆಲಸಗಳನ್ನು ಸರ್ಕಾರವೇ ಮಾಡಲು ಸಾಧ್ಯವಿಲ್ಲ. ಇಲ್ಲಿನ ಶಿಕ್ಷಣ ಇಲಾಖೆಯ ಬಿಇಒ ಚಂದ್ರಕಲಾ ಅವರು ದಾನಿಗಳ ಹಾಗು ಸಿಎಸ್ಆರ್ ಅನುದಾವನ್ನು ಹೆಚ್ಚಿನ ಪ್ರಮಾಣದಲ್ಲಿ ತಂದು ಮಕ್ಕಳ ಶೈಕ್ಷಣಿ ಅಭಿವೃದ್ಧಿಗೆ ಒತ್ತು ನೀಡುತ್ತಿದ್ದಾರೆ ಎಂದರು.

ಶಾಲೆಯಿಂದ ದೂರ ಉಳಿದ ಮಕ್ಕಳನ್ನ ಶಾಲೆಯತ್ತ ಸೆಳೆಯಲು ಸರ್ಕಾರದಿಂದ ಜಾರಿಗೆ ತಂದಿರುವ ಉಚಿತ ಸೈಕಲ್ ಯೋಜನ ಸ್ಥಗಿತಗೊಂಡಿದೆ. ಸರ್ಕಾರಿ ಶಾಲೆಗಳು ಮುಚ್ಚದಂತೆ ಶಿಕ್ಷಣ ಇಲಾಖೆ ಅಧಿಕಾರಿಗಳು ಹಾಗೂ ಶಿಕ್ಷಕರು ಎಚ್ಚರ ವಹಿಸಬೇಕು. ಸರ್ಕಾರಿ ಶಾಲೆಗಳು ಮುಚ್ಚಿದರೆ ಬಡ ಮಕ್ಕಳ ಶಿಕ್ಷಣ ನಿಂತು ಹೋಗುತ್ತದೆ. ಈ ನಿಟ್ಟಿನಲ್ಲಿ ಶಿಕ್ಷಕರು ಪೋಷಕರನ್ನು ಮನವೊಲಿಸಿ ಮಕ್ಕಳು ಸರ್ಕಾರಿ ಶಾಲೆಗೆ ಬರುವವಂತೆ ಮಾಡಬೇಕು. ಸರ್ಕಾರಿ ಶಾಲೆಗಳಲ್ಲಿ ಓದುತ್ತಿರುವ ಮಕ್ಕಳ ಶೈಕ್ಷಣಿಕ ಅಭಿವೃದ್ಧಿಗೆ ಶಿಕ್ಷಕರು ಹಾಗೂ ಜನ ಪತ್ರಿನಿಧಿಗಳು ಕೈಜೊಡಿಸಬೇಕು ಎಂದರು.


ಉದಯವಾಹಿನಿ ಚಿತ್ರ

ಬಿಇಒ ಚಂದ್ರಕಲಾ ಮಾತನಾಡಿ, ತಾಲ್ಲೂಕಿನ ಗ್ರಾಮೀಣ ಭಾಗದ ಸರ್ಕಾರಿ ಶಾಲೆಗಳಲ್ಲಿ ಒದುತ್ತಿರುವ ಸಿಂಗಲ್ ಪೇರೆಂಟ್ ಇರುವ ಸುಮಾರು 35 ಹೆಣ್ಣುಮಕ್ಕಳನ್ನು ಗುರ್ತಿಸಿ ಜನಪಥ್ ಸಂಸ್ಥೆಯಿಂದ ಉಚಿತ ಸೈಕಲ್ ವಿತರಣೆ ಮಾಡಲಾಗುತ್ತಿದೆ ಎಂದರು.

---

# ರೇಷ್ಮೆ ಕೃಷಿಕರಿಗೆ ವಿಮೆ ವಿಸ್ತರಿಸಲು ಮನವಿ

• **ಉದಯವಾಹಿನಿ, ಚಿಕ್ಕಬಳ್ಳಾಪುರ**

ರಾಜ್ಯದ ರೇಷ್ಮೆ ಬೆಳೆಗಾರರನ್ನು ವಿಮೆ ಹಾಗೂ ಕಿಸಾನ್ ಸಮ್ಮಾನ್ ಯೋಜನೆಗೆ ಪರಿಗಣಿಸಬೇಕು ಎಂದು ಸಂಸದ ಡಾ.ಕೆ.ಸುಧಾಕರ್ ಕೇಂದ್ರ ಸರ್ಕಾರಕ್ಕೆ ಮನವಿ ಮಾಡಿದ್ದಾರೆ. ಲೋಕಸಭೆ ಅಧಿವೇಶನದಲ್ಲಿ ನಿಯಮ 377ರಡಿ ಸಾರ್ವಜನಿಕ ಹಿತಾಸಕ್ತಿಯ ವಿಷಯವಾಗಿ ಮಾತನಾಡಿದ ಅವರು ರೇಷ್ಮೆ ಕೃಷಿಕರ ಸಂಕಷ್ಟಗಳ ಬಗ್ಗೆ ಗಮನ ಸೆಳೆದರು.

2016–17ರಲ್ಲಿ ಜಾರಿಯಾದ ಪ್ರಧಾನಮಂತ್ರಿ ಫಸಲ್ ಬಿಮಾ ಯೋಜನೆಯಡಿ 15,05,89.10 ಕೋಟಿ ಮೊತ್ತದ ವಿಮೆಯನ್ನು ರೈತರಿಗೆ ನೀಡಲಾಗಿದೆ. ಪಿ.ಎಂ ಕಿಸಾನ್ ಸಮ್ಮಾನ್ ನಿಧಿಯಡಿ 11 ಕೋಟಿ ರೈತರಿಗೆ 2.81 ಲಕ್ಷ ಕೋಟಿ ನೀಡಲಾಗಿದೆ. ಆದರೆ ಈ ಎರಡೂ ಯೋಜನೆಗಳ ಲಾಭ ರೇಷ್ಮೆ ಕೃಷಿಕರಿಗೆ ಹಾಗೂ ಮೀನುಗಾರಿಕೆಯಲ್ಲಿ ತೊಡಗಿರುವವರಿಗೆ ದೊರೆಯುತ್ತಿಲ್ಲ.

ಸಾಮಾನ್ಯ ರೈತರಂತೆಯೇ ಈ ಕೃಷಿಕರು ಕೂಡ ಆರ್ಥಿಕ ನಮ್ಮ ಸೇರಿದಂತೆ ಹಲವು ಸಮಸ್ಯೆ ಎದುರಿಸುತ್ತಿದ್ದಾರೆ ಎಂದರು. ಚಿಕ್ಕಬಳ್ಳಾಪುರ, ಬೆಂಗಳೂರು ಗ್ರಾಮಾಂತರ, ಕೋಲಾರ, ರಾಮನಗರ ಸೇರಿದಂತೆ

> **ನುಸಿ ಮತ್ತು ಕೀಟಗಳ ಹಾವಳಿಯಿಂದ ಹಿಪ್ಪುನೇರಳೆ ಸೊಪ್ಪಿನ ಗುಣಮಟ್ಟ ಮತ್ತು ಇಳುವರಿ ಕುಸಿತವಾಗುತ್ತಿದೆ. ಕಳಪೆ, ರೋಗಪೀಡಿತ ಮೊಟ್ಟೆಗಳ ಚಾಕಿಯಿಂದ ರೇಷ್ಮೆ ಹುಳು ಸಾಕಾಣಿಕೆಗೆ ಸಂಕಷ್ಟ ಎದುರಾಗಿದೆ ಎಂದು ತಿಳಿಸಿದರು. ಕೇಂದ್ರ ಸರ್ಕಾರ ಈ ಕುರಿತು ಗಮನಹರಿಸಿ ಈ ಎರಡೂ ಯೋಜನೆಗಳನ್ನು ರೇಷ್ಮೆ ಕೃಷಿಕರಿಗೆ ನೀಡಬೇಕು ಎಂದು ಕೋರಿದರು** -ಡಾ.ಕೆ.ಸುಧಾಕರ್, ಸಂಸದ

**ಡಾ.ಕೆ. ಸುಧಾಕರ್ ಕೇಂದ್ರ ಸರ್ಕಾರಕ್ಕೆ ಮನವಿ**



ರಾಜ್ಯದಲ್ಲಿ ಸುಮಾರು 1.1 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ರೇಷ್ಮೆ ಬೆಳೆಯಲಾಗುತ್ತಿದೆ. 1.5 ಲಕ್ಷ ಕುಟುಂಬಗಳು ರೇಷ್ಮೆ ಬೆಳೆ ನೆಚ್ಚಿಕೊಂಡಿವೆ. ವರ್ಷದಿಂದ ವರ್ಷಕ್ಕೆ ಬದಲಾಗುತ್ತಿರುವ ಹವಾ ಮಾನ, ಮಳೆ ವೈಪರೀತ್ಯದಿಂದ ಹಿಪ್ಪುನೇರಳೆ ಸೊಪ್ಪು ಹಾಗೂ ರೇಷ್ಮೆ ಹುಳುಗಳಲ್ಲಿ ಅನೇಕ ಸಮಸ್ಯೆಗಳು ಕಂಡು ಬರುತ್ತಿವೆ.

---

# ಖಾಸಗಿ ಶಾಲೆಗೆ ಸೆಡ್ಡು ಹೊಡೆವ ಕೋನಪ್ಪಲ್ಲಿ ಸರ್ಕಾರಿ ಶಾಲೆ

• **ಉದಯವಾಹಿನಿ, ಚಿಂತಾಮಣಿ**

ನಗರದ ಹೊರವಲಯದ ಶಿಡ್ಲಘಟ್ಟ ರಸ್ತೆಯಲ್ಲಿರುವ ಕೋನಪ್ಪಲ್ಲಿಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಎಲ್ಲಾ ಸೌಲಭ್ಯಗಳನ್ನು ಒಳಗೊಂಡ ಸುಸಜ್ಜಿತ ಶಾಲೆಯಾಗಿದೆ. ಮಕ್ಕಳಿಗೆ ಆಕರ್ಷಣೀಯವಾಗಿ ಖಾಸಗಿ ಶಾಲೆಗಳಿಗೆ ಸೆಡ್ಡು ಹೊಡೆಯುವಂತೆ ಮಾದರಿಯಾಗಿದೆ.

1 ರಿಂದ 7ನೇ ತಗತಿಯವರೆಗೆ 65 ಮಕ್ಕಳು ಕಲಿಯುತ್ತಿದ್ದಾರೆ. ನಾಲ್ವರು ಶಿಕ್ಷಕರು ಕಾರ್ಯ ನಿರ್ವಹಿಸುತ್ತಿದ್ದಾರೆ. ಸುಮಾರು 3.5 ಎಕರೆ ವಿಶಾಲವಾದ ಪ್ರದೇಶದಲ್ಲಿ ಶಾಲೆ ಇದ್ದು, ಸುತ್ತಲೂ ಆವರಣ ಗೋಡೆ ನಿರ್ಮಿಸಲಾಗಿದೆ.

ಶಾಲೆಯ ಆವರಣದಲ್ಲೇ ಗುಂಪು ಸಂಪನ್ಮೂಲ ಗುಚ್ಛಕೇಂದ್ರ, ಅಂಗನವಾಡಿ ಕೇಂದ್ರ ಕಾರ್ಯನಿರ್ವಹಿಸುತ್ತಿವೆ. ನೇರಳೆ, ಹೊಂಗೆ, ಹತ್ತಿ, ಬಾಳೆ ಮತ್ತಿತರ ಮರಗಿಡಗಳು ಹಾಗೂ ವಿವಿಧ ಹೂ ಗಿಡಗಳನ್ನು ಬೆಳೆಸಲಾಗಿದೆ. ಉತ್ತಮ ತರಗತಿ ಕೊಠಡಿ, ಶೌಚಾಲಯ, ಅಕ್ಷರ ದಾಸೋಹದ ಅಡುಗೆ ಕೋಣೆ, ಕುಡಿಯುವ ನೀರು ಮತ್ತಿತರ ಎಲ್ಲಾ ಸೌಲಭ್ಯಗಳಿವೆ. ಶಾಲೆಯು ನಗರದ ಹೊರವಲಯದಲ್ಲಿ ಇರುವುದರಿಂದ ಖಾಸಗಿ ಶಾಲೆಗಳ ಪೈಪೋಟಿ ಅಧಿಕವಾಗಿದೆ.

ನಗರದ ಆಕರ್ಷಣೆ ಮತ್ತು ಖಾಸಗಿ ಶಾಲೆಗಳ ನಡುವೆ ಸರ್ಕಾರಿ ಶಾಲೆಯನ್ನು ಉಳಿಸಿಕೊಂಡಿರುವುದೇ ಹೆಗ್ಗಳಿಕೆಯಾಗಿದೆ. ಮಕ್ಕಳಿಗೆ ದಾನಿಗಳ ನೆರವಿನಿಂದ ಐ.ಡಿ ಕಾರ್ಡ್. ಟೈ-ಬೆಲ್ಟ್, ಸಮವಸ್ತ್ರ ವಿತರಿಸಲಾಗಿದೆ.


ಉದಯವಾಹಿನಿ ಚಿತ್ರ

> **ಶಾಲೆಯ ಆವರಣದಲ್ಲಿ ಹಾಗೂ ಸುತ್ತಮುತ್ತಲು ಸ್ವಚ್ಛತೆಗೆ ಆದ್ಯತೆ ನೀಡಲಾಗಿದೆ. ಮಕ್ಕಳಿಗೆ ಪ್ರತಿನಿತ್ಯ ಪರಿಸರ ಮತ್ತು ನೀರಿನ ಮಹತ್ವದ ಕುರಿತು ಜಾಗೃತಿ ಮೂಡಿಸಲಾಗುತ್ತದೆ. ನಿತ್ಯವೂ ಪ್ರಾರ್ಥನಾ ಸಮಯದಲ್ಲಿ ಪರಿಸರ ಮತ್ತು ನೀರಿನ ಮಹತ್ವದ ಅರಿವು ಮೂಡಿಸಲಾಗುತ್ತದೆ** -ಮುನಿನಾರಾಯಣಸ್ವಾಮಿ, ಶಿಕ್ಷಕ

ಪಾಠೋಪಕರಣ, ಬಿಸಿ ಊಟಕ್ಕೆ ಅಗತ್ಯವಾದ ಅಡುಗೆ ಕೋಣೆ ಇದೆ. 5 ಶಾಲೆಗೆ ಬಣ್ಣ ಬಳಿದು ಮಕ್ಕಳಿಗೆ ಆಕರ್ಷಣೀಯವಾಗುವಂತೆ ಮಾಡಲಾಗಿದೆ. ದಾನಿಯೊಬ್ಬರು ತಮ್ಮ ಕೊಳವೆ ಬಾವಿಯಿಂದ ನೇರವಾಗಿ ಪೈಪ್‌ಲೈನ್ ಹಾಕಿಸಿ ನೀರಿನ ವ್ಯವಸ್ಥೆ ಮಾಡಿದ್ದಾರೆ. ಗ್ರಾಮ ಪಂಚಾಯಿತಿಯಿಂದಲೂ ನೀರು ಪೂರೈಕೆ ಮಾಡಲಾಗುತ್ತಿದೆ. ಶಾಲಾ ಮಕ್ಕಳಿಗೆ ಮತ್ತು ಗಿಡಗಳಿಗೆ ನೀರಿನ ಸಮಸ್ಯೆ ಇಲ್ಲ. ಇರುವ ಆಟದ ಮೈದಾನದಲ್ಲಿ ಮಕ್ಕಳು ಆಟಗಳಲ್ಲಿ ಉತ್ತಮ ಸಾಧನೆ ಮಾಡುತ್ತಿದ್ದಾರೆ. ಶಾಲೆಯಲ್ಲಿ ಸ್ಮಾರ್ಟ್ ಕ್ಲಾಸ್‌ಗಾಗಿ 60 ಇಂಚಿನ ಡಿಜಿಟಲ್ ಬೋರ್ಡ್, ಕಂಪ್ಯೂಟರ್, ಪ್ರಿಂಟರ್ ಇದೆ. ಉತ್ತಮ ಕಲಿಕೆಗೆ ಅನುಕೂಲವಾಗಿದ್ದು ಕಲಿಕಾ ವಾತಾವರಣವಿದೆ.

ಪ್ರತಿದಿನ ಪ್ರಾರ್ಥನಾ ಸಮಯದಲ್ಲಿ ಮಕ್ಕಳಿಂದ ಶುಭಾಷಿತ ವಿಶೇಷ ವಾರ್ತೆ ಓದಿಸುವುದು, ಜನ್ಮ ದಿನ ಇರುವ ವಿದ್ಯಾರ್ಥಿಗಳಿಗೆ ಹುಟ್ಟು ಹಬ್ಬದ ಶುಭಾಶಯ ಕೋರಲಾಗುತ್ತದೆ. ವರ್ಷದ ಎಲ್ಲಾ ರಾಷ್ಟ್ರೀಯ ಹಬ್ಬಗಳನ್ನು ಶಾಲೆಯಲ್ಲಿ ವಿಜೃಂಭಣೆಯಿಂದ ಆಚರಿಸಲಾಗುತ್ತದೆ.

ಗ್ರಾಮದ ಮುಖಂಡರು ಭಾಗವಹಿಸಿ ಸಹಕಾರ ನೀಡುತ್ತಾರೆ ಪ್ರತಿವರ್ಷ ಎಸ್‌ಡಿಎಂಸಿ ಮತ್ತು ಗ್ರಾಮಸ್ಥರ ಸಹಕಾರದಿಂದ ಫೆಬ್ರುವರಿ ಕೊನೆಯ ವಾರ ಅಥವಾ ಮಾರ್ಚ್ ಪ್ರಥಮ ವಾರದಲ್ಲಿ ಶಾಲಾ ವಾರ್ಷಿಕೋತ್ಸವ, ಶಾರದಾ ಪೂಜೆ ಮತ್ತು 7ನೇ ತರಗತಿಯ ವಿದ್ಯಾರ್ಥಿಗಳಿಗೆ ಬೀಳ್ಕೊಡುಗೆ ಕಾರ್ಯಕ್ರಮ ಆಚರಿಸಲಾಗುತ್ತದೆ.

---


# 108 ವಸಂತ ಕಂಡ ಸುಂಟಿಕೊಪ್ಪದ ಶಾಲೆ

• **ಉದಯವಾಹಿನಿ ಸುಂಟಿಕೊಪ್ಪ**

ಸುಂಟಿಕೊಪ್ಪದಲ್ಲಿ ಮೊಟ್ಟಮೊದಲ ಬಾರಿಗೆ ಪ್ರಾರಂಭಗೊಂಡ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಇದೀಗ 108 ವಸಂತಗಳನ್ನು ಪೂರೈಸಿದ್ದು, ಹಿರಿಯ ವಿದ್ಯಾರ್ಥಿಗಳ ತಂಡ ಶತಮಾನೋತ್ಸವದ ಆಚರಣೆಗೆ ಸಜ್ಜಾಗಿ ನಿಂತಿದೆ.

100 ವರ್ಷ ತುಂಬಿದರೂ ಶಿಕ್ಷಣ ಇಲಾಖೆಯು ಶತಮಾನೋತ್ಸವ ಆಚರಿಸದೆ ನಿರ್ಲಕ್ಷಿಸಿದ ಪರಿಣಾಮ, ಹಿರಿಯ ವಿದ್ಯಾರ್ಥಿಗಳು ಕಾರ್ಯಕ್ರಮ ಆಯೋಜನೆಗೆ ಮುಂದಾಗಿದ್ದಾರೆ. ಕೊಡಗಿನಲ್ಲಿ ಬ್ರಿಟಿಷರ ಆಳ್ವಿಕೆಯು 1834ರಿಂದ ಪ್ರಾರಂಭವಾಗುವ ಮೊದಲು ವಿದ್ಯಾಭ್ಯಾಸದ ಕ್ರಮವು ಕೈಮಠಗಳ ಮೂಲಕ ನಡೆಯುತ್ತಿತ್ತು. 1916ಕ್ಕೆ ಮೊದಲು ಸುಂಟಿಕೊಪ್ಪ ಹೋಬಳಿಯ ಅಂದಗೋವೆ ಗ್ರಾಮದ ಬಸವೇಶ್ವರ ದೇವಾಲಯದಲ್ಲಿ ಉಲುಗುಲಿ ಹರದೂರಿನ ಪನ್ಯ ಸಣ್ಣಪ್ಪನವರು ಕಟ್ಟಿಸಿದ ದೇವಸ್ಥಾನದ ಪೌಳಿಯಲ್ಲಿಯೂ, ಕಾಂಡನಕೊಲ್ಲಿ ಹಾಲೇರಿಯಲ್ಲಿಯ ದೇವಸ್ಥಾನದಲ್ಲಿಯೂ ಕೈಮಠಗಳ ಶಾಲೆಗಳು ಖಾಸಗಿ ಶಿಕ್ಷಕರನ್ನು ನೇಮಿಸಿಕೊಂಡು ಶಿಕ್ಷಣ ನೀಡುತ್ತಿದ್ದವು. ಆದರೆ, ಸುಂಟಿಕೊಪ್ಪದ ಮಕ್ಕಳಿಗೆ ಈ ಮೇಲಿನ ಮಠಗಳಲ್ಲಿ ವಿದ್ಯಾಭ್ಯಾಸ ಮಾಡಲು ಅನನುಕೂಲವಾದಾಗ ಸ್ಥಳೀಯರು ಒಂದು ಸಮಿತಿ ರಚಿಸಿ ಆಗಿನ ಸರ್ಕಾರಕ್ಕೆ ಶಾಲೆಗಾಗಿ ಮನವಿ ಸಲ್ಲಿಸಿದ್ದರು. ಸ್ಥಳೀಯ ಆಸ್ಪತ್ರೆಯ ಮತ್ತು ಪೊಲೀಸ್ ಠಾಣೆಯ ಜಗಲಿಯಲ್ಲಿ ಶಾಲೆ ಪ್ರಾರಂಭವಾಯಿತು.

> **ಮುಂದಿನ ಜನವರಿಯಲ್ಲಿ ಅದ್ದೂರಿ ಕಾರ್ಯಕ್ರಮ ನಡೆಯಲಿದೆ. ಹಿರಿಯ ವಿದ್ಯಾರ್ಥಿಗಳ ಸಾಧನೆ ರಾಷ್ಟ್ರ ಮತ್ತು ಅಂತರರಾಷ್ಟ್ರೀಯ ಹಾಕಿ ಆಟಗಾರ ಮಾಳೆಯಂಡ ದೇವಯ್ಯ ಮುತ್ತಪ್ಪ ಭಾರತ ತಂಡದ ಒಲಿಂಪಿಕ್ಸ್ ಮಾಜಿ ನಾಯಕ ಬ್ಯಾಡ್ಮಿಂಟನ್ ಆಟಗಾರ ಮೊಳ್ಳರ ಪಿ.ಗಣೇಶ ಮತ್ತು ರಾಷ್ಟ್ರಮಟ್ಟದ ಬ್ಯಾಡ್ಮಿಂಟನ್ ಆಟಗಾರ ಪುಲ್ಲೇರ ಜಿ.ಚಂಗಪ್ಪ 5 ವರ್ಷ ವಿಶ್ವ ಸೈಕಲ್ ಪರ್ಯಾಟನೆ ಕೈಗೊಂಡಿರುವ ಪಿ.ಸಿ.ಮಾಚಯ್ಯ ಮತ್ತು ಅನೇಕ ಪ್ರತಿಭಾವಂತರು ಈ ಶಾಲೆಯ ಹಿರಿಯ ವಿದ್ಯಾರ್ಥಿಗಳು.**


ಉದಯವಾಹಿನಿ ಚಿತ್ರ

ಪಾಠವನ್ನು ಆಸ್ಪತ್ರೆಯ ಕಾಂಪೌಂಡರ್ ಕಲಿಸುತ್ತಿದ್ದರು. ಅವರು ರಜೆಯಲ್ಲಿದ್ದರೆ ಪೊಲೀಸ್ ರೈಟರ್ ಒಬ್ಬರು ಪಾಠ ಕಲಿಸುತ್ತಿದ್ದರು. ಆ ಸಂದರ್ಭದಲ್ಲಿ ಸ್ಥಳೀಯ ಸಮಿತಿಯ ಅಧ್ಯಕ್ಷ ಪಿ. ತಿಮ್ಮಪ್ಪಯ್ಯ ಅವರ ನೇತೃತ್ವದಲ್ಲಿ ಸರ್ಕಾರಕ್ಕೆ ಜಮಬಂದಿಯಲ್ಲಿ ಶಾಲೆಗಿರುವ ನಿವೇಶನವಮಂಜೂರು ಮಾಡಲು ಅರ್ಜಿ ಸಲ್ಲಿಸಿದ್ದರು. ವಾಲೆಕಂಡ ಅಪ್ಪಚ್ಚ ತಾರಪತ್ತೆಗಾರರ ಸಹಕಾರದಿಂದ ಶಾಲೆಗಿರುವ ಸ್ಥಳವು ಮಂಜೂರಾಗಿತ್ತು. ಪಾಂಡಂಡ ಅಪ್ಪಚ್ಚು ಮತ್ತು ಅವರ ಪುತ್ರರಾದ ಚಂಗಪ್ಪ ಮತ್ತು ನಂಜಪ್ಪ ಅವರು ಶಾಲೆಗೆ ಕಟ್ಟಡವನ್ನು 1916ರಲ್ಲಿ ಕಟ್ಟಿಸಿದ್ದರ ಫಲವಾಗಿ ಈಗ ಶಾಲೆಯು 108 ವರ್ಷ ಪೂರೈಸಿದೆ. 1945ರಲ್ಲಿ ಗುಂಡುಗುಟ್ಟಿ ಮಂಜನಾಥಯ್ಯ ಅವರು ತಮ್ಮ ತಂದೆ ಮಂಜಯ್ಯ ಸ್ಮರಣಾರ್ಥ ಕಟ್ಟಡ ಕಟ್ಟಿಸಿಕೊಟ್ಟರು.

ಆ ಕಟ್ಟಡವೇ ಶಾಲೆಯ ಸಭಾಂಗಣವಾಗಿ ಮಾರ್ಪಾಟ್ಟಾಗಿತ್ತು. ವೈ.ಡಿ.ಮಾದಯ್ಯ ಮತ್ತು ಇತರ ಸದಸ್ಯರ ಪ್ರಯತ್ನದಿಂದ ಸಾರ್ವಜನಿಕರಿಂದ ಹಣ ಸಂಗ್ರಹಿಸಿ 1949ರಲ್ಲಿ 3 ಕೊಠಡಿಯ ಕಟ್ಟಡ ಹಾಗೂ 1950ರಲ್ಲಿ ಸಭಾಂಗಣದ ರಂಗಮಂಟಪ ಕಟ್ಟಿಸಲಾಗಿತ್ತು.

---

# ಭಾಷಾ ಸಮಾನತೆ ಹೋರಾಟಕ್ಕೆ ಸಜ್ಜಾಗಲು ಕರೆ: ಅಗ್ರಹಾರ ಕೃಷ್ಣಮೂರ್ತಿ

## ಕೇಂದ್ರ ಸಾಹಿತ್ಯ ಅಕಾಡೆಮಿ ಕಾರ್ಯದರ್ಶಿಯಾದ ಸಮಯದಲ್ಲಿ ಕನ್ನಡಕ್ಕೆ ಶಾಸ್ತ್ರೀಯ ಭಾಷೆ ಸ್ಥಾನಮಾನ ಕೊಡಿಸಲು ಪ್ರಯತ್ನಿಸಿದೆ

• **ಉದಯವಾಹಿನಿ ತುಮಕೂರು**

ದೇಶದಲ್ಲಿರುವ 'ಭಾಷೆಗಳೆಲ್ಲ ಸಮಾನ' ಎಂಬ ರಾಷ್ಟ್ರೀಯ ನೀತಿ ರೂಪುಗೊಳ್ಳಬೇಕು. ಇಂತಹ 'ಭಾಷಾ ಸಮಾನತೆಯ ಹೋರಾಟ ಕನ್ನಡಿಗರಿಂದಲೇ ಆರಂಭವಾಗಬೇಕು ಎಂದು ಸಾಹಿತಿ ಅಗ್ರಹಾರ ಕೃಷ್ಣಮೂರ್ತಿ ಕರೆ ನೀಡಿದರು. ನಗರದಲ್ಲಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಹಮ್ಮಿಕೊಂಡಿದ್ದ ಜಿಲ್ಲಾ 16ನೇ ಕನ್ನಡ ಸಾಹಿತ್ಯ ಸಮ್ಮೇಳನದ ಅಧ್ಯಕ್ಷ ಸ್ಥಾನದಿಂದ ಮಾತನಾಡಿದರು.

ತಮಿಳುನಾಡಿನ ಒತ್ತಡಕ್ಕೆ ಮಣಿದು ಕೇಂದ್ರ ಸರ್ಕಾರ ತಮಿಳುಗೆ 'ಶಾಸ್ತ್ರೀಯ ಭಾಷೆ' ಸ್ಥಾನಮಾನ ನೀಡಿತು. ದ್ರಾವಿಡ ಸಂಸ್ಕೃತಿಯ ತಮಿಳುನಾಡಿನವರು ತಮ್ಮ ಒಂದೇ ಭಾಷೆಗೆ ಶಾಸ್ತ್ರೀಯ ಸ್ಥಾನ ಸಿಕ್ಕಿದ್ದರಿಂದ ಒಂದು ರೀತಿಯಲ್ಲಿ ಪೆಚ್ಚಾದರು. ಪಕ್ಕದ ಕನ್ನಡ ಭಾಷೆಗೆ ಈ ಸ್ಥಾನ ನೀಡುವಂತೆ ಒತ್ತಡ ತರುವ ಬದಲು ಆರ್ಯರ ಭಾಷೆಯಾದ ಸಂಸ್ಕೃತಕ್ಕೆ, ಶಾಸಿಯ ಭಾಷಾ ಸ್ಥಾನಮಾನ ನೀಡುವಂತೆ ಬೇಡಿಕೆ ಸಲ್ಲಿಸಿದರು. ನಂತರ ಸಂಸ್ಕೃತಕ್ಕೆ ಅಂತಹ ಅವಕಾಶ ಸಿಕ್ಕಿತು. ನಾನು ಕೇಂದ್ರ ಸಾಹಿತ್ಯ ಅಕಾಡೆಮಿ ಕಾರ್ಯದರ್ಶಿಯಾದ ಸಮಯದಲ್ಲಿ ಕನ್ನಡಕ್ಕೆ ಶಾಸ್ತ್ರೀಯ ಭಾಷೆ ಸ್ಥಾನಮಾನ ಕೊಡಿಸಲು ಸಾಕಷ್ಟು ಪ್ರಯತ್ನಿಸಿದೆ' ಎಂದು ತಮ್ಮ ಪ್ರಯತ್ನದ ಫಲವನ್ನು ಹಂಚಿಕೊಂಡರು. ಪ್ರಸ್ತುತ ದೇಶದ 11 ಭಾಷೆಗಳಿಗೆ ಶಾಸ್ತ್ರೀಯ ಭಾಷೆಯ ಸ್ಥಾನ ದೊರೆತಿದೆ. ಈ ಪಟ್ಟಕ್ಕೆ ಆರಂಭದಲ್ಲಿ ಇದ್ದ ನಿಯಮಗಳನ್ನು ಸಡಿಲಿಸಿ ಅವಕಾಶ ನೀಡಲಾಗುತ್ತಿದೆ. ಇನ್ನು ಕೆಲವೇ ದಿನಗಳಲ್ಲಿ ಸಂವಿಧಾನದ ಎಂಟನೇ ಪರಿಚ್ಛೇದದಲ್ಲಿ ಇರುವ ಎಲ್ಲ ಭಾಷೆಗಳಿಗೂ ಈ ಪಟ್ಟ ದೊರೆಯಲಿದೆ. ರಾಜಕೀಯ ಒತ್ತಡದಿಂದ ಒಪ್ಪಿಗೆ ನೀಡಲಾಗುತ್ತಿದೆ. ಅದರ ಬದಲು 'ಭಾಷಾ ಸಮಾನತೆ' ಮೂಡಿದರೆ ಎಲ್ಲಾ ಭಾಷೆಗಳಿಗೂ ಸಮಾನ ಅವಕಾಶಗಳು ಸಿಗಲಿವೆ ಎಂದರು.

> **ಭಾಷಾ ಸಮಾನತೆಯ ನೀತಿ ರೂಪುಗೊಂಡರೆ ರಾಜಕೀಯ ಒತ್ತಡಗಳಿಂದ ಭಾಷೆಯ ಸ್ಥಾನಮಾನ ನಿರ್ಧರಿಸುವ ಚದುರಂಗದಾಟಕ್ಕೆ ಅವಕಾಶ ಇರುವುದಿಲ್ಲ. ಎಲ್ಲಾ ಭಾಷೆಗಳನ್ನು ಸಮಾನವೆಂದು ಪರಿಗಣಿಸಿ, ಸಮಾನ ಸ್ಥಾನಮಾನ ನೀಡಿ, ಸಂಪನ್ಮೂಲ ಒದಗಿಸುವ ರಾಷ್ಟ್ರೀಯ ನೀತಿಗಾಗಿ ಒತ್ತಾಯಿಸಿ ಕನ್ನಡಿಗರು ಹೋರಾಟಕ್ಕೆ ನಾಂದಿ ಹಾಡಬೇಕು** -ಅಗ್ರಹಾರ ಕೃಷ್ಣಮೂರ್ತಿ


ಉದಯವಾಹಿನಿ ಚಿತ್ರ

**ಚದುರಂಗದಾಟಕ್ಕೆ ಅವಕಾಶ ಇರುವುದಿಲ್ಲ**

**ಹಿಂದಿ ಹೇರಿಕೆಗೆ ವಿರೋಧ:** ಕಾಲೇಜು ದಿನಗಳಲ್ಲಿ ಹಿಂದಿ ಭಾಷೆ ಹೇರಿಕೆಯನ್ನು ವಿರೋಧಿಸಿ ನಡೆದ ಪ್ರತಿಭಟನೆಯಲ್ಲಿ ಭಾಗವಹಿಸಿ, ಬಸ್‌ಗೆ ಕಲ್ಲು ತೂರಿದ್ದನ್ನು ನೆನಪು ಮಾಡಿಕೊಂಡರು. ಹಿಂದಿ ಎಂಬ ಘಟಸರ್ಪ ಕನ್ನಡ ನುಂಗಲು ಬಿಡಬಾರದು ಎಂದು ಎಚ್ಚರಿಸಿದರು. 'ದೇಶದಲ್ಲಿ ಹಿಂದಿ ಭಾಷೆಯನ್ನು ಹೆಚ್ಚು ಜನರು ಮಾತನಾಡುತ್ತಾರೆ. ಇದು ರಾಷ್ಟ್ರಭಾಷೆ' ಎಂಬ ತಪ್ಪು ಕಲ್ಪನೆಗಳಿವೆ. ವಾಸ್ತವವಾಗಿ 35ಕ್ಕೂ ಹೆಚ್ಚು ಉಪಭಾಷೆಗಳನ್ನಾಡುವ ಜನರ ಸಮೂಹ ಈ ಭಾಷೆ ಬಳಸುತ್ತಿದೆ. ಈ ಸತ್ಯವನ್ನು ರಾಜಕಾರಣ ದುರುಪಯೋಗ ಪಡಿಸಿಕೊಳ್ಳುತ್ತಿದೆ. ಹಾಗಾಗಿ ಹಿಂದಿ ಎಂಬ ಘಟಸರ್ಪ ಆಗಾಗ ತಲೆಯೆತ್ತುತ್ತಲೇ ಇರುತ್ತದೆ. ಅದರೆ ತಲೆ ಮೇಲೆ ಮೊಟುಕಿದಾಗ ತೆಪ್ಪಗಾಗುತ್ತದೆ. ನಾವು ಮೈಮರೆತಾಗ ಮತ್ತೆ ತಲೆಯೆತ್ತುತ್ತದೆ ಎಂದು ಹೇಳುವ ಮೂಲಕ ಹಿಂದಿ ಹೇರಿಕೆಯನ್ನು ವಿರೋಧಿಸಿದರು. ತುಮಕೂರು, ಜಟ್ಟಿ ಅಗ್ರಹಾರದಲ್ಲಿ ಕಳೆದ ಬಾಲ್ಯ, ಅಲ್ಲಿನ ಪರಿಸರ, ಓದು, ಊರೂರು ಸುತ್ತಾಟ, ಮೊದಲ ಪುಸ್ತಕದ ಓದು (ಕುವೆಂಪು ಅವರ ಕಾನೂರು ಸುಬ್ಬಮ್ಮ ಹೆಗ್ಗಡತಿ), ಜಿಲ್ಲೆಯ ಸಾಹಿತಿಗಳ ಒಡನಾಟ, ಮೊದಲ ಬರಹಕ್ಕೆ ಬಂದ ಬಹುಮಾನ, ಹೋರಾಟ– ಚಳವಳಿಯಲ್ಲಿ ತೊಡಗಿಸಿಕೊಂಡ ನೆನಪುಗಳನ್ನು ಮೆಲುಕು ಹಾಕಿದರು. ಎಲೆರಾಂಪುರ ಕುಂಚಿಟಿಗ ಮಹಾಸಂಸ್ಥಾನ ಮಠದ ಹನುಮಂತನಾಥ ಸ್ವಾಮೀಜಿ ಸಾನ್ನಿಧ್ಯ ವಹಿಸಿದ್ದರು.

### ಅಭಿವ್ಯಕ್ತಿಗೆ ಧಕ್ಕೆ

**ಲೇಖಕರು, ಕಲಾವಿದರು, ಪತ್ರಕರ್ತರು ಈಗ ಆತಂಕದ ಸ್ಥಿತಿಯಲ್ಲಿದ್ದು, ಅಭಿವ್ಯಕ್ತಿಗೆ ಧಕ್ಕೆ ಬಂದಿದೆ. ಯುದ್ಧ, ಭಯೋತ್ಪಾದನೆ, ಹಿಂಸೆ ತಲೆಯೆತ್ತುತ್ತಲೇ ಇದೆ. ಈಶಾನ್ಯ ಭಾಗದ ಆತಂಕಕಾರಿ ಬೆಳವಣಿಗೆ, ಹಿಂಸೆಯನ್ನೂ ರಾಜಕಾರಣ ತನ್ನ ಸ್ವಾರ್ಥಕ್ಕೆ ಬಳಸಿಕೊಳ್ಳುತ್ತಿದೆ. ಎನ್‌ಕೌಂಟರ್‌ಗಳು ನಮ್ಮ ಮನೆ ಬಾಗಿಲಿಗೆ ಕಾಲಿಟ್ಟಿರುವುದು ಆತಂಕ ತರಿಸಿದೆ. ಇಂದಿನ ಹಿಂಸೆಯ ದಿನಗಳಲ್ಲಿ ಬುದ್ಧ, ಬಸವ, ಗಾಂಧೀಜಿಯ ಅಹಿಂಸಾ ವಾದಕ್ಕೆ ಹೆಚ್ಚು ಮಹತ್ವ ನೀಡಬೇಕು ಎಂದು ಸಾಂತ್ವನದ ಮಾತುಗಳನ್ನಾಡಿದರು.**

---

# ಮಿನಿ ನ್ಯೂಸ್

## ನಾರಾಯಣಪ್ಪ ಬಿಜೆಪಿಗೆ ಸೇರ್ಪಡೆ

• **ಉದಯವಾಹಿನಿ ಚೇತಮಂಗಲ**

ತಾ.ಪಂ ಮಾಜಿ ಸದಸ್ಯ ನಾರಾಯಣಪ್ಪ ಕಾಂಗ್ರೆಸ್ ಪಕ್ಷ ತೊರೆದು ನಾಯಕರ ಸಮ್ಮುಖದಲ್ಲಿ ಬಿಜೆಪಿಗೆ ಸೇರ್ಪಡೆಯಾಗಿದ್ದಾರೆ. ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ಲಕ್ಷ್ಮಮ್ಮ ಅವರ ಪತಿ ನಾರಾಯಣಪ್ಪ ಹಾಗೂ ಪುತ್ರ ಮಂಜುನಾಥ್ ಬಿಜೆಪಿ ಪಕ್ಷಕ್ಕೆ ಸೇರ್ಪಡೆಯಾಗುವ ಮೂಲಕ ಹಲವು ವರ್ಷಗಳ ನಂತರ ಪುನಃ ಬಿಜೆಪಿ ಬಾವುಟ ಹಿಡಿದಿದ್ದು ಹಲವು ಚರ್ಚೆಗಳಿಗೆ ಗ್ರಾಸವಾಗಿದೆ. ಇತ್ತೀಚೆಗೆ ಎನ್.ಜಿ ಹುಲ್ಲೂರು ಗ್ರಾಮ ಪಂಚಾಯಿತಿಯಲ್ಲಿ ಉಪಾಧ್ಯಕ್ಷ ಸ್ಥಾನಕ್ಕೆ ಚುನಾವಣೆ ನಡೆಸಲಾಗಿತ್ತು. ಈ ಚುನಾವಣೆ ದಿನದಿಂದ ಕಾಂಗ್ರೆಸ್ ಮುಖಂಡರಿಂದ ದೂರ ಉಳಿದಿದ್ದ ನಾರಾಯಣಪ್ಪ ಎನ್.ಜಿ ಹುಲ್ಲೂರು ಗ್ರಾಮ ಪಂಚಾಯಿತಿ ಬಿಜೆಪಿ ಬೆಂಬಲಿತ ಸದಸ್ಯರ ಜೊತೆಗೆ ಮಾಜಿ ಶಾಸಕ ವೈ ಸಂಪಂಗಿ ಹಾಗೂ ಬಿಜೆಪಿ ನಾಯಕ ರೇಣುಕಾಚಾರ್ಯ ಅವರ ಸಮ್ಮುಖದಲ್ಲಿ ಬಿಜೆಪಿಗೆ ಸೇರಿದ್ದಾರೆ. ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಸುನೀಲ್ ಕುಮಾರ್, ಸದಸ್ಯರಾದ ನಾರಾಯಣ ಸ್ವಾಮಿ ಪ್ರಸಾದ್, ಧನುಷ್ ಸೇರಿದಂತೆ ಸ್ಥಳೀಯ ಮುಖಂಡರು ಹಾಗೂ ಕಾರ್ಯಕರ್ತರು ಹಾಜರಿದ್ದರು.

## ಶಾಲಾ ಆಟೊ ಪಲ್ಟಿ: ಬಾಲಕ ಸಾವು

• **ಉದಯವಾಹಿನಿ ಹನೂರು**

ಶಾಲಾ ಮಕ್ಕಳನ್ನು ಕರೆದೊಯ್ಯುತ್ತಿದ್ದ ಆಟೊವೊಂದು ಕಾಮಗೆರೆ ಹೋಲಿಕ್ರಾಸ್ ಆಸ್ಪತ್ರೆ ಸಮೀಪದಲ್ಲಿ ದ್ವಿಚಕ್ರ ವಾಹನಕ್ಕೆ ಡಿಕ್ಕಿ ಹೊಡೆದು ಪಲ್ಟಿಯಾಗಿದ್ದು, ಬಾಲಕ ಹಿಮಾನ್ ರಾಜ್ (11) ಸ್ಥಳದಲ್ಲೇ ಮೃತಪಟ್ಟಿದ್ದಾನೆ. ಗುಂಡಾಪುರ, ಮಂಗಲದಿಂದ 10ಕ್ಕೂ ಹೆಚ್ಚು ಮಕ್ಕಳನ್ನು ಕಾಮಗೆರೆಯಲ್ಲಿರುವ ಶಿಕ್ಷಣ ಸಂಸ್ಥೆಗೆ ಕರೆತರುತ್ತಿದ್ದಾಗ ಆಟೊ ಚಾಲಕನ ಅಜಾಗರುಕತೆಯಿಂದ ಅವಘಡ ಸಂಭವಿಸಿದೆ.

ಆಟೊದಲ್ಲಿದ್ದ ಇನ್ನಿಬ್ಬರು ಶಾಲಾ ಮಕ್ಕಳಿಗೂ ಸಣ್ಣ ಗಾಯಗಳಾಗಿದ್ದು, ಹೋಲಿಕ್ರಾಸ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಮೃತ ಬಾಲಕನ ಶವವನ್ನು ಹೋಲಿ ಕ್ರಾಸ್ ಆಸ್ಪತ್ರೆಯ ಶವಗಾರದಲ್ಲಿ ಇರಿಸಿ, ನಂತರ ಚಾಮರಾಜನಗರ ಜಿಲ್ಲಾ ಆಸ್ಪತ್ರೆಯಲ್ಲಿ ಮರಣೋತ್ತರ ಪರೀಕ್ಷೆ ಮಾಡಿಸಿ ಕಾಮಗೆರೆಯಲ್ಲಿ ಅಂತ್ಯ ಸಂಸ್ಕಾರ ಮಾಡಲಾಯಿತು. ಕೊಳ್ಳೇಗಾಲ ಗ್ರಾಮಾಂತರ ಪೊಲೀಸ್ ಠಾಣೆಯ ಪಿಎಸ್‌ಐ ಸುಪ್ರೀತ್ ಹಾಗೂ ಸಿಬ್ಬಂದಿಗಳು ಘಟನಾ ಸ್ಥಳಕ್ಕೆ ಆಗಮಿಸಿ ಪರಿಶೀಲನೆ ನಡೆಸಿದ್ದಾರೆ. ಬಾಲಕನ ಸಂಬಂದಧಿಕರ ಹತ್ತಿರ ದೂರು ದಾಖಲಿಸಿಕೊಂಡು ಎರಡು ವಾಹನವನ್ನು ವಶಪಡಿಸಿಕೊಂಡು ಕ್ರಮ ಕೈ ಗೊಂಡಿದ್ದಾರೆ. ಕೇಶಿಫ್ ರಸ್ತೆ ಅಗಲೀಕರಣ ಆದ ದಿನದಿಂದ ಗ್ರಾಮದಲ್ಲಿ ಇದುವರೆಗೂ ಅಪಘಾತದಲ್ಲಿ 5 ಜನರು ಮೃತಪಟ್ಟಿದ್ದಾರೆ. ರಸ್ತೆ ಡುಬ್ಬ ಅಳವಡಿಸಲು ಮನವಿ ಮಾಡಿದ್ದರು, ಸಂಬಂಧಪಟ್ಟ ಸಾರಿಗೆ ಇಲಾಖೆ ಮತ್ತು ಜಿಲ್ಲಾಡಳಿತ, ರಾಜ್ಯ ಹೆದ್ದಾರಿ ಪ್ರಾಧಿಕಾರ ಯಾವುದೇ ಕ್ರಮಕ್ಕೆ ಮುಂದಾಗಿಲ್ಲ. ಇಂತಹ ಘಟನೆ ಜರುಗದಂತೆ ಸಂಬಂಧಪಟ್ಟವರು ಕೂಡಲೇ ಕ್ರಮ ಕೈಗೊಳ್ಳಬೇಕು ಎಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.

## ಉಗಾಂಡ ಮಹಿಳೆ ಪರಾರಿ

• **ಉದಯವಾಹಿನಿ ತುಮಕೂರು**

ನಗರದ ದಿಬ್ಬರು ಬಳಿಯ ವಿದೇಶಿ ಮಹಿಳೆಯರ ಬಂಧನ ಕೇಂದ್ರದಿಂದ ಗುರುವಾರ ರಾತ್ರಿ ಉಗಾಂಡ ರಾಷ್ಟ್ರದ ಜೆನಿಫರ್ (26) ಎಂಬುವರು ಪರಾರಿಯಾಗಿದ್ದಾರೆ. ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿ ಕೇಂದ್ರ ನಡೆಯುತ್ತಿದೆ.

ವೀಸಾ ಅವಧಿ ಮುಗಿದ ಕಾರಣ ಎರಡು ತಿಂಗಳ ಹಿಂದೆ ಇವರನ್ನು ಕೇಂದ್ರಕ್ಕೆ ಕರೆ ತರಲಾಗಿತ್ತು. ಸೆಪ್ಟೆಂಬರ್‌ನಲ್ಲಿ ಬೆಂಗಳೂರಿನಿಂದ ಕರೆ ತಂದು ಇಲ್ಲಿ ಬಿಡಲಾಗಿತ್ತು. ಇವರು ವಾಸವಿದ್ದ ಕೋಣೆಯಲ್ಲಿ ಪರಿಶೀಲನೆ ನಡೆಸಿದಾಗ ತಪ್ಪಿಸಿಕೊಂಡು ಹೋಗಿರುವುದು ಗೊತ್ತಾಗಿದೆ.

## ಯತ್ನಾಳನನ್ನು ಉಚ್ಚಾಟನೆ ಮಾಡಿ ಉಗಿದು ಆಚೆ ಹಾಕಿ ಎಂದ ಕಾರ್ಯಕರ್ತರು

• **ಉದಯವಾಹಿನಿ ಮೈಸೂರು**

ರಾಜ್ಯ ಬಿಜೆಪಿಯ ಬಣ ಬಡಿದಾಟ ಇದೀಗ ಪೂರ್ತಿ ಬೀದಿಗೆ ಬಂದಿದ್ದು, ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ ವಿರುದ್ಧ, ಬಿಜೆಪಿ ಕಾರ್ಯಕರ್ತರೇ ಕಿಡಿ ಕಾರಿದ್ದಾರೆ. ಮೈಸೂರಿನಲ್ಲಿ ಬಿಜೆಪಿಯ ಹಲವು ಹಿರಿಯ ನಾಯಕರು ಸುದ್ದಿಗೋಷ್ಠಿ ನಡೆಸುವ ಸಂದರ್ಭದಲ್ಲಿ ಯತ್ನಾಳನ್ನು ಉಚ್ಚಾಟನೆ ಮಾಡಿ ಉಗಿದು ಆಚೆ ಹಾಕಿ ಎಂದು ಕೆಂಡಾಮಂಡಲಗೊಂಡರು. ಬಿ ವೈ ವಿಜಯೇಂದ್ರ ಬಣದ ಎಂಪಿ ರೇಣುಕಾಚಾರ್ಯ ಬಿಸಿ ಪಾಟೀಲ್ ಸೇರಿದಂತೆ ಹಲವು ನಾಯಕರು ಮೈಸೂರಿನ ಚಾಮುಂಡಿ ಬೆಟ್ಟಕ್ಕೆ ತೆರಳಿ ಪೂಜೆ ಸಲ್ಲಿಸಿದರು ಬಳಿಕ ಸುದ್ದಿಗೋಷ್ಠಿ ಆರಂಭಿಸಿದಾಗ ಬಿಜೆಪಿ ಹಲವು ಕಾರ್ಯಕರ್ತರು ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ವಿರುದ್ಧ ಆಕ್ರೋಶ ಹೊರ ಹಾಕಿದರು. ಆತನ ಹೇಳಿಕೆಗಳಿಂದ ಪಕ್ಷಕ್ಕೆ ಡ್ಯಾಮೇಜ್ ಆಗುತ್ತಿದೆ ಅಲ್ಲದೆ ಕಾರ್ಯಕರ್ತರ ಹುಮ್ಮಸ್ಸು ಕುಗ್ಗಿಸುತ್ತಿದ್ದಾರೆ ಎಂದು ಏಕವಚನದಲ್ಲೇ ವಾಗ್ದಾಳಿ ನಡೆಸಿದರು. ಅವನು ಮುಖವಾಡ ಹಾಕಿಕೊಂಡಿರುವ ಹಿಂದುತ್ವ ನಾಯಕ ಅವನನ್ನು ಉಗಿದು ಆಚೆ ಹಾಕಿ ಎಂದು ಕಾರ್ಯಕರ್ತರು ಕೆಂಡಮಂಡಲವಾಗಿದ್ದಾರೆ. ಏಕವಚನದಲ್ಲಿ ಯತ್ನಾಳ್ ವಿರುದ್ಧ ಬಿಜೆಪಿ ಕಾರ್ಯಕರ್ತರು ಕಿಡಿಕಾರಿದ್ದಾರೆ. ಯತ್ನಾಳನನ್ನ ಉಚ್ಚಾಟನೆ ಮಾಡಿ ಬಿಸಾಕಿ ಅವನಿಂದ ಏನು ಆಗಲ್ಲ ಲಾಸ್ ಆಗೋದು ನಮಗೆ ಎಂದು ಆಕ್ರೋಶ ಹೊರ ಹಾಕಿದರು.

## ಪೌರ ಕಾರ್ಮಿಕರಿಗೆ ನಿಂದನೆ

• **ಉದಯವಾಹಿನಿ, ರಾಮನಗರ**

ನಿಷೇಧಿತ ಪ್ಲಾಸ್ಟಿಕ್ ವಿರುದ್ಧ ಕಾರ್ಯಾಚರಣೆ ನಡೆಸಲು ಬಂದ ನಗರಸಭೆ ಸಿಬ್ಬಂದಿ ಮತ್ತು ಪೌರ ಕಾರ್ಮಿಕರಿಗೆ ಇಲ್ಲಿನ ಎಪಿಎಂಸಿಯಲ್ಲಿರುವ ಅಂಗಡಿಗಳ ಮಾಲೀಕರು ಕೆಟ್ಟದಾಗಿ ನಿಂದಿಸಿ ಕರ್ತವ್ಯಕ್ಕೆ ಅಡ್ಡಿಪಡಿಸಿದ್ದಾರೆ. ತಮ್ಮನ್ನು ಅವಾಚ್ಯವಾಗಿ ನಿಂದಿಸಿ ಕರ್ತವ್ಯಕ್ಕೆ ಅಡ್ಡಿಪಡಿಸಿದ್ದನ್ನು ಖಂಡಿಸಿ, ಸಿಬ್ಬಂದಿ ಮತ್ತು ಪೌರ ಕಾರ್ಮಿಕರು ಅಂಗಡಿ ಎದುರು ಕುಳಿತು ಪ್ರತಿಭಟನೆ ನಡೆಸಿದ್ದಾರೆ. ಬೆಳಿಗ್ಗೆ 8 ಗಂಟೆ ಸುಮಾರಿಗೆ ಎಪಿಎಂಸಿಯಲ್ಲಿರುವ ಗಣೇಶ್ ಪೂಜಾ ಭಂಡಾರ ಹಾಗೂ ಕೆಂಪಡರಾಯ ಟ್ರೇಡರ್ಸ್‌ನಲ್ಲಿ ನಿಷೇಧಿತ ಪ್ಲಾಸ್ಟಿಕ್ ಮಾರಾಟದ ಮಾಹಿತಿ ಮೇರೆಗೆ, ಅಂಗಡಿಯನ್ನು ಪರಿಶೀಲನೆ ನಡೆಸಲು ಮುಂದಾದೆವು. ಆಗ ತಡೆದ ಅಂಗಡಿ ಮಾಲೀಕರಾದ ಚಂದ್ರು ಮತ್ತು ಸಿ.ಡಿ. ಶಂಕರ ಕೆಟ್ಟದಾಗಿ ನಿಂದಿಸಿ ಕರ್ತವ್ಯಕ್ಕೆ ಅಡ್ಡಿಪಡಿಸಿ ಬೆದರಿಕೆ ಹಾಕಿದರು ಎಂದು ಕಾರ್ಮಿಕರು ಹೇಳಿದರು.

ಈ ವೇಳೆ ನಗರಸಭೆ ಸಿಬ್ಬಂದಿ, ಪೌರ ಕಾರ್ಮಿಕರು ಹಾಗೂ ಅಂಗಡಿ ಮಾಲೀಕರೊಂದಿಗೆ ವಾಗ್ವಾದ ನಡೆಯಿತು. ಆದರೂ, ಮಾಲೀಕರು ತಮ್ಮ ವರಸೆ ಮುಂದುವರಿಸಿದ ಕರ್ತವ್ಯಕ್ಕೆ ಅಡ್ಡಿಪಡಿಸಿದರು. ಆಗ ಸಿಬ್ಬಂದಿ ಮತ್ತು ಕಾರ್ಮಿಕರು ಅಂಗಡಿ ಎದುರಿಗೇ ಕುಳಿತು ಪ್ರತಿಭಟನೆ ನಡೆಸಿದರು. ಘೋಷಣೆಗಳನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

# ಅಂತರಾಳದಿಂದ.. EDITORIAL

## ಬಿಪಿಎಲ್ ರದ್ದು ಎನ್ನುವ ಅನಗತ್ಯ ವಿವಾದ

2011ರ ಜನಗಣತಿ ಪ್ರಕಾರ ಕರ್ನಾಟಕದ ಜನ ಸಂಖ್ಯೆ 6.1 ಕೋಟಿ. ಇವರಲ್ಲಿ 5.2 ಕೋಟಿ ಮಂದಿ ಪಡಿತರ ಫಲಾನುಭವಿಗಳು. ಅಂದರೆ ಶೇ.80ಕ್ಕೂ ಹೆಚ್ಚು. ಇಷ್ಟು ಮಂದಿ ಬಡವರಿರುವುದು ಅಸಹಜ ಎಂಬುದು ಸಕಾರಣ ವಾದ. ನಿಜವಾದ ಅರ್ಹ ಫಲಾನುಭವಿಗಳಿಗೆ ತಲುಪಬೇಕಾದದ್ದನ್ನು ಅನರ್ಹರು ಪಡೆಯುವುದು ತಪ್ಪು ಅದು ಆಡಳಿತಾತ್ಮಕ ಲೋಪ. ಈ ಕಾರ್ಡನ್ನು ಮಂಜೂರು ಮಾಡುವಲ್ಲೇ ಈ ಕಳ್ಳಾಟ ನಡೆದಿರುತ್ತದೆ ಎಂಬುದು ಸರಕಾರದ ಆಡಳಿತಾತ್ಮಕ ವಿಚಕ್ಷಣಾ ವರ್ಗದ ನಿಲುವು ಅದಕ್ಕಿರುವ ಪರಿಹಾರವೆಂದರೆ ಈ ಕಾರ್ಡುದಾರರನ್ನು ಆಗಾಗ ಪರಿಶೀಲಿಸಿ ನಕಲಿಯೋ, ಅಸಲಿಯೋ ಎಂದು ಪತ್ತೆ ಹಚ್ಚಿನಕಲಿ ಕಾರ್ಡುಗಳನ್ನು ರದ್ದುಗೊಳಿಸುವುದು. ಈ ಬಿಪಿಎಲ್‌ಗೆ ಅರ್ಹರು ಯಾರು ಎಂಬುದಕ್ಕೆ ಕೇಂದ್ರ ಸರಕಾರವೇ ಕೆಲವು ಮಾನದಂಡಗಳನ್ನು ನಿಗದಿಪಡಿಸಿದೆ. ದ್ವಿಚಕ್ರ ನಾಲ್ಕು ಚಕ್ರದ ವಾಹನ ಹೊಂದಿರುವುದು, ಸರಕಾರಿ ನೌಕರಿ, 75 ಎಕರೆ ಜಮೀನು (ಒಣಭೂಮಿ) ಅಥವಾ ಅದರ ತತ್ಸಮಾನ ನೀರಾವರಿ ಜಮೀನು ಹೊಂದಿರುವುದು ವರ್ಷಕ್ಕೆ 12 ಲಕ್ಷ ರೂಪಾಯಿಗಿಂತ ಹೆಚ್ಚು ಅದಾಯ ಹೊಂದಿರುವವರು ಈ ಬಿಪಿಎಲ್ ಕಾರ್ಡ್ ಹೊಂದುವಂತಿಲ್ಲ. ಈ ಮಾನದಂಡಗಳಲ್ಲೇ ಇರುವ ಗೋಜಲುಗಳನ್ನು ಬಹುತೇಕ ಮಂದಿ ಬೊಟ್ಟು ಮಾಡಿ ತೋರಿಸುತ್ತಿದ್ದಾರೆ. ಉದಾ: ಆದಾಯ ಮಿತಿ. ಕರ್ನಾಟಕದ ಮಲೆನಾಡು/ಕರಾವಳಿ ಪ್ರದೇಶದ ಕೂಲಿಯೇ ದಿನಕ್ಕೆ ರೂ. 5000 ಅಸುಪಾಸಿನಲ್ಲಿದೆ.

ಗುತ್ತಿಗೆ ಆಧಾರದಲ್ಲಿ ಕೆಲಸ ಮಾಡುವ ವ್ಯಕ್ತಿಯ ಸಂಬಳ ರೂ. 10–15 ಸಾವಿರವಿದ್ದರೆ ಈ ಕಾರ್ಡ್ ಹೊಂದುವುದು ಸಾಧ್ಯವಿಲ್ಲ ಆದರೆ ಈ ಆದಾಯವೂ ಅಭದ್ರ ಉದ್ಯೋಗದಷ್ಟೇ ಅಲ್ಲ ಈಗಿನ ಬೆಲೆಏರಿಕೆಯ ಸಂದರ್ಭದಲ್ಲಿ ತಿಂಗಳಿಗೆ ರೂ. 15 ಸಾವಿರ ಆದಾಯ ಇರುವ ಕುಟುಂಬ ಘನತೆಯ ಬದುಕು ಸಾಗಿಸುವುದೂ ಕಷ್ಟ ಆದ್ದರಿಂದ ಈ ಆದಾಯ ಮಿತಿಯೇ ಹಾಸ್ಯಾಸ್ಪದವಾಗಿದೆ. ಆದರೆ ಇದನ್ನು ಪತ್ತೆ ಹಚ್ಚಲು ಸರಕಾರದಲ್ಲಿ ಯಾವ ತಂತ್ರಜ್ಞಾನವೂ ಇಲ್ಲ ಇದ್ದರೂ ಅದು ಕಾರ್ಯಸಾಧುವಲ್ಲ ಈ ನಿಯಮವನ್ನು ಮೀರಲು ಇರುವ ಮಾರ್ಗವೆಂದರೆ ಒಂದಷ್ಟು ಅಡ್ಡ ದಾರಿ ಬಳಸಿ ಆದಾಯ ಮಿತಿಗಿಂತ ಕಡಿಮೆ ಎಂಬ ಆದಾಯ ಸರ್ಟಿಫಿಕೇಟು ಪಡೆಯುವುದು ಗ್ರಾಮೀಣ ಪ್ರದೇಶದ ಕುಟುಂಬಗಳಲ್ಲಿ ಪ್ರಾಯಶಃ ಬಿಪಿಎಲ್ ಕಾರ್ಡಿನ ಅಸಲಿತನ ಪತ್ತೆ ಮಾಡಲು ಭೂಮಿ ಒಡೆತನದ ಪ್ರಮಾಣವನ್ನು ಬಳಸಬಹುದು ಆದರೆ ನಗರಪ್ರದೇಶದಲ್ಲಿ ಇದೂ ಕಷ್ಟ, ಅಷ್ಟೇಕೆ ನಗರ ಪ್ರದೇಶದಲ್ಲಿ ಬದುಕುವ ಕುಟುಂಬಗಳ ಆದಾಯ ತಿಂಗಳಿಗೆ ರೂ. 15 ಸಾವಿರ ಇದ್ದರೂ ಬಡತನದ ರೇಖೆಗಿಂತ ಮೇಲೆ ಎನ್ನಲು ಸಾಧ್ಯವಿಲ್ಲ. ಈ ಗೋಜಲು ಹೇಗಿದೆಯೆಂದರೆ ಸರಕಾರಕ್ಕೊಂದು ತರ್ಕಬದ್ಧ ಮಾನದಂಡ ನಿಗದಿಪಡಿಸಲೂ ಆಗದೆ ಅಧಿಕಾರಿಗಳಿಗೆ ಅದನ್ನು ಕಾಲಕಾಲಕ್ಕೆ ತಿದ್ದುವ ಸಾಮಾನ್ಯ ಜ್ಞಾನವೂ ಇಲ್ಲದೆ ದಿನದೂಡುವಂತಾಗಿದೆ. ಇನ್ನು ಈ ಕಾರ್ಡುಗಳ ಸಂಖ್ಯೆ ಬಗ್ಗೆಯೂ ಎದ್ದಿರುವ ಸಂಶಯದ ಬಗ್ಗೆ, ಜನಸಂಖ್ಯೆಯ ಆಧಾರವೇನೋ 2011ರದ್ದು ಆದರೆ ಈ ಕಾರ್ಡನ್ನು ಕಾಲಕಾಲಕ್ಕೆ ಕುಟುಂಬಗಳು ಪಡೆಯಬಹುದಾದ ಕಾರಣ 2021ರ ಗಣತಿ ಆಧಾರವಾಗಬಹುದಿತ್ತು. ಆದರೆ ಮೋದಿ ಸರಕಾರ ಈ ಶಿಸ್ತಿನ ಜನಗಣತಿಯನ್ನು ಮುಂದೂಡಿದ ಕಾರಣ ಅಂಕಿಅಂಶಗಳೂ ಲಭ್ಯ ಇಲ್ಲ. ದೇಶದಲ್ಲೇ ಎರಡನೇ ಅತಿ ದೊಡ್ಡ ಒಣ ಭೂಮಿ ಕೃಷಿ ಹೊಂದಿರುವ ರಾಜ್ಯವಾದ ಕರ್ನಾಟಕದಲ್ಲಿ ಸಣ್ಣ/ಅತಿ ಸಣ್ಣ ಹಿಡುವಳಿ ಹೊಂದಿರುವವರ ಸಂಖ್ಯೆಯೂ ಜಾಸ್ತಿ. ಹಾಗೆಯೇ ಭೂರಹಿತ ಕುಟುಂಬಗಳ ಸಂಖ್ಯೆ ಕೂಡಾ. ನಗರ, ಅರೆನಗರ ವ್ಯಾಪ್ತಿಗೆ ಉದ್ಯೋಗ ಹುಡುಕಿ ಬಂದಿರುವ ಕುಟುಂಬಗಳೂ ಸುಭದ್ರ ಉದ್ಯೋಗ ಪಡೆದಿರುವ ಪುರಾವೆಗಳೂ ಇಲ್ಲ. ಈ ಕುರಿತಾದ ಅಂಕಿ ಅಂಶಗಳೂ ನೆಟ್ಟಗೆ ಲಭ್ಯವಿಲ್ಲ. ಆದಾಯ ಮತ್ತು ಸೌಲಭ್ಯಗಳಿವೆಯೇ ಎಂಬುದನ್ನು ಪತ್ತೆ ಹಚ್ಚಲು ತಂತ್ರಜ್ಞಾನವೇನೋ ಇದೆ. ಆಧಾರ್ ಲಿಂಕ್ ಮಾಡುವುದು ಅದರ ಮೂಲಕ ವಾಹನ ಹೊಂದಿರುವ ದಾಖಲೆ, ಆದಾಯದ ದಾಖಲೆಗಳನ್ನು ಪತ್ತೆ ಮಾಡಬಹುದು.

> **ಬಿಪಿಎಲ್ ಅಂದರೆ ಬಡತನ ರೇಖೆಗಿಂತ ಕೆಳಗಿರುವ ಕುಟುಂಬಗಳು ಈ ಕುಟುಂಬಗಳಿಗೆ ಕಲ್ಯಾಣ ರಾಜ್ಯದ ಪರಿಕಲ್ಪನೆಗನುಗುಣವಾಗಿ ಸರಕಾರ ಆಹಾರ ಧಾನ್ಯಗಳಿಂದ ಹಿಡಿದು ಆರೋಗ್ಯ ಸೇವೆವರೆಗೆ ಸೌಲಭ್ಯ ಒದಗಿಸುತ್ತಿದೆ. ಈ ಕಾರಣಕ್ಕೆ ಈ ಕಾರ್ಡ್ ಪಡೆದವರಲ್ಲಿ ನಕಲಿ ಫಲಾನುಭವಿಗಳು ಇದ್ದರೆ, ಇವರನ್ನು ಪತ್ತೆ ಹಚ್ಚಿ ಅಂತಹ ಕಾರ್ಡುಗಳನ್ನು ರದ್ದುಪಡಿಸುವುದು ಸರಕಾರವೊಂದರ ಸದಾ ಜಾರಿಯಲ್ಲಿರುವ ಪ್ರಕ್ರಿಯೆ.**

## ಸ್ನೇಹಿತರೇ, ಬಂಧುಗಳೇ ಕೊರೆಯುವ ಚಳಿಯ ಬಗ್ಗೆ ಎಚ್ಚರ ವಹಿಸೋಣ

**ಚನ್ನೇಗೌಡ ಯು ಸಿ**



ಈ ವಾರ ಪೂರ್ತಿ ಸೈಕ್ಲೋನ್ ವಾಯುಭಾರ ಕುಸಿತದ ಪ್ರಭಾವದಿಂದ ನಗರದಲ್ಲಿ ಮಳೆಯ ಜತೆಗೆ ಹೆಚ್ಚಾದ ಥಂಡಿ ಹೀಗಾಗಿ ನೆಗಡಿ ಸಾಧ್ಯತೆ ಜಾಸ್ತಿ ಇರುತ್ತದೆ. ಆರೋಗ್ಯದ ಬಗ್ಗೆ ಮುಂಜಾಗ್ರತಾ ಕ್ರಮ ಅನುಸರಿಸುವುದು ಬಹಳ ಸೂಕ್ತ. ಹೃದಯ ಸಂಬಂಧ ಆರೋಗ್ಯದ ಬಗ್ಗೆ ಕೂಡ ಎಚ್ಚರವಹಿಸಿ

ಚಳಿ ಹೆಚ್ಚಿದ್ದಾಗ ತೀವ್ರ ಚಳಿಯಿಂದ ಹೃದಯದಲ್ಲಿ ರಕ್ತದೊತ್ತಡ ಮತ್ತು ಪ್ರೋಟೀನ್ ಪ್ರಮಾಣ ಹೆಚ್ಚಾಗಿ ರಕ್ತ ಹೆಪ್ಪುಗಟ್ಟುವ ಸಮಸ್ಯೆಗಳು ಎದುರಾಗುತ್ತವೆ. ಆಸ್ತಮಾ ರೋಗಿಗಳಿಗೂ ತೊಂದರೆ ಹೆಚ್ಚು. ಹೀಗಾಗಿ ರೋಗ ನಿರೋಧಕ ಶಕ್ತಿ ಕಡಿಮೆ ಇರುವ ವಯಸ್ಸಾದ ಎಲ್ಲರೂ ಎಚ್ಚರ ವಹಿಸಿ. ಬೆಳಿಗ್ಗೆ ಹಾಗೂ ಸಂಜೆ ವಾಕಿಂಗ್ ಸ್ವಲ್ಪ ದಿನ ಬೇಡ. ಚಳಿಯ ವೇಳೆ ಹೃದಯಾಘಾತಗಳು ಹೆಚ್ಚಾಗುವುದರಿಂದ ಬೆಚ್ಚನೆಯ ವಾತಾವರಣ ಸೃಷ್ಟಿಸಿಕೊಳ್ಳಬೇಕು.

ಮುಂಜಾಗ್ರತೆ ದೃಷ್ಟಿಯಿಂದ ಬೆಳಗಿನ ವಾಕಿಂಗ್, ಸಂಜೆ ಆರು ಗಂಟೆ ನಂತರ ಹೋಗುವುದನ್ನು ಆದಷ್ಟೂ ನಿಲ್ಲಿಸಬೇಕು. ಅದಷ್ಟು ದೇಹ ಬಿಸಿಯಾಗಿರುವಂತೆ ನೋಡಿಕೊಳ್ಳೋಣ. ರಸ್ತೆ ಪಕ್ಕದ ಆಹಾರ, ಹೊರಗಿನ ತಿಂಡಿ ತಿನ್ನಬೇಡಿ.

ಎಣ್ಣೆ ಪದಾರ್ಥ ಹಾಗೂ ಮಾಂಸಹಾರ ಸೇವನೆ ಹೆಚ್ಚಾಗಿ ಮಾಡಬಾರದು. ರೋಗ ನಿರೋಧಕ ಶಕ್ತಿ-ಹೆಚ್ಚಿಸಬಲ್ಲ ತರಕಾರಿಗಳು, ಹಣ್ಣು, ಕಾಳಿನ ಪದಾರ್ಥ ಸೇವಿಸಬೇಕು. ಬಿಸಿ ನೀರು ಕುಡಿಯುವುದನ್ನು ತಪ್ಪದೇ ರೂಢಿಸಿಕೊಳ್ಳಬೇಕು. ಇಲ್ಲದಿದ್ದರೆ ಅನಾರೋಗ್ಯಕ್ಕೆ ತುತ್ತಾಗುವ ಸಾಧ್ಯತೆ ಹೆಚ್ಚು. ಬೆಚ್ಚಗಿನ ಹತ್ತಿ ಬಟ್ಟೆ ಆರೋಗ್ಯಕ್ಕೆ ಬಹಳ ಉಪಕಾರಿ.

## ರಾಮಾಯಣ



### ಸುರಾಸುರರು ಸಮುದ್ರ ಮಥನ ಮಾಡಿದುದು

• ಹಿಂದಿನ ಸಂಚಿಕೆಯಿಂದ 29 ನೆಯ ಅಧ್ಯಾಯ

ಆಗ ದೇವೇಂದ್ರನು ತನ್ನ ಬಲತಾಯಿಯ ಸಮೀಪಕ್ಕೆ ಬಂದು ಆಕೆಗೆ ಸೇವಾ ಸತ್ಕಾರಗಳನ್ನು ಅತಿವಿನಯದಿಂದ ಮಾಡುತ್ತ ನಿತ್ಯದಲ್ಲಿಯೂ ಫಲ ಪುಷ್ಪ ದರ್ಭೆ ಕಾಷ್ಟ ಉದಕ ಅಗ್ನಿ ಮೊದಲಾದ ವಸ್ತುಗಳನ್ನು ತಂದು ಕೊಡುತ್ತ ಆಕೆಯ ಬಳಲಿಕೆಯನ್ನು ಪರಿಹರಿಸುತ್ತಿದ್ದನು. ಈ ಪ್ರಕಾರದಲ್ಲಿ ಹತ್ತು ವರುಷ ಕಡಿಮೆಯಾಗಿ ಸಾವಿರ ವರುಷಗಳು ಕಳೆಯಲು ದಿತಿಯು ತನ್ನ ಸವತಿಯಾದ ಅದಿತಿಯ ಮಗನಾದ ದೇವೇಂದ್ರನು ಮಾಡುತ್ತಿದ್ದ ಸೇವೆಯನ್ನುಕಂಡು ಅತಿಹರ್ಷಪಟ್ಟು ಆತನನ್ನು ಕುರಿತು ದೇವೇಂದ್ರ, ನಾನು ಮಕ್ಕಳಿಲ್ಲದೆ ನಿನ್ನ ತಂದೆಯಾದ ಕಶ್ಯಪನನ್ನು ಪ್ರಾರ್ಥನೆ ಮಾಡಿ ಸಂತಾನವಾಗಬೇಕೆಂದು ಬೇಡಿಕೊಳ್ಳಲು ಆತನು ಸಾವಿರ ವರುಷಗಳು ಶುಚಿಯಾಗಿ ತಪಸ್ಸನ್ನು ಮಾಡಿದರೆ ಮಗನಾಗುವನೆಂದು ವರವನ್ನು ಕೊಟ್ಟನು ಆದ್ದರಿಂದ ನಿನಗೆ ಸಹಾಯಕನಾಗಿ ತ್ರಿಲೋಕಗಳನ್ನೂ ಜಯಿಸುವಂಥ ಕುಮಾರನಾಗಬೇಕೆಂದು ತಪಸ್ಸನ್ನು ಮಾಡುತ್ತಾ ಇದ್ದೇನೆ. ಆ ಸಾವಿರ ವರುಷಗಳಿಗೆ ಇನ್ನು ಹತ್ತು ವರುಷಗಳು ಕಡಿಮೆಯಾಗಿವೆ. ಆ ಹತ್ತು ವರುಷಗಳಾದ ಮೇಲೆ ನಿನಗೆ ಒಬ್ಬ ತಮ್ಮನು ಜನಿಸುವನು' ಎಂದು ನುಡಿದು ಮಧ್ಯಾಹ್ನ ಕಾಲದಲ್ಲಿ ನಿದ್ರಾತಿಶಯದಿಂದ ಕಾಲನ್ನು ನೀಡುವ ಕಡೆಯಲ್ಲಿ ಶಿರಸ್ಸನ್ನಿರಿಸಿಕೊಂಡೂ ತಲೆದಿಂಬಿನ ಮೇಲೆ ಕಾಲನ್ನು ನೀಡಿಕೊಂಡೂ ನಿದ್ರೆ ಮಾಡಿದಳು ಈ ರೀತಿಯಲ್ಲಿ ನಿದ್ರೆ ಮಾಡುವುದು ಧರ್ಮಶಾಸ್ತ್ರದಲ್ಲಿ ನಿಷಿದ್ದವು ಹಾಗೆಯೇ ಆಕೆಯು ಅಶುಚಿಯಾಗಿರುವುದನ್ನು ನೋಡಿ ದೇವೇಂದ್ರನು ಆಕೆಯ ಗರ್ಭಕ್ಕೆ ವಿಘ್ನವನ್ನು ಮಾಡಬೇಕೆಂದೆಣಿಸಿ ಆಕೆಯ ಶರೀರವನ್ನು ಹೊಕ್ಕು ಹೊಟ್ಟೆಯಲ್ಲಿದ್ದ ಗರ್ಭ ವನ್ನು ಏಳುಭಾಗಗಳಾಗಿ ತನ್ನ ವಜ್ರಾಯುಧದಿಂದ ಕತ್ತರಿಸಿ ರೋದನ ಮಾಡುತ್ತಿದ್ದ ಆ ಗರ್ಭವನ್ನು ಛೇದಿಸಿದನು! ಆಮೇಲೆ ದಿತಿಯು ಎಚ್ಚತ್ತು ಗರ್ಭವನ್ನು ಕೊಲ್ಲಬಾರದೆಂದು ನುಡಿಯಲು ದೇವೇಂದ್ರನು ತಾಯಿಯ ಮಾತನ್ನು ಕೇಳಿ ಗರ್ಭವನ್ನು ಅಲ್ಲಿಯೇ ಇರಿಸಿ ಹೊರಕ್ಕೆ ಬಂದು ವಜ್ರಾಯುಧಸಹಿತನಾಗಿ ನಿಂತುಕೊಂಡು ಆಕೆಯನ್ನು ಕುರಿತು ' ತಾಯೆ, ನೀನು ತಲೆದಿಂಬಿನಮೇಲೆ ಪಾದವನ್ನು ನೀಡಿಕೊಂಡೂ ಪಾದಗಳನ್ನು ನೀಡುವ ಕಡೆಗೆ ಶಿರಸ್ಸನ್ನಿರಿಸಿಕೊಂಡೂ ಮಲಗಿದುದು ಶಾಸ್ತ್ರವಿರುದ್ಧವಾದ್ದರಿಂದ ನಿನ್ನ ಶರೀರವು ಅಶುಚಿಯಾಯಿತು. ಇದುವರೆಗೂ ನೀನು ನನ್ನ ತಂದೆಯು ನಿರೂಪಿಸಿದ ರೀತಿಯಲ್ಲಿ ಶುಚಿಯಾಗಿದ್ದದ್ದರಿಂದ ನಾನು ಸಮಯವನ್ನು ನೋಡಿಕೊಂಡಿದ್ದೆನು ಈಗ ಸಮಯವು ಕೂಡಿದ್ದರಿಂದ ಯುದ್ಧರಂಗದಲ್ಲಿ ದೇವೇಂದ್ರನನ್ನು ಕೊಲ್ಲುವುದಕ್ಕಾಗಿ ಉಂಟಾದ ಗರ್ಭವನ್ನು ಏಳುಭಾಗವಾಗಿ ವಜ್ರಾಯುಧದಿಂದ ಕತ್ತರಿಸಿದೆನು. ನನ್ನ ಅಪರಾಧವನ್ನು ಕ್ಷಮಿಸು ' ಎಂದು ಸಂತವಿಟ್ಟನು.

ಮುಂದುವರಿಯುವುದು...

# ಬಿಬಿಎಂಪಿ ವ್ಯಾಪ್ತಿಯ 13 ಕೆರೆಗಳ ಒತ್ತುವರಿ ತೆರವು

## 242.5 ಕೋಟಿ ರೂ. ಮೌಲ್ಯದ 7 ಎಕರೆ ಪ್ರದೇಶ ಪಾಲಿಕೆ ವಶ: ಪ್ರೀತಿ ಗೆಹ್ಲೋಟ್

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ಬಿಬಿಎಂಪಿ ವ್ಯಾಪ್ತಿಯಲ್ಲಿ ಬರುವ ಕೆರೆಗಳಲ್ಲಿ ಒತ್ತುವರಿಯಾಗಿರುವುದನ್ನು ಗುರುತಿಸಿ ತೆರವು ಕಾರ್ಯಾಚರಣೆ ನಡೆಸುವ ಕಾರ್ಯವನ್ನು ಸಕ್ರಿಯವಾಗಿ ನಡೆಸಲಾಗುತ್ತಿದೆ ಎಂದು ಅರಣ್ಯ, ಪರಿಸರ ಮತ್ತು ಹವಾಮಾನ ವೈಪರೀತ್ಯ ನಿರ್ವಹಣೆಯ ವಿಶೇಷ ಆಯುಕ್ತರಾದ ಪ್ರೀತಿ ಗೆಹ್ಲೋಟ್ ರವರು ತಿಳಿಸಿದರು.

ಮಾನ್ಯ ಉಚ್ಚನ್ಯಾಯಾಲಯದ ಆದೇಶದಂತೆ ಪಾಲಿಕೆ ವಶದಲ್ಲಿರುವ ಕೆರೆಗಳ ಒತ್ತುವರಿ ತೆರವಿಗೆ ಒತ್ತುವರಿ ಸರ್ವೆ ಹಾಗೂ ತೆರವುಗೊಳಿಸುವ ಕಾರ್ಯ ಜಾರಿಯಲ್ಲಿರುತ್ತದೆ. ಇದುವರೆವಿಗೂ 202 ಕೆರೆಗಳ ಪೈಕಿ 162 ಕೆರೆಗಳ ಸರ್ವೆ ಕಾರ್ಯವು ಪೂರ್ಣಗೊಂಡಿದ್ದು, ಅದರಲ್ಲಿ 49 ಕೆರೆಗಳು ಒತ್ತುವರಿ ಮುಕ್ತವಾಗಿರುತ್ತದೆ. ಇನ್ನು 23 ಕೆರೆಗಳಲ್ಲಿ ಸರ್ಕಾರಿ ಒತ್ತುವರಿಯನ್ನು ಒಳಗೊಂಡಿದ್ದು, ವಲಯಗಳೊಂದಿಗೆ ಸಮನ್ವಯ ಸಾಧಿಸಿ ಒತ್ತುವರಿಗಳನ್ನು ತೆರವುಗೊಳಿಸಲು ಕ್ರಮವಹಿಸಲಾಗುತ್ತಿದೆ.

> **ಅರಣ್ಯ, ಪರಿಸರ, ಹವಾಮಾನ ವೈಪರೀತ್ಯ ನಿರ್ವಹಣೆ**

**ಒತ್ತುವರಿ ತೆರವುಗೊಳಿಸಿರುವ ವಿವರ:** ಪಾಲಿಕೆಯ 4 ವಲಯಗಳ 13 ಕೆರೆಗಳಲ್ಲಿ ಒತ್ತುವರಿ ತೆರವು ಕಾರ್ಯಾಚರಣೆಯನ್ನು ನಡೆಸಲಾಗಿದ್ದು, ಒಟ್ಟಾರೆಯಾಗಿ 242.5 ಕೋಟಿ ರೂ. ಮೌಲ್ಯದ 7 ಎಕರೆ 03 ಗುಂಟೆ ಒತ್ತುವರಿ ಪ್ರದೇಶವನ್ನು ತೆರವುಗೊಳಿಸಿ, ತಂತಿ-ಬೇಲಿಯನ್ನು ಅಳವಡಿಸಲು ಕ್ರಮಕೈಗೊಳ್ಳಲಾಗಿದೆ.

**ಮಹದೇವಪುರ ವಲಯ - (02 ಕೆರೆ):** ದೊಡ್ಡನೆಕ್ಕುಂದಿ ಕೆರೆಯ 02 ಎಕರೆ 06 ಗುಂಟೆ ಖಾಲಿ ಪ್ರದೇಶವನ್ನು ಒತ್ತುವರಿ ಮುಕ್ತಗೊಳಿಸಿ, ತಂತಿ-ಬೇಲಿಯನ್ನು ಅಳವಡಿಸಲು ಕ್ರಮಕೈಗೊಳ್ಳಲಾಗಿದೆ. ಸದರಿ ಜಾಗದ ಪ್ರಸ್ತುತ ಮಾರುಕಟ್ಟೆ ದರವು 75 ಕೋಟಿ ರೂ. ಗಳಾಗಿರುತ್ತದೆ. ವಿಭೂತಿಪುರ ಕೆರೆಯಲ್ಲಿ ಒತ್ತುವರಿಯಾಗಿದ್ದ 08 ಗುಂಟೆ ಪ್ರದೇಶವನ್ನು ತೆರವುಗೊಳಿಸಲಾಗಿದ್ದು, ತಂತಿ-ಬೇಲಿಯನ್ನು ಅಳವಡಿಸಲು ಕ್ರಮಕೈಗೊಳ್ಳಲಾಗಿದೆ.

ಸದರಿ ಜಾಗದ ಪ್ರಸ್ತುತ ಮಾರುಕಟ್ಟೆ ದರವು 8 ಕೋಟಿ ರೂ. ಗಳಾಗಿರುತ್ತದೆ

> **ಮಾರುಕಟ್ಟೆ ದರವು 80 ಕೋಟಿ ರೂ.**
>
> **ಯಲಹಂಕ ವಲಯದಲ್ಲಿ ಆವಲಹಳ್ಳಿ ಕೆರೆಯಲ್ಲಿ 2 ಗುಂಟೆ, ಯಲಹಂಕ ಕೆರೆಯಲ್ಲಿ 24 ಗುಂಟೆ, ಮೇಡಿ ಅಗ್ರಹಾರ ಕೆರೆಯಲ್ಲಿ 8 ಗುಂಟೆ, ಅಗ್ರಹಾರ ಕೆರೆಯಲ್ಲಿ 4 ಗುಂಟೆ, ಕಟ್ಟಿಗೇನಹಳ್ಳಿ ಕೆರೆಯಲ್ಲಿ 1.50 ಗುಂಟೆ, ನರಸೀಪುರ ಕೆರೆಯಲ್ಲಿ 25 ಗುಂಟೆ, ಸಿಂಗಾಪುರ ಕೆರೆಯಲ್ಲಿ 29.50 ಗುಂಟೆ ಸೇರಿ 07 ಕೆರೆಗಳಲ್ಲಿ 2 ಎಕರೆ 14 ಗುಂಟೆ ಒತ್ತುವರಿ ಪ್ರದೇಶವನ್ನು ತೆರವುಗೊಳಿಸಲಾಗಿರುತ್ತದೆ. ಸದರಿ ಜಾಗದ ಪ್ರಸ್ತುತ ಮಾರುಕಟ್ಟೆ ದರವು 80 ಕೋಟಿ ರೂ. ಗಳಾಗಿರುತ್ತದೆ.**

**ಪೂರ್ವ ವಲಯ - (01 ಕೆರೆ):** ಕಗ್ಗದಾಸಪುರ ಕೆರೆಯ 2.5 ಗುಂಟೆ ಜಮೀನಿನಲ್ಲಿದ್ದ ಶೆಡ್ ಅನ್ನು ತೆರವುಗೊಳಿಸಿ ಹಾಗೂ 22.5 ಗುಂಟೆ ಖಾಲಿ ಜಾಗಕ್ಕೆ ತಂತಿ ಬೇಲಿಯನ್ನು ಅಳವಡಿಸಲು ಕ್ರಮವಹಿಸಲಾಗಿದೆ. ಸದರಿ ಜಾಗದ ಪ್ರಸ್ತುತ ಮಾರುಕಟ್ಟೆ ದರವು 22.50 ಕೋಟಿ ರೂ. ಗಳಾಗಿರುತ್ತದೆ

**ಬೊಮ್ಮನಹಳ್ಳಿ ವಲಯ - (03 ಕೆರೆ):** ಕೋಣನಕುಂಟೆ ಕೆರೆಯ ಖಾಲಿ ಜಾಗದ 30 ಗುಂಟೆ ಜಾಗವನ್ನು ವಶಕ್ಕೆ ಪಡೆಯಲಾಗಿದ್ದು ತಂತಿ ಬೇಲಿಯನ್ನು ಅಳವಡಿಸಲಾಗಿದೆ. ಸದರಿ ಜಾಗದ ಪ್ರಸ್ತುತ ಮಾರುಕಟ್ಟೆ ದರವು 30 ಕೋಟಿ ರೂ. ಗಳಾಗಿರುತ್ತದೆ. ಅರೆಕೆರೆ ಕೆರೆಯಲ್ಲಿ ಒತ್ತುವರಿಯಾಗಿದ್ದ 12 ಗುಂಟೆ ಜಾಗವನ್ನು ವಶಕ್ಕೆ ಪಡೆಯಲಾಗಿದ್ದು, ತಂತಿ ಬೇಲಿಯನ್ನು ಅಳವಡಿಸಲಾಗಿದೆ.

ಸದರಿ ಜಾಗದ ಪ್ರಸ್ತುತ ಮಾರುಕಟ್ಟೆ ದರವು 12 ಕೋಟಿ ರೂ. ಗಳಾಗಿರುತ್ತದೆ.

ಸುಬ್ಬರಾಯನ ಕೆರೆಯ 24 ಗುಂಟೆ ಖಾಲಿ ಜಾಗವನ್ನು ಮತ್ತು 4 ಗುಂಟೆ ಶೀಟ್ ಜಾಗವು ಸೇರಿದಂತೆ ಒಟ್ಟು 28 ಗುಂಟೆ ಜಾಗವನ್ನು ವಶಕ್ಕೆ ಪಡೆಯಲಾಗಿದ್ದು, ತಂತಿ ಬೇಲಿಯನ್ನು ಅಳವಡಿಸಲಾಗಿದೆ. ಸದರಿ ಜಾಗದ ಪ್ರಸ್ತುತ ಮಾರುಕಟ್ಟೆ ದರವು 15 ಕೋಟಿ ರೂ. ಗಳಾಗಿರುತ್ತದೆ.

# ಚಂದ್ರಶೇಖರ ಶ್ರೀಗಳ ವಿರುದ್ಧದ ಕೇಸು ಹಿಂಪಡೆಯದಿದ್ದಲ್ಲಿ ಉಗ್ರ ಹೋರಾಟ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ಹಿಂದೂಗಳಿಗೆ ದೇಶದಲ್ಲಿ ಆಗುತ್ತಿರುವ ಅನ್ಯಾಯದ ವಿರುದ್ಧ ವಿಶ್ವ ಒಕ್ಕಲಿಗರ ಮಹಾಸಂಸ್ಥಾನ ಮಠದ ಶ್ರೀ ಚಂದ್ರಶೇಖರ ಸ್ವಾಮೀಜಿ ಮಾತನಾಡಿದ್ದಾರೆ.ಬಳಿಕ ತಪ್ಪಿದ್ದರೆ ಕ್ಷಮೆ ಯಾಚಿಸಿವುದಾಗಿಯೂ ತಿಳಿಸಿದ್ದರೂ ಸ್ವಾಮೀಜಿಯವರ ವಿರುದ್ಧ ಹೂಡಿರುವ ಪೊಲೀಸ್ ಮೊಕದ್ದಮೆಯನ್ನು ಹಿಂತೆಗೆದುಕೊಳ್ಳದಿದ್ದಲ್ಲಿ ಸರ್ಕಾರದ ವಿರುದ್ಧ ಉಗ್ರ ಹೋರಾಟ ಹಮ್ಮಿಕೊಳ್ಳಬೇಕಾಗುತ್ತದೆ ಎಂದು ಒಕ್ಕಲಿಗರ ಕ್ರಿಯಾ ಸಮಿತಿ ಅಧ್ಯಕ್ಷ ಕೆ ಜಿ ಕುಮಾರ್ ಎಚ್ಚರಿಕೆ ನೀಡಿದ್ದಾರೆ.

ಬೆಂಗಳೂರಿನಲ್ಲಿ ಸುದ್ದಿಗೋಷ್ಠಿ ನಡೆಸಿದ ಅವರು, ಮುಸ್ಲಿಂ ನಾಯಕರು,ಹಿಂದೂಗಳ ವಿರುದ್ಧ ಬಹಿರಂಗ ಸಭೆಗಳಲ್ಲಿ ಉದ್ರೇಕಕಾರಿ ಭಾಷಣದ ಮೂಲಕ ಒಂದು ಧರ್ಮೀಯರನ್ನು ಇನ್ನೊಂದು ಧರ್ಮದ ವಿರುದ್ಧ ಎತ್ತಿಕಟ್ಟಿ ಸಮಾಜದ ಸಾಮರಸ್ಯವನ್ನು ಹಾಳು ಮಾಡಲು ಪ್ರಯತ್ನಿಸುವವರ ವಿರುದ್ಧ ಸರ್ಕಾರ ಯಾವುದೇ ಕ್ರಮ ಕೈಗೊಳ್ಳದೆ ಓಲೈಕೆ ರಾಜಕೀಯ ಮಾಡುತ್ತಿದೆ ಎಂದು ಕಿಡಿಕಾರಿದರು. ಹಿಂದೂಗಳು ಬಹುಸಂಖ್ಯಾತರಾಗಿರುವ ಭಾರತ ದಲ್ಲಿ ಹಿಂದೂಗಳಿಗೇ ಅನ್ಯಾಯವಾಗುತ್ತಿರುವ ಬಗ್ಗೆ ಚಂದ್ರಶೇಖರ ಸ್ವಾಮೀಜಿ ಬೇಸರದಿಂದ ಕೆಲ ಮಾತುಗಳನ್ನು ಆಡಿರಬಹುದು,ತಪ್ಪಾಗಿದ್ದರೆ ಕ್ಷಮೆ ಯನ್ನೂ ಯಾಚಿಸಿದ್ದಾರೆ ಆದರೂ ಸರ್ಕಾರದ ಕುಮ್ಮಕ್ಕಿನಿಂದಾಗಿ ಪೊಲೀಸರು ಅವರ ವಿರುದ್ಧ ಎಫ್ ಐಆರ್ ದಾಖಲಿಸಿರುವುದು ಒಕ್ಕಲಿಗ ಸಮುದಾಯದ ಮೇಲೆ ಸರ್ಕಾರ ಗದಾಪ್ರಹಾರಕ್ಕೆ ಮುಂದಾಗಿದೆ ಎಂಬುದು ಅರಿವಾಗುತ್ತಿದೆ.ಮಮ್ತಾಜ್ ಅಲಿ ಖಾನ್ ನೇತೃತ್ವದ ಸಮಿತಿ ನೀಡಿರುವ ವಕ್ಫ್ ಸಂಬಂಧಿತ ವರದಿಯನ್ನು ಸರ್ಕಾರ ಕೂಡಲೇ ಜಾರಿಗೊಳಿಸಬೇಕೆಂದು ಇತಿಹಾಸ ಸಂಶೋಧನಾಕಾರ, ಮುಖಂಡ ತಲಕಾಡು ಚಿಕ್ಕರಂಗೇಗೌಡ ಹೇಳಿದ್ದಾರೆ.

ಚಂದ್ರಶೇಖರ ಸ್ವಾಮೀಜಿ ವಿರುದ್ಧ ಕೇಸು ದಾಖಲಿಸಿರುವ ಬಗ್ಗೆ ಪ್ರತಿ ಕ್ರಿಯಿಸಿರುವ ಸಚಿವ ದಿನೇಶ್ ಗುಂಡೂರಾವ್ ಇದುಕಾನೂನಾತ್ಮಕ ಪ್ರಕ್ರಿಯೆ ಅಂತಾ ಹೇಳಿದ್ದಾರೆ. ಸಂವಿಧಾನ ಬಾಹಿರ ಹೇಳಿಕೆಗಳನ್ನು ನೀಡಿರುವ ಎಲ್ಲರ ಮೇಲೂ ಕೇಸುಗಳನ್ನು ಹಾಕಬೇಕಿದೆ.

ಬಾಲಿಶ ಹೇಳಿಕೆ ನೀಡುವುದನ್ನು ಸಚಿವರು ನಿಲ್ಲಿಸಬೇಕು. ಎಂದು ಚಿಕ್ಕರಂಗೇಗೌಡ ಎಚ್ಚರಿಕೆ ನೀಡಿದ್ದಾರೆ. ಮಂಜುನಾಥರೆಡ್ಡಿ,ವೇಣುಗೋಪಾಲ್,ಅರುಣ್, ಗಿರೀಶ್,ಯಶೋಧ,ಡಾ.ರಂಗನಾಥ್ ಅವರುಗಳು ಸುದ್ದಿಗೋಷ್ಠಿಯಲ್ಲಿ ಭಾಗವಹಿಸಿದ್ದರು.

> **ಚಂದ್ರಶೇಖರ ಸ್ವಾಮೀಜಿ ವಿರುದ್ಧ ಹೂಡಿರುವ ಕೇಸನ್ನು ಕೂಡಲೇ ಹಿಂತೆಗೆದುಕೊಳ್ಳದಿದ್ದಲ್ಲಿ ಉಗ್ರ ಹೋರಾಟಕ್ಕೆ ಕರೆ ನೀಡಲಾಗುವುದು ಎಂದು ಹೇಳಿದ ಉಭಯ ನಾಯಕರು,ಸಂವಿಧಾನದಲ್ಲಿ ಒಂದೊಂದು ಧರ್ಮದವರಿಗೆ ಒಂದೊಂದು ನ್ಯಾಯನಾ ಎಂದು ಕಿಡಿಕಾರಿದರು. ತಮ್ಮ ಜನಾಂಗದ ಪರವಾಗಿ ನಿಲ್ಲುವ ಸಚಿವ ಜಮೀರ್ ಅಹ್ಮದ್ ಅವರನ್ನು ನೋಡಿ ಒಕ್ಕಲಿಗ ರಾಜಕಾರಣಿಗಳು ಕಲಿಯಬೇಕಿದೆ ಎಂದು ಹೇಳಿದರು.**

> **ಸಮಿತಿ ಅಧ್ಯಕ್ಷ ಕೆ ಜಿ ಕುಮಾರ್ ಎಚ್ಚರಿಕೆ**

# ಹತಾಶ ವ್ಯಕ್ತಿಗಳಿಂದ ದೂರವಿರಿ



**ವಿಶ್ವಾಸ್.ಡಿ.ಗೌಡ**

• ಉದಯವಾಹಿನಿ, ವಿಶೇಷ

ಸಸ್ಯಗಳಿಗೆ ಬೀಳುವ ಕೀಟಗಳಂತೆ ಜೀವನದಲ್ಲಿ ನಿರಾಶಾವಾದಿಗಳ ಗೆಳೆತನ. ನೀವು ಯಾವಾಗಲೂ ಋಣಾತ್ಮಕ ಚಿಂತನೆಗೆ ತೊಡಗಿದ್ದರೆ ನಿರಾಶಾವಾದಿಗಳಾಗುತ್ತಿದ್ದೀರಿ ಎಂದು ಭಾವಿಸಿ. ನಿರಾಶಾವಾದಿಗಳಿಗೆ ತಾವು ಎಷ್ಟು ಋಣಾತ್ಮಕ (ನೆಗೆಟಿವ್) ಎಂದು ತಿಳಿದಿರುವುದಿಲ್ಲ. ತಾವು ನಡೆಯುತ್ತಿರುವುದೇ ಸರಿ ಎಂದು ಭಾವಿಸಿರುತ್ತಾರೆ.

ಋಣಾತ್ಮಕ ಚಿಂತನೆ ನಿಮ್ಮನ್ನು ಉದ್ರೇಕಗೊಳ್ಳುವಂತೆ ಮಾಡುತ್ತದೆ. ಇದು ಮನಸ್ಸಿನ ಮೇಲೆ ಭಾರಿ ಪರಿಣಾಮ ಬೀರಿ ನಿಮ್ಮ ಚೈತನ್ಯವನ್ನು ಕುಗ್ಗಿಸುತ್ತದೆ. ಕೆಲವರು ಆಫೀಸಿಗೆ ಬರುತ್ತಿದ್ದಂತೆ ಹೇಗಪ್ಪಾ ಈ ದಿನವನ್ನು ಕಳೆಯುವುದು ಎಂದು ಗೊಣಗುತ್ತಲೇ ಬಂದರೆ ಅವರು ಅಲ್ಲಿಗೆ ಬಾರದಿರುವುದೇ ಒಳ್ಳೆಯದು. ಒಂದು ಕಾಲಕ್ಕೆ ಕೆಲಸ ಸಿಕ್ಕಿದರೆ ಸಾಕು ಎನ್ನುತ್ತಿದ್ದವರು, ಕೆಲಸ ಸಿಕ್ಕಿದ ಮೇಲೆ ಕೆಲಸದಲ್ಲಿ ಆಸಕ್ತಿ ತೋರಿಸಲು ಹಿಂಜರಿಯುತ್ತಾರೆ. ಋಣಾತ್ಮಕತೆಯಿಂದ ಆದಾಯವೂ ಕುಗ್ಗುತ್ತದೆ. ಅಂಥವರು ಕೆಲಸ ಮಾಡದೆ ಹೋಗಿ ಮೈ ಜಡವಾಗುತ್ತದೆ. ದೀರ್ಘವೇಳೆಗಳ ಕಾಲ ಅವರು ಕೆಲಸ ಮಾಡಲು ಸಾಧ್ಯವೇ ಆಗುವುದಿಲ್ಲ. ನಾವು ಎಂದೂ ಧನಾತ್ಮಕ ಚಿಂತನೆ ಮಾಡುವ ಜನಗಳೊಂದಿಗೆ ಬೆರೆಯಬೇಕು. ಅಂಥವರ ಗೆಳೆತನಕ್ಕಾಗಿ ಹಾತೊರೆಯಬೇಕು. ಸದಾ ಕೊರಗುವವರೊಡನಿದ್ದರೆ ನೀವೂ ಕೊರಗಲು ಕಲಿಯುವಿರಿ.

ಧನಾತ್ಮಕ ಜನರೊಂದಿಗಿನ ಒಡನಾಟ ಅಮೂಲ್ಯ. ಅವರೊಂದಿಗೆ ಎಷ್ಟು ವೇಳೆ ಕಳೆದರೂ ಅದು ಲಾಭವೇ.

ಸಮಾಜದಲ್ಲಿ ಎರಡು ರೀತಿಯ ಜನರಿರುತ್ತಾರೆ. ಆದುದರಿಂದ ನೆಗೆಟಿವ್ ಋಣಾತ್ಮಕ ಭಾವನೆ ಇರುವವರೊಡನೆ ಬೆರೆಯದೆ ಇರಲಾಗುವುದಿಲ್ಲ. ಅಂಥವರೊಡನೆ ಒಡನಾಟ ಕಡಿಮೆ ಇರಲಿ, ಅವರನ್ನು ನೀವು ತಿದ್ದಲೂ ಅವಕಾಶವಿದೆ. ಆದರೆ ನಿಮ್ಮ ಸಲಹೆಗಳಿಗೆ ಅವರು ಸ್ಪಂದಿಸಬೇಕು. ಗೋರ್ಕಲ್ಲ ಮೇಲೆ ಮಳೆ ಸುರಿದಂತಾಗಬಾರದು ನಮ್ಮ ಪ್ರಯತ್ನ.




ಯಶಸ್ಸಿಗಾಗಿ ಹಂಬಲಿಸುವ ನೀವು ಯಾವಾಗಲೂ ಉತ್ಸಾಹ ಮತ್ತು ಒಳ್ಳೆಯ ಭಾವನೆಗಳನ್ನು ಹೊಂದಿರಬೇಕು. ನಿರಾಶಾವಾದಿಗಳ ಬೆಂಬಲ ನಿಮಗೆ ಬೇಕಿಲ್ಲ. ಎಷ್ಟೋ ಶ್ರೀಮಂತರು ಜೀವನದಲ್ಲಿ ಉತ್ಸಾಹ ಕಳೆದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ನೆಗೆಟಿವ್ ಉತ್ತರಗಳನ್ನು ಕೊಡುವವರು ಯಾರಿಗೂ ಬೇಕಾಗುವುದಿಲ್ಲ. ಐ ವಾಂಟ್ ಪಾಸಿಟಿವ್ ಆನ್ಸರ್ ಎನ್ನುವವರನ್ನು ನೀವು ನೋಡಿಯೇ ಇದ್ದೀರಿ. ಪಾಸಿಟಿವ್ ಆಶಾವಾದಿಯ ಲಕ್ಷಣ.

**ಒಳ್ಳೆಯ ಆಲೋಚನೆಗಳನ್ನು ಮಾಡುವ ಕಲೆ:** ಬಯಕೆಯೇ ಒಳ್ಳೆಯ ಆಲೋಚನೆಗಳನ್ನು ಮೂಡಿಸುತ್ತದೆ.

ಚಿತ್ರ ತಯಾರಕ ತಾನೊಂದು ಚಿತ್ರ ತೆಗೆದು ಯಶಸ್ವಿಯಾಗುತ್ತಾನೆ ಎಂದುಕೊಳ್ಳಿ. ಅವನಿಗೆ ಇನ್ನೂ ಉತ್ತಮ ಚಿತ್ರ ತೆಗೆಯಬೇಕೆಂಬ ಭಾವನೆಯೇ ಅವನನ್ನು ಆಲೋಚನಾಪರನನ್ನಾಗಿಸುತ್ತದೆ. ಆಲೋಚನೆ ಅರ್ಥಾತ್ ಐಡಿಯಾಗಳು ನಿಮಗೆ ಅವಶ್ಯಕ. ಅವನ್ನು ನೀವು ಬಯಸಿಯೂ ಇರಬೇಕು. ಎಷ್ಟೋ ಜನ ಧೂಮಪಾನಿಗಳು, ಇಸ್ಪೀಟ್, ಜೂಜು ಆಡುವವರು, ಮದ್ಯವ್ಯಸನಿಗಳು ತುಂಬಾ ನಿಧಾನವಾಗಿ ಒಳ್ಳೆಯ ಐಡಿಯಾಗಳಿಗೆ ಆಶಿಸುತ್ತಾರೆ. ಅಂದರೆ ಅವರು ಈ ವ್ಯಸನಗಳಿಂದ ದೂರವಾಗಲು ಬಯಸುತ್ತಾರೆ ಎಂದಾಯ್ತು. ಇಂತಹವರು ಮೊದಲು ನೆಗೆಟಿವ್ ಆಗಿರುತ್ತಾರೆ. ಬೇಕಾದಷ್ಟು ಧನಾತ್ಮಕ ಆಲೋಚನೆಗಳಿದ್ದಾಗ್ಯೂ ಆ ಬಗ್ಗೆ ಇವರು ಯೋಚಿಸಿರುವುದಿಲ್ಲ. ಅವರು ದುಶ್ಚಟಗಳನ್ನು ಬಿಡಲು ಇಚ್ಚಿಸಿರುವುದಿಲ್ಲ. ಯಶಸ್ಸಿನ ಮೌಲ್ಯ ತಿಳಿಯದ ಅವರು ಜೀವನದ ವಾಸ್ತವ ಸತ್ಯಗಳನ್ನು ಎದುರಿಸಲು ಬಯಸಿರುವುದಿಲ್ಲ. ಬದಲಾವಣೆಯೇ ಅವರಿಗೆ ಬೇಡ. ಸಂಜೆಯಾಯಿತೆಂದರೆ ಕ್ಲಬ್ಬು, ಬಾರ್‌ಗಳೇ ಅವರ ಗುರಿ. ಇಂತಹವರಿಗೆ ಒಳ್ಳೆ ಐಡಿಯಾಗಳು ಬರುವ ಅವಕಾಶವೇ ಇಲ್ಲ. ನೀವು ನಿಮ್ಮ ಸಮಸ್ಯೆಗಳೇನೆಂದು ಸುಪ್ತ ಮನಸ್ಸಿನಲ್ಲಿ ಹರಿಯಬಿಟ್ಟರೆ ಆಲೋಚನೆಗಳು, ಪರಿಹಾರಗಳು ಹೊಳೆದಾವು. ಸಂಶೋಧನಾತ್ಮಕ ಹಾಗೂ ಸೃಷ್ಟಾತ್ಮಕ ಪ್ರವೃತ್ತಿ ಕೇವಲ ವರವೇ ಆಗಬೇಕಿಲ್ಲ. ಪ್ರಯತ್ನದಿಂದ ಇವೆಲ್ಲ ಸಾಧ್ಯ. ಯಶಸ್ಸು ಮೂಡಿಸುವ ಐಡಿಯಾಗಳು ಆ ದಿಶೆಯಲ್ಲಿ ಗಂಭೀರವಾಗಿ ಬುದ್ಧಿವಂತರಾಗಿ ಚಿಂತನೆ ಮಾಡುವವರಿಗೆ ಮಾತ್ರ ಲಭ್ಯ.

## ದಿನಕ್ಕೊಂದು ಮುಕ್ತಕ-39



**ಹೆಚ್.ಎಸ್.ಪ್ರತಿಮಾ ಹಾಸನ್**

**ಉದಯವಾಹಿನಿ, ವಿಶೇಷ**

ಭಾವವನು ಮೂಡಿಸುತ ಬರಹದಲಿ ಹೇಳುತಲಿ
ಮಾವಿನೆಲೆ ಚಿಗುರಿನಲಿ ಚೆಂದವಿರಲು
ಪಾವತಿಯ ಮಾಡುವರು ಹರುಷದಲಿ ಸಂತಸವ
ಪಾವನವು ಜೀವನವು ಲಕ್ಷ್ಮಿ ದೇವಿ.......

**ಭಾವಾರ್ಥ :** ಕವಿಗೆ ಭಾವನಾತ್ಮಕವಾದಂತಹ ಅಂಶಗಳು ಸಹಜವಾಗಿಯೇ ಇರುತ್ತದೆ. ಸಾಹಿತಿಕವಾಗಿ ಕಾರ್ಯದಲ್ಲಿ ತೊಡಗಿದ್ದಾಗ ಸಾಗುತ್ತಾ ಹೋಗುವ ದಾರಿಯಲ್ಲಿ ಹಲವಾರು ಪ್ರಕಾರಗಳನ್ನು ಕಲಿಯುವ ಆಸಕ್ತಿ ಹೊಂದಿ ಅದರಲ್ಲಿ ಮಿಂದು ಏಳುವುದೆಂದರೆ ಬಹಳ ಕಷ್ಟ. ನಾವು ಮಾವಿನ ಎಲೆಯ ಚಿಗುರನ್ನು ಕಂಡಾಗ ಮನಸ್ಸು ಅದರ ಚಂದ ಕಂಡು ಸಂತೋಷ ಪಡುತ್ತೇವೆ. ಹಾಗೆಯೇ ಕವಿಯು ಪ್ರತಿಯೊಂದು ಪ್ರಕಾರ ಕಲಿಯಲು ಆಸೆ ಪಡುತ್ತಾನೆ. ಪ್ರತಿಯೊಂದನ್ನು ಕಲಿಯುತ್ತ ಸಂತಸವನ್ನು ಪಾವತಿ ಮಾಡುವ ರೀತಿಯಲ್ಲಿ ಸಂತೋಷವನ್ನು ಪಡುತ್ತಾರೆ . ಎಷ್ಟೇ ಕಷ್ಟಗಳು ಬಂದರೂ ಆ ಸಂತಸದಲ್ಲಿ ಎಲ್ಲವನ್ನು ಮರೆತುಬಿಡುತ್ತಾರೆ . ಆಗ ಕವಿಯ ಜೀವನವು ಪಾವನವಾಯಿತು ಎಂಬಂತೆ ಸಂತಸ ಪಡುತ್ತಾರೆ. ಯಾವುದೇ ದೃಶ್ಯ ಕಂಡರು ಬರಹ ರೂಪ ನೀಡಿ ಖುಷಿ ಪಡುತ್ತಾರೆ.

## ಗೀತಾ ಜಯಂತಿ ಪ್ರಯುಕ್ತ ಉತ್ತರಾದಿ ಮಠದಲ್ಲಿ ಗೀತಾ ಜ್ಞಾನ ಯಜ್ಞ

• ಉದಯವಾಹಿನಿ, ಬೆಂಗಳೂರು

ಪರಮಪೂಜ್ಯ ಶ್ರೀ ಶ್ರೀ 1008 ಶ್ರೀ ಸತ್ಯಾತ್ಮತೀರ್ಥ ಶ್ರೀಪಾದಂಗಳವರ ಆದೇಶಾನುಸಾರ ಗೀತಾ ಜಯಂತಿ ಪ್ರಯುಕ್ತ ನಗರದ ಬಸವನಗುಡಿಯ ನ್ಯಾಷನಲ್ ಕಾಲೇಜಿನ ಎದುರುಗಡೆ ಇರುವ ಶ್ರೀ ದಿಗ್ವಿಜಯ ಲಕ್ಷ್ಮೀನರಸಿಂಹದೇವರ ಸನ್ನಿಧಾನ (ಉತ್ತರಾದಿ ಮಠ)ದಿಲ್ಲಿ ಡಿಸೆಂಬರ್ 2 ರಿಂದ 20ರ ವರೆಗೆ ನಾಡಿನ ಪ್ರಸಿದ್ಧ ವಿದ್ವಾಂಸರುಗಳಿಂದ ಪ್ರತಿದಿನ ಸಂಜೆ 6-30 ರಿಂದ 7-30ರ ವರೆಗೆ ಭಗವದ್ಗೀತೆಯ ಪ್ರವಚನ ಏರ್ಪಡಿಸಿದ್ದು, ಅವುಗಳ ವಿವರಗಳು ಈ ರೀತಿ ಇವೆ : ಡಿಸೆಂಬರ್ 2 ರಿಂದ 4 : ಮ||ಶಾ||ಸಂ|| ಪುರಂದರಾಚಾರ್ಯ ಹಯಗ್ರೀವ (ಅಧ್ಯಾಯ-1 ರಿಂದ 3), ಡಿಸೆಂಬರ್ 5 ರಿಂದ 8 : ಮ||ಶಾ||ಸಂ|| ಕಲ್ಲಾಪುರ ಪವಮಾನಾಚಾರ್ (ಅಧ್ಯಾಯ-4 ರಿಂದ 7), ಡಿಸೆಂಬರ್ 9 ರಿಂದ 13 : ಮ||ಶಾ||ಸಂ||ವಿದ್ಯಾಧೀಶಾಚಾರ್ಯ ಗುತ್ತಲ (ಅಧ್ಯಾಯ-8 ರಿಂದ 11), ಡಿಸೆಂಬರ್ 14 ರಿಂದ 16 : ಮ||ಶಾ||ಸಂ|| ಹನುಮಂತಾಚಾರ್ಯ ಕುಲಕರ್ಣಿ (ಅಧ್ಯಾಯ-12 ರಿಂದ 14), ಡಿಸೆಂಬರ್ 17 ರಿಂದ 20 : ಮ||ಶಾ||ಸಂ|| ವಾದಿರಾಜಾಚಾರ್ಯ ಕರಣಂ (ಅಧ್ಯಾಯ-15 ರಿಂದ 18). ಭಕ್ತಾದಿಗಳು ಈ ಎಲ್ಲಾ ದಿನಗಳಲ್ಲಿಯೂ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಹರಿ-ವಾಯು-ಗುರುಗಳ ಕೃಪೆಗೆ ಪಾತ್ರರಾಗಬೇಕೆಂದು ಕಾರ್ಯಕ್ರಮದ ನಿರ್ವಾಹಕರಾದ ಮ||ಶಾ||ಸಂ|| ಭೀಮಸೇನಾಚಾರ್ಯ ಅತನೂರು ವಿನಂತಿಸಿದ್ದಾರೆ.


ಉದಯವಾಹಿನಿ ಚಿತ್ರ

# ಫೆಂಗಲ್ ಚಂಡಮಾರುತದ ಪರಿಣಾಮ ಎಲ್ಲಾ ಅಧಿಕಾರಿಗಳು ಮುಂಜಾಗ್ರತಾ ಕ್ರಮ

## ಫೆಂಗಲ್ ಚಂಡಮಾರುತ ಪ್ರಭಾವ ಬೀರುವ ಹಿನ್ನೆಲೆಯಲ್ಲಿ ವರ್ಚ್ಯುವಲ್ ಮೂಲಕ ಅಧಿಕಾರಿಗಳ ಜೊತೆ ಸಭೆ

• ಉದಯವಾಹಿನಿ, ಬೆಂಗಳೂರು

ಫೆಂಗಲ್ ಚಂಡಮಾರುತದ ಪರಿಣಾಮ ಬೆಂಗಳೂರಿನಲ್ಲಿ ಮಳೆಯಾಗುವ ಸಾಧ್ಯತೆಯಿದ್ದು, ಎಲ್ಲಾ ರೀತಿಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲು ಮುಖ್ಯ ಆಯುಕ್ತರಾದ ಶ್ರೀ ತುಷಾರ್ ಗಿರಿ ನಾಥ್ ರವರು ಅಧಿಕಾರಿಗಳಿಗೆ ಸೂಚನೆ ನೀಡಿದರು. ನಗರದಲ್ಲಿ ಫೆಂಗಲ್ ಚಂಡಮಾರುತ ಪ್ರಭಾವ ಬೀರುವ ಹಿನ್ನೆಲೆಯಲ್ಲಿ ವರ್ಚ್ಯುವಲ್ ಮೂಲಕ ಅಧಿಕಾರಿಗಳ ಜೊತೆ ಸಭೆ ನಡೆಸಿದ ವೇಳೆ ಮಾತನಾಡಿದ ಅವರು, ಆಯಾ ವಲಯ ವ್ಯಾಪ್ತಿಯ ಎಲ್ಲಾ ನಿಯಂತ್ರಣ ಕೊಠಡಿಗಳು ಸಕ್ರಿಯವಾಗಿ ಕಾರ್ಯನಿರ್ವಹಿಸಲು ಸೂಚನೆ ನೀಡಿದರು.

ಫೆಂಗಲ್ ಚಂಡಮಾರುತದ ಪರಿಣಾಮನಗರದಲ್ಲಿ /4 ದಿನಗಳ ಕಾಲ ಮಳೆ ಬರುವ ಮುನ್ಸೂಚನೆಯಿದ್ದು, ಗಾಳಿ ಕೂಡಾ ಹೆಚ್ಚಾಗಿ ಬರುವ ಸಾಧ್ಯತೆಯಿದೆ. ಈ ನಿಟ್ಟಿನಲ್ಲಿ ಮರ ಕಟಾವು ಮಾಡುವ ಎಲ್ಲಾ 28 ತಂಡಗಳನ್ನು ಸನ್ನದ್ಧರಾಗಿರಬೇಕು. ಮರಗಳು, ಮರದ ರೆಂಬೆ-ಕೊಂಬೆಗಳು ಬಿದ್ದ ದೂರುಗಳು ಬಂದ ಕೂಡಲೆ ಸ್ಥಳಕ್ಕೆ ತೆರಳಿ ತೆರವುಗೊಳಿಸುವ ಕೆಲಸ ಮಾಡಬೇಕೆಂದು ಸೂಚನೆ ನೀಡಿದರು.


ಉದಯವಾಹಿನಿ ಚಿತ್ರ

ಆಯಾ ವಲಯ ವ್ಯಾಪ್ತಿಯಲ್ಲಿ ಪ್ರವಾಹ ಪೀಡಿತ ಪ್ರದೇಶಗಳಲ್ಲಿ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಬೇಕು. ಮಳೆ ನೀರು ನಿಲ್ಲುವ ಸ್ಥಳದಲ್ಲಿ ಯಂತ್ರೋಪಕರಣಗಳು, ಪಂಪ್‌ಗಳನ್ನು ಸಿದ್ದವಾಗಿಟ್ಟುಕೊಂಡಿರಬೇಕು. ಈ ಹಿಂದೆ ಮಳೆಯಿಂದ ಜಲಾವೃತಗೊಂಡ ಪ್ರದೇಶಗಳಲ್ಲಿ ಮುಂಜಾಗ್ರತಾ ಕ್ರಮವಾಗಿ ಮರಳು ಚೀಲಗಳನ್ನು ಇಟ್ಟಿಕೊಂಡು, ಮಳೆಯಿಂದಾಗುವ ಸಮಸ್ಯೆಗಳನ್ನು ತಪ್ಪಿಸಲು ಪರಿಹಾರ ಕ್ರಮಗಳನ್ನು ತಕ್ಷಣವೇ ಕೈಗೊಳ್ಳಬೇಕೆಂದು ಸೂಚಿಸಿದರು.

> **ಜೆಸಿಬಿಗಳ ಮೂಲಕ ಸ್ವಚ್ಛತೆ**
>
> **ಬೃಹತ್ ನೀರುಗಾಲುವೆ(ರಾಜ ಕಾಲುವೆ)ಗಳಲ್ಲಿ ಜೆಸಿಬಿಗಳ ಮೂಲಕ ಹೂಳೆತ್ತಿ ಸರಾಗವಾಗಿ ನೀರು ಹರಿದು ಹೋಗುವಂತೆ ಮಾಡಬೇಕು. ಎಲ್ಲಾ ಕಡೆ ಜೆಸಿಬಿಗಳು ಸಕ್ರಿಯವಾಗಿ ಕಾರ್ಯನಿರ್ವಹಿಸಬೇಕು. ರಸ್ತೆ ಬದಿಯ ಶೋಲ್ಡರ್ ಡ್ರೈನ್ ಗಳಿಗೆ ಸರಾಗವಾಗಿ ನೀರು ಹರಿದು ಹೋಗುವಂತೆ ಮಾಡಲು ಸೂಚಿಸಿದರು.**

**ಅಧಿಕಾರಿಗಳು ಕೇಂದ್ರ ಸ್ಥಾನದಲ್ಲೇ ಇರಬೇಕು:** ಹವಾಮಾನ ಇಲಾಖೆಯ ಮುನ್ಸೂಚನೆ ಪ್ರಕಾರ ನಗರದಲ್ಲಿ ಮಳೆಯಾಗುವ ಸಾಧ್ಯತೆಯಿರುವ ಹಿನ್ನೆಲೆಯಲ್ಲಿ ರಜಾ ದಿನವೂ ಎಲ್ಲಾ ವಲಯ ಅಧಿಕಾರಿಗಳು/ಅಭಿಯಂತರರುಗಳು ತಮ್ಮ ವಲಯ ವ್ಯಾಪ್ತಿಯಲ್ಲಿ ಹಾಜರಿದ್ದು, ಮಳೆಯಾಗುವ ಸ್ಥಳಗಳಿಗೆ ಭೇಟಿ ನೀಡಿ ಸೂಕ್ತ ಕ್ರಮಗಳನ್ನು ಕೈಗೊಳ್ಳಬೇಕು. ಆಯಾ ವಲಯದ ಹಿರಿಯ ಅಧಿಕಾರಿಗಳು ಈ ಕುರಿತು ಮೇಲ್ವಿಚಾರಣೆ ಮಾಡಲು ಸೂಚಿಸಿದರು.

ಈ ವೇಳೆ ವಿಶೇಷ ಆಯುಕ್ತರಾದ ಸುರಳ್ಕರ್ ವಿಕಾಸ್ ಕಿಶೋರ್, ಅವಿನಾಶ್ ಮೆನನ್ ರಾಜೇಂದ್ರನ್, ಡಾ. ಕೆ. ಹರೀಶ್ ಕುಮಾರ್, ವಲಯ ಆಯುಕ್ತರಾದ ವಿನೋತ್ ಪ್ರಿಯಾ, ಸತೀಶ್, ಅರ್ಚನಾ, ಗಿರೀಶ್, ಕರೀಗೌಡ, ರಮೇಶ್, ರಮ್ಯಾ, ಸ್ನೇಹಲ್, ಪ್ರಧಾನ ಅಭಿಯಂತರರು, ಮುಖ್ಯ ಅಭಿಯಂತರರು ಸೇರಿದಂತೆ ಇನ್ನಿತರೆ ಸಂಬಂಧಪಟ್ಟ ಅಧಿಕಾರಿಗಳು ಉಪಸ್ಥಿತರಿದ್ದರು.

# ಕೆಲಸ ಕಾರ್ಯಗಳಿಗೆ ಕಚೇರಿಗೆ ಸಾರ್ವಜನಿಕರು ಬಂದಾಗ ಸ್ಪಂದಿಸಿ: ಹೆಬ್ಬಾಳಕರ್

● ಘನತಾಜ್ಯ ವಿಲೇವಾರಿ ಗ್ರಾಮೀಣ ಭಾಗಗಳಲ್ಲಿ ಹಲವು ದಿನಗಳಿಂದ ತಾಂತ್ರಿಕ ಕಾರಣಗಳಿಂದ ಘನತಾಜ್ಯ ವಿಲೇವಾರಿ ಆಗುತ್ತಿಲ್ಲ

• ಉದಯವಾಹಿನಿ ಉಡುಪಿ

ಸಾರ್ವಜನಿಕರು ಸರ್ಕಾರಿ ಕಚೇರಿಗಳಿಗೆ ತಮ್ಮ ಕೆಲಸ ಕಾರ್ಯಗಳನ್ನು ಅರಿಸಿ ಬಂದಾಗ ಅಧಿಕಾರಿಗಳು ಸೂಕ್ತ ರೀತಿಯಲ್ಲಿ ಸ್ಪಂದಿಸಿ, ಚುರುಕುಗಾಗಿ ಕೆಲಸಗಳನ್ನು ಮಾಡಿಕೊಟ್ಟಲ್ಲಿ ಯಾವುದೇ ಸಮಸ್ಯೆಗಳು ಉಂಟಾಗುವುದಿಲ್ಲ ಎಂದು ಮಹಿಳಾ ಮತ್ತು ಮಕ್ಕಳ ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರೂ ಆದ ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು.

ಅನುದಾನದ ಕೊರತೆ ಇದೆ

ಉಡುಪಿ ಜಿಲ್ಲಾ ಪಂಚಾಯತ್ ವಿ.ಎಸ್. ಆಚಾರ್ಯ ಸಭಾಂಗಣದಲ್ಲಿ ನಡೆದ ತ್ರೈಮಾಸಿಕ ಕೆಡಿಪಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಪ್ರಸ್ತುತ ಸಾಲಿನಲ್ಲಿ ವಾಡಿಕೆಗಿಂಡ ಶೇಕಡ 17 ರಷ್ಟು ಹೆಚ್ಚು ಮಳೆಯಾಗಿದೆ. ಹೆಚ್ಚಿನ ಮಳೆಯಿಂದಾಗಿ ಬೆಳೆಹಾನಿ, ಮೂಲಭೂತ ಸೌಕರ್ಯಗಳಾದ ರಸ್ತೆ, ಸರ್ಕಾರಿ ಕಟ್ಟಡಗಳು, ಸೇತುವೆ ಸೇರಿದಂತೆ ಮತ್ತಿತ್ತರ ಆಸ್ತಿ ಪಾಸ್ತಿಗಳಿಗೆ ಹಾನಿವುಂಟಾಗಿದೆ. ಈ ಸಂಬಂಧ ಈಗಾಗಲೇ ಬೆಳೆಹಾನಿ, ಮಾನವನಹಾನಿಗೆ ಸೇರಿದಂತೆ ಮತ್ತಿತ್ತರ ಹಾನಿಗಳಿಗೆ ಪರಿಹಾರವನ್ನು ನೀಡಲಾಗಿದೆ ಎಂದರು. ಮೂಲಭೂತ ಸೌಕರ್ಯಗಳ ಹಾನಿಗಳ ಕಾಮಗಾರಿಗಳನ್ನು ಕೈಗೊಳ್ಳಲು ಪ್ರಕೃತಿ ವಿಕೋಪ ಅನುದಾನದ ಅಡಿಯಲ್ಲಿ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ. ಇದಕ್ಕೆ ಅನುದಾನದ ಕೊರತೆ ಇದೆ. ಈ ಬಗ್ಗೆ ಮುಂದಿನ ಅಧಿವೇಶನದ ವೇಳೆ ಮುಖ್ಯಮಂತ್ರಿಗಳ ಜಿಲ್ಲೆಯ ಶಾಸಕರೊಂದಿಗೆ ನಿಯೋಗ ಕೊಂಡೊಯ್ಯಲಾಗುವುದು. ಈ ಸಂಬಂಧ ಅನುದಾನ ಕೊಡಿಸಲು ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು ಎಂದರು.

ಉಳಿದಂತೆ, ಪಶ್ಚಿಮ ವಾಹಿನಿ ಯೋಜನೆಯಡಿ ಕರಾವಳಿ ಭಾಗದಲ್ಲಿ ಪಶ್ಚಿಮಾಭಿಮುಖವಾಗಿ ನದಿಗಳ ಸಿಹಿ ನೀರು ಹರಿದು ಸಮುದ್ರ ಸೇರುತ್ತಿದ್ದು ನೀರು ವ್ಯರ್ಥ ಆಗುತ್ತಿದೆ. ಇದನ್ನು ತಡೆಯಲು ಕಿಂಡಿ ಅಣೆಕಟ್ಟುಗಳನ್ನು ಕಳೆದ ನಾಲ್ಕೈದು ವರ್ಷಗಳಿಂದ ನಿರ್ಮಾಣ ಮಾಡಲು ಮುಂದಾಗಿದ್ದು, ಈವರೆಗೂ ಜಿಲ್ಲೆಯಲ್ಲಿ 666 ಕಿಂಡಿ ಅಣೆಕಟ್ಟುಗಳನ್ನು ನಿರ್ಮಾಣ ಮಾಡಲಾಗಿದೆ ಎಂದು ಸಚಿವರು ಹೇಳಿದರು. ಸಾಮಾನ್ಯವಾಗಿ ನವೆಂಬರ್ ತಿಂಗಳಲ್ಲಿ ಕಿಂಡಿ ಅಣೆಕಟ್ಟುಗಳಿಗೆ ಹಲಗೆ ಅಳವಡಿಸುವ ಕಾರ್ಯಗಳನ್ನು ಕೈಗೊಳ್ಳಲಾಗುತ್ತದೆ. ಈಗಾಗಲೇ ಶೇಡಕ 50ಕ್ಕೂ ಹೆಚ್ಚು ಕಿಂಡಿ ಅಣೆಕಟ್ಟುಗಳಿಗೆ ಹಲಗೆ ಅಳವಡಿಸಲಾಗಿದೆ. ಬಾಕಿ ಉಳಿದಿರುವುದಕ್ಕೆ ಡಿಸೆಂಬರ್ 20 ರೊಳಗೆ ಅಳವಡಿಸಲು ಸೂಚನೆ ನೀಡಲಾಯಿತು. ಹಾಳಾಗಿ ರುವ ಹಲಗೆಗಳನ್ನು ಬದಲಿಸಲು ದುರಸ್ತಿಗಾಗಿ ಅನುದಾನ ಸಹ ಬಿಡುಗಡೆ ಮಾಡಲಾಗಿದೆ. ಇವುಗಳನ್ನು ಸೂಕ್ತವಾಗಿ ಬಳಕೆ ಮಾಡಿಕೊಳ್ಳಲು ಸಚಿವರು ಸೂಚನೆ ನೀಡಿದರು.



ಉದಯವಾಹಿನಿ ಚಿತ್ರ

ಘನತಾಜ್ಯ ವಿಲೇವಾರಿ ಗ್ರಾಮೀಣ ಭಾಗಗಳಲ್ಲಿ ಕಳೆದ ಹಲವು ದಿನಗಳಿಂದ ತಾಂತ್ರಿಕ ಕಾರಣಗಳಿಂದ ಸರಿಯಾಗಿ ಘನತಾಜ್ಯ ವಿಲೇವಾರಿ ಆಗುತ್ತಿಲ್ಲ. ಇದನ್ನೂ ಕೂಡಲೇ ಬಗೆಹರಿಸಿ, ಜಿಲ್ಲೆಯನ್ನು ತ್ಯಾಜ್ಯ ಪ್ಲಾಸ್ಟಿಕ್ ಮುಕ್ತ ಜಿಲ್ಲೆಯನ್ನಾಗಿಸಲು ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು.

**ದೂರದೃಷ್ಟಿ ಅಭಿವೃದ್ಧಿ**

ಹೊಸ ಹಾಸ್ಟೆಲ್ ಗಳಿಗೆ ಬೇಡಿಕೆ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಪ್ರಸ್ತುತ ಸಾಲಿನಲ್ಲಿ ಉಡುಪಿ ಜಿಲ್ಲೆಗೆ ಈಗಾಗಲೇ ಹೊಸದಾಗಿ ಎರಡು ಹಾಸ್ಟೆಲ್‌ಗಳು ಮಂಜೂರಾಗಿದ್ದು, ಹೆಚ್ಚುವರಿ ಹಾಸ್ಟೆಲ್‌ಗಳನ್ನು ತೆರೆಯಲು ಸಭೆಯಲ್ಲಿ ಶಾಸಕರು ಸಚಿವರಿಗೆ ಮನವಿ ಮಾಡಿದರು.

ಕಿಂಡಿ ಅಣೆಕಟ್ಟು ನಿರ್ಮಾಣದಿಂದ ಅಂತರ್ಜಲ ವೃದ್ಧಿಯಾಗಿದೆ ಎಂಬುದರ ವೈಜ್ಞಾನಿಕ ವರದಿಯನ್ನು ನೀಡಲು ಸೂಚನೆ ನೀಡಿದ ಸಚಿವರು, ನಗರಾಭಿವೃದ್ಧಿ ಅನುದಾನ ದಲ್ಲಿ 15 ದಿನಗಳಲ್ಲಿ ಕೆರೆಗಳ ಅಭಿವೃದ್ಧಿ ಕಾಮಗಾರಿ ಕೈಗೊಳ್ಳಲು ತಿಳಿಸಿದರು. ಮೀನುಗಾರಿಕೆಗೆ ಅನುಕೂಲವಾಗುವ ಉದ್ದೇಶದಿಂದ ಹೆಜಮಾಡಿ ಮೀನುಗಾರಿಕೆ ಬಂದರಿನ ಅಭಿವೃದ್ಧಿ ಕಾಮಗಾರಿ ಶೇಕಡ 80 ರಷ್ಟು ಮುಕ್ತಾಯಗೊಂಡಿದ್ದು, ಬಾಕಿ ಉಳಿದಿರುವ ಕಾಮಗಾರಿ ಮುಕ್ತಾಯಗೊಳಿಸಲು ಸೂಚನೆ ನೀಡಿದರು. ಉಡುಪಿ ಜಿಲ್ಲೆಯ ಹಂಗಾರಕಟ್ಟೆಯಲ್ಲಿ ಕೋಸ್ಟಲ್ ಬರ್ತ್ ಅಭಿವೃದ್ಧಿ ಕಾಮಗಾರಿಗೆ ಸಂಬಂಧಿಸಿದಂತೆ ಪ್ರಸ್ತಾವನೆಯನ್ನು ಈಗಾಗಲೇ ಸಲ್ಲಿಸಲಾಗಿದ್ದು, ಈ ಕುರಿತು ಕರ್ನಾಟಕ ರಾಜ್ಯ ಕರಾವಳಿ ವಲಯ ನಿರ್ವಹಣಾ ಪ್ರಾಧಿಕಾರ ಅನುಮೋದನೆ ನೀಡಲಾಗಿದೆ. ಕಾಮಗಾರಿಗಳನ್ನು ಆದ್ಯತೆ ಮೇರೆಗೆ ಕೈಗೊಳ್ಳಲು ಆದೇಶಿಸಿದರು. ಜೊತೆಗೆ ಗಂಗೊಳ್ಳಿಯ ಕೋಸ್ಟಲ್ ಬರ್ತ್ ಅಭಿವೃದ್ಧಿ ಕಾಮಗಾರಿಗೆ ಸಂಬಂಧಿಸಿದಂತೆ ಪ್ರಸ್ತಾವನೆ ಸಲ್ಲಿಸಲಾಗಿದ್ದು, ಸಿಆರ್ ಝಡ್ ನಿರಾಕ್ಷೇಪಣೆ ಪಡೆದು ಕಾಮಗಾರಿ ಕೈಗೊಳ್ಳಲು ಸೂಚನೆ ನೀಡಿದರು. ಕರಾವಳಿ ಭಾಗದ ಮೀನುಗಾರಿಕೆ ಚಟುವಟಿಕೆಗಳನ್ನು ಅನುಕೂಲವಾಗುವಂತೆ ಮಳೆಯಿಂದ ಹಾನಿಯಾಗಿರುವ ರಸ್ತೆ, ದುರಸ್ತಿ ಕಾಮಗಾರಿಗೆ ಅನುದಾನ ಕೋರಿ ಅಧಿವೇಶನದ ವೇಳೆ ಸಿಎಂ ಭೇಟಿ ಮಾಡಲು ಸಭೆಯಲ್ಲಿ ತೀರ್ಮಾನಿಸಲಾಯಿತು.

# ಬಸವಣ್ಣ ಇತಿಹಾಸ ಅರಿಯದ ಯತ್ನಾಳ ನಾಲಿಗೆ ಹರಿಬಿಟ್ಟಿದ್ದು ಖಂಡನೀಯ

• ಉದಯವಾಹಿನಿ, ಚಿಂಚೋಳಿ

ಬಸವಣ್ಣನವರ ಇತಿಹಾಸ ಸಂಸ್ಕಾರ ಅರಿಯದ ಬಿಜಾಪುರ ನಗರ ಶಾಸಕ ಬಸವನಗೌಡ ಪಾಟೀಲ ಯತ್ನಾಳ ಬಸವಣ್ಣನವರ ಬಗ್ಗೆ ಅವಹೇಳನಕಾರಿ ನಿಂದನೆ ಮಾಡಿದ್ದು ಖಂಡನೀಯ ಎಂದು ರಾಷ್ಟ್ರೀಯ ಬಸವದಳ ಸಮಿತಿ ಅಧ್ಯಕ್ಷ ನಂದಿಕುಮಾರ ಪಾಟೀಲ ಹೇಳಿದರು.

ಪಟ್ಟಣದ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಕಾರ್ಯಾಲಯದಲ್ಲಿ ತಾಲ್ಲೂಕಾ ಬಸವಪರ ಸಂಘಟನೆಗಳ ಒಕ್ಕೂಟದಿಂದ ಕರೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು,ವಕ್ಫ್ ಆಸ್ತಿ ಕಬಳಿಕೆ ಜನಜಾಗೃತಿ ಚಳುವಳಿಯು ಬೀದರನಲ್ಲಿ ಹಮ್ಮಿಕೊಂಡ ಕಾರ್ಯಕ್ರಮದಲ್ಲಿ ಬಿಜಾಪುರ ಶಾಸಕ ಬಸವನಗೌಡ ಪಾಟೀಲ ಯತ್ನಾಳ ಮಾತನಾಡುವಾಗ ತಾಕತ್ತಿದ್ದರೆ ಚಳುವಳಿಯಲ್ಲಿ ಭಾಗವಹಿಸಿ ಇಲ್ಲಾದಿದ್ದರೆ ಬಸವಣ್ಣ ಹೆಸರು ಹೇಳಿ ಅವಹೇಳನಕಾರಿ ಶಬ್ದ ಬಳಸಿ ಆವೇಶಭರಿತವಾಗಿ ಮಾತನಾಡಿರುವುದು ಬಸವಾಭಿಮಾನಿಗಳಿಗೆ ಮಾಡಿರುವ ಅವಮಾನಕರ ಸಂಗತಿಯಾಗಿದೆ. ಲಿಂಗಾಯತ ಧರ್ಮದ ಯತ್ನಾಳರವರು ಬಸವಧರ್ಮದ ಯಾವ ತಿಳುವಳಿಕೆಯೂ ಇಲ್ಲ,ಬಸವಧರ್ಮ ಸಂಸ್ಕೃತಿ ಸಂಸ್ಕಾರ ವಿಷಯಗಳ ಬಗ್ಗೆ ಏನೊಂದೂ ಗೊತ್ತಿಲ್ಲದ ಇವರು ದೇಶಾಭಿಮಾನ ತೋರಿಸುವ ಭರದಲ್ಲಿ ಧರ್ಮಾಭಿಮಾನ ಮರೆತಿರುವುದು ಅತ್ಯಂತ ವಿಷಾದನೀಯ ಮತ್ತು ಖಂಡನೀಯವಾಗಿದೆ. ಶರಣ ಸಾಹಿತ್ಯ ಮತ್ತು ಧರ್ಮ ಸಂಸ್ಕಾರದ ಗಂಧ ಗಾಳಿಯೇ ಗೊತ್ತಿಲ್ಲದ ಬಸವನಗೌಡ ಪಾಟೀಲ ಯತ್ನಾಳ ಒಂದು ದಿನವು ತಡಮಾಡದೆ ತಕ್ಷಣವೇ ಕೂಡಲಸಂಗಮ ಗುರು ಬಸವಣ್ಣನವರ ಐಕ್ಯ ಮಂಟಪಕ್ಕೆ ಹೋಗಿ ಧರ್ಮ ಧ್ರೋಹದ ನಡತೆಗೆ ಗುರು ಬಸವಣ್ಣನವರ ಕ್ಷಮೆಯಾಚಿಸಿ ಪಶ್ಚಾತಾಪ ಪಡಬೇಕು. ಬಸವಧರ್ಮದ ಮಠ-ಪೀಠಾಧೀಶರು ಧರ್ಮ ಪ್ರಚಾರಕರು ಧರ್ಮ ಪ್ರಸಾರದ ಸಂಘ ಸಂಸ್ಥೆಗಳ ಪ್ರಮುಖರು ಒಟ್ಟಾಗಿ ಬಸವನಗೌಡ ಪಾಟೀಲ ಯತ್ನಾಳರಿಗೆ ಕೂಡಲಸಂಗಮಕ್ಕೆ ಕರೆಸಿ ಬುದ್ಧಿ ಹೇಳುವ ಕಾರ್ಯ ಮಾಡುವ ಹೊಣೆಗಾರಿಕೆ ತೋರಬೇಕು ಎಂದು ಹೇಳಿದರು.



ಉದಯವಾಹಿನಿ ಚಿತ್ರ

**ಬಸವಣ್ಣನವರ ಕ್ಷಮೆ ಕೇಳಬೇಕು**

ನಾಲಿಗೆ ಹರಿಬಿಟ್ಟು ಬಸವಣ್ಣ ಕುರಿತು ಅವಹೇಳನಕಾರಿ ಹೇಳಿಕೆ ನೀಡಿರುವ ಬಸವನಗೌಡ ಪಾಟೀಲ ಯತ್ನಾಳನವರು ಮಾಡಿದ ಧರ್ಮನಿಂಧನೆಯ ಪಶ್ಚಾತಾಪಕ್ಕಾಗಿ ಧರ್ಮಕ್ಷೇತ್ರ ಕೂಡಲಸಂಗಮದ ಐಕ್ಯ ಮಂಟಪ ದರ್ಶನ ಮಾಡಿ ಗುರು ಬಸವಣ್ಣನವರ ಕ್ಷಮೆ ಕೇಳಬೇಕು,ಇಲ್ಲಾದಿದ್ದರೆ ಮುಂದಿನ ದಿನಗಳಲ್ಲಿ ಧರ್ಮಗುರುಗಳು,ಮಹಾಸ್ವಾಮಿಗಳು ಯತ್ನಾಳ ಕ್ಷಮೆ ಕೆಳುವವರೆಗೆ ಯಾವುದೇ ಧರ್ಮಸಭೆಗಳಲ್ಲಿ ಮಠಾಮಂದಿರಗಳಿಂದ ದೂರವಿಡಬೇಕು.

ಪತ್ರಿಕಾಗೋಷ್ಠಿಯಲ್ಲಿ:- ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಅಧ್ಯಕ್ಷ ಶರಣುಪಾಟೀಲ ಮೋತಕಪಳ್ಳಿ,ಸೂರ್ಯಕಾಂತ ಹುಲಿ,ನೀಲಕಂಠ ಸೀಳಿನ,ವೀರೇಶ ಎಂಪಳ್ಳಿ,ಶಂಕರ ಶಿವಪೂರಿ,ರಮೇಶ ಜೋನ್ನಾಲ,ಅನೇಕರಿದ್ದರು.

# ಗರ್ಭಿಣಿಯರ ಸಾವು ಪ್ರಕರಣ : ಆಸ್ಪತ್ರೆಗೆ ದಾಖಲಾಗಿದ್ದ 7 ಜನರಲ್ಲಿ ಮೂವರಿಗೆ ಇಲಿ ಜ್ವರ

• ಉದಯವಾಹಿನಿ ಬಳ್ಳಾರಿ

ಇತ್ತೀಚಿಗೆ ಬಳ್ಳಾರಿಯ ಬಿಮ್ಸ್ ಆಸ್ಪತ್ರೆಗೆ ಹೆರಿಗೆಗೆ ಎಂದು ದಾಖಲಾಗಿದ್ದ ಗರ್ಭಿಣಿಯರಲ್ಲಿ ನಾಲ್ವರು ಸಾವನ್ನಪ್ಪಿದ್ದರು. ಈ ಒಂದು ಪ್ರಕರಣದ ತನಿಖೆಗೆ ರಾಜ್ಯ ಸರ್ಕಾರ ಸೂಚಿಸಿತ್ತು.

ತನಿಖೆಯಲ್ಲಿ IV ಗ್ಲೋಕೋಸ್ ನಿಂದ ಮೃತಪಟ್ಟಿರುವುದಾಗಿ ತಿಳಿದು ಬಂದಿತ್ತು. ಇದೀಗ ಮತ್ತೊಂದು ವಿಷಯ ಬಹಿರಂಗವಾಗಿದ್ದು, ಬಿಮ್ಸ್ ಆಸ್ಪತ್ರೆಗೆ ದಾಖಲಾಗಿದ್ದ ಏಳು ಜನ ಬಾಣಂತಿಯರಲ್ಲಿ ಮೂವರಿಗೆ ಇಲಿ ಜ್ವರ ಕಂಡುಬಂದಿತ್ತು ಎಂದು ತಿಳಿದು ಬಂದಿದೆ.

ಹೌದು ಬಳ್ಳಾರಿಯ ಸರ್ಕಾರಿ ಆಸ್ಪತ್ರೆಗೆ ಏಳು ಮಂದಿ ಗರ್ಭಿಣಿಯರು ದಾಖಲಾಗಿದ್ದರು. ಏಳೂ ಮಂದಿ ಗರ್ಭಿಣಿಯರಿಗೆ ನವೆಂಬರ್ 9 ರಂದು ಸಿಸೇರಿಯನ್ ಮಾಡಲಾಗಿತ್ತು. ಸಿಸೇರಿಯನ್ ಬಳಿಕ ಬಾಣಂತಿಯರ ಆರೋಗ್ಯದಲ್ಲಿ ಏರುಪೇರಾಗುತ್ತಿತ್ತು ಆರೋಗ್ಯದಲ್ಲಿನ ಏರುಪೇರಿಂದ ನಾಲ್ವರು ಬಾಣಂತಿಯರು ಮೃತಪಟ್ಟಿದ್ದಾರೆ. ಇನ್ನುಳಿದ ಮೂವರಲ್ಲಿ ಇಲಿ ಜ್ವರ ಪತ್ತೆಯಾಗಿದೆ. ಇಲಿ ಜ್ವರದಿಂದ ಇಬ್ಬರು ಗುಣಮುಖರಾಗಿದ್ದು, ಒಬ್ಬರಿಗೆ ಚಿಕಿತ್ಸೆ ಮುಂದೆವರೆದಿದೆ.





ಉದಯವಾಹಿನಿ ಚಿತ್ರ

ಬಾಣಂತಿಯರ ಸಾವಿನ ನಂತರ ಇದರಿಂದ ಎಚ್ಚೆತ್ತ ಸರ್ಕಾರ ನವೆಂಬರ್ 14 ರಂದು ತನಿಖಾ ತಂಡವನ್ನು ರಚನೆ ಮಾಡಿ ಬಳ್ಳಾರಿ ಸರ್ಕಾರಿ ಆಸ್ಪತ್ರೆಗೆ ಕಳುಹಿಸಿತ್ತು. ಬಳ್ಳಾರಿಗೆ ಬಂದ ತನಿಖಾ ತಂಡ ಜಿಲ್ಲಾ ಸರ್ಕಾರಿ ಆಸ್ಪತ್ರೆಗೆ ಭೇಟಿ ನೀಡಿ ಬಾಣಂತಿಯರ ಚಿಕಿತ್ಸಾ ವರದಿ ಪಡೆದು ಮೆಡಿಸನ್‌ಗಳ ಸ್ಯಾಂಪಲ್ ಲ್ಯಾಬ್‌ಗಳಲ್ಲಿ ಪರಿಶೀಲನೆ ಮಾಡುವ ಮೂಲಕ ಬಾಣಂತಿಯರ ಸಾವಿಗೆ ನಿಜವಾದ ಕಾರಣವನ್ನು ಪತ್ತೆ ಮಾಡಿತ್ತು.

# ತೊಗರಿ ಬೆಳೆಗಳನ್ನು ವೀಕ್ಷಿಸಿದ ಕೃಷಿ ವಿಜ್ಞಾನಿಗಳು



ಉದಯವಾಹಿನಿ ಚಿತ್ರ

• ಉದಯವಾಹಿನಿ, ಮುದ್ದೇಬಿಹಾಳ

ನಾನು 20 ಎಕರೆಯಲ್ಲಿ, ವಿವೇಕಾನಂದ ಅವರು 20 ಎಕರೆಯಲ್ಲಿ ತೊಗರಿ ಬೆಳೆದಿದ್ದೇವೆ. ಜಿಆರ್‌ಜಿ 811 ತಳಿ ಉತ್ತಮ ಎನ್ನುವುದನ್ನು ತಿಳಿದು ಢವಳಗಿ ರೈತ ಸಂಪರ್ಕ ಕೇಂದ್ರದಿಂದ ಬೀಜ ತಂದು ಬಿತ್ತಿದ್ದೇವೆ. ಈಗ ಬೆಳೆಯಲ್ಲಿ ಸಮಸ್ಯೆ ಕಂಡು ಬಂದಿದೆ. ಇದು ಹವಾಮಾನ ವೈಪರೀತ್ಯದಿಂದಾಗಿದೆಯೋ, ಬೀಜಗಳಲ್ಲಿನ ಸಮಸ್ಯೆಗಳಿಂದಾಗಿದೆಯೋ ಅನ್ನೋದು ವಿಜ್ಞಾನಿಗಳು ಹೇಳಬೇಕಿದೆ. ನಮ್ಮಂತೆ ನೂರಾರು ರೈತರು ಸಾವಿರಾರು ಎಕರೆಯಲ್ಲಿ ತೊಗರಿ ಬಿತ್ತಿ ಇಂಥದ್ದೇ ಸಮಸ್ಯೆ ಎದುರಿಸುತ್ತಿದ್ದಾರೆ. ನಮ್ಮ ಬೆಳೆ ಕಟಾವಿಗಿಂತಲೂ ಮೊದಲೇ ವಿಮೆ ಪರಿಹಾರ ಮೊತ್ತದ ಜೊತೆಗೆ ಸರ್ಕಾರವೂ ಹೆಚ್ಚಿನ ಪರಿಹಾರ ನೀಡಿ ನೊಂದ ರೈತರ ನೆರವಿಗೆ ಧಾವಿಸಬೇಕು. ಈಗಾಗಲೇ ನಾವು ಢವಳಗಿಗೆ ಹೋಗಿ ಬೆಳೆ ವಿಮೆ ಮಾಡಿಸಿರುವ ದಾಖಲೆಗಳನ್ನು ಸಲ್ಲಿಸಿದ್ದೇವೆ ಎಂದು ತಿಳಿಸಿ, ಕಲಬುರ್ಗಿ ಜಿಲ್ಲೆಯಲ್ಲಿ ಈಗಾಗಲೇ ಬೆಳೆ ವಿಮೆಯ ಪರಿಹಾರದ ಮೊತ್ತವನ್ನು ಘೋಷಿಸಿದ್ದು ನಮ್ಮ ಜಿಲ್ಲೆಯಲ್ಲೂ ತ್ವರಿತವಾಗಿ ಘೋಷಿಸಬೇಕು -ರಮೇಶ ಕರಡ್ಡಿ, ರೈತ ಸಂಘದ ಜಿಲ್ಲಾ ಗೌರವಾಧ್ಯಕ್ಷ

ತಾಲ್ಲೂಕಿನ ಇಂಗಳಗೇರಿ ಗ್ರಾಮ ವ್ಯಾಪ್ತಿಯ ರಮೇಶ ಕರಡ್ಡಿ, ವಿವೇಕಾನಂದ ವಡವಡಗಿ ಅವರ ತೊಗರಿ ಜಮೀನುಗಳಿಗೆ ಧಾರವಾಡ ಕೃಷಿ ವಿಶ್ವವಿದ್ಯಾಲಯ ಅಧೀನದಲ್ಲಿರುವ ವಿಜಯಪುರ ಕೃಷಿ ಮಹಾವಿದ್ಯಾಲಯದ ವಿಜ್ಞಾನಿಗಳ ತಂಡ ಗುರುವಾರ ಕೃಷಿ ಅಧಿಕಾರಿಗಳೊಂದಿಗೆ ಭೇಟಿ ನೀಡಿ ತೊಗರಿ ಬೆಳೆಯಲ್ಲಿನ ಸಮಸ್ಯೆ ಪರಿಶೀಲಿಸಿ ಮಾಹಿತಿ ದಾಖಲಿಸಿಕೊಂಡಿತು.

ತೊಗರಿ ಬೆಳೆಯಲ್ಲಿ ಹೂವು ಮತ್ತು ಕಾಯಿಗಳ ಬೆಳವಣಿಗೆ ಪ್ರಮಾಣ ಕಡಿಮೆಯಾಗಿದ್ದು ಸಮಸ್ಯೆಗೆ ಕಾರಣವಾಗಿದ್ದರ ಕುರಿತು ರೈತರ ದೂರು ಆಧರಿಸಿ ಭೇಟಿ ನೀಡಿದ್ದ ವಿಜ್ಞಾನಿಗಳು ಎರಡೂ ಜಮೀನುಗಳಲ್ಲಿನ ಬೆಳೆ ಪರಿಶೀಲಿಸಿ ಬೆಳೆಯ ಹೂವು, ಕಾಯಿ, ಎಲೆ ಮತ್ತಿತರ ಅಗತ್ಯ ಮಾದರಿಗಳನ್ನು ಸಂಗ್ರಹಿಸಿದರು. ಸಧ್ಯದ ಮಾಹಿತಿಯಂತೆ ಹವಾಮಾನ ವೈಪರೀತ್ಯ ಸಮಸ್ಯೆಗೆ ಕಾರಣ ಅನ್ನೋದು ಮೇಲ್ನೋಟಕ್ಕೆ ಕಂಡು ಬಂದಿದೆ. ವೈಜ್ಞಾನಿಕ ಪರಿಶೀಲನೆಯ ನಂತರ ನಿಖರ ಕಾರಣ ಗೊತ್ತಾಗಲಿದೆ. ಹೆಚ್ಚಿನ ಮಾಹಿತಿಯನ್ನು ವರದಿ ರೂಪದಲ್ಲಿ ಜಂಟಿ ಕೃಷಿ ನಿರ್ದೇಶಕರಿಗೆ ಸಲ್ಲಿಸಲಾಗುತ್ತದೆ.

ರೈತರಿಗೂ ಸಮಸ್ಯೆ ಯಾವ ಕಾರಣಕ್ಕಾಗಿ ಬಂದಿದೆ ಅನ್ನೋ ಮಾಹಿತಿ ಕೃಷಿ ಅಧಿಕಾರಿಗಳು ನೀಡುತ್ತಾರೆ ಎಂದು ವಿಜ್ಞಾನಿಗಳು ರೈತರಿಗೆ ತಿಳಿಸಿದರು. ಬೆಳೆಯ ತಳಿ, ಬೆಳೆಯನ್ನು ಬಿತ್ತುಣಿಕೆ ಮಾಡಿದ ವಿವರ, ಕಾಲಕಾಲಕ್ಕೆ ಬೆಳೆಯ ಪೋಷಣೆ, ನೀರು ಹಾಯಿಸುವಿಕೆ, ಕೀಟನಾಶಕ ಸಿಂಪಡಿಸುವಿಕೆ ಸೇರಿ ಅಗತ್ಯ ಬಿತ್ತಿದಂದಿನಿಂದ ಹಿಡಿದು ಇಂದಿನವರೆಗೂ ಬೆಳೆ ಪೋಷಣೆಯ ಮಾಹಿತಿಗಳನ್ನು ವಿಜ್ಞಾನಿಗಳು ರೈತರಿಂದ ಕೇಳಿ ತಿಳಿದುಕೊಂಡರು. ಡಾ.ಎಸ್.ಬಿ.ಜಗ್ಗೀನವರ್ ನೇತೃತ್ವದ ತಂಡದಲ್ಲಿ ವಿಜ್ಞಾನಿಗಳಾದ ಡಾ.ಎಂ.ಪಿ.ಪೋದ್ದಾರ, ಡಾ.ಚಂದ್ರಕಾಂತ ಸೋರೆಗಾಂವಿ, ಡಾ.ಬಸಮ್ಮ ಕುಂಬಾರ, ಮುದ್ದೇಬಿಹಾಳ ಸಹಾಯಕ ಕೃಷಿ ನಿರ್ದೇಶಕ ಸುರೇಶ ಭಾವಿಕಟ್ಟಿ, ಬಸವನ ಬಾಗೇವಾಡಿ ಸಹಾಯಕ ಕೃಷಿ ನಿರ್ದೇಶಕ ಎಂ.ಎಚ್.ಯರಝರಿ ಅವರು ತಂಡದಲ್ಲಿದ್ದರು.

# ಶೌಚಾಲಯ ನಿರ್ಮಾಣ ಕಾಮಗಾರಿ ಅರ್ಧಕ್ಕೆ ಸ್ಥಗಿತ: ಕ್ರಮಕ್ಕೆ ಒತ್ತಾಯಿಸಿ ಪ್ರತಿಭಟನೆ

• ಉದಯವಾಹಿನಿ ಕಲಬುರಗಿ

ಕರ್ನಾಟಕ ಗ್ರಾಮೀಣ ಮೂಲ ಸೌಕರ್ಯ ಅಭಿವೃದ್ಧಿ ನಿಗಮ (ಕೆಆರ್‌ಡಿಐಎಲ್) ಆಳಂದ ತಾಲ್ಲೂಕಿನ ನಿಂಬರ್ಗಾ ಗ್ರಾಮದಲ್ಲಿ 26 ಲಕ್ಷ ಅನುದಾನದಲ್ಲಿ ಕೈಗೆತ್ತಿಕೊಂಡಿರುವ ಸಾಮೂಹಿಕ ಮಹಿಳಾ ಶೌಚಾಲಯ ನಿರ್ಮಾಣ ಕಾಮಗಾರಿ ಅರ್ಧಕ್ಕೆ ಸ್ಥಗಿತಗೊಂಡಿದೆ.

ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿ ಸರ್ವ ಸಮಾಜ ಕಲ್ಯಾಣ ಸಮಿತಿ ನೇತೃತ್ವದಲ್ಲಿ ಗ್ರಾಮಸ್ಥರು ನಗರದ ಕೆಆರ್‌ಡಿಐಎಲ್ ಕಚೇರಿ ಎದುರು ಪ್ರತಿಭಟನೆ ನಡೆಸಿದರು. 'ಕಾಮಗಾರಿ ಬುನಾದಿ ಹಂತದಲ್ಲಿಯೇ ಸ್ಥಗಿತಗೊಂಡಿದೆ. ಕೇಳಿದರೆ ಇಂದು- ನಾಳೆ ಎಂದು ಸುಳ್ಳು ಹೇಳುತ್ತಿದ್ದಾರೆ. ಇದರಿಂದ ಗ್ರಾಮಸ್ಥರಿಗೆ ತೊಂದರೆಯಾಗಿದೆ. ಸಂಬಂಧಪಟ್ಟ ಎಂಜಿನಿಯರ್‌ಗಳನ್ನು ಅಮಾನತು ಮಾಡಬೇಕು. ಅವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು. ಗುತ್ತಿಗೆದಾರರ ಪರವಾನಗಿ ರದ್ದು ಮಾಡಬೇಕು. ಅರ್ಧಕ್ಕೆ ನಿಂತ ಕಾಮಗಾರಿಯನ್ನು ಆರಂಭಿಸಬೇಕು' ಎಂದು ಒತ್ತಾಯಿಸಿದರು.



ಉದಯವಾಹಿನಿ ಚಿತ್ರ

ಸಮಿತಿಯ ಅಧ್ಯಕ್ಷ ವಿಠಲ್ ಸಿ.ಕೋಣೆಕರ, ಪ್ರಧಾನ ಕಾರ್ಯದರ್ಶಿ ಚಂದ್ರಕಾಂತ ದುಗೊಂಡ, ಬಹುಜನ ಹೋರಾಟ ಸಮಿತಿ ಅಧ್ಯಕ್ಷ ರವಿ ಕೋರಿ, ಪರಮೇಶ್ವರ ಶಿವಗೊಂಡಗೋಳ, ಸೂರ್ಯಕಾಂತ, ರಾಮು ಗೋಡೆ, ವಿಲಾಸ ಪಿರೋಜಿ, ರಾಮು ದೇವಕರ, ಮುಕುಂದ ಬನ್ನಪಟ್ಟಿ, ವಿಠಲ ಕಟ್ಟಿಮನಿ, ಪ್ರಕಾಶ ಸರ್ವೋದಯ, ಚಂದ್ರಯ್ಯ ಮಠಪತಿ ಹಾಗೂ ಮಹಿಳೆಯರು ಪಾಲ್ಗೊಂಡಿದ್ದರು.

# ವಕ್ಫ್ ಆಸ್ತಿ: 6ರಂದು ಕಾರಟಗಿಯಲ್ಲಿ ಬಿಜೆಪಿ ಬೃಹತ್ ಹೋರಾಟ

• ಉದಯವಾಹಿನಿ, ಕೊಪ್ಪಳ

ರೈತರ, ದೇವಸ್ಥಾನಗಳ ಹಾಗೂ ಸಾರ್ವಜನಿಕರ ಆಸ್ತಿಗಳನ್ನು ವಕ್ಫ್ ಎಂದು ನಮೂದಿಸಲಾಗಿದ್ದು, ಇದರ ವಿರುದ್ಧ ರಾಜ್ಯದಾದ್ಯಂತ ಪ್ರತಿಭಟನೆ ನಡೆಸುತ್ತಿದ್ದೇವೆ. ಡಿ. 6ರಂದು ಬೆಳಿಗ್ಗೆ 11.30ಕ್ಕೆ ಕಾರಟಗಿಯಲ್ಲಿ ಬೃಹತ್ ಹೋರಾಟ ಹಮ್ಮಿಕೊಳ್ಳಲಾಗಿದೆ' ಎಂದು ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಪಿ.ರಾಜೀವ ಹೇಳಿದರು.

ಪಕ್ಷದ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ವಕ್ಫ್ ಎಂದು ನಮೂದು ಮಾಡಿದ ವಿಷಯವನ್ನು ಬಿಜೆಪಿ ಗಂಭೀರವಾಗಿ ಪರಿಗಣಿಸಿದ್ದು, ಕೇಂದ್ರ ಸರ್ಕಾರ ವಕ್ಫ್ ಕಾಯ್ದೆ ತಿದ್ದುಪಡಿ ಮಾಡಲು ಮುಂದಾಗಿದೆ. ರಾಜ್ಯ ಬಿಜೆಪಿ ರಾಜ್ಯಾದ್ಯಂತ ಮೂರು ತಂಡಗಳಾಗಿ ಹೋರಾಟ ನಡೆಸುತ್ತಿದೆ. ಕಾರಟಗಿ ಹೋರಾಟದಲ್ಲಿ ಪಕ್ಷದ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ ನೇತೃತ್ವ ವಹಿಸುವರು' ಎಂದು ತಿಳಿಸಿದರು. ವಕ್ಫ್ ಆಸ್ತಿ ವಿರುದ್ಧ ಬಿಜೆಪಿ ಸದನದ ಒಳಗೆ ಹಾಗೂ ಹೊರಗಡೆ ಎರಡೂ ಕಡೆಯು ಹೋರಾಟ ಮಾಡುತ್ತಿದೆ.



ಉದಯವಾಹಿನಿ ಚಿತ್ರ

ಎಲ್ಲರನ್ನೂ ಒಳಗೊಂಡೇ ತಂಡ ರಚಿಸಲಾಗಿದೆ. ಬಿಜೆಪಿಯಲ್ಲಿ ಯಾವುದೇ ಬಣ ರಾಜಕಾರಣಕ್ಕೆ ಅವಕಾಶವಿಲ್ಲ. ಪಕ್ಷದ ವರಿಷ್ಠರ ಆದೇಶವೇ ಅಂತಿಮವಾಗಿದ್ದು, ವಿಜಯೇಂದ್ರ ಅವರ ಮಾರ್ಗದರ್ಶನದಲ್ಲಿಯೇ ನಮ್ಮ ಹೋರಾಟ ನಡೆಯುತ್ತವೆ' ಎಂದು ತಿಳಿಸಿದರು.

ಬಿಜೆಪಿ ಜಿಲ್ಲಾಧ್ಯಕ್ಷ ನವೀನ್ ಗುಳಗಣ್ಣವರ, ಶಾಸಕರಾದ ದೊಡ್ಡನಗೌಡ ಪಾಟೀಲ್, ಜನಾರ್ದನ ರೆಡ್ಡಿ, ವಿಧಾನಪರಿಷತ್ ಸದಸ್ಯೆ ಹೇಮಲತಾ ನಾಯಕ, ಶರಣು ತಳ್ಳಿಕೇರಿ, ಹಾಲಪ್ಪ ಆಚಾರ್, ವಿಧಾನಪರಿಷತ್ ಮಾಜಿ ಸದಸ್ಯ ಅರುಣ್ ಶಹಾಪುರ, ರಾಜ್ಯ ಕಾರ್ಯಕಾರಿಣಿ ಸದಸ್ಯ ಡಾ. ಬಸವರಾಜ ಕ್ಯಾವಟರ್, ಮಾಜಿ ಶಾಸಕ ಪರಣ್ಣ ಮುನವಳ್ಳಿ ಪಾಲ್ಗೊಂಡಿದ್ದರು.

ಮುಖ್ಯಮಂತ್ರಿ ಸೂಚನೆ ಹಿನ್ನೆಲೆಯಲ್ಲಿ ರೈತರಿಗೆ ನೋಟಿಸ್ ಜಾರಿ ಮಾಡಲಾಗಿದೆ ಎಂದು ಸಚಿವ ಜಮೀರ್ ಅಹ್ಮದ್ ಹೇಳಿದ್ದಾರೆ. ಆದರೆ ಇದುವರೆಗೂ ಯಾವ ಸ್ಪಷ್ಟನೆ ನೀಡಿಲ್ಲ. ಈ ವಿಷಯದಲ್ಲಿ ಮುಖ್ಯಮಂತ್ರಿ ಸ್ಪಷ್ಟನೆ ನೀಡಬೇಕು, ಇಲ್ಲವಾದರೆ ಜಮೀರ್ ಅಹ್ಮದ್ ಸಿ.ಎಂ. ಹೆಸರು ದುರಪಯೋಗ ಮಾಡಿಕೊಂಡಿದ್ದರೆ ಅವರನ್ನು ಸಂಪುಟದಿಂದ ಕೈ ಬಿಡಬೇಕು -ಪಿ.ರಾಜೀವ

# ಅಜ್ಜಿಗೆ ಪರೋಲ್: ಮರುಗಿದ್ದ ಉಪಲೋಕಾಯುಕ್ತ

• ಉದಯವಾಹಿನಿ ಕಲಬುರಗಿ

ಇಲ್ಲಿನ ಕೇಂದ್ರ ಕಾರಾಗೃಹದಲ್ಲಿ ಶಿಕ್ಷೆ ಅನುಭವಿಸುತ್ತಿರುವ 93 ವರ್ಷದ ಅಜ್ಜಿ ನಾಗಮ್ಮ ಅವರನ್ನು ಕಾರಾಗೃಹ ಇಲಾಖೆ ಪರೋಲ್ ಮೇಲೆ ಬಿಡುಗಡೆಗೊಳಿಸಿದೆ. ಇತ್ತೀಚೆಗೆ ರಾಜ್ಯದ ಉಪಲೋಕಾಯುಕ್ತ ಬಿ.ವೀರಪ್ಪ, ಕಲಬುರಗಿ ಕೇಂದ್ರ ಕಾರಾಗೃಹದಲ್ಲಿ ಶಿಕ್ಷೆ ಅನುಭವಿಸುತ್ತಿರುವ ಅಜ್ಜಿ ನಾಗಮ್ಮ ಪರಿಸ್ಥಿತಿ ಕಂಡು ಬೇಸರ ವ್ಯಕ್ತಪಡಿಸಿದ್ದಾರೆ. ಅಲ್ಲದೇ, ಅಜ್ಜಿಗೆ ಪರೋಲ್ ನೀಡುವ ಕುರಿತು ಪರಿಶೀಲಿಸುವಂತೆ ಸಲಹೆ ನೀಡಿದ್ದರು.

ಈ ಮಧ್ಯೆ, ಕಾರಾಗೃಹದ ಮುಖ್ಯ ಅಧೀಕ್ಷಕಿ ಅನಿತಾ ಅವರು ಅಜ್ಜಿಯ ಅನಾರೋಗ್ಯ ಮತ್ತು ಇಳಿವಯಸ್ಸಿನಲ್ಲಿ ಕಾಡುತ್ತಿರುವ ವಯೋಸಹಜ ಕಾಯಿಲೆಗಳ ಕುರಿತು ಇಲಾಖೆಯ ಮೇಲಾಧಿಕಾರಿಗಳಿಗೆ ವರದಿ ನೀಡಿದರು.



ಉದಯವಾಹಿನಿ ಚಿತ್ರ

ಈ ಹಿನ್ನೆಲೆ ಯಲ್ಲಿ ಈಗ ಮೂರು ತಿಂಗಳ ಅವಧಿಗಾಗಿ ಪರೋಲ್ ನೀಡಿ ಅಜ್ಜಿಯನ್ನು ಜೈಲಿನಿಂದ ಬಿಡುಗಡೆಗೊಳಿಸಲಾಗಿದೆ ಎಂದು ಅಧೀಕ್ಷಕಿ ಅನಿತಾ ತಿಳಿಸಿದ್ದಾರೆ. 26 ವರ್ಷಗಳ ಹಿಂದೆ ನಡೆದ ಪ್ರಕರಣವೊಂ ದಕ್ಕೆ ಸಂಬಂಧಿಸಿದಂತೆ ಮೂರು ವರ್ಷಗಳ ಶಿಕ್ಷೆ ಪ್ರಕಟಿಸಲಾಗಿತ್ತು.

ಇತ್ತೀಚೆಗೆ ವಯೋಸಹಜ ಕಾಯಿಲೆಯಿಂದ ಬಳಲುತ್ತಿರುವ ಕಾರಣ ಮಾನವೀಯತೆ ದೃಷ್ಟಿಯಿಂದ ಪರೋಲ್ ಮಂಜೂರು ಮಾಡಲಾಗಿದೆ ಎಂದು ಅವರು ಹೇಳಿದ್ದಾರೆ.

# ಬಿಜೆಪಿ ವಿರುದ್ಧ ಪ್ರಿಯಾಂಕ್ ಖರ್ಗೆ ವಾಗ್ದಾಳಿ

## ಕ್ರಿಮಿನಲ್ ಕೆಲಸ ಮಾಡಿ 'ಜೈ ಶ್ರೀರಾಮ್' ಅಂದರೆ ಮುಚ್ಚಿ ಹೋಗುತ್ತಾ?

• ಉದಯವಾಹಿನಿ ಕಲಬುರ್ಗಿ

ಬಿಜೆಪಿಯವರು ಕ್ರಿಮಿನಲ್ ಕೆಲಸ ಮಾಡುತ್ತಾರೆ. ಅದಾದ ಮೇಲೆ ಜೈ ಶ್ರೀ ರಾಮ್ ಎಂದು ಘೋಷಣೆ ಕೂಗುತ್ತಾರೆ. ಇಂತಹ ಕ್ರಿಮಿನಲ್ ಕೆಲಸಗಳನ್ನು ಮಾಡಿ ಆಮೇಲೆ ಜೈ ಶ್ರೀರಾಮ್ ಎಂದು ಕೂಗಿದರೆ ಮಾಡಿರುವ ಕೆಲಸಗಳು ಮುಚ್ಚಿ ಹೋಗುತ್ತಾ? ಎಂದು ಐಟಿ ಬಿಟಿ ಸಚಿವ ಪ್ರಿಯಾಂಕ್ ಖರ್ಗೆ ಬಿಜೆಪಿ ವಿರುದ್ಧ ವಾಗ್ದಾಳಿ ನಡೆಸಿದರು.

ಮಾಡಿರುವ ಕೆಲಸಗಳು ಮುಚ್ಚಿ ಹೋಗುತ್ತಾ?

ಕಲಬುರ್ಗಿಯಲ್ಲಿ ಮಾತನಾಡಿದ ಅವರು, ಸ್ವಾಮೀಜಿ ಆದ ತಕ್ಷಣ ಕಾನೂನು ಬರಲ್ವಾ? ಆರ್. ಅಶೋಕ್ ಸ್ವಾಮೀಜಿಯವರಿಗೆ ಈ ನೆಲದ ಕಾನೂನು ಅನ್ವಯ ಆಗಲ್ವಾ? ತಮ್ಮ ಹೇಳಿಕೆಗೆ ಖುದ್ದು ಚಂದ್ರಶೇಖರನಾಥ ಸ್ವಾಮೀಜಿ ವಿಷಾದ ವ್ಯಕ್ತಪಡಿಸಿದ್ದಾರೆ.

ಕ್ರಿಮಿನಲ್ ಕೆಲಸ ಮಾಡಿದೆ ಶ್ರೀರಾಮ್ ಅಂದರೆ ಮುಚ್ಚಿ ಹೋಗುತ್ತ ಸಂವಿಧಾನ ವಿರೋಧಿ ಹೇಳಿಕೆ ನೀಡಿದರೆ ನಾವು ಸಹಿಸುವುದಿಲ್ಲ. ಸಂವಿಧಾನ ರಕ್ಷಣೆ ಮಾಡುವ ಲಕ್ಷಾಂತರ ಜನ ಬೀದಿಗೆ ಇಳಿಯುತ್ತಾರೆ. ನೇರವಾಗಿ ಸಂವಿಧಾನ ವಿರೋಧಿಸಲು ಆಗದೆ ಬಿಜೆಪಿ ಸ್ವಾಮೀಜಿಗಳನ್ನು ಬಳಸಿಕೊಳ್ಳುತ್ತಿದೆ.

ಪಕ್ಷದ ನಾಯಕರು ಕೌಂಟರ್ ನೀಡಬೇಕು ಎಂದು ರಾಹುಲ್ ಸೂಚನೆ ನೀಡಿದ್ದಾರೆ. ಸ್ವಾಮೀಜಿಗಳ ಹೇಳಿಕೆ ಇರುವುದು ಸಮರ್ಥಿಸಿಕೊಳ್ಳುತ್ತಿದ್ದಾರೆ. ನಿನ್ನೆ ನಡೆದ ಸಿಡಬ್ಲ್ಯೂಸಿ ಸಭೆಯಲ್ಲಿ ರಾಜ್ಯದ ನಾಯಕರೋಬ್ಬರಿಂದ ಈ ವಿಷಯ ಪ್ರಸ್ತಾಪವಾಗಿದೆ.

ರಾಜ್ಯ ಕಾಂಗ್ರೆಸ್ ನಾಯಕರು ಸಿಡಬ್ಲ್ಯೂಸಿ ಸಭೆಯಲ್ಲಿ ಪ್ರಸ್ತಾಪಿಸಿದರು. ಸಂವಿಧಾನದ ವಿಚಾರವಾಗಿ ಪೇಜಾವರ ಶ್ರೀ ಹೇಳಿಕೆಯನ್ನು ಪ್ರಸ್ತಾಪಿಸಿ ಚರ್ಚಿಸಲಾಗಿದೆ.



ಸಂವಿಧಾನದ ತತ್ವಗಳನ್ನು ವಿರೋಧಿಸುವ ಯಾವುದೇ ಸ್ವಾಮೀಜಿ ಆಗಿರ ಲಿ ಕಾಂಗ್ರೆಸ್ ನಾಯಕರು ಕೌಂಟರ್ ಕೊಡಬೇಕು ಎಂದು ರಾಹುಲ್ ಗಾಂಧಿ ಸೂಚನೆ ನೀಡಿದ್ದಾರೆ. ಇನ್ನು ಸಂಪುಟಪ್ಪನ ಆರನೇ ಹಾಗೂ ಸಂಪುಟ ವಿಸ್ತರಣೆ ಕುರಿತು ಪ್ರತಿಕ್ರಿಯೆ ನೀಡಿದ ಅವರು, ಸದ್ಯಕ್ಕೆ ರಾಜ್ಯದಲ್ಲಿ ಸಚಿವ ಸಂಪುಟ ವಿಸ್ತರಣೆ ಇಲ್ಲ ನನಗಿರುವ ಮಾಹಿತಿ ಪ್ರಕಾರ ಸಚಿವ ಸಂಪುಟ ವಿಸ್ತರಣೆ ಇಲ್ಲ.

ಯಾರು ಏನು ಬೇಕಾದರೂ ಹೇಳಬಹುದು ಮೇಲಿಂದ ಆಗಬೇಕು ಅಲ್ವಾ ಶಂಖದಿಂದ ಬಂದರೆ ಮಾತ್ರ ತೀರ್ಥ ಎಂದು ಪ್ರಿಯಾಂಕ್ ಖರ್ಗೆ ತಿಳಿಸಿದರು.

ಬಿಜೆಪಿ ಸ್ವಾಮೀಜಿಯವರ ಹೇಳಿಕೆ ಸಮರ್ಥನೆ ಮಾಡಿಕೊಳ್ಳುತ್ತಿದೆ. ನಮಗೆ ಬೇರೆ ಕಾನೂನು ನಿಮಗೆ ಬೇರೆ ಕಾನೂನ ಬಸವಣ್ಣವರನ್ನು ಬಿಜೆಪಿ ಶಾಸಕ ಬಸವನಗೌಡ ಪಾಟೀಲ್ ಯತ್ನಾಳ ಹೇಡಿ ಅಂತಾರೆ. ಇದಕ್ಕೆ ಬಿಜೆಪಿಯವರು ಏನು ಹೇಳುತ್ತಾರೆ? ರಾಜ್ಯ ಬಿಜೆಪಿ ಘಟಕದ ಅಧ್ಯಕ್ಷ ಬಿ ವೈ ವಿಜಯೇಂದ್ರ ಎಲ್ಲಿದ್ದಾರೆ ಬಸವಣ್ಣ ಅಂದರೆ ನಿಮಗೆ ಅಲರ್ಜಿನ ಎಂದು ಪ್ರಿಯಾಂಕ್ ಖರ್ಗೆ ವಾಗ್ದಾಳಿ ನಡೆಸಿದರು -ಪ್ರಿಯಾಂಕ್ ಖರ್ಗೆ

# ಅಂಗೈಯಲ್ಲಿರುವ ಮೊಬೈಲ್ ದೊಡ್ಡ ಶತ್ರು: ವಿದ್ಯಾರ್ಥಿಗಳಿಗೆ ಕಿವಿಮಾತು

• ಉದಯವಾಹಿನಿ ಸಿಂಧನೂರು

ರಾಜರ ಕಾಲದಿಂದಲೂ ರಂಗಭೂಮಿಗೆ ಇತಿಹಾಸವಿದೆ. ಸ್ವಾತಂತ್ರ್ಯ ಪೂರ್ವ ಕಾಲದಲ್ಲಿ ಯಾರು ಕೂಡ ಬ್ರಿಟಿಷರ ವಿರುದ್ಧ ಭಾಷಣ ಮಾಡುವಂತಿರಲಿಲ್ಲ. ಅಕಸ್ಮಾತ್ ಮಾಡಿದರೆ, ಅವರನ್ನ ಅರೆಸ್ಟ್ ಮಾಡಿಸುತ್ತಿದ್ದರು.

ಇಂತಹ ಸಂದಿಗ್ಧ ಸ್ಥಿತಿಯಲ್ಲಿ ರಂಗಭೂಮಿ ಚಳುವಳಿ ಸ್ವರೂಪ ಪಡೆದುಕೊಂಡು ಸಮಾಜವನ್ನು ತಿದ್ದುವಂತಹ ಕೆಲಸ ಆಗಿನ ಕಾಲದಲ್ಲಿ ರಂಗಭೂಮಿ ಮಾಡಿದೆ ಎಂದು ಹಿರಿಯ ಪತ್ರಕರ್ತರಾದ ಶರಣು ಪಾ ಹಿರೇಮಠ ಹೇಳಿದರು.

ನಗರದ ವಿಜಡಮ್ ಕಾಲೇಜಿನಲ್ಲಿ ಜಿಲ್ಲಾ ಮತ್ತು ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಂಡ 2024-25 ನೇ ಸಾಲಿನ ದತ್ತಿ ಉಪನ್ಯಾಸ, ಕವಿಗೋಷ್ಠಿ, ಹಾಗೂ ರಂಗಗೀತೆಗಳ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ವಿದ್ಯಾರ್ಥಿಗಳು ಪಠ್ಯ ಪಾಠದ ಜೊತೆಗೆ ಇತರೆ ಸಾಮಾಜಿಕ ಚಟುವಟಿಕೆ ಕಾರ್ಯಕ್ರಮಗಳಲ್ಲಿ ತೊಡಗಿಸಿಕೊಂಡು ಸಮಾಜದಲ್ಲಿ ಉತ್ತಮ ಪ್ರಜೆಗಳಾಗಬೇಕೆಂದು ಸಲಹೆ ನೀಡಿದರು.

ನಿವೃತ್ತ ಪ್ರಾಂಶುಪಾಲ್ ವೀರನಗೌಡ ಗುಮಗೇರಿ ಮಾತನಾಡಿ, ರಿಟೇಕ್ ಬಳಸದೆ ಪಾತ್ರದಾರಿಗಳು ನಾಟಕದಲ್ಲಿ ಅಭಿನಯಿಸುತ್ತಾರೆ. ಆದರೆ ಸಿನಿಮಾ, ಧಾರಾವಾಹಿಯಲ್ಲಿ ರಿಟೇಕ್ ಬಳಸುತ್ತಾರೆ. ಇದೆ ರಂಗಭೂಮಿಗೂ, ಮತ್ತು ಸಿನಿಮಾ ದಾರಾವಾಹಿಗಳಿಗೆ ಇರುವ ವ್ಯತ್ಯಾಸ, ಡಾ.ರಾಜಕುಮಾರ, ಕಲ್ಪನಾ, ವಜ್ರಮುನಿ, ಶಂಕರನಾಗ್, ಅನಂತನಾಗ್, ಹೀಗೆ ಅನೇಕ ಹಿರಿಯ ನಟರು ರಂಗಭೂಮಿ ನೆಲೆಯಿಂದ ಬಂದವರು, ಗುಬ್ಬಿ ವೀರಣ್ಣ ನಾಟಕ ಕಂಪನಿ, ಚಿಂದೋಡಿ ಲೀಲಾ ನಾಟಕ ಕಂಪನಿ, ಸಿಂಧನೂರಿನಲ್ಲಿ ಅಮರೇಶ್ವರ ನಾಟಕ ಕಂಪನಿ ಇತ್ತು. ಈ ನಾಟಕ ಕಂಪನಿ ಮೃಢದೇವರ ನೇತೃತ್ವದಲ್ಲಿ ಶಿವಮೊಗ್ಗ, ಮೈಸೂರು, ಬೆಂಗಳೂರಿನಲ್ಲಿ ಪ್ರದರ್ಶನ ಮಾಡಿ ಸಹಬ್ಬಾಸ್ ಗಿರಿ ಪಡೆಯುತಿತ್ತು.



ಉದಯವಾಹಿನಿ ಚಿತ್ರ

ರಾಜರ ಕಾಲದಿಂದಲೂ ರಂಗಭೂಮಿಗೆ ಇತಿಹಾಸವಿದೆ

ಮೃಢದೇವರು ಜನಿಸಿದ್ದು 1922, ಮೃತರಾಗಿದ್ದು 1967 ಅವರು ಪದ್ಮಭೂಷಣ ಡಾ.ರಾಜಕುಮಾರ ಅವರಿಂದ ಬೆನ್ನುತಟ್ಟಿಸಿಕೊಂಡ ಕಲಾವಿದರು, ಅನೇಕ ನಾಟಕದ ಕತೆ ಬರೆಯುವವರು ಅವರನ್ನ ಮನಸ್ಸಿನಲ್ಲಿಟ್ಟುಕೊಂಡು ನಾಟಕ ಬರೆಯುತ್ತಿದ್ದರೆಂದು ರಂಗಭೂಮಿ ಹಾಗೂ ವೃತ್ತಿ ರಂಗಭೂಮಿಗೆ ರಂಗನಟ ಮೃಡದೇವ ಗವಾಯಿಗಳವರ ಕೊಡುಗೆ ಕುರಿತು ಉಪನ್ಯಾಸ ನೀಡಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ ತಾಲ್ಲೂಕು ಕಸಾಪ ಅಧ್ಯಕ್ಷ ಪಂಪಯ್ಯಸ್ವಾಮಿ ಸಾಲಿಮಠ ಪ್ರಾಸ್ತಾವಿಕವಾಗಿ ಮಾತನಾಡಿದರು.

ಕಲಾವಿದರಾದ ಹನುಮೇಶ ಬೇರ್ಗಿ, ಮ್ಯಾದಾರಹಾಳದ ಸಣ್ಣಹನುಮನಗೌಡ ದೇವರಮನಿ, ಮಲ್ಲಪ್ಪ ಪೂಜಾರಿ ಹಸ್ಮಕಲ್, ಭಕ್ಷಿ ಧರವೇಶ್ ರಂಗಗೀತೆಗಳನ್ನ ಹಾಗೂ ತತ್ವಪದದ ಹಾಡುಗಳನ್ನು ಹಾಡಿದರೆ, ರಂಗಭೂಮಿ ಹಿರಿಯ ಕಲಾವಿದರಾದ ಇಸ್ಮಾಯಿಲ್ ಸಾಬ್ ಈ ಇಳಿ ವಯಸ್ಸಿನಲ್ಲಿ ಶಕುನಿ ಪಾತ್ರದ ಡೈಲಾಗ್‌ಗಳನ್ನು ಹೇಳಿ ವಿದ್ಯಾರ್ಥಿಗಳಿಗೆ ಹಾಗೂ ವೇದಿಕೆ ಮೇಲಿದ್ದ ಗಣ್ಯರಿಗೆ ಮನರಂಜಿಸಿದರು.

ಈ ವೇಳೆ ದಿ.ಚಂದ್ರಶೇಖರಪ್ಪಗೌಡ, ನೆಟೆಕಲ್ಲ ಗೊರೇಬಾಳ ದತ್ತಿ, ದಿ.ಚಂದ್ರಗೌಡ ಶರಣೇಗೌಡ ಗೊರೇಬಾಳ ದತ್ತಿ, ಲಿಂ.ಮರಿಸ್ವಾಮಿ ಕೆ.ಹೊಸಳ್ಳಿ ದತ್ತಿ, ಲಿಂ.ಬಸವರಾಜ ಬಿ.ದತ್ತಿ, ಮನ್ಮಥರೆಡ್ಡಿಗೌಡ ಪೊಲೀಸ್ ಪಾಟೀಲ್ ದತ್ತಿ, ಹೆಸರಿನಲ್ಲಿ ಗುರಪ್ಪ ಬಸಪ್ಪ ಹೇಮವಾಡಿಗಿ, ಎನ್.ಶಿವನಗೌಡ ಗೊರೇಬಾಳ, ಲಿಂ.ಬಸಮ್ಮ ಮರಿಸ್ವಾಮಿ, ಅಮರಯ್ಯಸ್ವಾಮಿ ಬಿ ಕೋಟೆ, ಸರ್ವತ್ತೋಮರೆಡ್ಡಿ ಪೊಲೀಸ್ ಪಾಟೀಲ್, ದತ್ತಿ ದಾನಿಗಳಾಗಿದ್ದಾರೆ. ವಿಜಡಮ್ ಕಾಲೇಜಿನ ಆರ್.ಅನೀಲಕುಮಾರ್, ಶರೀಫ್ ಹಸ್ಮಕಲ್, ಚಿದಾನಂದಪ್ಪ ಗೊರೇಬಾಳ, ಉಮೇಶ ಅರಳಹಳ್ಳಿ, ಬಸವರಾಜ ಮೋತಿ, ಸೇರಿದಂತೆ ಕಾಲೇಜಿನ ಶಿಕ್ಷಕರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಉದಯವಾಹಿನಿ
ಪ್ರಾದೇಶಿಕ
ಭಾನುವಾರ 01 ಡಿಸೆಂಬರ್ 2024



# ಮಿನಿ ನ್ಯೂಸ್

## ಹಾಡ ಹಗಲೇ ವ್ಯಕ್ತಿಯೊಬ್ಬನ ಬರ್ಬರ ಹತ್ಯೆ: ಬೆಚ್ಚಿ ಬಿದ್ದ ಜನತೆ

• ಉದಯವಾಹಿನಿ, ಶಿವಮೊಗ್ಗ

ಜಿಲ್ಲೆಯ ಜನರು ಬೆಚ್ಚಿ ಬೀಳುವಂತೆ ವ್ಯಕ್ತಿಯೊಬ್ಬನನ್ನು ಹಾಡ ಹಗಲೇ ಬರ್ಬರವಾಗಿ ಕೊಚ್ಚಿ ಕೊಲೆ ಮಾಡಲಾಗಿದೆ. ಮಾರಕಾಸ್ತ್ರಗಳಿಂದ ಹಾಡ ಹಗಲೇ ನಡೆದಂತ ಭೀಕರ ಮರ್ಡರ್ ನಿಂದ ಶಿವಮೊಗ್ಗ ಜನತೆ ಬೆಚ್ಚಿ ಬಿದ್ದಿದ್ದಾರೆ. ಶಿವಮೊಗ್ಗದ ಬೊಮ್ಮನಕಟ್ಟೆ ಬಡಾವಣೆಯಲ್ಲಿ ವ್ಯಕ್ತಿಯೊಬ್ಬನ ಬರ್ಬರ ಹತ್ಯೆ ಮಾಡಲಾಗಿದೆ. ಮೃತ ವ್ಯಕ್ತಿಯನ್ನು ರಾಜೇಶ್ ಶೆಟ್ಟಿ ಎಂಬುದಾಗಿ ಗುರುತಿಸಲಾಗಿದೆ. ಈ ಹತ್ಯೆಯಯನ್ನು ಹಳೆಯ ವೈಷಮ್ಯ, ದ್ವೇಷದ ಕಾರಣ ಮಾಡಲಾಗಿದೆ ಎಂಬುದಾಗಿ ಪೊಲೀಸರು ಶಂಕೆ ವ್ಯಕ್ತ ಪಡಿಸಿದ್ದಾರೆ. ಹಾಡ ಹಗಲೇ ಬೊಮ್ಮನಕಟ್ಟೆ ಬಡವಾಣೆಯಲ್ಲಿದ್ದಂತ ರಾಜೇಶ್ ಶೆಟ್ಟಿ ಮೇಲೆ ಯುವಕರ ಗುಂಪೊಂದು ಮಾರಕಾಸ್ತ್ರಗಳಿಂದ ದಾಳಿ ನಡೆಸಿ, ಬರ್ಬರವಾಗಿ ಕೊಚ್ಚಿ ಕೊಲೆಗೈದು ಪರಾರಿಯಾಗಿದೆ ಎಂಬುದಾಗಿ ಸ್ಥಳೀಯರು ಹೇಳಿದ್ದಾರೆ. ಇನ್ನೂ ಈ ವಿಷಯ ತಿಳಿದು ಸ್ಥಳಕ್ಕೆ ವಿನೋಬನಗರ ಠಾಣೆಯ ಪೊಲೀಸರು ದೌಡಾಯಿಸಿ, ಪರಿಶೀಲಿಸಿ, ಮೃತ ದೇಹವನ್ನು ಮೆಮ್ಗಾನ್ ಆಸ್ಪತ್ರೆಗೆ ಕಳುಹಿಸಿದ್ದಾರೆ. ಈ ಸಂಬಂಧ ಹೆಚ್ಚಿನ ಮಾಹಿತಿಯನ್ನು ನಿರೀಕ್ಷಿಸಲಾಗಿದೆ.

## ಯುವಕನ ಎದೆಗೆ ಚಾಕು ಇರಿದು ಬರ್ಬರ ಹತ್ಯೆ: ಐವರ ಮೇಲೆ ಶಂಕೆ

• ಉದಯವಾಹಿನಿ ಬೆಳಗಾವಿ

ಹಾಡಹಗಲೇ ಯುವಕನೊಬ್ಬನಿಗೆ ಚಾಕು ಇರಿದು ಬರ್ಬರವಾಗಿ ಹತ್ಯೆಗೈದ ಘಟನೆ ಸವದತ್ತಿ ತಾಲ್ಲೂಕಿನ ಮುರಗೋಡ ಗ್ರಾಮದ ಹೊರವಲಯದಲ್ಲಿ ನಡೆದಿದೆ. ಹತ್ಯೆಯಾದ ಯುವಕನನ್ನು ಸೋಹಿಲ್ ಅಹ್ಮದ್ ಕಿತ್ತೂರು (17) ಎಂದು ಗುರುತಿಸಲಾಗಿದೆ.

ಯುವಕ ಗ್ರಾಮದಲ್ಲಿ ಎಗ್‌ರೈಸ್ ಅಂಗಡಿ ಇಟ್ಟುಕೊಂಡಿದ್ದ. ಆತನನ್ನು ಐವರು ಯುವಕರು ಹತ್ಯೆಗೈದಿದ್ದಾರೆ ಎಂದು ಶಂಕಿಸಲಾಗಿದೆ.ಈ ಹಿಂದೆ ಕೆಲವು ಯುವಕರಿಂದ ಮೃತನಿಗೆ ಕೊಲೆ ಬೆದರಿಕೆ ಬಂದಿತ್ತು ಎಂದು ತಿಳಿದು ಬಂದಿದೆ. ಸ್ಥಳಕ್ಕೆ ಮುರಗೋಡು ಪೊಲೀಸರು, ಶ್ವಾನದಳ, ಬೆರಳಚ್ಚು ತಜ್ಞರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.ಯುವಕನ ಹತ್ಯೆ ಖಂಡಿಸಿ ಮುರಗೋಡ ಪೊಲೀಸ್ ಠಾಣೆ ಮುಂದೆ ಯುವಕನ ಕುಟುಂಬಸ್ಥರು ಹಾಗೂ ಗ್ರಾಮಸ್ಥರು ಪ್ರತಿಭಟನೆ ನಡೆಸಿದ್ದಾರೆ. ಸ್ಥಳದಲ್ಲಿ ಬಿಗುವಿನ ವಾತಾವರಣ ನಿರ್ಮಾಣವಾಗಿದೆ.

## ಬಾಣಂತಿಯರ ಸಾವು ಪ್ರಕರಣ: ಜಿಲ್ಲಾ ಔಷಧ ಉಗ್ರಾಣದ ಮೇಲೆ ಲೋಕಾ ದಾಳಿ

• ಉದಯವಾಹಿನಿ ಬೆಳಗಾವಿ

ಬಳ್ಳಾರಿಯಲ್ಲಿ ಬಾಣಂತಿಯರ ಸಾವಿಗೆ ಆರ್‌ಎಲ್‌ಎಸ್ ಐವಿ ಗ್ಲೂಕೋಸ್ ಕಾರಣ ಎನ್ನಲಾದ ವಿಚಾರಕ್ಕೆ ಸಂಬಂಧಿಸಿದಂತೆ ಬಿಮ್ಸ್ ಆಸ್ಪತ್ರೆಯ ಆವರಣದಲ್ಲಿರುವ ಜಿಲ್ಲಾ ಔಷಧ ಉಗ್ರಾಣದ ಮೇಲೆ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿದ್ದಾರೆ.ಲೋಕಾಯುಕ್ತ ದಾಳಿ ವೇಳೆ ಹತ್ತಾರು ಬಾಕ್ಸ್‌ಗಳಲ್ಲಿ ಆರ್‌ಎಲ್‌ಎಸ್ ಐವಿ ಗ್ಲೂಕೋಸ್ ಪತ್ತೆಯಾಗಿದೆ. ಪಿಬಿಪಿ ಸಂಸ್ಥೆ ಸರಬರಾಜು ಮಾಡಿರುವ ಐವಿ ಗ್ಲುಕೋಸ್ ಬಾಕ್ಸ್‌ಗಳು ಇದಾಗಿದೆ. ಹೆಚ್ಚಿನ ಪ್ರಮಾಣದಲ್ಲಿ ಶೇಖರಿಸಿ ಇಟ್ಟಿದ್ದ ಬಾಕ್ಸ್‌ಗಳನ್ನು ಕಂಡು ಅಧಿಕಾರಿಗಳು ಶಾಕ್ ಆಗಿದ್ದಾರೆ.

ಏಪ್ರಿಲ್ ತಿಂಗಳಿಂದ ಬೆಳಗಾವಿ ಜಿಲ್ಲೆಯಾದ್ಯಂತ ಆರೆಲ್‌ಎಸ್ ಐವಿ ಗ್ಲೂಕೋಸ್ ಸರಬರಾಜಾಗಿದೆ. ಒಂದು ಗಂಟೆಗೂ ಹೆಚ್ಚಿನ ಸಮಯದಿಂದ ಅಧಿಕಾರಿಗಳು ಪರಿಶೀಲನೆ ನಡೆಸುತ್ತಿದ್ದಾರೆ. ಉಗ್ರಾಣದ ಅಧಿಕಾರಿಗಳಿಂದ ಎಲ್ಲೆಲ್ಲಿ ಐವಿ ಗ್ಲೂಕೋಸ್ ಪೂರೈಕೆಯಾಗಿದೆ ಎಂಬ ಬಗ್ಗೆ ಮಾಹಿತಿ ಕಲೆ ಹಾಕಲಾಗುತ್ತಿದೆ. ಈ ವೇಳೆ ಜಿಲ್ಲಾಸ್ಪತ್ರೆ, ತಾಲ್ಲೂಕು ಆಸ್ಪತ್ರೆ, ಸಮುದಾಯ ಆರೋಗ್ಯ, ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಪೂರೈಕೆ ಮಾಡಿರುವ ಬಗ್ಗೆ ಮಾಹಿತಿ ಪಡೆಯುತ್ತಿದ್ದಾರೆ. ಬೆಳಗಾವಿ ಲೋಕಾಯುಕ್ತ ಎಸ್ಪಿ ಹನುಮಂತರಾಯ ನೇತೃತ್ವದಲ್ಲಿ ದಾಳಿ ನಡೆದಿದ್ದು, 8 ಜನ ಅಧಿಕಾರಿಗಳಿಂದ ಪರಿಶೀಲನೆ ಮುಂದುವರೆದಿದೆ.

## ಕಾಡಾನೆ ದಾಳಿಗೆ ರೈತ ಬಲಿ

• ಉದಯವಾಹಿನಿ ಚಿಕ್ಕಮಗಳೂರು

ಮಲೆನಾಡು ಭಾಗಗಳಲ್ಲಿ ಕಾಡಾನೆಗಳ ಹಾವಳಿ ಇಷ್ಟು ದಿನ ತಣ್ಣಗಾಗಿತ್ತು. ಇದೀಗ ಕಾಡಾನೆ ದಾಳಿಯಿಂದ ರೈತನೊಬ್ಬ ದಾರುಣವಾಗಿ ಸಾವನ್ನಪ್ಪಿರುವ ಘಟನೆ ಚಿಕ್ಕಮಂಗಳೂರು ಜಿಲ್ಲೆಯ ಕೊಪ್ಪ ತಾಲ್ಲೂಕಿನ ಸೀತೂರು ಗ್ರಾಮ ಪಂಚಾಯಿತಿ ಬಳಿ ನಡೆದಿದೆ. ಹೌದು ಚಿಕ್ಕಮಂಗಳೂರು ಜಿಲ್ಲೆಯ ಕೊಪ್ಪ ತಾಲೂಕಿನ ಸೀತೂರು ಗ್ರಾಮ ಪಂಚಾಯತಿಯ ಕಚೇರಿ ಬಳಿ ಈ ಒಂದು ಘಟನೆ ನಡೆದಿದ್ದು ಗ್ರಾಮ ಪಂಚಾಯಿತಿ ಬಳಿ ಕಾಡಾನೆ ದಾಳಿಯಿಂದ ರೈತ ಸಾವನ್ನಪ್ಪಿದ್ದಾನೆ. ಕೆರೆಗದ್ದೆ ಗ್ರಾಮದ ನಿವಾಸಿ ಉಮೇಶ್ (55) ಸಾವನ್ನಪ್ಪಿದ್ದಾರೆ.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಸಾಯಂಕಾಲ | 04:30 ರಿಂದ 06:00 |
| ಗುಳಿಕ ಕಾಲ | ಮಧ್ಯಾಹ್ನ | 03:00 ರಿಂದ 04:30 |
| ಯಮಗಂಡ ಕಾಲ | ಮಧ್ಯಾಹ್ನ | 12:00 ರಿಂದ 01:30 |

**ಮೇಷ** ಇಂದು ನಿಮ್ಮ ವ್ಯಕ್ತಿತ್ವ ಒಂದು ಸುಗಂಧದಂತೆ ಕೆಲಸ ಮಾಡುತ್ತದೆ. ಇಂದು ಸುಮ್ಮನೆ ಕುಳಿತುಕೊಳ್ಳುವ ಬದಲು -ಏಕೆ ಏನನ್ನಾದರೂ ಮಾಡಬಾರದು ? ಇದು ನಿಮ್ಮ ಗಳಿಕೆಯ ಶಕ್ತಿಯನ್ನು ಸುಧಾರಿಸುತ್ತದೆ.

**ವೃಷಭ** ಹಾಸ್ಯಪ್ರಜ್ಞೆಯಿರುವ ಸಂಬಂಧಿಕರ ಸಂಗ ನಿಮ್ಮ ಉದ್ವೇಗವನ್ನು ಕಡಿಮೆ ಮಾಡುತ್ತದೆ. ನಿಮಗೆ ತುಂಬಾ ಅಗತ್ಯವಾಗಿರುವ ಶಮನವನ್ನು ನೀಡುತ್ತದೆ. ಈ ರೀತಿಯ ಸಂಬಂಧಿಗಳನ್ನು ಹೊಂದಿದ ನೀವೇ ಅದೃಷ್ಟವಂತರು.

**ಮಿಥುನ** ನಿಮ್ಮ ಒರಟು ವರ್ತನೆ ನಿಮ್ಮ ಪತ್ನಿಯೊಂದಿಗಿನ ಸಂಬಂಧವನ್ನು ಹಾಳು ಮಾಡಬಹುದು. ಏನಾದರೂ ಬಾಲಿಶವಾದದ್ದನ್ನು ಮಾಡುವ ಮೊದಲು ನಿಮ್ಮ ವರ್ತನೆಯ ಪರಿಣಾಮದ ಬಗ್ಗೆ ಆಲೋಚಿಸಿ.

**ಕರ್ಕಾಟಕ** ಇಂದು ಪ್ರೇಮನಿವೇದನೆ ತಿರುಗೇಟು ನೀಡಬಹುದಾದ್ದರಿಂದ ನಿಮ್ಮ ಸೋಲುಗಳಿಂದ ನೀವು ಪಾಠ ಕಲಿಯಬೇಕು ನೀವು ಸಹಾಯಕ್ಕಾಗಿ ನಿಮ್ಮ ಬಳಿ ಬರುವ ಜನರಿಗೆ ಬದ್ಧತೆ ನೀಡುತ್ತೀರಿ.

**ಸಿಂಹ** ಆರೋಗ್ಯ ಪರಿಪೂರ್ಣವಾಗಿರುತ್ತದೆ. ನಿಮ್ಮ ವೆಚ್ಚಗಳನ್ನು ನಿಯಂತ್ರಿಸಲು ಪ್ರಯತ್ನಿಸಿ ಮತ್ತು ಇಂದು ತುಂಬಾ ಖರ್ಚು ಮಾಡಬೇಡಿ. ಸಂಬಂಧಗಳೊಂದಿಗಿನ ಸಂಬಂಧಗಳು ಹಾಗೂ ಬಂಧಗಳ ನವೀಕರಣದ ಒಂದು ದಿನ.

**ಕನ್ಯಾ** ನಿಮ್ಮ ಕುಟುಂಬದ ಸದಸ್ಯರು ಕಡ್ಡಿಯನ್ನು ಗುಡ್ಡ ಮಾಡುವ ಸಾಧ್ಯತೆಯಿದೆ. ನಿಮ್ಮ ಮನದನ್ನೆಯ ವಿಚಿತ್ರ ನಡವಳಿಕೆ ನಿಮ್ಮ ಮನಸ್ಥಿತಿಗೆ ಅಸಮಾಧಾನ ತರಬಹುದು. ವಿದ್ಯಾರ್ಥಿಗಳಲ್ಲಿ ಇಂದು ಪ್ರೀತಿಯ ಜ್ವರವಾಗಬಹುದು.

**ತುಲಾ** ನಿಮ್ಮ ಮಗುವಿನಂಥ ಸ್ವಭಾವ ಕಾಣಿಸಿಕೊಳ್ಳುತ್ತದೆ ಮತ್ತು ನೀವು ಒಂದು ಆಹ್ಲಾದಕಾರಿ ಮನಸ್ಥಿತಿಯಲ್ಲಿರುತ್ತೀರಿ. ಹಣಕ್ಕೆ ಸಂಬಂಧಿಸಿದ ಯಾವುದೇ ಸಮಸ್ಯೆಯನ್ನು ಇಂದು ಪರಿಹರಿಸಬಹುದು.

**ವೃಶ್ಚಿಕ** ಇಂದು ನೀವು ಚೈತನ್ಯಯುಕ್ತವಾಗಿರುತ್ತೀರಿ. ನೀವೇನೇ ಮಾಡಿದರೂ ಸಾಮಾನ್ಯವಾಗಿ ನೀವು ತೆಗೆದುಕೊಳ್ಳುವ ಅರ್ಧ ಸಮಯದಲ್ಲಿ ಅದನ್ನು ಮಾಡಲು ನಿಮಗೆ ಸಾಧ್ಯವಾಗುತ್ತದೆ.

**ಧನಸ್ಸು** ಜೀವನದ ಉತ್ಕೃಷ್ಟ ವೈಭವವನ್ನು ಆನಂದಿಸಲು ನಿಮ್ಮ ಜೀವನವನ್ನು ಹೆಚ್ಚು ಭವ್ಯಗೊಳಿಸಿ. ಚಿಂತೆಯ ಅನುಪಸ್ಥಿತಿ ಈ ದಿಕ್ಕಿನಲ್ಲಿ ಮೊದಲ ಹೆಜ್ಜೆ. ನಿಮಗಾಗಿ ಹಣವನ್ನು ಉಳಿಸುವ ನಿಮ್ಮ ಬಯಕೆ ಇಂದು ಪೂರ್ಣಗೊಳ್ಳಬಹುದು.

**ಮಕರ** ಜೀವನದಲ್ಲಿ ಒತ್ತಡದ ಮನೋಭಾವವನ್ನು ತಪ್ಪಿಸಿ ದುರ್ಬಲ ಆರ್ಥಿಕ ಸ್ಥಿತಿಯಿಂದ ಕೆಲವು ಪ್ರಮುಖ ಕೆಲಸಗಳು ಸ್ಥಗಿತಗೊಳ್ಳುತ್ತವೆ. ಇಂದು ಹಾಜರಾಗುವ ಸಮಾರಂಭದಲ್ಲಿ ಹೊಸ ಸ್ನೇಹ ಅಭಿವೃದ್ಧಿಯಾಗುತ್ತದೆ.

**ಕುಂಭ** ಆರೋಗ್ಯ ಸಂಬಂಧಿತ ಸಮಸ್ಯೆಗಳು ಅಸ್ವಸ್ಥತೆಯನ್ನು ಉಂಟು ಮಾಡಬಹುದು. ನೀವು ಇಂದು ಗಣನೀಯ ಪ್ರಮಾಣದ ಹಣವನ್ನು ಸಹ ಹೊಂದಿರುತ್ತೀರಿ ಮತ್ತು ಅದರೊಂದಿಗೆ ಮನಸ್ಸಿನ ಶಾಂತಿ ಇರುತ್ತದೆ.

**ಮೀನ** ಇಂದು ನೀವು ಚೈತನ್ಯಯುಕ್ತವಾಗಿರುತ್ತೀರಿ. ನೀವೇನೇ ಮಾಡಿದರೂ ಸಾಮಾನ್ಯವಾಗಿ ನೀವು ತೆಗೆದುಕೊಳ್ಳುವ ಅರ್ಧ ಸಮಯದಲ್ಲಿ ಅದನ್ನು ಮಾಡಲು ನಿಮಗೆ ಸಾಧ್ಯವಾಗುತ್ತದೆ.

## ರೈತ ಮಹಿಳೆಯರಿಗೆ ಕೋಳಿ ಮರಿ ವಿತರಣೆ ಅರ್ಹ ಫಲಾನುಭವಿಗಳಿಂದ ಅರ್ಜಿ ಆಹ್ವಾನ

• ಉದಯವಾಹಿನಿ, ಚಿತ್ರದುರ್ಗ

2024-25ನೇ ಸಾಲಿಗೆ 5 ವಾರದ ಕೋಳಿ ಮರಿಗಳನ್ನು ಉತ್ಪಾದಿಸಿ ಗ್ರಾಮೀಣ ಭಾಗದ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಸಾಮಾನ್ಯ ವರ್ಗದ ರೈತ ಮಹಿಳೆಯರಿಗೆ ತಲಾ 20ರಂತೆ ಕೋಳಿ ಮರಿಗಳನ್ನು ವಿತರಿಸಿ ಆದಾಯ ಹೆಚ್ಚಿಸುವ ಕಾರ್ಯಕ್ರಮ ಅನುಷ್ಠಾನಗೊಳಿಸುತ್ತಿದ್ದು, ಈ ಸಂಬಂಧ ಅರ್ಹ ಫಲಾನುಭವಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಡಿ.15 ಕೊನೆಯ ದಿನ.

ರೈತ ಮಹಿಳೆಯರು, ಸ್ವ-ಸಹಾಯ ಗುಂಪಿನ ಸದಸ್ಯರು, ಪ್ರಾಥಮಿಕ ಕೋಳಿ ಸಹಕಾರ ಸಂಘಗಳಲ್ಲಿರುವ ಮಹಿಳಾ ಸದಸ್ಯರು ಮತ್ತು ರೈತ ಉತ್ಪಾದಕ ಸಂಸ್ಥೆಯ ಅರ್ಹ ಫಲಾನುಭವಿಗಳು ಅರ್ಜಿಗಳನ್ನು ಅಗತ್ಯ ಸೂಕ್ತ ದಾಖಲೆಗಳೊಂದಿಗೆ ಆಯಾ ತಾಲ್ಲೂಕಿನ ಪಶು ವೈದ್ಯಾಧಿಕಾರಿ(ಆಡಳಿತ) ಅಥವಾ ಸಹಾಯಕ ನಿರ್ದೇಶಕರಿಗೆ ಸಲ್ಲಿಸಲು ಸೂಚಿಸಿದೆ. ಹೆಚ್ಚಿನ ಮಾಹಿತಿಗಾಗಿ ಚಿತ್ರದುರ್ಗ ಪಶುವೈದ್ಯಾಧಿಕಾರಿ 9482943111, ಚಳ್ಳಕೆರೆ 9448816499, ಹೊಳಲ್ಕೆರೆ 9972965479, ಹೊಸದುರ್ಗ 9945298407, ಹಿರಿಯೂರು 9483451044, ಮೊಳಕಾಲ್ಮೂರು 9900964820 ಗೆ ಸಂಪರ್ಕಿಸಬಹುದು ಎಂದು ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವ್ಯವಸ್ಥೆ ಕೆಟ್ಟಿದೆ ಸುಧಾರಣೆ ಮಾಡಬೇಕಿದೆ

• ಉದಯವಾಹಿನಿ, ಹುಬ್ಬಳ್ಳಿ



ವ್ಯವಸ್ಥೆ ತುಂಬಾ ಕೆಟ್ಟಿದೆ ಸಚಿವರ ಭ್ರಷ್ಟಾಚಾರ ನೋಡಿ ಏನಪ್ಪಾ ಇದು ಅಂತ ಅನಿಸುತ್ತಿದೆ ಹಾಗಾಗಿ ವ್ಯವಸ್ಥೆ ಸುಧಾರಣೆ ಮಾಡಬೇಕಿದೆ ಎಂದು ಸಚಿವರು ಆರ್.ಬಿ ತಿಮ್ಮಾಪೂರ್ ತಿಳಿಸಿದರು. ಈ ಒಂದು ಹೇಳಿಕೆ ಮೂಲಕ ತಿಮ್ಮಾಪುರ್ ಅವರು ಮಂತ್ರಿ ಗಳ ಭ್ರಷ್ಟಾಚಾರವನ್ನು ಒಪ್ಪಿಕೊಂಡರಾ? ಎನ್ನುವ ಪ್ರಶ್ನೆ ಇದೀಗ ಕಾಡುತ್ತಿದೆ. ಹುಬ್ಬಳ್ಳಿಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ವ್ಯವಸ್ಥೆ ಕಟ್ಟಿದ ಸುಧಾರಣೆ ಮಾಡಬೇಕಿದೆ. ಸುಧಾರಣೆ ಮಾಡುವ ಕೆಲಸಕ್ಕೆ ನಾನು ಕೈ ಹಾಕಿದ್ದೇನೆ. ಹೀಗಾಗಿ ನಾವು ಹೊಸ ಯೋಜನೆ ತರಬೇಕಾಗಿದೆ.

ಮಂಡ್ಯದಲ್ಲಿ ನಡೆದ ಭ್ರಷ್ಟಾಚಾರ ಪ್ರಕರಣಕ್ಕೆ ಸಂಬಂಧಪಟ್ಟಂತೆ, ಇಬ್ಬರು ಅಧಿಕಾರಿಗಳನ್ನು ಸಸ್ಪೆಂಡ್ ಮಾಡಿದ್ದೇವೆ ಎಂದು ಸಚಿವ ಆರ್ ಬಿ ತಿಮಾಪುರ್ ಭ್ರಷ್ಟಾಚಾರ ನಡೆದಿದ್ದನ್ನು ಒಪ್ಪಿಕೊಂಡ್ರಾ ಎನ್ನುವ ಪ್ರಶ್ನೆ ಮೂಡಿದೆ. ಮಂತ್ರಿಗಳ ಭ್ರಷ್ಟಾಚಾರ ನೋಡಿ ಏನಪ್ಪಾ ಅಂತ ಅನಿಸುತ್ತಿದೆ. ಎಲ್ಲಾ ಮಂತ್ರಿಗಳ ಭ್ರಷ್ಟಾಚಾರ ಇದೆ ವ್ಯವಸ್ಥೆ ಕೆಟ್ಟಿದೆ. ಸುಧಾರಣೆ ಮಾಡಬೇಕಿದೆ ವ್ಯವಸ್ಥೆ ಹಾಗೆ ಇದ್ದರೆ ಟೀಕೆಗಳು ಬರುತ್ತವೆ. ಸುಧಾರಣೆ ಮಾಡುವ ಕೆಲಸಕ್ಕೆ ನಾನು ಕೈ ಹಾಕಿದ್ದೇನೆ ಹೀಗಾಗಿ ಹೊಸ ಹೊಸ ಯೋಜನೆ ತರಬೇಕಿದೆ ಎಂದು ತಿಳಿಸಿದರು.

## ಹಾಡ ಹಗಲೇ ವ್ಯಕ್ತಿಯ ಬರ್ಬರ ಹತ್ಯೆ

• ಉದಯವಾಹಿನಿ, ಶಿವಮೊಗ್ಗ

ಜಿಲ್ಲೆಯ ಜನರು ಬೆಚ್ಚಿ ಬೀಳುವಂತೆ ವ್ಯಕ್ತಿಯೊಬ್ಬನನ್ನು ಹಾಡ ಹಗಲೇ ಬರ್ಬರವಾಗಿ ಕೊಚ್ಚಿ ಕೊಲೆ ಮಾಡಲಾಗಿದೆ. ಮಾರಕಾಸ್ತ್ರಗಳಿಂದ ಹಾಡ ಹಗಲೇ ನಡೆದಂತ ಭೀಕರ ಮರ್ಡರ್ ನಿಂದ ಶಿವಮೊಗ್ಗ ಜನತೆ ಬೆಚ್ಚಿ ಬಿದ್ದಿದ್ದಾರೆ. ಶಿವಮೊಗ್ಗದ ಬೊಮ್ಮನಕಟ್ಟೆ ಬಡಾವಣೆಯಲ್ಲಿ ವ್ಯಕ್ತಿಯೊಬ್ಬನ ಬರ್ಬರ ಹತ್ಯೆ ಮಾಡಲಾಗಿದೆ. ಮೃತ ವ್ಯಕ್ತಿಯನ್ನು ರಾಜೇಶ್ ಶೆಟ್ಟಿ ಎಂಬುದಾಗಿ ಗುರುತಿಸಲಾಗಿದೆ.

ಈ ಹತ್ಯೆಯಯನ್ನು ಹಳೆಯ ವೈಷಮ್ಯ, ದ್ವೇಷದ ಕಾರಣ ಮಾಡಲಾಗಿದೆ ಎಂಬುದಾಗಿ ಪೊಲೀಸರು ಶಂಕೆ ವ್ಯಕ್ತ ಪಡಿಸಿದ್ದಾರೆ. ಹಾಡ ಹಗಲೇ ಬೊಮ್ಮನಕಟ್ಟೆ ಬಡವಾಣೆಯಲ್ಲಿದ್ದಂತ ರಾಜೇಶ್ ಶೆಟ್ಟಿ ಮೇಲೆ ಯುವಕರ ಗುಂಪೊಂದು ಮಾರಕಾಸ್ತ್ರಗಳಿಂದ ದಾಳಿ ನಡೆಸಿ, ಬರ್ಬರವಾಗಿ ಕೊಚ್ಚಿ ಕೊಲೆಗೈದು ಪರಾರಿಯಾಗಿದೆ ಎಂಬುದಾಗಿ ಸ್ಥಳೀ ಯರು ಹೇಳಿದ್ದಾರೆ. ಇನ್ನೂ ಈ ವಿಷಯ ತಿಳಿದು ಸ್ಥಳಕ್ಕೆ ವಿನೋಬನಗರ ಠಾಣೆಯ ಪೊಲೀಸರು ದೌಡಾಯಿಸಿ, ಪರಿಶೀಲಿಸಿ, ಮೃತ ದೇಹವನ್ನು ಮೆಗ್ಗಾನ್ ಆಸ್ಪತ್ರೆಗೆ ಕಳುಹಿಸಿದ್ದಾರೆ. ಈ ಸಂಬಂಧ ಹೆಚ್ಚಿನ ಮಾಹಿತಿಯನ್ನು ನಿರೀಕ್ಷಿಸಲಾಗಿದೆ.

# ನಾನು ಸಂಸದನಾಗಲು, ಶಾಸಕನಾಗಲು ಎಂದೂ ಹಪಹಪಿಸಿಲ್ಲ: ನಿಖಿಲ್

### ನಿಮ್ಮ ಹೃದಯದಲ್ಲಿ ನಮ್ಮ ಕುಟುಂಬದ ಮೇಲೆ ಇಟ್ಟಿರುವ ಪ್ರೀತಿ, ಗೌರವ ಎಷ್ಟು ಜನ್ಮ ಎತ್ತಿ ಬಂದರೂ ತೀರಿಸಲು ಸಾಧ್ಯವಿಲ್ಲ


• ಉದಯವಾಹಿನಿ ಹಾಸನ

ನಾನು ಸಂಸದನಾಗಲು, ಶಾಸಕನಾಗಲು ಎಂದು ಕೂಡ ಹಪಹಪಿಸಿಲ್ಲ, ಹಾಗಿದ್ದರೆ ನಾನು ಚಿತ್ರರಂಗಕ್ಕೆ ಹೋಗುತ್ತಿರಲಿಲ್ಲ, ರಾಜಕಾರಣಕ್ಕೆ ಬರುತ್ತಿದ್ದೆ ಎಂದು ಜೆಡಿಎಸ್ ಯುವಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಹೇಳಿದ್ದಾರೆ.

ಹಾಸನ ಜಿಲ್ಲೆ, ಅರಕಲಗೂಡಿನಲ್ಲಿ ಮಾಜಿ ಸಚಿವ ಎ.ಮಂಜು ಅವರ ಹುಟ್ಟುಹಬ್ಬ ಹಾಗೂ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಹಾಸನ ಜಿಲ್ಲೆಯ ಜನತೆ ಒಬ್ಬ ಸಾಧಾರಣ ರೈತ ಕುಟುಂಬದ ಮಗನಾಗಿ ಜನಿಸಿರುವ ದೇವೇಗೌಡರನ್ನು ಕೆಂಪುಕೋಟೆ ಮೇಲೆ ಬಾವುಟ ಹಾರಿಸುವ ಶಕ್ತಿಯನ್ನು ತುಂಬಿ ಇತಿಹಾಸ ಸೃಷ್ಟಿ ಮಾಡಿದ್ದಾರೆ.

ನಿಮ್ಮ ಹೃದಯದಲ್ಲಿ ನಮ್ಮ ಕುಟುಂಬದ ಮೇಲೆ ಇಟ್ಟಿರುವ ಪ್ರೀತಿ, ಗೌರವ ಎಷ್ಟು ಜನ್ಮ ಎತ್ತಿ ಬಂದರೂ ತೀರಿಸಲು ಸಾಧ್ಯವಿಲ್ಲ. ನಿಮ್ಮ ಋಣಕ್ಕಾಗಿ ಪ್ರಾಮಾಣಿಕವಾಗಿ ನಮ್ಮ ಇಡೀ ಪಕ್ಷ, ನಮ್ಮ ಕುಟುಂಬ ನಿಮ್ಮ ಜೊತೆಯಲ್ಲಿ ಸದಾಕಾಲ ಇರುತ್ತೇವೆ. ರಾಮನಗರ ಜಿಲ್ಲೆಯ ಜನತೆ ಕೂಡ ನಮ್ಮ ಕುಟುಂಬಕ್ಕೆ ಎಂಟು ಬಾರಿ ಶಾಸಕ ಸ್ಥಾನ, ಮೂರು ಬಾರಿ ಕುಮಾರಣ್ಣ ಅವರನ್ನು ಸಂಸದರನ್ನಾಗಿ ಆಯ್ಕೆ ಮಾಡಿದ್ದಾರೆ ಎಂದರು.

> ನಾನು ರಾಜಕಾರಣದ ಹಿನ್ನೆಲೆಯಲ್ಲಿ ಬಂದಿರುವ ವ್ಯಕ್ತಿಯಾಗಿದ್ದರೂ ಚಿತ್ರರಂಗದಲ್ಲಿ ನನ್ನದೇ ಆದಷ್ಟು ಸವಾಲುಗಳನ್ನು ಸ್ವೀಕಾರ ಮಾಡಿದೆ. ಜಾಗ್ವಾರ್ ಮೂಲಕ ನಮ್ಮ ತಂದೆ ನನ್ನನ್ನು ಚಿತ್ರರಂಗಕ್ಕೆ ಪರಿಚಯಿಸಿದ್ದು, ಅನೇಕ ಚಿತ್ರಗಳನ್ನು ಮಾಡಿದೆ. ತದನಂತರ ಸಾರ್ವಜನಿಕ ಬದುಕಿನಲ್ಲಿ ಜವಾಬ್ದಾರಿಗಳನ್ನು ಅರಿತಿದ್ದೇನೆ. ಆ ಒಂದು ಕಾರಣದಿಂದ ಸಂಪೂರ್ಣವಾಗಿ ಸಾರ್ವಜನಿಕ ಬದುಕಿಗೆ ಧುಮುಕಿದ್ದೇನೆ ಎಂದು ಹೇಳಿದರು.



ಉದಯವಾಹಿನಿ ಚಿತ್ರ

**ಸೋಲಿನ ಬಗ್ಗೆ ಪರಾಮರ್ಶೆ ಮಾಡಲ್ಲ**

ದೇವೇಗೌಡರಿಗೆ 92 ವಯಸ್ಸಾದರೂ ರಾಜ್ಯಸಭೆಯಲ್ಲಿ ಏಕಾಂಗಿಯಾಗಿ ನೆಲ, ಜಲ, ಭಾಷೆ ಉಳಿಸುವ ಕೆಲಸ ಮಾಡುತ್ತಿದ್ದಾರೆ. ನನ್ನ ಜೀವನದ ಸ್ಫೂರ್ತಿ ದೇವೇಗೌಡರು. ನನ್ನ ಜವಾಬ್ದಾರಿಯನ್ನು ಅರಿತಿದ್ದೇನೆ. ಅನಿರೀಕ್ಷಿತವಾದ ಬೆಳವಣಿಗೆಯಿಂದ ಉಪಚುನಾವಣೆಯಲ್ಲಿ ಸ್ಪರ್ಧಿಸಬೇಕಾಗಿ ಬಂತು. ಈ ಚುನಾವಣೆಯ ಸೋಲಿನ ಬಗ್ಗೆ ಹೆಚ್ಚಾಗಿ ಪರಾಮರ್ಶೆ ಮಾಡಲ್ಲ.

**ನನ್ನ ಜೀವನದ ಸ್ಫೂರ್ತಿ ದೇವೇಗೌಡರು**

ಚುನಾವಣೆಯಲ್ಲಿ ಏಳುಬೀಳು ಸರ್ವೇ ಸಾಮಾನ್ಯ. ಕರ್ನಾಟಕ ರಾಜ್ಯದಲ್ಲಿ ಕಟ್ಟಿರುವ ರೈತ ಪರವಾದ ಪಕ್ಷ, ಪ್ರಾದೇಶಿಕ ಪಕ್ಷ ಜೆಡಿಎಸ್. ಲಕ್ಷಾಂತರ ಕಾರ್ಯಕರ್ತರ ದುಡಿಮೆ, ಎಲ್ಲಾ ತಂದೆ, ತಾಯಿಯರ ಆಶೀರ್ವಾದ, ರೈತರ ಆಶೀರ್ವಾದ ಮಾಡಿ ಇಲ್ಲಿಯವರೆಗೆ ಬೆಳೆಸಿ, ಉಳಿಸಿದ್ದೀರಿ. ಹಲವಾರು ಸಂದರ್ಭದಲ್ಲಿ ಅಧಿಕಾರ ಸಿಗದ ವಾಗಿತ್ತು. ಬಹಳ ಸುಲಭವಾಗಿ ಶಾಸಕನಾಗಬಹುದಿತ್ತು. ಆದರೆ ಇಲ್ಲಿಯವರೆಗೂ ನಾನು, ಪಕ್ಷ ಸಂಕಷ್ಟದಲ್ಲಿತ್ತು. ಆ ಸಂದರ್ಭದಲ್ಲಿ ಒಬ್ಬ ಪಕ್ಷದ ಶಿಸ್ತಿನ ಸಿಪಾಯಿಯಾಗಿ, ಪಕ್ಷದ ನಿಷ್ಠಾವಂತ ಕಾರ್ಯಕರ್ತನಾಗಿ ಪಕ್ಷದ ಕಾರ್ಯಕರ್ತರ ಭಾವನೆಗಳಿಗೆ ಸ್ಪಂದಿಸುವ ಕೆಲಸ ಮಾಡಿದ್ದೇನೆ. 19 ಸ್ಥಾನ ಗೆದ್ದು 18ಕ್ಕೆ ಇಳಿದಿದ್ದೇವೆ. ನಿಮ್ಮೆಲ್ಲರ ಆಶೀರ್ವಾದಿಂದ ಇಡೀ ರಾಜ್ಯ ಪ್ರವಾಸ ಮಾಡುತ್ತೇನೆ. ಮೂಲೇಲಿ ಕೂರುವ ಜಾಯಮಾನ ನನ್ನದಲ್ಲ ಎಂದು ನುಡಿದರು.

ನಾನು ಸೋತು ಒಂದು ವಾರ ಆಗಿದೆ. ನೀವು ಎದುರುಗಡೆ ಬಂದವರು ಅನೇಕರು ಹೇಳಿದ್ದಾರೆ. ನನಗಿನ್ನು 36 ವರ್ಷ. ನನ್ನ ಮುಂದೆ ಇರುವುದು ಒಂದೇ ಸವಾಲು. ಜನತಾದಳ ಪಕ್ಷವನ್ನು ದಡ ಮುಟ್ಟಿಸಬೇಕು. ನಾನು ಶಾಸಕನಾಗಬೇಕು ಎನ್ನುವುದು ನನ್ನ ಮುಂದೆ ಇರುವ ಪ್ರಶ್ನೆ ಅಲ್ಲ. ಪ್ರಾದೇಶಿಕ ಪಕ್ಷ ಉಳಿಯಬೇಕಿದೆ. ಕನ್ನಡಿಗರ ಅಸ್ತಿತ್ವಕ್ಕಾಗಿ ಈ ಪಕ್ಷ ಉಳಿಯಬೇಕಿದೆ. ಆ ಹಿನ್ನೆಲೆಯಲ್ಲಿ ಹೋರಾಟ ಮಾಡುತ್ತೇನೆ. ಕೊನೆ ಉಸಿರು ಇರುವವರೆಗೂ ಹೋರಾಡುತ್ತೇನೆ. ಮತನಾಡಲು ವೇದಿಕೆಗಳು ಮುಂದಿನ ದಿನಗಳಲ್ಲಿ ಸಜ್ಜಾಗುತ್ತದೆ. ಹೋರಾಟ ಎನ್ನುವುದನ್ನು ರಕ್ತಗತವಾಗಿ ಮೈಗೂಡಿಸಿಕೊಂಡಿದ್ದೇನೆ. ಹಿಂದೆ ಸರಿಯುವ ಪ್ರಶ್ನೆಯೇ ಇಲ್ಲ. ಒಬ್ಬ ಯುವಕನಾಗಿ ನಿಖಿಲ್ ಕುಮಾರಸ್ವಾಮಿ ನಿಮ್ಮ ಜೊತೆಯಲ್ಲಿ ಪ್ರಾಮಾಣಿಕವಾಗಿ ಇರುತ್ತಾನೆ ಎಂದು ಭರವಸೆ ನೀಡಿದರು.

## ಡ್ರೋನ್ ಆಧಾರಿತ ಫೋಟೋ, ವಿಡಿಯೋಗ್ರಫಿ ತರಬೇತಿಗೆ ಅರ್ಜಿ ಆಹ್ವಾನ

• ಉದಯವಾಹಿನಿ, ಚಿತ್ರದುರ್ಗ

2024-25ನೇ ಸಾಲಿಗೆ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ಡ್ರೋನ್ ಆಧಾರಿತ ಫೋಟೋಗ್ರಫಿ ಮತ್ತು ವಿಡಿಯೋಗ್ರಫಿ ಮೂಲಕ ಸಾಮಾ ಜಿಕ ಜಾಲತಾಣಗಳಲ್ಲಿ ಉದ್ಯೋಗ ಪಡೆಯಲು ಪರಿಶಿಷ್ಟ ಪಂಗಡದ ಯುವಕ, ಯುವತಿಯರಿಗೆ ಡ್ರೋನ್ ತರಬೇತಿ ನೀಡಲು ಅರ್ಜಿ ಆಹ್ವಾನಿಸಲಾಗಿದೆ. ಡಿಸೆಂಬರ್ 12 ಅರ್ಜಿ ಸಲ್ಲಿಸಲು ಕೊನೆಯ ದಿನ.

ಡ್ರೋನ್ ತರಬೇತಿ ನೀಡಲು ಚಿತ್ರದುರ್ಗ ಜಿಲ್ಲೆಗೆ 356 ಗುರಿ ನಿಗಧಿಪಡಿಸಲಾಗಿದ್ದು, ಅರ್ಜಿ ಸಲ್ಲಿಸಲು ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು. ತರಬೇತಿ ಪಡೆಯಲು ಪುರುಷರಿಗೆ 35 ವರ್ಷ, ಮಹಿಳೆಯರಿಗೆ 40 ವರ್ಷ ಮೀರಿರಬಾರದು. ಅಭ್ಯರ್ಥಿಯು ಪರಿಶಿಷ್ಟ ಪಂಗಡಕ್ಕೆ ಸೇರಿದ್ದು, ಕುಟುಂಬದ ವಾರ್ಷಿಕ ಆದಾಯ ರೂ.2.50ಲಕ್ಷ ಮೀರಿರಬಾರದು. ಮೂಲ ನಿವಾಸಿ ಮತ್ತು ಅಲೆಮಾರಿ, ಅರೆ ಅಲೆಮಾರಿ, ಸೂಕ್ಷ್ಮ ಮತ್ತು ಅತಿಸೂಕ್ಷ್ಮ ಪರಿಶಿಷ್ಟ ಪಂಗಡ ಸಮುದಾಯದ ಯುವಕ, ಯುವತಿಯರಿಗೆ ಮೊದಲ ಆದ್ಯತೆ ನೀಡಲಾಗುವುದು. ತರಬೇತಿಯ ನೊಂದಣಿ ಸಮಯದಲ್ಲಿ ಕಡ್ಡಾಯವಾಗಿ ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆಯಲ್ಲಿ ತೇರ್ಗಡೆಗೊಂಡ ಅಂಕಪಟ್ಟಿ ಹಾಗೂ ಆಧಾರ್ ಕಾರ್ಡ್‌ನ್ನು ಸಲ್ಲಿಸಬೇಕು.

ಅಭ್ಯರ್ಥಿಯು ತರಬೇತಿ ನೀಡುವ ಸ್ಥಳಕ್ಕೆ ಬರುವ ಪ್ರಯಾಣ ವೆಚ್ಚ ಹಾಗೂ ತರಬೇತಿ ಅವಧಿಯಲ್ಲಿ ಯಾವುದೇ ಶಿಷ್ಯವೇತನ ನೀಡುವುದಿಲ್ಲ.

ಆಸಕ್ತ ಅರ್ಹ ಅಭ್ಯರ್ಥಿಗಳು ಚಿತ್ರದುರ್ಗ ನಗರದ ಜೆ.ಸಿ.ಆರ್ ಬಡಾವಣೆ, ಗಣಪತಿ ದೇವಸ್ಥಾನದ ಹತ್ತಿರದ ಜಿಲ್ಲಾ ಪರಿಶಿಷ್ಟ ವರ್ಗಗಳವರ ಕಚೇರಿಯಲ್ಲಿ ಅರ್ಜಿ ಪಡೆದು 2024ರ ಡಿ. 12ರ ಸಂಜೆ 5.30ರೊಳಗೆ ಅರ್ಜಿ ಸಲ್ಲಿಸಬಹುದು ಎಂದು ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ತಾಕತ್ತಿದ್ರೆ ಯತ್ನಾಳ್‌ನ ಉಚ್ಚಾಟಿಸಿ: ವಿಜಯೇಂದ್ರಗೆ ಪ್ರಿಯಾಂಕ್ ಸವಾಲ್

• ಉದಯವಾಹಿನಿ, ಕಲಬುರಗಿ

ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಅವರಿಗೆ ನಿಜವಾಗಿಯೂ ತಾಕತ್ತಿದ್ದರೆ ಮೊದಲು ಬಸನಗೌಡ ಪಾಟೀಲ್ ಯತ್ನಾಳ್‌ರನ್ನ ಪಕ್ಷದಿಂದ ಉಚ್ಚಾಟಿಸಲಿ ಎಂದು ಸಚಿವ ಪ್ರಿಯಾಂಕ್ ಖರ್ಗೆ ಸವಾಲು ಹಾಕಿದರು.ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿಜೆಪಿಯಲ್ಲಿ ಎರಡು ಬಣಗಳ ಮಧ್ಯೆ ಫೈಟ್ ನಡೆದಿದೆ. ಮೇಲಾಗಿ ಬಿಜೆಪಿ ಕಾರ್ಯಕರ್ತರೇ ಯತ್ನಾಳ್ ಅರೆಹುಚ್ಚ ಅಂದಿದ್ದಾರೆ. ಇಷ್ಟಾದರೂ ಅವರನ್ನ ಏಕೆ ಪಕ್ಷದಿಂದ ಉಚ್ಚಾಟಿಸುತ್ತಿಲ್ಲ ಎಂದು ಪ್ರಶ್ನಿಸಿದರು.

ಇದೇ ವೇಳೆ ಮುಸ್ಲಿಮರಿಗೆ ಮತದಾನದ ಹಕ್ಕಿಲ್ಲದಂತೆ ಮಾಡಬೇಕು ಎಂಬ ಚಂದ್ರಶೇಖರ ಸ್ವಾಮೀಜಿ ಹೇಳಿಕೆ ವಿರುದ್ಧ ಎಫ್‌ಐಆರ್ ದಾಖಲಾಗಿರುವ ಕುರಿತು ಪ್ರತಿಕ್ರಿಯಿಸಿದರು. ಸ್ವಾಮೀಜಿ ಆದ ತಕ್ಷಣ ಅವರಿಗೆ ಕಾನೂನು ಅನ್ವಯ ಆಗುವುದಿಲ್ಲವಾ ಮಿಸ್ಟರ್ ಅಶೋಕ್ ತಮ್ಮ ಹೇಳಿಕೆಗೆ ಕುರಿತು ಖುದ್ದು ಸ್ವಾಮೀಜಿಯವರೇ ವಿಷಾದ ವ್ಯಕ್ತಪಡಿಸಿದ್ದಾರೆ. ಇಷ್ಟಾದರೂ ಸ್ವಾಮೀಜಿಯವರ ಹೇಳಿಕೆಯನ್ನ ಬಿಜೆಪಿ ಸಮರ್ಥನೆ ಮಾಡುತ್ತಿದೆ. ಕಾನೂನು ಅಂದ್ರೆ ನಮಗೇ ಬೇರೆ, ನಿಮಗೇ ಬೇರೆನಾ ಎಂದು ಕಿಡಿಕಾರಿದರು. ಯತ್ನಾಳ್ ಬಸವಣ್ಣ ಅವರನ್ನ ಹೇಡಿ ಎನ್ನುತ್ತಾರೆ. ಇದಕ್ಕೆ ಬಿಜೆಪಿಯ ಒಬ್ಬರೂ ಈವರೆಗೆ ತುಟಿ ಬಿಚ್ಚಿಲ್ಲ. ಇಷ್ಟೆಲ್ಲಾ ವಿದ್ಯಮಾನಗಳು ನಡೆಯುತ್ತಿದ್ದಾಗ್ಯೂ ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಎಲ್ಲಿದ್ದಾರೋ ಗೊತ್ತಾಗುತ್ತಿಲ್ಲ. ಬಸವಣ್ಣ ಅಂದ್ರೆ ನಿಮಗೆ ಅಷ್ಟೊಂದು ಅಲರ್ಜಿನಾ ಕ್ರಿಮಿನಲ್ ಕೆಲಸ ಮಾಡಿ ಜೈ ಶ್ರೀರಾಮ್ ಅಂದ್ರೆ ಎಲ್ಲವೂ ಮುಚ್ಚಿ ಹೋಗುತ್ತಾ? ಲೇವಡಿ ಮಾಡಿದರು.

> ವಿಶೇಷ ಚೇತನರ ಅನುದಾನ ಕಡಿತ ಆರೋಪಕ್ಕೆ ಪ್ರತಿಕ್ರಿಯಿಸಿ, ಸರ್ಕಾರದ ಗ್ಯಾರಂಟಿ ಯೋಜನೆಗಳಿಗಾಗಿ ಅಂಗವಿಕಲರ ಅನುದಾನದಲ್ಲಿ ಶೇ.80ರಷ್ಟು ಕಡಿತ ಮಾಡಲಾಗಿದೆ ಎಂಬುದು ಸುಳ್ಳು. ಯಾವುದೇ ಅನುದಾನ ಕಡಿತ ಮಾಡಿಲ್ಲ. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಸೇರಿದಂತೆ ಎಲ್ಲಾ ಇಲಾಖೆಗಳ ಅನುದಾನ ಹೆಚ್ಚಿಸಲಾಗಿದೆ. ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ನೀಡಿದ ಕ್ರಿಯಾಯೋಜನೆ ಆಧರಿಸಿ ಅನುದಾನ ನೀಡಲಾಗಿದೆ.



ರಾಜ್ಯ ಸಚಿವ ಸಂಪುಟದ ಪುನಾರಚನೆ ಸದ್ಯಕ್ಕೆ ಮಾಡುತ್ತಿಲ್ಲ ಎಂದು ಸಚಿವ ಪ್ರಿಯಾಂಕ್ ಖರ್ಗೆ ಮತ್ತೊಮ್ಮೆ ಸ್ಪಷ್ಟನೆ ನೀಡಿದರು. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸಚಿವ ಸಂಪುಟ ಪುನಾರಚನೆ ಕುರಿತು ಚರ್ಚಿಸಲು ದೆಹಲಿಗೆ ಹೋಗಿರಲಿಲ್ಲ. ಪ್ರಿಯಾಂಕಾ ಗಾಂಧಿ ಇತ್ತೀಚೆಗೆ ನೂತನ ಸಂಸದರಾಗಿ ಆಯ್ಕೆಯಾದ ಹಿನ್ನೆಲೆಯಲ್ಲಿ ಅವರಿಗೆ ಶುಭಾಶಯ ಕೋರಲು ತೆರಳಿದ್ದರು.

## ಪೋಡಿ ದುರಸ್ಥಿ ಸರಳೀಕೃತ ಕಾರ್ಯಕ್ಕೆ ಸಚಿವ ಕೃಷ್ಣಬೈರೇಗೌಡ ಚಾಲನೆ

• ಉದಯವಾಹಿನಿ, ಹಾಸನ

ಜಿಲ್ಲೆಯ ಅರಸೀಕೆರೆ ತಾಲ್ಲೂಕು ಬಾಗೀವಾಳು ಗ್ರಾಮದಲ್ಲಿ ಪೋಡಿ ದುರಸ್ತಿ ಸರಳೀಕೃತ ಕಾರ್ಯಕ್ಕೆ ರೈತರ ಹೊಲದಲ್ಲೇ ಅಧಿಕೃತವಾಗಿ ಕಂದಾಯ ಸಚಿವ ಕೃಷ್ಣಬೈರೇಗೌಡ ಚಾಲನೆ ನೀಡಿದರು. ರಾಜ್ಯದಲ್ಲಿ ಒಟ್ಟು 1,96,000 ಸರ್ಕಾರಿ ಸರ್ವೇ ನಂಬರ್ ಇದ್ದು, ನಾನಾ ಸರ್ಕಾರಿ ಯೋಜನೆಗಳ ಅಡಿ ಕಳೆದ 30-40 ವರ್ಷಗಳಿಂದ ಲಕ್ಷಾಂತರ ಜನರಿಗೆ ಸರ್ಕಾರಿ ಜಮೀನು ಮಂಜೂರಾಗಿದೆ.

30-40 ವರ್ಷ ಆಗಿದ್ದರೂ ಜಮೀನಿಗೆ ಪೋಡಿ ದುರಸ್ತಿ ಆಗಿಲ್ಲ. ದಾಖಲೆ ಪಕ್ಕ ಆಗಿಲ್ಲ. ಇಂತಹ ಪ್ರಕರಣಗಳೇ ರಾಜ್ಯದಲ್ಲಿ ಕನಿಷ್ಟ 25 ಲಕ್ಷ ಇರಬಹುದು. ಪಕ್ಕ ಪೋಡಿ ದುರಸ್ತಿ ಮಾಡಲು ನಮೂನೆ 1 ರಿಂದ 5 ಹಾಗೂ 5 ರಿಂದ 10 ದಾಖಲೆ ಲಭ್ಯವಿರಬೇಕು. ಆದರೆ, ಈ ದಾಖಲೆಗಳಿಲ್ಲದೆ ಲಕ್ಷಾಂತರ ರೈತರು ಸಂಕಷ್ಟಕ್ಕೆ ಒಳಗಾದ್ದಾರೆ.



ಉದಯವಾಹಿನಿ ಚಿತ್ರ

**ರೈತರ ಹೊಲದಲ್ಲೇ ಚಾಲನೆ**

ಸರ್ಕಾರಿ ಕಚೇರಿಗಳಿಗೆ ದಶಕಗಳಿಂದ ಅಲೆಯುತ್ತಿದ್ದರೂ ಪರಿಹಾರ ಮಾತ್ರ ಲಭ್ಯವಾಗಿಲ್ಲ. ಕಳೆದ ಒಂದು ವರ್ಷಗಳಿಂದ ಇಲಾಖೆ ಹಿರಿಯ ಅಧಿಕಾರಿಗಳ ಜೊತೆ ಸತತ ಸಭೆ ನಡೆಸಿ, ಚರ್ಚಿಸಿ ಕೊನೆಗೂ ನಮೂನೆ 1 ರಿಂದ 5 ಪೋಡಿ ದುರಸ್ಥಿ ಕೆಲಸವನ್ನು ಸರಳೀಕರಣಗೊಳಿಸಿ ಇದೀಗ ಸರ್ಕಾರಿ ಆದೇಶ ಹೊರಡಿಸಲಾಗಿದೆ. ಆನ್ಲೈನ್ನಲ್ಲಿ ಡಿಜಿಟಲ್ ಪ್ರಕ್ರಿಯೆಗಾಗಿ ಆಪ್ ರೂಪಿಸಲಾಗಿದೆ. 1,96,000 ಸರ್ಕಾರಿ ಸರ್ವೇ ನಂಬರ್ಗಳನ್ನೂ ದುರಸ್ಥಿಗೊಳಿಸಬೇಕು ಎಂಬುದು ನಮ್ಮ ಗುರಿ. ಮೊದಲ ಹಂತದಲ್ಲಿ ಈಗಾಗಲೇ 27,107 ಫೈಲ್ ಸೃಷ್ಟಿಸಲಾಗಿದೆ. ಇದರ ಜೊತೆ ಜೊತೆಗೆ ನಮೂನೆ 6 ರಿಂದ 10 ರ ಸರ್ವೇ ಕೆಲಸಕ್ಕೆ ಹಾಸನದಲ್ಲಿ ವಿದ್ಯುಕ್ತ ಚಾಲನೆ ನೀಡಲಾಗಿದೆ. ಈ ಸಮಾರಂಭದಲ್ಲಿ 200 ಜನಕ್ಕೆ ಪೋಡಿ ದುರಸ್ಥಿ ಮಾಡಿ ಹೊಸ ಸರ್ವೇ ನಂಬರ್ ನೀಡಲಾಗುತ್ತಿದೆ. ಇಂದಿನ ಪೋಡಿ ದುರಸ್ಥಿ ಅಭಿಯಾನ ಪೇಪರ್‌ನಿಂದ ಮಾತ್ರವಲ್ಲ ಫೀಲ್ಡಿನಿಂದಲೂ ಆರಂಭವಾಗಲಿದ್ದು, ಈ ಕೆಲಸ ಸಂಪೂರ್ಣವಾಗಿ ಮುಗಿದರೆ ಕನಿಷ್ಠ 20 ರಿಂದ 25 ಲಕ್ಷ ರೈತ ಕುಟುಂಬಗಳ ಹಲವು ದಶಕಗಳ ಸಮಸ್ಯೆ ಬಗೆಹರಿಯಲಿದೆ ಎಂಬುದಾಗಿ ಸಚಿವ ಕೃಷ್ಣಬೈರೇಗೌಡ ತಿಳಿಸಿದ್ದಾರೆ.

## ಕಂದಾಯ ಇಲಾಖೆ ಪ್ರಗತಿ ಪರಿಶೀಲನಾ ಸಭೆ

• ಉದಯವಾಹಿನಿ, ಚಿತ್ರದುರ್ಗ



ಉದಯವಾಹಿನಿ ಚಿತ್ರ

ಚಿತ್ರದುರ್ಗ ಜಿಲ್ಲಾಧಿಕಾರಿ ಕಚೇರಿಯಲ್ಲಿ ಶುಕ್ರವಾರ ಕಂದಾಯ ಸಚಿವ ಕೃಷ್ಣಬೈರೇಗೌಡ ಅವರ ಅಧ್ಯಕ್ಷತೆಯಲ್ಲಿ ಕಂದಾಯ ಇಲಾಖೆಗೆ ಸಂಬಂಧಿಸಿದಂತೆ ವಿಡಿಯೋ ಕಾನ್ಫರೆನ್ಸ್ ಮೂಲಕ ಪ್ರಗತಿ ಪರಿಶೀಲನಾ ಸಭೆ ನಡೆಯಿತು. ಕಂದಾಯ ವಿಷಯಗಳು ಬಗರ್ ಹುಕುಂ, ನಮೂನೆ 1 ರಿಂದ 54 ಪ್ರಕರಣ, ಕಂದಾಯ ಗ್ರಾಮಗಳ ರಚನೆ ಹಕ್ಕುಪತ್ರ ವಿತರಣೆ, ನ್ಯಾಯಾಲಯ ಪ್ರಕರಣ ವಿಲೇವಾರಿ, ವಿಪತ್ತು ನಿರ್ವಹಣೆ, ಪರಿಹಾರ ವಿತರಣೆ ಹಾಗೂ ಇತರೆ ವಿಷಯಗಳ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು.

**ಗ್ರಾಮಗಳ ರಚನೆ ಹಕ್ಕುಪತ್ರ ವಿತರಣೆ**

ಸಭೆ ಬಳಿಕ ಮಾತನಾಡಿದ ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಪಹಣಿ-ಆಧಾರ್ ಜೋಡಣೆ ಕಾರ್ಯವನ್ನು ಪ್ರಥಮಾದ್ಯತೆಯಾಗಿ ಪರಿಗಣಿಸಿ ಶೇ.100ರಷ್ಟು ಪ್ರಗತಿ ಸಾಧಿಸಬೇಕು. ಸರ್ಕಾರದ ನಿರ್ದೇಶನದಂತೆ ಜಿಲ್ಲೆಯಲ್ಲಿ ಸರ್ಕಾರಿ ಆಸ್ತಿಗಳನ್ನು ಗುರುತಿಸಿ, ಹದ್ದುಬಸ್ತು ಮಾಡಿಕೊಂಡು ಲ್ಯಾಂಡ್ ಬೀಟ್ ದತ್ತಾಂಶದಲ್ಲಿ ಅಪ್‌ಲೋಡ್ ಕಾರ್ಯಕ್ರಮದಲ್ಲಿ ಉತ್ತಮ ಸಾಧನೆ ತೋರಬೇಕು. ತ್ವರಿತವಾಗಿ ಗುರಿ ಸಾಧಿಸಲು ಸಮನ್ವಯತೆಯಿಂದ ಕಾರ್ಯನಿರ್ವಹಿಸಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು. ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಉಪವಿಭಾಗಾಧಿಕಾರಿ ಎಂ.ಕಾರ್ತಿಕ್ ಸೇರಿದಂತೆ ತಹಶೀಲ್ದಾರ್‌ಗಳು, ಕಂದಾಯ ಇಲಾಖೆ ಅಧಿಕಾರಿಗಳು ಇದ್ದರು.

## ಕೋರಂ ಕೊರತೆ: ಗ್ರಾಮಸಭೆ ಮುಂದಕ್ಕೆ

• ಉದಯವಾಹಿನಿ, ಮುದ್ದೇಬಿಹಾಳ

ತಾಲ್ಲೂಕಿನ ಹಿರೇಮುರಾಳ ಗ್ರಾಪಂಯಲ್ಲಿ ಸಾಮಾಜಿಕ ಪರಿಶೋಧನೆ ಗ್ರಾಮಸಭೆಯನ್ನು ಕರೆಯಲಾಗಿತ್ತು ಆದರೆ ಸಭೆಗೆ ರೈತಾಪಿ ಜನರು ಹಿರೇಮುರಾಳ ಗ್ರಾಪಂ ವ್ಯಾಪ್ತಿಯ ಎಂಟು ಗ್ರಾಮಗಳ ನಿರ್ದಿಷ್ಟ 100 ಜನರು ಇರದ ಕಾರಣ ಸಭೆಯನ್ನು ಡಿ 9 ಕ್ಕೆ ಮುಂದೂಡಿದ ಘಟನೆ ನಡೆಯಿತು

ಸಭೆಯನ್ನು ಆರಂಭಿಸಿ 159 ಯೋಜನೆಗಳ ವರದಿಯನ್ನು ವಾಚಿಸಿ ಪ್ರಾಸ್ತಾವಿಕವಾಗಿ ತಾಲೂಕ ಸಮಾಜಿಕ ಲೆಕ್ಕ ಪರಿಶೋಧಕ ಅಧಿಕಾರಿ ಚಿದಾನಂದ ಕೋಲಾರಿ ಮಾತನಾಡಿದಾಗ

ರೈತರು ಗ್ರಾಮದ ಯುವಕರು ನಿಂಗಣ್ಣ ಜಾಲವಾದಿ, ಆದೇಶ ನಾಗರತ್ತಿ, ಬಸವರಾಜ ಜೈನಾಪೂರ, ಅಯ್ಯಪ್ಪ ತಂಗಡಗಿ, ಸಿದ್ದಪ್ಪ ವಾಲಿಕಾರ ,ಮಾರುತಿ ಪವಾರ,ಮಾತನಾಡಿ ಗ್ರಾಮಸಭೆಗೆ ಕೋರಂ ಪ್ರಕಾರ 100 ಜನರು ಇರಬೇಕು ಇಲ್ಲಿ 30ಕ್ಕಿಂತ ಹೆಚ್ಚಿನ ಜನರಿಲ್ಲ



ಉದಯವಾಹಿನಿ ಚಿತ್ರ

**ಗ್ರಾಮದ ಸಮಸ್ಯೆಗಳ ಕುರಿತು ಪ್ರಶ್ನಿಸಬೇಕು**

ಇದ್ದವರಲ್ಲಿ ಅಂಗನವಾಡಿ ಆಶಾ, ಸರಕಾರಿ ಶಾಲಾ ಶಿಕ್ಷಕರು ಇದ್ದಾರೆ ಎಂಟು ಗ್ರಾಮದ ರೈತರು ಜನರು ಎಲ್ಲಿದ್ದಾರೆ? ಗ್ರಾಮಸ್ಥರ ಸಮಸ್ಯೆ ಆಲಿಸಿ ಸಭೆಯನ್ನು ನಡೆಸಬೇಕು ಎಂದು ಆರೋಪಿಸಿದರು ಕೋರಂ ಕೊರತೆ ಇದೆ ಹೀಗಾಗಿ ಸಭೆ ಮಾಡಬೇಡಿ ಇನ್ನೊಮ್ಮೆ ಎಲ್ಲಾ ಗ್ರಾಮದ ಗ್ರಾಮಸ್ಥರನ್ನು ಕರೆಯಿಸಿ ಸಭೆ ಮಾಡಬೇಕು ಲೆಕ್ಕ ಪರಿಶೋಧನೆ ಸಭೆ ,ಗ್ರಾಮಸಭೆಯನ್ನು ಪ್ರತ್ಯೇಕವಾಗಿ ಮಾಡಬೇಕು ಮತ್ತು ಈ ಸಭೆಗೆ ಅನೇಕ ಸರಕಾರಿ ಅಧಿಕಾರಿಗಳು ಗೈರಾಗಿದ್ದು ಅವರಿಗೆ ನೋಟಿಸ್ ನೀಡಬೇಕೆಂದರು. ಪಿಡಿಒ ಕೆ ಹೆಚ್ ಕುಂಬಾರ, ಲೆಕ್ಕ ಪರಿಶೋಧನಾಧಿಕಾರಿ ಚಿದಾನಂದ ಕೋಲಾರಿ ನೋಡಲ್ ಅಧಿಕಾರಿಗೂಂದಿಗೆ ಚರ್ಚಿಸಿ ಡಿ. 9 ರಂದು ಮತ್ತೆ ಸಭೆಯನ್ನು ಮಾಡಲಾಗುತ್ತದೆ ನಿಯಮದಂತೆ ಮೂರನೇ ಸಭೆಗೆ ನೂರು ಜನರು ಇರದೆ ಇದ್ದರು ಸಹ ಎಷ್ಟು ಜನ ಇರುತ್ತಾರೋ ಅವರ ಸಮಕ್ಷಮದಲ್ಲಿ ಸಭೆಯನ್ನು ಮಾಡುತ್ತೇವೆ ಎಂದರು. ಸಭೆಯಲ್ಲಿ ಗ್ರಾಪಂ ಅಧ್ಯಕ್ಷ ದೇವಿಂದ್ರಪ್ಪ ಬೆಳ್ಳಿಕಟ್ಟಿ,ಉಪಾಧ್ಯಕ್ಷೆ ಗುಂಡಮ್ಮ ಮುಳವಾಡ,

ತೋಟಗಾರಿಕೆ ಇಲಾಖೆಯ ವಿಲಾಸ ರಾಠೋಡ, ರೈತ ಸಂಪರ್ಕ ಕೇಂದ್ರ, ಕೃಷಿ ಅಧಿಕಾರಿ ಅಶೋಕ ಕಾಂಬಳೆ ,ಶಿಕ್ಷಣ ಸಂಯೋಜಕ ಎ.ಬಿ ಬಗಲಿ, ಶಿಶು ಅಭಿವೃದ್ಧಿ ಮೇಲ್ವಿಚಾರಕಿ ಶಾರದಾ ಪೂಜಾರಿ ಸಿಆರ್ಪಿ ಹೆಚ್ ಎನ್ ಭೋವಿ , ಕಾರ್ಯದರ್ಶಿ ನಿಂಗಣ್ಣ ಬಿರಾದಾರ ಸೇರಿದಂತೆ ಗ್ರಾಪಂ ಸದಸ್ಯರು ಸಿಬ್ಬಂದಿಗಳು ಹಾಜರಿದ್ದರು.

> ಗ್ರಾಮಸಭೆಯ ಕುರಿತು ಹಿರೇಮುರಾಳ ಗ್ರಾಪಂ ವ್ಯಾಪ್ತಿ ಎಲ್ಲಾ ಗ್ರಾಮಗಳಲ್ಲಿ ಜಾಗೃತಿ ಮೂಡಿಸಲಾಗಿದೆ ಆದರೂ ಜನರು ಸಭೆಗೆ ಬಂದಿಲ್ಲ - ಕೆ ಹೆಚ್ ಕುಂಬಾರ ಪಿಡಿಒ, ಹಿರೇಮುರಾಳ

**ಗ್ರಾಪಂ ಸದಸ್ಯರು ಗೈರು**

ಗ್ರಾಪಂ ಸಭೆಗೆ ನಾವು ಚುಣಾಯಿಸಿದ ಗ್ರಾಪಂ ಸದಸ್ಯರು ಗೈರಾಗಿದ್ದಾರೆ ನಮ್ಮ ಗ್ರಾಮದ ಸಮಸ್ಯೆಗಳ ಕುರಿತು ಅವರು ಸಭೆಯಲ್ಲಿ ಪ್ರಶ್ನಿಸಬೇಕು ಅವರೇ ಗೈರಾಗಿದ್ದಾರೆ ಗೈರಾಗಿರುವ ಸದಸ್ಯರ ಮೇಲೆ ಯಾವ ಕ್ರಮಕೈಗೊಳ್ಳುತ್ತಾರೆಂದು ಗ್ರಾಮಸ್ಥರು ಪ್ರಶ್ನಿಸಿದರು.

## ಲೋಕಾಯುಕ್ತ ಬಲೆಗೆ ಸರ್ವೇಯರ್

• ಉದಯವಾಹಿನಿ, ಹಾವೇರಿ

ಜಮೀನು ಒಂದರ ನಕಾಶೆ ನೀಡಲು ವ್ಯಕ್ತಿ ಒಬ್ಬರ ಬಳಿ 15,000 ಲಂಚ ಸ್ವೀಕರಿಸುತ್ತಿದ್ದ ವೇಳೆ ಲ್ಯಾಂಡ್ ಸರ್ವೆಯರ್ ಒಬ್ಬ ಲೋಕಾಯುಕ್ತ ಅಧಿಕಾರಿಗಳ ಬಲೆಗೆ ರೆಡ್ ಹ್ಯಾಂಡ್ ಆಗಿ ಸಿಗಿ ಬಿದ್ದಿರುವ ಘಟನೆ ಹಾವೇರಿಯಲ್ಲಿ ನಡೆದಿದೆ. ರೈತ ಮಂಜುನಾಥ ಕಡ್ಡಿ ಅವರು ಹಾವೇರಿ ತಾಲ್ಲೂಕಿನ ಕಳ್ಳಿಹಾಳ ಗ್ರಾಮದಲ್ಲಿ ತಮ್ಮ ಜಮೀನು ವಾಟಿ ಮಾಡಿಸಲು ಅರ್ಜಿ ಸಲ್ಲಿಸಿದ್ದರು. ವಾಟ್ನಿ ಮಾಡಿಸುವುದಕ್ಕೆ ಜಮೀನು ನಕಾಶೆ ಅಗತ್ಯವಿತ್ತು ಹಾಗಾಗಿ ಹಾವೇರಿ ತಾಲ್ಲೂಕು ಭೂ ದಾಖಲೆಗಳ ಸಹಾಯಕ ಕಚೇರಿಯ ಭೂಮಾಪಕ ಅಶೋಕ ಎಚ್.ಜಿ ಎನ್ನುವವರ ಬಳಿ ಮಂಜುನಾಥ್ ಅರ್ಜಿ ಸಲ್ಲಿಸಿದ್ದರು. ನಕಾಶೆ ನೀಡಲು ಅಶೋಕ 30 ಸಾವಿರ ರೂ. ಕೇಳಿದ್ದ. ಅಷ್ಟು ಹಣವಿಲ್ಲವೆಂದು ರೈತ ಹೇಳಿದ್ದರು. ನಂತರ, 25 ಸಾವಿರಕ್ಕೆ ಮಾತುಕತೆ ಆತ್ತು. ಈ ಬಗ್ಗೆ ಮಂಜುನಾಥ ಅವರು ಕಚೇರಿಗೆ ದೂರು ಸಲ್ಲಿಸಿದ್ದರು. ಮುಂಗಡವಾಗಿ 15 ಸಾವಿರ ಲಂಚ ಪಡೆಯುವ ಸಂದರ್ಭದಲ್ಲಿ ದಾಳಿ ಮಾಡಿ ಅಶೋಕ ಅವರನ್ನು ಪುರಾವೆ ಸಮೇತ ಸೆರೆ ಹಿಡಿಯಲಾಗಿದೆ ಎಂದು ತಿಳಿದುಬಂದಿದೆ.

# ಕಂಪ್ಯೂಟರ್ ಸೆಂಟರ್‌ಗಳಲ್ಲಿ ನಕಲಿ 'ಲೇಬರ್ ಕಾರ್ಡ್' ವಿತರಣೆ

### ಇದು ಶಿಕ್ಷಾರ್ಹ ಅಪರಾಧವಾಗಿದ್ದು, ಅಂತಹ ಕಾರ್ಡ್‌ಗಳಿಗೆ ಯಾವುದೇ ಮಾನ್ಯತೆ ಇರುವುದಿಲ್ಲ, ಸೌಲಭ್ಯಗಳು ದೊರೆಯುವುದಿಲ್ಲ

• ಉದಯವಾಹಿನಿ, ಶಿವಮೊಗ್ಗ

ಜಿಲ್ಲೆಯಲ್ಲಿ ಕೆಲವು ಕಂಪ್ಯೂಟರ್ ಸೆಂಟರ್‌ಗಳಲ್ಲಿ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರಿಗೆ ನೀಡುತ್ತಿರುವ ಗುರುತಿನ ಚೀಟಿಗಳನ್ನೇ ಎಡಿಟ್ ಮಾಡಿ ಕಾರ್ಮಿಕರಿಗೆ ಲೇಬರ್ ಕಾರ್ಡ್‌ಗಳನ್ನು ಮಾಡಿ ಕೊಡುತ್ತೇವೆಂದು ಹೇಳಿ ಕಾರ್ಮಿಕರನ್ನು ವಂಚಿಸಿ, ನಕಲಿ ಕಾರ್ಮಿಕರ ಗುರುತಿನ ಚೀಟಿ ನೀಡುತ್ತಿದ್ದು ಇದು ಅಪರಾಧವಾಗಿದೆ.

ಕಾರ್ಮಿಕರು ಇಂತಹವರಿಂದ ಮೋಸ ಹೋಗಬಾರದೆಂದು ಜಿಲ್ಲಾ ಕಾರ್ಮಿಕ ಅಧಿಕಾರಿ ತಿಳಿಸಿದ್ದಾರೆ.

ಕಟ್ಟಡ ಮತ್ತು ಇತರೆ ನಿರ್ಮಾಣ ಕಾಮಗಾರಿಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಕಾರ್ಮಿಕರನ್ನು ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ ಫಲಾನುಭವಿಗಳನ್ನಾಗಿ ನೋಂದಾಯಿಸಲು ಕಾರ್ಮಿಕ ನಿರೀಕ್ಷಕರುಗಳನ್ನು ನೋಂದಣಿ ಅಧಿಕಾರಿಯಾಗಿ ನೇಮಕ ಮಾಡಲಾಗಿರುತ್ತದೆ.

**ರಾಜ್ಯದ ಕಾರ್ಮಿಕರೇ ಎಚ್ಚರ**

ಆ ಪ್ರಕಾರ ಶಿವಮೊಗ್ಗ ಜಿಲ್ಲೆಯಾದ್ಯಂತ ಪ್ರತಿ ತಾಲ್ಲೂಕಿನಲ್ಲಿಯು ಕಾರ್ಮಿಕ ನಿರೀಕ್ಷಕರುಗಳು ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರನ್ನು ನೋಂದಣಿ ಮಾಡಿ ಗುರುತಿನ ಚೀಟಿ (ಲೇಬರ್ ಕಾರ್ಡ್) ಗಳನ್ನು ನೀಡುತ್ತಿದ್ದಾರೆ. ಆದರೆ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಕೆಲವು ಕಂಪ್ಯೂಟರ್ ಸೆಂಟರ್‌ಗಳಲ್ಲಿ ಶಿವಮೊಗ್ಗ ಜಿಲ್ಲೆಯ ಕಾರ್ಮಿಕ ನಿರೀಕ್ಷಕರುಗಳ ಕಛೇರಿಗಳಲ್ಲಿ ನೋಂದಣಿ ಮಾಡಿ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರಿಗೆ ನೀಡುತ್ತಿರುವ ಗುರುತಿನ ಚೀಟಿಗಳನ್ನೇ ಎಡಿಟ್ ಮಾಡಿ ಕಾರ್ಮಿಕರಿಗೆ ಲೇಬರ್ ಕಾರ್ಡ್‌ಗಳನ್ನು ಮಾಡಿಕೊಡುತ್ತೇವೆಂದು ಹೇಳಿ ಕಾರ್ಮಿಕರನ್ನು ವಂಚಿಸಿ ಅವರಿಂದ ಕಾನೂನುಬಾಹಿರವಾಗಿ ಹೆಚ್ಚಿನ ಹಣವನ್ನು ಸಂಗ್ರಹ ಮಾಡಿ ನಕಲಿ ಕಾರ್ಡ್‌ಗಳನ್ನು ಲೇಬರ್ ಕಾರ್ಡ್‌ಗಳನ್ನು ತಯಾರಿಸಿ ನೀಡುತ್ತಿರುವುದು ಈ ಕಛೇರಿಯ ಗಮನಕ್ಕೆ ಬಂದಿರುತ್ತದೆ. ಹಾಗೂ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರನ್ನು ನೋಂದಣಿ ಮಾಡಿ ಗುರುತಿನ ಚೀಟಿ (ಲೇಬರ್ ಕಾರ್ಡ್)ಗಳನ್ನು ನೀಡುವ ನೋಂದಣಿ ಅಧಿಕಾರಿಗಳು ಶಿವಮೊಗ್ಗ ಜಿಲ್ಲೆಯ ಆಯಾಯ ತಾಲ್ಲೂಕಿನ ಕಾರ್ಮಿಕ ನಿರೀಕ್ಷಕರುಗಳಾಗಿದ್ದು ಹೊಸದಾಗಿ ಲೇಬರ್ ಕಾರ್ಡ್ ಮಾಡಿಸುವ ಫಲಾನುಭವಿಗಳು ಸಿಎಸ್ ಸೆಂಟರ್‌ಗಳಲ್ಲಿ ಅರ್ಜಿ ಸಲ್ಲಿಸಿದ್ದಲ್ಲಿ 'ಸ್ವೀಕೃತಿ ಪತ್ರ' ಲಭ್ಯವಾಗುತ್ತದೆ. ತದನಂತರ ಕಾರ್ಮಿಕ ನಿರೀಕ್ಷಕರು ಕಾಲಮಿತಿಯೊಳಗೆ ಸ್ಥಳ ಪರಿಶೀಲನೆ ನಡೆಸಿ ಕಾರ್ಮಿಕ ಕಾರ್ಡ್ ಅನ್ನು ಅನುಮೋದನೆ ಮಾಡುತ್ತಾರೆ.



ಉದಯವಾಹಿನಿ ಚಿತ್ರ

ಅದರ ಆಧಾರದ ಮೇಲೆ ಫಲಾನುಭವಿಗಳು ಸಿಎಸ್‌ಸಿ ಸೆಂಟರ್‌ಗಳಲ್ಲಿ ಕಾರ್ಮಿಕ ಕಾರ್ಡ್‌ಗಳನ್ನು ಪಡೆಯಬಹುದಾಗಿರುತ್ತದೆ.

> ಇದರ ಹೊರತು ಬೇರೆ ಯಾವುದೇ ಕಂಪ್ಯೂಟರ್ ಸೆಂಟರ್ ಮತ್ತು ಇನ್ನಿತರ ಕಛೇರಿಗಳಲ್ಲಿ ಕಾರ್ಡ್‌ಗಳನ್ನು ನೋಂದಣಿ ಮಾಡಿ ನೀಡಲಾಗುವದಿಲ್ಲವೆಂಬುದನ್ನು ಎಲ್ಲರೂ ಮನಗಾಣಬೇಕೆಂದು ಈ ವಿಷಯದಲ್ಲಿ ಯಾರು ಸಹ ಮೋಸಹೋಗಬಾರದೆಂದು ಶಿವಮೊಗ್ಗ ಜಿಲ್ಲಾ ಕಾರ್ಮಿಕ ಅಧಿಕಾರಿಗಳಾದ ಎಂ.ಪಿ ವೇಣುಗೋಪಾಲ್ ರವರು ತಿಳಿಸಿರುತ್ತಾರೆ
> -ಎಂ.ಪಿ ವೇಣುಗೋಪಾಲ್

**ಯಾವುದೇ ಮಾನ್ಯತೆ ಇರುವುದಿಲ್ಲ**

ಇದು ಶಿಕ್ಷಾರ್ಹ ಅಪರಾಧವಾಗಿದ್ದು, ಅಂತಹ ಕಾರ್ಡ್ಗಳಿಗೆ ಯಾವುದೇ ಮಾನ್ಯತೆ ಇರುವುದಿಲ್ಲ ಹಾಗೂ ಇಲಾಖೆಯಿಂದ ಯಾವುದೇ ಸೌಲಭ್ಯಗಳು ಸಹ ದೊರೆಯುವುದಿಲ್ಲ. ಆದ ಕಾರಣ ಅಂತಹವರ ಬಗ್ಗೆ, ಮಾಹಿತಿ ತಿಳಿದುಬಂದಲ್ಲಿ ಜಿಲ್ಲಾ ಕಾರ್ಮಿಕ ಅಧಿಕಾರಿಗಳ ಕಛೇರಿಗೆ ಅಥವಾ ಆಯಾಯ ತಾಲ್ಲೂಕುಗಳ ಕಾರ್ಮಿಕ ನಿರೀಕ್ಷಕರುಗಳ ಕಛೇರಿಗೆ ಮಾಹಿತಿಯನ್ನು ನೀಡುವುದರ ಮೂಲಕ ನಿಜವಾದ ಕಾರ್ಮಿಕರು ವಂಚನೆಗೊಳಗಾಗುವುದನ್ನು ತಪ್ಪಿಸಲು ಸಹಕರಿಸಬೇಕು.

# ಇಸ್ಕಾನ್‌ಗೆ ಸೇರಿದ 17 ಬ್ಯಾಂಕ್ ಖಾತೆಗಳ ಮೇಲೆ ಬಾಂಗ್ಲಾದೇಶ ನಿರ್ಬಂಧ

## ಬಾಂಗ್ಲಾದೇಶದಲ್ಲಿನ ಇಸ್ಕಾನ್ ಸಂಸ್ಥೆ ನಂಟು ಹೊಂದಿರುವವರಿಗೆ ಸರ್ಕಾರದಿಂದ ಮತ್ತೊಂದು ಆಘಾತ

**ಢಾಕಾ:** ಬಾಂಗ್ಲಾದೇಶದಲ್ಲಿ ಇಸ್ಕಾನ್ ಮೇಲಿನ ಸರ್ಕಾರದ ಪ್ರಹಾರ ಮುಂದುವರಿದಿದೆ. ಇಸ್ಕಾನ್‌ಗೆ ಸಂಬಂಧಿಸಿದ 17 ಮಂದಿಯ ಬ್ಯಾಂಕ್ ಖಾತೆಗಳನ್ನು 30 ದಿನಗಳ ಕಾಲ ನಿರ್ಬಂಧಿಸುವಂತೆ ಬಾಂಗ್ಲಾದೇಶ ಸರ್ಕಾರದ ಅಧಿಕಾರಿಗಳು ಆದೇಶ ನೀಡಿದ್ದಾರೆ. ದೇಶದ್ರೋಹ ಆರೋಪದಡಿ ಕೆಲವು ದಿನಗಳ ಹಿಂದೆ ಬಂಧಿತರಾದ ಸಂಸ್ಥೆಯ ಮಾಜಿ ಸದಸ್ಯ ಚಿನ್ಮಯ ಕೃಷ್ಣ ದಾಸ್ ಅವರ ಖಾತೆಯೂ ಸೇರಿದೆ ಎಂದು ಶುಕ್ರವಾರ ಮಾಧ್ಯಮಗಳು ವರದಿ ಮಾಡಿವೆ.



ಒಂದು ತಿಂಗಳ ಕಾಲ ಅಮಾನತು

ಚಿನ್ಮಯ ಕೃಷ್ಣದಾಸ್ ಅವರ ಬೆಂಬಲಿಗರು ಮತ್ತು ಭದ್ರತಾ ಸಿಬ್ಬಂದಿ ನಡುವೆ ನಡೆದ ಘರ್ಷಣೆ ಯಲ್ಲಿ ವಕೀಲನೊಬ್ಬನ ಹತ್ಯೆ ಬಳಿಕ ಇಸ್ಕಾನ್ ಮೇಲೆ ನಿಷೇಧ ಹೇರುವಂತೆ ಕೋರಿ ಬಾಂಗ್ಲಾದೇಶ ಹೈಕೋರ್ಟ್‌ಗೆ ಅಲ್ಲಿನ ಸರ್ಕಾರ ಅರ್ಜಿ ಸಲ್ಲಿಸಿತ್ತು. ಇಸ್ಕಾನ್ ಒಂದು ಮೂಲಭೂತವಾದಿ ಸಂಸ್ಥೆ ಎಂದು ಅದು ವಾದಿಸಿತ್ತು. ಆದರೆ ಅದಕ್ಕೆ ನ್ಯಾಯಾಲಯದಲ್ಲಿ ಮುಖಭಂಗ ಎದುರಾಗಿತ್ತು. ಇದರ ಬೆನ್ನಲ್ಲೇ ಇಸ್ಕಾನ್ ವಿರುದ್ಧ ಅನ್ಯ ಕ್ರಮಗಳನ್ನು ಕೈಗೊಳ್ಳಲು ಅದು ಮುಂದಾಗಿದೆ. ವಿಭಿನ್ನ ಬ್ಯಾಂಕುಗಳು ಮತ್ತು ಹಣಕಾಸು ಸಂಸ್ಥೆಗಳಿಗೆ ಈ ಸಂಬಂಧ ನಿರ್ದೇಶನಗಳನ್ನು ಹೊರಡಿಸಿರುವ ಬಾಂಗ್ಲಾದೇಶ ಹಣಕಾಸು ಗುಪ್ತಚರ ಘಟಕ (ಬಿಎಫ್‌ಐಯು), ಅವರ ಖಾತೆಗಳಿಂದ ಎಲ್ಲಾ ರೀತಿಯ ವಹಿವಾಟುಗಳನ್ನು ಒಂದು ತಿಂಗಳ ಕಾಲ ಅಮಾನತುಗೊಳಿಸಿದೆ.

**ಬಾಂಗ್ಲಾದೇಶದಲ್ಲಿ ಹಿಂದೂ ಸಂಸ್ಥೆಗಳ ವಿರುದ್ಧ ಕ್ರಮಕ್ಕೆ ಮುಂದಾಗಿರುವ ಅಲ್ಲಿನ ಸರ್ಕಾರ, ಇಸ್ಕಾನ್ ಸಂಸ್ಥೆ ಜತೆ ನಂಟು ಹೊಂದಿರುವ 17 ವ್ಯಕ್ತಿಗಳ ಬ್ಯಾಂಕ್ ಖಾತೆಗಳ ವಹಿವಾಟುಗಳನ್ನು ಮುಂದಿನ 30 ದಿನಗಳ ಕಾಲ ತಡೆ ಹಿಡಿಯುವಂತೆ ಆದೇಶಿಸಿದೆ. ಚಿನ್ಮಯ ಕೃಷ್ಣ ದಾಸ್ ಬಂಧನದ ಬೆನ್ನಲ್ಲೇ ಬಾಂಗ್ಲಾದೇಶ ಹಣಕಾಸು ಗುಪ್ತಚರ ಘಟಕ ಈ ಆದೇಶ ಹೊರಡಿಸಿದೆ.**

- **ಚಿನ್ಮಯ ಕೃಷ್ಣ ದಾಸ್ ಸೇರಿದಂತೆ 17 ಮಂದಿಯ ಬ್ಯಾಂಕ್ ಖಾತೆಗಳನ್ನು ಸಂಪೂರ್ಣ ನಿರ್ಬಂಧಿಸಿ ಆದೇಶ**
- **ಎಲ್ಲಾ ವಹಿವಾಟುಗಳ ಕುರಿತು ಮಾಹಿತಿ ಒದಗಿಸಲು ಬಾಂಗ್ಲಾದೇಶ ಹಣಕಾಸು ಗುಪ್ತಚರ ಘಟಕ ಸೂಚನೆ**

ಬಾಂಗ್ಲಾದೇಶ ಕೇಂದ್ರ ಬ್ಯಾಂಕ್ ಅಡಿಯಲ್ಲಿ ಕಾರ್ಯನಿರ್ವಹಿಸುವ ಹಣಕಾಸು ಗುಪ್ತಚರ ಸಂಸ್ಥೆ, ಈ 17 ವ್ಯಕ್ತಿಗಳ ಮಾಲೀಕತ್ವದ ಎಲ್ಲಾ ವ್ಯವಹಾರ ವಹಿವಾಟುಗಳಿಗೆ ಸಂಬಂಧಿಸಿದ ಖಾತೆಗಳ ಇತ್ತೀಚಿನ ಸ್ಟೇಟ್‌ಮೆಂಟ್ ಸೇರಿದಂತೆ ಎಲ್ಲಾ ಮಾಹಿತಿಗಳನ್ನು ಕಾರ್ಯಾಚರಣೆಯ ಮೂರು ದಿನಗಳ ಒಳಗೆ ಕಳುಹಿಸುವಂತೆ ಸೂಚಿಸಿದೆ.

**ಚಿನ್ಮೊಯ್ ಕೃಷ್ಣದಾಸ್ ಬಂಧನ:** ಚಿತ್ತೋಗ್ರಾಮ್‌ನ ನ್ಯೂ ಮಾರ್ಕೆಟ್ ಪ್ರದೇಶದಲ್ಲಿ ಹಿಂದು ಸಮುದಾಯದ ರ‍್ಯಾಲಿ ಸಂದರ್ಭದಲ್ಲಿ ಬಾಂಗ್ಲಾದೇಶದ ರಾಷ್ಟ್ರಧ್ವಜಕ್ಕೆ ಅಗೌರವ ತೋರಿಸಿದ್ದಾರೆ ಎಂದು ಆರೋಪಿಸಿ ದಾಸ್ ಸೇರಿದಂತೆ 19 ಮಂದಿ ವಿರುದ್ಧ ಅ. 30ರಂದು ದೇಶದ್ರೋಹ ಪ್ರಕರಣ ದಾಖಲಾಗಿತ್ತು.

ಬಾಂಗ್ಲಾದೇಶ ಸಮ್ಮಿಳಿತ ಸನಾತನಿ ಜಾಗರಣ್ ಜೋತೆಯ ವಕ್ತಾರರಾಗಿರುವ ದಾಸ್ ಅವರನ್ನು ಢಾಕಾದ ವಿಮಾನ ನಿಲ್ದಾಣದಲ್ಲಿ ಸೋಮವಾರ ಬಂಧಿಸಲಾಗಿತ್ತು. ಅವರ ಬಂಧನ ಹಾಗೂ ಜಾಮೀನು ನಿರಾಕರಣೆ ಕುರಿತು ಭಾರತ ಕಳವಳ ವ್ಯಕ್ತಪಡಿಸಿತ್ತು. ಬಾಂಗ್ಲಾದ ಪದಚ್ಯುತ ಪ್ರಧಾನಿ ಶೇಖ್ ಹಸೀನಾ ಕೂಡ ದಾಸ್ ಅವರ ಬಿಡುಗಡೆಗೆ ಒತ್ತಾಯಿಸಿದ್ದಾರೆ.

ವಕೀಲನ ಹತ್ಯೆ ಪ್ರಕರಣಕ್ಕೆ ಸಂಬಂಧಿಸಿದ ಆರೋಪಗಳನ್ನು ಇಸ್ಕಾನ್ ಅಲ್ಲಗಳೆದಿದೆ. ಈ ಆರೋಪಗಳು ಆಧಾರರಹಿತ ಮತ್ತು ದುರುದ್ದೇಶಪೂರಿತ ಪ್ರಚಾರದ ಭಾಗ ಎಂದು ಅದು ಹೇಳಿದೆ.

# ಆರ್‌ಜಿಕರ್ ಆಸ್ಪತ್ರೆ ಅವ್ಯವಹಾರದ ಆರೋಪ ಪಟ್ಟಿ ಸಲ್ಲಿಸಿದ ಸಿಬಿಐ

**ಕೋಲ್ಕತ್ತಾ:** ಆರ್‌ಜಿ ಕರ್ ಆಸ್ಪತ್ರೆಯ ಹಣಕಾಸು ಅವ್ಯವಹಾರಕ್ಕೆ ಸಂಬಂಧಿಸಿದಂತೆ ಸಿಬಿಐ ಆರೋಪ ಪಟ್ಟಿ ಸಲ್ಲಿಸಿದ್ದು, ಇದರಲ್ಲಿ ವೈದ್ಯಕೀಯ ಸಂಸ್ಥೆಯ ಮಾಜಿ ಪ್ರಾಂಶುಪಾಲ ಸಂದೀಪ್ ಘೋಷ್ ಅವರನ್ನು ಪ್ರಮುಖ ಆರೋಪಿ ಎಂದು ಹೆಸರಿಸಿದೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ. 100 ಪುಟಗಳ ಚಾರ್ಜ್‌ಶೀಟ್‌ನಲ್ಲಿ ಕೇಂದ್ರ ತನಿಖಾ ಸಂಸ್ಥೆಯು ಅಕ್ರಮಗಳಲ್ಲಿ ಭಾಗಿಯಾಗಿರುವ ಆರೋಪದಲ್ಲಿ ಬಂಧಿತರಾಗಿರುವ ಇತರ ನಾಲ್ವರನ್ನು ಹೆಸರಿಸಿದೆ ಎಂದು ತಿಳಿದುಬಂದಿದೆ.

ಘೋಷ್ (ಅಮಾನತುಗೊಂಡವರು) ಹೊರತಾಗಿ ಬಂಧಿತ ಆರೋಪಿಗಳಾದ ಬಿಪ್ಲಬ್ ಸಿಂಗ್, ಅಫ್ಸರ್ ಅಲಿ, ಸುಮನ್ ಹಜ್ರಾ ಮತ್ತು ಆಶಿಶ್ ಪಾಂಡೆ ಅವರ ಹೆಸರನ್ನು ಆರೋಪ ಪಟ್ಟಿ ಒಳಗೊಂಡಿದೆ. ಅವರ ಬೆಂಬಲಕ್ಕೆ ಸಿಬಿಐ ಕನಿಷ್ಠ 1,000 ಪುಟಗಳ ದಾಖಲೆಗಳನ್ನು ಲಗತ್ತಿಸಿದೆ. ಆದರೆ, ಯಾವುದೇ ರಾಜ್ಯ ಸರ್ಕಾರಿ ನೌಕರನ ವಿರುದ್ಧ ಚಾರ್ಜ್‌ಶೀಟ್ ಸಲ್ಲಿಸಲು ಅಗತ್ಯವಾದ





ಅಧಿಕೃತ ಅನುಮೋದನೆ ಲಭ್ಯವಿಲ್ಲದ ಕಾರಣ ಇಲ್ಲಿನ ಅಲಿಪುರದ ವಿಶೇಷ ಸಿಬಿಐ ನ್ಯಾಯಾಲಯವು ಆರೋಪಪಟ್ಟಿಯನ್ನು ಅಂಗೀಕರಿಸಲಿಲ್ಲ.

ಕೋರ್ಟ್‌ಗೆ ಸಲ್ಲಿಸುವ ಮೊದಲು ಪಶ್ಚಿಮ ಬಂಗಾಳ ಸರ್ಕಾರವು ತನ್ನ ಉದ್ಯೋಗಿಯ ಹೆಸರನ್ನು ಹೊಂದಿರುವ ಆರೋಪಪಟ್ಟಿಯನ್ನು ಅನುಮೋದಿಸಬೇಕಾಗಿದೆ. ಈ ಪ್ರಕರಣದಲ್ಲಿ, ಅನುಮೋದನೆ ಇನ್ನೂ ಬಂದಿಲ್ಲ. ಘೋಷ್ ಮತ್ತು ಪಾಂಡೆ ಇಬ್ಬರೂ ಸರ್ಕಾರಿ ಆಸ್ಪತ್ರೆಯ ವೈದ್ಯರು ಎಂದು ಅವರು ಹೇಳಿದರು.

ಕಳೆದ ಮೂರು ವರ್ಷಗಳಿಂದ ಆಸ್ಪತ್ರೆಯಲ್ಲಿ ಹಣಕಾಸು ವಂಚನೆ ನಡೆಯುತ್ತಿದೆ ಎಂಬ ಆರೋಪ ಕೇಳಿಬಂದಿದೆ. ಈ ಅವಧಿಯಲ್ಲಿ, ಆಸ್ಪತ್ರೆಗೆ ವೈದ್ಯಕೀಯ ಉಪಕರಣಗಳನ್ನು ಖರೀದಿಸುವಾಗ ಟೆಂಡರ್‌ಗಳನ್ನು ಸಜ್ಜುಗೊಳಿಸಲಾಯಿತು ಮತ್ತು ಘೋಷ್ ಅವರು ಟೆಂಡರ್‌ಗಳನ್ನು ಬ್ಯಾಗ್ ಮಾಡಲು ತನ್ನ ನಿಕಟ ಸಹಚರರಿಗೆ ಸಹಾಯ ಮಾಡಿದರು ಎಂಬ ಆರೋಪ ಎದುರಿಸುತ್ತಿದ್ದಾರೆ.

**ರಾಷ್ಟ್ರೀಯ ಮುಖ್ಯಾಂಶ**

**ಆರ್‌ಜಿ ಕರ್ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯಲ್ಲಿನ ಹಣಕಾಸಿನ ಅಕ್ರಮಗಳಿಗೆ ಸಂಬಂಧಿ ಸಿದಂತೆ ಸೆಪ್ಟೆಂಬರ್ 2 ರಂದು ಘೋಷ್ ಅವರನ್ನು ಬಂಧಿಸಿದ ಸುಮಾರು ಮೂರು ತಿಂಗಳ ನಂತರ ಚಾರ್ಜ್‌ಶೀಟ್ ಸಲ್ಲಿಸಲಾಯಿತು, ಇದು ಆಗಸ್ಟ್‌ನಲ್ಲಿ ಸೆಮಿನಾರ್ ಕೊಠಡಿಯಲ್ಲಿ ಕರ್ತವ್ಯದಲ್ಲಿದ್ದ ವೈದ್ಯರ ಶವ ಪತ್ತೆಯಾದ ನಂತರ ರಾಷ್ಟ್ರೀಯ ಮುಖ್ಯಾಂಶಗಳನ್ನು ಪಡೆದುಕೊಂಡಿತು.**

# ಮಹಾ ಕುಂಭಮೇಳ: ಸಿಎಂ, ರಾಜ್ಯಪಾಲರಿಗೆ ಆಹ್ವಾನ

**ಲಕ್ನೊ:** ಪ್ರಸಕ್ತ ಮಹಾ ಕುಂಭಮೇಳ ಹಿನ್ನೆಲೆಯಲ್ಲಿ ಉತ್ತರ ಪ್ರದೇಶ ಸರ್ಕಾರವು ಎಲ್ಲಾ ರಾಜ್ಯಗಳ ಮುಖ್ಯಮಂತ್ರಿ ಮತ್ತು ರಾಜ್ಯಪಾಲರನ್ನು ಪ್ರಯಾಗರಾಜ್‌ಗೆ ಆಹ್ವಾನಿಸಲಿದೆ ಪ್ರಧಾನಿ ನರೇಂದ್ರ ಮೋದಿ ಅವರು ಹಲವಾರು ಅಭಿವೃದ್ಧಿ ಯೋಜನೆಗಳನ್ನು ಉದ್ಘಾಟಿಸಲು ಡಿ.13 ರಂದು ಪ್ರಯಾಗ್‌ರಾಜ್‌ಗೆ ಭೇಟಿ ನೀಡಲಿದ್ದಾರೆ.



ಉತ್ತರ ಪ್ರದೇಶ ಸರ್ಕಾರ 2025ರ ಜನವರಿಯಿಂದ ಪ್ರಯಾಗ್‌ರಾಜ್‌ನಿಂದ ಪ್ರಾರಂಭವಾಗುವ ಮಹಾ ಕುಂಭಕ್ಕೆ ರಾಷ್ಟ್ರದಾದ್ಯಂತ ರಾಜ್ಯಪಾಲರು ಮತ್ತು ಮುಖ್ಯಮಂತ್ರಿಗಳನ್ನು ಆಹ್ವಾನಿಸಲು ಮಂತ್ರಿಗಳನ್ನು ಕಳುಹಿಸುತ್ತದೆ. ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರು ತಮ್ಮ ಲೋಕದಲ್ಲಿ ಕರೆದ ಸಚಿವರ ಸಭೆಯಲ್ಲಿ ಇದನ್ನು ನಿರ್ಧರಿಸಲಾಯಿತು.

ಯುಪಿ ಸಚಿವರು ಎಲ್ಲಾ ರಾಜ್ಯಗಳಿಗೆ ಭೇಟಿ ನೀಡಿ ರಾಜ್ಯಪಾಲರು ಮತ್ತು ಮುಖ್ಯಮಂತ್ರಿಗಳನ್ನು ಕುಂಭಕ್ಕೆ ಆಹ್ವಾನಿಸಲು ನಿರ್ಧರಿಸಲಾಗಿದೆ ಎಂದು ಹಿರಿಯ ಸಚಿವರೊಬ್ಬರು ಸಭೆಯ ನಂತರ ಮಾಧ್ಯಮಗಳಿಗೆ ತಿಳಿಸಿದರು. ವಿರೋಧ ಪಕ್ಷದ ನಾಯಕರನ್ನೂ ಸಂಪರ್ಕಿಸುವ ಕುರಿತು, ಯಾಕೆ ಸಂಪರ್ಕಿಸಬಾರದು. ನಾವು ವಿರೋಧ ರಾಜ್ಯಗಳು ಸೇರಿದಂತೆ ಎಲ್ಲಾ ಸಿಎಂಗಳೊಂದಿಗೆ ಪ್ರೇಕ್ಷಕರನ್ನು ಹುಡುಕುತ್ತೇವೆ ಮತ್ತು ಅವರನ್ನು ಆಹ್ವಾನಿಸುತ್ತೇವೆ ಎಂದು ಅವರು ಹೇಳಿದರು. ನವೆಂಬರ್ 22 ರಂದು, ಆದಿತ್ಯನಾಥ್ ನೇತೃತ್ವದ ಯುಪಿ ಕ್ಯಾಬಿನೆಟ್ ಮಹಾಕುಂಭವನ್ನು ಪ್ರಚಾರ ಮಾಡಲು ಭಾರತ ಮತ್ತು ವಿದೇಶಗಳಲ್ಲಿ ರೋಡ್‌ಶೋಗಳು ಮತ್ತು ಕಾರ್ಯಕ್ರಮಗಳನ್ನು ನಡೆಸುವ ಪ್ರಸ್ತಾವನೆಯನ್ನು ಅನುಮೋದಿಸಿತು.

ಯುಪಿ ಸರ್ಕಾರದ ಅಧಿಕಾರಿಗಳು ಜಗತ್ತಿನಾದ್ಯಂತ ದಾಖಲೆ ಸಂಖ್ಯೆಯಲ್ಲಿ ಭಕ್ತರನ್ನು ಸೆಳೆಯುತ್ತಾರೆ ಎಂದು ಹೇಳಿದರು. ಕುಂಭವನ್ನು ಬೃಹತ್ ಪ್ರಮಾಣದಲ್ಲಿ ಆಯೋಜಿಸಲಾಗುವುದು ಮತ್ತು ಬೃಹತ್ ಸಮಾರಂಭದಲ್ಲಿ ಮೂರ್ಖತನದ ನಿರ್ವಹಣೆಯನ್ನು ಪ್ರದರ್ಶಿಸುವಾಗ ಭವ್ಯತೆ ಮತ್ತು ದೈವತ್ವವನ್ನು ಖಾತ್ರಿಪಡಿಸುವ ಬಗ್ಗೆ ಸಭೆ ನಡೆಸಲಾಯಿತು ಎಂದು ಉಪಮುಖ್ಯಮಂತ್ರಿ ಬ್ರಜೇಶ್ ಪಾಠಕ್ ಸಭೆಯ ನಂತರ ಸುದ್ದಿಗಾರರಿಗೆ ತಿಳಿಸಿದರು.

# ಅಪಪ್ರಚಾರ ಮಾಡಿ ಜನರನ್ನು ದಾರಿ ತಪ್ಪಿಸುತ್ತಿದ್ದಾರೆ ವಿಪಕ್ಷಗಳ ವಿರುದ್ಧ ಮೋದಿ ವಾಗ್ದಾಳಿ

**ಭುವನೇಶ್ವರ:** ಬಿಜೆಪಿ ನೇತತ್ವದ ಎನ್‌ಡಿಎ ವಿರುದ್ಧ ಅಪಪ್ರಚಾರ ಮಾಡುತ್ತಿರುವ ವಿರೋಧ ಪಕ್ಷಗಳನ್ನು ತರಾಟೆಗೆ ತೆಗೆದುಕೊಂಡ ಪ್ರಧಾನಿ ನರೇಂದ್ರ ಮೋದಿ ಅವರು ಸಂವಿಧಾನದ ಆತ್ಮವನ್ನು ಪುಡಿಮಾಡಿದ್ದಾರೆ ಮತ್ತು ಪ್ರಜಾಪ್ರಭುತ್ವದ ಎಲ್ಲಾ ಮಾನದಂಡಗಳನ್ನು ತಿರಸ್ಕರಿಸಿದ್ದಾರೆ ಎಂದು ಪ್ರತಿಪಾದಿಸಿದ್ದಾರೆ.



ಭುವನೇಶ್ವರದಲ್ಲಿ ಪಕ್ಷದ ಕಾರ್ಯಕರ್ತರನ್ನು ಉದ್ದೇಶಿಸಿ ಮಾತನಾಡಿದ ಪ್ರಧಾನಿ ಮೋದಿ, ಪ್ರತಿಪಕ್ಷಗಳಿಗೆ ಒಂದೇ ಒಂದು ಗುರಿ ಇದೆ, ಜನರನ್ನು ದಾರಿ ತಪ್ಪಿಸುವ ಮೂಲಕ ಹೇಗಾದರೂ ಅಧಿಕಾರವನ್ನು ಹಿಡಿಯುವುದು ಎಂದು ಹೇಳಿದರು.

ಅಧಿಕಾರವನ್ನು ತಮ ಜನಸಿದ್ಧ ಹಕ್ಕು ಎಂದು ಪರಿಗಣಿಸುವವರು ಕಳೆದ ಒಂದು ದಶಕದಿಂದ ಕೇಂದ್ರದಲ್ಲಿ ಅಧಿಕಾರದಲ್ಲಿಲ್ಲ ಎಂದು ಅವರು ಪ್ರತಿಪಕ್ಷಗಳನ್ನು ಕೆಣಕಿದರು.ವಿವಿಧ ವಿಷಯಗಳಲ್ಲಿ ರಾಜಕೀಯ ಪಕ್ಷಗಳ ನಡುವೆ ಸೈದ್ಧಾಂತಿಕ ಭಿನ್ನಾಭಿಪ್ರಾಯಗಳಿರುವುದು ಸಹಜ ಮತ್ತು ತಮ ಅಭಿಪ್ರಾಯಗಳನ್ನು ವ್ಯಕ್ತಪಡಿಸಲು ಮತ್ತು ಆಂದೋಲನಗಳನ್ನು ಆಶ್ರಯಿಸಲು ಅವರಿಗೆ ಹಕ್ಕಿದೆ ಎಂದು ಪ್ರಧಾನಿ ಹೇಳಿದರು. ನಾನು ಮುಖ್ಯಮಂತ್ರಿ ಮತ್ತು ಪ್ರಧಾನಿಯಾಗಿದ್ದ ಅವಧಿಯಲ್ಲಿ ನಾನು ರಾಜಕೀಯದ ವಿವಿಧ ಬಣ್ಣಗಳನ್ನು ನೋಡಿದೆ. ಪ್ರಜಾಪ್ರಭುತ್ವದಲ್ಲಿ ರಚನಾತಕ ವಿರೋಧ ಸಹಜ ಎಂಬುದನ್ನು ನಾನು ಒಪ್ಪಿಕೊಳ್ಳುತ್ತೇನೆ. ಯಾವುದೇ ನಿರ್ಧಾರದಲ್ಲಿ ಭಿನ್ನಾಭಿಪ್ರಾಯಗಳಿರಬಹುದು ಎಂದರು. ಆದರೆ, ಪ್ರತಿಯೊಬ್ಬರೂ ಈಗ ಪ್ರತಿಭಟನೆಗಳನ್ನು ಆಯೋಜಿಸುವ ವಿಧಾನದಲ್ಲಿ ದೊಡ್ಡ ವ್ಯತ್ಯಾಸವನ್ನು ಅನುಭವಿಸಬಹುದು ಎಂದು ಪ್ರಧಾನಿ ಮೋದಿ ಹೇಳಿದರು.

ಸಂವಿಧಾನದ ಆತವನ್ನು ಹತ್ತಿಕ್ಕಲಾಗಿದೆ ಮತ್ತು ಪ್ರಜಾಪ್ರಭುತ್ವದ ಎಲ್ಲಾ ಮಾನದಂಡಗಳನ್ನು ತಿರಸ್ಕರಿಸಲಾಗಿದೆ. ಬಿಜೆಪಿ ನೇತತ್ವದ ಎನ್‌ಡಿಎಗೆ ಜನರು ತಮ ಜನಾದೇಶವನ್ನು ನೀಡಿದ್ದಾರೆ ಎಂಬ ಅಂಶವನ್ನು ಮೊದಲಿನಿಂದಲೂ ವಿರೋಧ ಪಕ್ಷಗಳು ಒಪ್ಪಿಕೊಳ್ಳಲು ಸಿದ್ಧವಾಗಿಲ್ಲ ಎಂದು ಪ್ರಧಾನಿ ಹೇಳಿದರು. ಕಳೆದ ದಶಕದಿಂದ ಅಧಿಕಾರವನ್ನು ನಿರಾಕರಿಸಲಾಗಿದೆ, ಅಂತಹ ಪಕ್ಷಗಳು ಈಗ ತುಂಬಾ ಕೋಪದಿಂದ ತುಂಬಿವೆ, ಅವರು ದೇಶ ಮತ್ತು ಅದರ ಜನರ ವಿರುದ್ಧ ಪಿತೂರಿ ಮಾಡಲು ಹಿಂಜರಿಯುವುದಿಲ್ಲ. ಅವರು ಜೂಠ್ ಔರ್ ಅಫ್ವಾ ಕಿ ದುಕಾನ್ ಮೂಲಕ ಜನರನ್ನು ದಾರಿ ತಪ್ಪಿಸುತ್ತಿದ್ದಾರೆ ಎಂದು ಅವರು ಹೇಳಿದರು.

**ಇಂಫಾಲ:** ಮಣಿಪುರದ ಪೊಲೀಸ್‌ಠಾಣೆ, ಶಾಸಕರ ನಿವಾಸಗಳ ಮೇಲೆ ದಾಳಿ ನಡೆಸಿದ ಪ್ರಕರಣ ಕುರಿತಂತೆ 8 ಮಂದಿಯನ್ನು ಪೊಲೀಸರು ಬಂಧಿಸಿದ್ದಾರೆ. ಹಿಂಸಾಚಾರಪೀಡಿತ ಮಣಿಪುರದಲ್ಲಿ ಇತ್ತೀಚೆಗೆ ಶಾಸಕರ ಮನೆಗೆ ಲಗ್ಗೆ ಹಾಕಿದ ದುಷ್ಕರ್ಮಿಗಳ ಗುಂಪು ಬೆಂಕಿ ಹಚ್ಚಿ ಲೂಟಿ ಮಾಡಿದ ಪ್ರಕರಣ ಕುರಿತಂತೆ ಪೊಲೀಸರು ತನಿಖೆ ಬಿರುಸುಗೊಳಿಸಿದ್ದಾರೆ.

ಇಂಫಾಲ್‌ನ ಪಶ್ಚಿಮ ಜಿಲ್ಲೆಯ ಪಾಟ್ಸೊಹಿ ಪೊಲೀಸ್‌ಠಾಣೆ ವ್ಯಾಪ್ತಿಯ ಕಿಯಾಂ ಮಮಾಂಗ್ ಲೈಕೈನಲ್ಲಿ ವ್ಯಕ್ತಿಯೊಬ್ಬನನ್ನು ಬಂಧಿಸಲಾಗಿದೆ. ಈತನನ್ನು ಚೋಂಗ್ಥಮ್ ತೋಯ್ಬಾ ಎಂದು ಗುರುತಿಸಲಾಗಿದೆ. ನ. 27 ರಂದು ಕಕ್ಚಿಂಗ್ ಪೊಲೀಸ್ ಠಾಣೆ ಮತ್ತು ಸಿಬ್ಬಂದಿ ಮೇಲೆ ದಾಳಿ ಮಾಡಿದ್ದ 7 ಮಂದಿಯನ್ನು ಈಗಾಗಲೇ ಬಂಧಿಸಲಾಗಿದೆ.

# ಶಾಸಕರ ನಿವಾಸಗಳ ಮೇಲೆ ದಾಳಿ: 8 ಮಂದಿ ಸೆರೆ



ಶಾಸಕರ ನಿವಾಸಗಳ ಮೇಲೆ ದಾಳಿ ನಡೆಸಿದ ಪ್ರಕರಣ ಕುರಿತಂತೆ ಬಂಧಿಸಲಾಗಿರುವ ನಾಲ್ವರನ್ನು ಬಿಡುಗಡೆಗೆ ಆಗ್ರಹಿಸಿ ಪೊಲೀಸ್‌ಠಾಣೆ ಮೇಲೆ ದಾಳಿ ನಡೆಸಲಾಗಿತ್ತು. ನ. 11 ರಂದು ಜಿರಿಬಾಂಬ್ ಜಿಲ್ಲೆಯಲ್ಲಿ ಶಂಕಿತ ಹಮರ್ ಉಗ್ರರು ಮತ್ತು ಭದ್ರತಾ ಪಡೆಗಳನಡುವೆ ಗುಂಡಿನ ಕಾಳಗ ನಡೆದಿತ್ತು.ಈ ಗುಂಡಿನ ಚಕಮಕಿಯಲ್ಲಿ 10 ಮಂದಿ ಶಂಕಿತ ಭಯೋತ್ಪಾದಕರ ಹತ್ಯೆ ನಡೆದಿತ್ತು.

ಈ ಸಂದರ್ಭದಲ್ಲಿ ನಿರಾಶ್ರಿತ ಕೇಂದ್ರದಲ್ಲಿದ್ದ ಮೈತೇಯಿ ಸಮುದಾಯಕ್ಕೆ ಸೇರಿದ ಮೂವರು ಮಹಿಳೆಯರು, ಮೂವರು ಮಕ್ಕಳು ನಾಪತ್ತೆಯಾಗಿದ್ದರು. ಶೋಧ ಕಾರ್ಯ ಕೈಗೊಂಡ ಮೇಲೆ ಮಹಿಳೆಯರು ಮತ್ತು ಮಕ್ಕಳ ಮೃತ ದೇಹಗಳು ನದಿಯಲ್ಲಿ ಪತ್ತೆಯಾಗಿದ್ದವು. ಈ ಘಟನೆಯಿಂದ ಆಕ್ರೋಶಗೊಂಡ ಜನರ ಗುಂಪು ಬಿಜೆಪಿಯ ಮೂವರು ಶಾಸಕರ ಮನೆಗಳಿಗೆ ಬೆಂಕಿ ಹಚ್ಚಿತ್ತು. ಈ ದಾಳಿಯ ಮೇಲೆ ಸಚಿವರ ಮನೆಯೂ ಸೇರಿತ್ತು. ಕಳೆದ ವರ್ಷ ಮೇ ತಿಂಗಳಿನಲ್ಲಿ ಮಣಿಪುರದಲ್ಲಿ ಮೈತೇಯಿ ಮತ್ತು ಕುಕಿ ಜೋ ನಡುವಣ ಹಿಂಸಾಚಾರ ಭುಗಿಲೆದಿತ್ತು. ಈ ಸಂಘರ್ಷದಲ್ಲಿ ಇದುವರೆಗೆ 250 ಮಂದಿ ಸಾವಿಗೀಡಾಗಿದ್ದು, ಸಾವಿರಾರು ಮಂದಿ ಮನೆ ಕಳೆದುಕೊಂಡು ನಿರ್ಗತಿಕರಾಗಿದ್ದಾರೆ.

# ರೈಲ್ವೆ ನಿಲ್ದಾಣದ ಪಾರ್ಕಿಂಗ್ ಬಳಿ ಆಕಸ್ಮಿಕ ಬೆಂಕಿ 200 ದ್ವಿಚಕ್ರ ವಾಹನಗಳು ಭಸ್ಮ

**ಲಕ್ನೋ:** ಉತ್ತರ ಪ್ರದೇಶದ ವಾರಣಾಸಿಯ ಕ್ಯಾಂಟ್ ರೈಲ್ವೆ ನಿಲ್ದಾಣದ ವಾಹನ ನಿಲುಗಡೆ ಪ್ರದೇಶದಲ್ಲಿ ಆಕಸ್ಮಿಕಬೆಂಕಿ ಕಾಣಿಸಿಕೊಂಡ ಪರಿಣಾಮ ಕನಿಷ್ಠ 200 ದ್ವಿಚಕ್ರ ವಾಹನಗಳು ಸುಟ್ಟು ಭಸ್ಮವಾಗಿದೆ. ಶನಿವಾರ ಮುಂಜಾನೆ ಘಟನೆ ನಡೆದಿದೆ. ಪ್ರಾಥಮಿಕ ಮಾಹಿತಿಯ ಪ್ರಕಾರ ಶಾರ್ಟ್ ಸರ್ಕ್ಯೂಟ್‌ನಿಂದ ಬೆಂಕಿ ಕಾಣಿಸಿಕೊಂಡಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಸದ್ಯ ಯಾವುದೇ ಪ್ರಾಣಹಾನಿ ಸಂಭವಿಸಿಲ್ಲ. ಘಟನಾ ಸ್ಥಳಕ್ಕೆ ಸುಮಾರು 12 ಅಗ್ನಿಶಾಮಕ



ದಳ ವಾಹನಗಳು, ಜೊತೆಗೆ ಸರ್ಕಾರಿ ರೈಲ್ವೆ ಪೊಲೀಸ್ (ಜಿಆರ್‌ಪಿ), ರೈಲ್ವೆ ಪ್ರೊಟೆಕ್ಷನ್ ಫೋರ್ಸ್ (ಆರ್‌ಪಿಎಫ್) ಮತ್ತು ಸ್ಥಳೀಯ ಪೊಲೀಸ್ ತಂಡ ಧಾವಿಸಿ ಬೆಂಕಿ ನಂದಿಸುವಲ್ಲಿ ಯಶಸ್ವಿಯಾಗಿದ್ದಾರೆ. ಸುಮಾರು 2 ತಾಸುಗಳ ಕಾಲ ಹರಸಾಹಸ ಪಟ್ಟು ಬೆಂಕಿ ನಂದಿಸಲಾಗಿದೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ.

ಘಟನೆಯ ಕುರಿತು ಸಿಒ ಜಿಆರ್‌ಪಿ ಕುನ್ವರ್ ಬಹದ್ದೂರ್ ಸಿಂಗ್ ಮಾತನಾಡಿ, ಹಲವಾರು ದ್ವಿಚಕ್ರ ವಾಹನಗಳು ಸುಟ್ಟು ಹೋಗಿವೆ. ಶಾರ್ಟ್ ಸರ್ಕ್ಯೂಟ್‌ನಿಂದ ಬೆಂಕಿ ಕಾಣಿಸಿಕೊಂಡಿದೆ. ನಾವು ಹೆಚ್ಚಿನ ತನಿಖೆ ನಡೆಸುತ್ತಿದ್ದೇವೆ. ಸುಟ್ಟು ಕರಕಲಾದ ಬಹುತೇಕ ದ್ವಿಚಕ್ರ ವಾಹನಗಳು ರೈಲ್ವೆ ನೌಕರರಿಗೆ ಸೇರಿವೆ ಎಂದು ಮಾಹಿತಿ ನೀಡಿದ್ದಾರೆ.

# ಹಾವು ಕಡಿತವನ್ನು ಕಾಯಿಲೆ ಎಂದು ಘೋಷಣೆ ಮಾಡಿದ ಕೇಂದ್ರ

**ನವದೆಹಲಿ:** ದೇಶದಲ್ಲಿ ಹಾವು ಕಡಿತ ಪ್ರಕರಣ ಹೆಚ್ಚಾಗುತ್ತಿರುವ ಹಿನ್ನಲೆಯಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು, ಹಾವು ಕಡಿತವನ್ನು ಕಾಯಿಲೆ ಎಂದು ಘೋಷಣೆ ಮಾಡಿದೆ.

ಇನ್ನು ಮುಂದೆ ಎಲ್ಲಾ ಆರೋಗ್ಯ ಕೇಂದ್ರಗಳು ಹಾವು ಕಡಿತ ಪ್ರಕರಣಕ್ಕೆ ಸಂಬಂಧಿಸಿದ ದಾಖಲೆಯನ್ನು ನಮೂದಿಸಬೇಕು ಎಂದು ಆದೇಶ ಹೊರಡಿಸಿದೆ.

ಕೇಂದ್ರ ಹೊರಡಿಸಿದ ಅಧಿಕೃತ ಅಧಿಸೂಚನೆಯ ಪ್ರಕಾರ, ಎಲ್ಲಾ ಖಾಸಗಿ ಮತ್ತು ಸರ್ಕಾರಿ ಆಸ್ಪತ್ರೆಗಳು ಮತ್ತು ವೈದ್ಯಕೀಯ ಸಂಸ್ಥೆಗಳು ಹಾವು ಕಡಿತ ಹಾಗೂ ಅದರಿಂದಾಗುವ ಸಾವಿನ ಬಗ್ಗೆ ಸಮಗ್ರ ಮಾಹಿತಿ ನೀಡಬೇಕೆಂದು ನಿರ್ದೇಶನ ನೀಡಿದೆ. ಈ ಬಗ್ಗೆ ಮಾಹಿತಿ ನೀಡಿರುವ ಕೇಂದ್ರ ಆರೋಗ್ಯ ಕಾರ್ಯದರ್ಶಿ ಪುಣ್ಯ ಸಲಿಲ ಶ್ರೀವಾಸ್ತವ ಅವರು, ಹಾವು ಕಡಿತವು ಸಾರ್ವಜನಿಕ ಆರೋಗ್ಯದ ಕಾಳಜಿಯ ವಿಷಯವಾಗಿದೆ ಮತ್ತು ಕೆಲವು ಸಂದರ್ಭಗಳಲ್ಲಿ ಅದು ಮರಣ, ರೋಗ ಮತ್ತು ಅಂಗವೈಕಲ್ಯಕ್ಕೆ ಕಾರಣವಾಗುತ್ತದೆ.




2030ರ ವೇಳೆಗೆ ಭಾರತದಲ್ಲಿ ಹಾವು ಕಡಿತದ ತಡೆಗಟ್ಟುವಿಕೆ ಮತ್ತು ಸೂಕ್ತ ಔಷಧ ದೊರೆಯುವಂತೆ ಮಾಡಲು ಕೇಂದ್ರ ಸರ್ಕಾರ ರಾಷ್ಟ್ರೀಯ ಕ್ರಿಯಾ ಯೋಜನೆಯನ್ನು ಪ್ರಾರಂಭಿಸಿದೆ. 2030ರ ವೇಳೆಗೆ ಹಾವು ಕಡಿತ ಸಂಬಂಧಿತ ಸಾವುಗಳನ್ನು ಅರ್ಧದಷ್ಟು ಕಡಿಮೆ ಮಾಡುವುದು ಕ್ರಿಯಾ ಯೋಜನೆಯ ಉದ್ದೇಶ ಎಂದು ಹೇಳಿದರು. ಗ್ರಾಮೀಣ ಪ್ರದೇಶ ಹಾಗೂ ಬುಡಕಟ್ಟು ಪ್ರದೇಶಗಳಲ್ಲಿ ಹಾವು ಕಡಿತದ ಪ್ರಕರಣ ಹೆಚ್ಚಾಗಿ ಕಂಡುಬರುತ್ತಿದ್ದು, ಹಲವರು ಹಾವು ಕಡಿತಕ್ಕೊಳಗಾಗಿ ಮೃತ ಪಟ್ಟಿದ್ದಾರೆ. ಈಗಾಗಲೇ ಹಲವಾರು ರಾಜ್ಯಗಳು ಹಾವು ಕಡಿತವನ್ನು ಕಾಯಿಲೆ ಎಂದು ಘೋಷಿಸಿವೆ. ಕರ್ನಾಟಕ ದೇಶದಲ್ಲಿಯೇ ಮೊದಲ ಬಾರಿಗೆ ಹಾವು ಕಡಿತವನ್ನು ಕಾಯಿಲೆ ಎಂದು ಘೋಷಿಸಿತ್ತು. ಕಳೆದ ವರ್ಷದ ಫೆಬ್ರವರಿಯಲ್ಲಿ ಕರ್ನಾಟಕ ಸರ್ಕಾರ ಈ ಮಹತ್ವದ ಆದೇಶವನ್ನು ಹೊರಡಿಸಿತ್ತು. ಆರೋಗ್ಯ, ಕುಟುಂಬ ಕಲ್ಯಾಣ ಇಲಾಖೆಯ ವರದಿ, ಮಾಹಿತಿಯ ಪ್ರಕಾರ 2023ರಲ್ಲಿ ರಾಜ್ಯದಲ್ಲಿ 5,316 ಹಾವು ಕಡಿತಗಳು ದಾಖಲಾಗಿವೆ ಎಂದು ವರದಿಯಾಗಿತ್ತು. ನಂತರ ಹಾವು ಕಡಿತ ಪ್ರಕರಣವನ್ನು ಕಾಯಿಲೆ ಎಂದು ಘೋಷಿಸಲಾಯಿತು. ಇತ್ತೀಚೆಗೆ ತಮಿಳುನಾಡು ಸರ್ಕಾರ ಕೂಡ ಇದನ್ನು ಕಾಯಿಲೆ ಎಂದು ಘೋಷಿಸಿದೆ. ಈ ವರ್ಷದ ಜೂನ್‌ವರೆಗೆ ತಮಿಳುನಾಡಿನಲ್ಲಿ 7,300 ಹಾವು ಕಡಿತ ಪ್ರಕರಣಗಳು ವರದಿಯಾಗಿದ್ದು, 13 ಜನರು ಮೃತಪಟ್ಟಿದ್ದಾರೆ. ಕಳೆದ ವರ್ಷ 19,795 ಹಾವು ಪ್ರಕರಣಗಳು ವರದಿಯಾಗಿ 43 ಜನ ಮೃತಪಟ್ಟಿದ್ದರು. ಇನ್ನು 2022ರಲ್ಲಿ 15,120 ಹಾವು ಕಡಿತ ಪ್ರಕರಣ ದಾಖಲಾದರೆ, 17 ಜನರು ಅಸುನೀಗಿದ್ದರು.

# ಪುದುಚೇರಿಯಲ್ಲಿ ಅಬ್ಬರಿಸುತ್ತಿದೆ ಫೆಂಗಲ್ ಚಂಡಮಾರುತ

**ಚನ್ನೈ:** ಬಂಗಾಳಕೊಲ್ಲಿಯಲ್ಲಿ ಉಂಟಾಗಿರುವ ಚಂಡಮಾರುತ ಫೆಂಗಲ್ ನಿಂದ ತಮಿಳುನಾಡು ಕರಾವಳಿಯ ಕಾರೈಕಲ್ ಮತ್ತು ಮಹಾಬಲಿಪುರಂ ನಡುವೆ ಗಂಟೆಗೆ ಸುಮಾರು 90 ಕಿಮೀ ವೇಗದಲ್ಲಿ ಗಾಳಿ ಬೀಸಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ತಿಳಿಸಿದೆ. ಚೆನ್ನೈ, ತಿರುವಳ್ಳೂರು, ಕಾಂಚೀಪುರಂ, ಕಲ್ಲಕುರಿಚಿ, ಕಡಲೂರು ಜಿಲ್ಲೆಗಳು ಮತ್ತು ಪುದುಚೇರಿಯಲ್ಲಿ ಭಾರೀ ಮಳೆಯಾಗುವ ಮುನ್ಸೂಚನೆ ಇದೆ. ನೈಋತ್ಯ ಬಂಗಾಳಕೊಲ್ಲಿಯ ಮೇಲಿನ ಫೆಂಗಾಲ್ ಚಂಡಮಾರುತವು ವೇಗದಲ್ಲಿ ಪಶ್ಚಿಮ ವಾಯುವ್ಯ ಕಡೆಗೆ ಚಲಿಸಿದ್ದು ಶನಿವಾರ ಸಂಜೆ ವೇಳೆಗೆ ಕರಾವಳಿಗೆ ಅಪ್ಪಳಿಸಲಿದೆ.

ಪುದುಚೇರಿಯ ಪೂರ್ವಕ್ಕೆ ಸುಮಾರು 150 ಕಿ.ಮೀ. ಚೆನ್ನೈನಿಂದ ಆಗ್ನೇಯಕ್ಕೆ 140 ಕಿಮೀ, ನಾಗಪಟ್ಟಿಣಂನಿಂದ ಈಶಾನ್ಯಕ್ಕೆ 210 ಕಿಮೀ, ಟ್ರಿಂಕೋಮಲಿಯಿಂದ ಉತ್ತರಕ್ಕೆ 400 ಕಿಮೀ ದೂರ ದಲ್ಲಿ ಸುಮಾರು ಪಶ್ಚಿಮಕ್ಕೆ ಚಲಿಸಿ ಉತ್ತರ ತಮಿಳುನಾಡು-ಪುದುಚೇರಿ



ಕರಾವಳಿಯನ್ನು ದಾಟಲು ಕಾರೈಕಾಲ್ ಮತ್ತು ಮಹಾಬಲಿಪುರಂ ನಡುವೆ ಪುದುಚೇರಿಗೆ ಸಮೀಪವಿರುವ ಚಂಡಮಾರುತವು ಗಂಟೆಗೆ 70–80 ಕಿಮೀ ವೇಗದಲ್ಲಿ ಬೀಸುತ್ತದೆ.

ಸಂಜೆಯ ಸಮಯದಲ್ಲಿ ಗಂಟೆಗೆ 90 ಕಿಮೀ ವೇಗದಲ್ಲಿ ಬೀಸುತ್ತದೆ.ಇದರಿಂದ ಭೂಕುಸಿತವನ್ನು ಉಂಟುಮಾಡುವ ಸಾಧ್ಯತೆಯಿದೆ. ತಮಿಳುನಾಡು ಕರಾವಳಿಯಲ್ಲಿ ಅವಾಂತರವನ್ನು ಕಡಿಮೆ ಮಾಡಲು ರಕ್ಷಣಾ ಸಿಬ್ಬಂಧಿ ಎಲ್ಲಾ ತಯಾರಿ ಮಾಡಿಕೊಂಡಿದ್ದಾರೆ. ಕರಾವಳಿ ಬಳಿ ಯಾರು ಬರದಂತೆ ಜನರಿಗೆ ಎಚ್ಚರಿಕೆ ನೀಡಲಾಗಿದೆ.

# ಒಂದೇ ದಿನದಲ್ಲಿ ಕೋಟ್ಯಧಿಪತಿಯಾದ ಭಾರತ ಮೂಲದ ಎಂಜಿನಿಯರ್

## ಸಿಂಗಪುರದಲ್ಲಿ ಹೆಂಡತಿಗೆ ಚಿನ್ನದ ಸರ ಕೊಡಿಸಿ 8 ಕೋಟಿ ರೂ ಗೆದ್ದು ಕೋಟ್ಯಧಿಪತಿಯಾದ ಭಾರತ ಮೂಲದ ವ್ಯಕ್ತಿ

**ಸಿಂಗಪುರ:** ಹೊರಗೆ ಸುತ್ತಾಡಲು ಹೋದಾಗ ಸೀರೆ ಅಥವಾ ಆಭರಣ ಅಂಗಡಿ ಹೆಂಡತಿ ಕಣ್ಣಿಗೆ ಬಿದ್ದರೆ ಗಂಡಸರ ಎದೆ ಢವಢವ ಎನ್ನಲು ಶುರುವಾಗುತ್ತದೆ. ಹೊಸ ಮಾದರಿಯ ದಿರಿಸು ಅಥವಾ ಆಭರಣ ಕಣ್ಣಿಗೆ ಬಿತ್ತು ಎಂದರೆ ಜೇಬಿಗೆ ಕತ್ತರಿ ಗ್ಯಾರಂಟಿ ಎನ್ನುವುದು ಅವರ ಭಯ. ಆದರೆ ಇಲ್ಲೊಂದು ಘಟನೆ ಪುರುಷರ ಮನಸ್ಸು ಬದಲಿಸುವಂತೆ ಮಾಡಿದೆ. ಈ ನೈಜ ಕಥೆ ಓದಿದ ಗಂಡಸರೇ ಹೆಂಡತಿಯನ್ನು ಆಭರಣ ಅಂಗಡಿಗೆ ಕರೆದೊಯ್ದು ಚಿನ್ನದ ಸರ ಕೊಡಿಸಿದರೂ ಅಚ್ಚರಿಯಿಲ್ಲ ಆದರೆ ಎಲ್ಲರಿಗೂ ಈ ಅದೃಷ್ಟ ಇರುವುದಿಲ್ಲ ಎನ್ನುವುದನ್ನೂ ಮರೆಯಬಾರದು.

ಸಿಂಗಪುರದಲ್ಲಿ ಚಿನ್ನದ ಸರ ಖರೀದಿಸಿದ ಭಾರತ ಮೂಲದ ವ್ಯಕ್ತಿಯೊಬ್ಬರು, ರಾತ್ರಿ ಬೆಳಗಾಗುವುದರೊಳಗೆ ಕೋಟ್ಯಧಿಪತಿಯಾಗಿದ್ದಾರೆ. ಲಕ್ಕಿ ಡ್ರಾದಲ್ಲಿ 1 ಮಿಲಿಯನ್ ಅಮೆರಿಕನ್ ಡಾಲರ್ (8 ಕೋಟಿ ರೂ.ಗೂ ಅಧಿಕ) ಮೊತ್ತದ ಬೃಹತ್ ಬಹುಮಾನ ವಿಜೇತರಾದ ಅವರ ಅದೃಷ್ಟ ಖುಲಾಯಿಸಿದೆ.





ಮೂರು ತಿಂಗಳ ಹಿಂದೆ ಆಭರಣ ಖರೀದಿಸಿ ಹೆಂಡತಿಯ ಖುಷಿಗೆ ಕಾರಣರಾಗಿದ್ದ ಅವರು, ತಮ್ಮ ದೆಸೆ ಬದಲಾಗಿದ್ದು ಕಂಡು ಥ್ರಿಲ್ ಆಗಿದ್ದಾರೆ. ಲಕ್ಕಿ ಡ್ರಾ ಹೊಡೆಯುವಷ್ಟು ಲಕ್ ತಮಗೆ ಇಲ್ಲ ಎಂದೇ ಭಾವಿಸಿದ್ದ ಅವರು, ಈಗ ಇದು ಕನಸೋ ಅಥವಾ ನನಸೋ ಎಂದು ಅರಿವಾಗದ ಲೋಕದಲ್ಲಿ ತೇಲಾಡುತ್ತಿದ್ದಾರೆ. ಸಿಂಗಪುರದಲ್ಲಿ 21 ವರ್ಷದಿಂದ ಕೆಲಸ ಮಾಡುತ್ತಿರುವ ಪ್ರಾಜೆಕ್ಟ್ ಎಂಜಿನಿಯರ್ ಬಾಲಸುಬ್ರಮಣಿಯನ್ ಚಿದಂಬರಂ ಅವರು ಕಳೆದ ಭಾನುವಾರ (ನ. 24) ಮುಸ್ತಫಾ ಜ್ಯುವೆಲ್ಲರಿ ನಡೆದ ಲಕ್ಕಿ ಡ್ರಾದಲ್ಲಿ ಮೊದಲ ಸ್ಥಾನದ ಬಹುಮಾನ ಪಡೆಯುವಲ್ಲಿ ಯಶಸ್ವಿಯಾಗಿದ್ದಾರೆ.

**ಬೃಹತ್ ಬಹುಮಾನ**

**ಸಿಂಗಪುರದಲ್ಲಿ ಕಳೆದ 21 ವರ್ಷಗಳಿಂದ ಪ್ರಾಜೆಕ್ಟ್ ಎಂಜಿನಿಯರ್ ಆಗಿರುವ ಬಾಲಸುಬ್ರಮಣಿಯನ್ ಚಿದಂಬರಂ ಎಂಬ ಭಾರತ ಮೂಲದ ವ್ಯಕ್ತಿ, ಹೆಂಡತಿಗೆ ಚಿನ್ನದ ಸರ ಕೊಡಿಸಿ ಕೋಟ್ಯಧಿಪತಿಯಾಗಿದ್ದಾರೆ. ಲಕ್ಕಿ ಡ್ರಾದಲ್ಲಿ 1 ಮಿಲಿಯನ್ ಅಮೆರಿಕನ್ ಡಾಲರ್ ಮೊತ್ತದ ಬೃಹತ್ ಬಹುಮಾನ ಅವರಿಗೆ ಒಲಿದಿದೆ.**

ಇದು ಅವರ ಬದುಕಿನ ದಿಕ್ಕನ್ನು ಬದಲಿಸಿದೆ ಎಂದು ಏಷ್ಯಾ ಒನ್ ವರದಿ ತಿಳಿಸಿದೆ.

**6,000 ಡಾಲರ್ ಮೌಲ್ಯದ ಚಿನ್ನದ ಸರ:** ಮುಸ್ತಫಾ ಜ್ಯುವೆಲ್ಲರಿ ಅಂಗಡಿಯ ವಾರ್ಷಿಕ ಕಾರ್ಯಕ್ರಮದ ಭಾಗವಾಗಿ, ಆಭರಣ ಖರೀದಿಸಿದವರಿಗೆ ಲಕ್ಕಿ ಡ್ರಾ ಮೂಲಕ ಬಹುಮಾನ ಘೋಷಿಸಲಾಗಿತ್ತು. ಟೆಸ್ಸೆನ್ಸಾನ್‌ನ ಸಿವಿಲ್ ಸರ್ವೀಸ್ ಕ್ಲಬ್‌ನಲ್ಲಿ ಈ ಕಾರ್ಯಕ್ರಮ ಆಯೋಜಿಸಲಾಗಿತ್ತು. ಆಭರಣ ಅಂಗಡಿಯಲ್ಲಿ ಕನಿಷ್ಠ 250 ಡಾಲರ್ ಮೌಲ್ಯದ ಒಡವೆ ಖರೀದಿಸಿದವರು ಈ ಲಕ್ಕಿ ಡ್ರಾದಲ್ಲಿ ಪಾಲ್ಗೊಳ್ಳಲು ಅರ್ಹರಾಗಿದ್ದರು. ಲಿಟ್ಲ್ ಇಂಡಿಯಾದಲ್ಲಿರುವ ಈ ಅಂಗಡಿಗೆ ತೆರಳಿದ್ದ ಬಾಲಸುಬ್ರಮಣಿಯನ್ ಚಿದಂಬರಂ, ತಮ್ಮ ಪತ್ನಿಗಾಗಿ 6,000 ಡಾಲರ್ ಮೌಲ್ಯದ ಚಿನ್ನದ ಸರಗಳನ್ನು ಖರೀದಿ ಮಾಡಿದ್ದರು. ಅವರು ಖರ್ಚು ಮಾಡಿದ ಹಣದ ನೂರಾರು ಪಟ್ಟು ಮೊತ್ತದ ದುಡ್ಡು ಈಗ ಅವರ ಖಾತೆ ಸೇರಿದೆ.

- **ಮುಸ್ತಫಾ ಜ್ಯುವೆಲ್ಲರಿಯಲ್ಲಿ ಹೆಂಡತಿಗೆ 6 ಸಾವಿರ ಡಾಲರ್ ಮೌಲ್ಯದ ಚಿನ್ನದ ಸರ ಖರೀದಿ**
- **ಆಭರಣ ಅಂಗಡಿಯ ಲಕ್ಕಿ ಡ್ರಾದಲ್ಲಿ ಲಕ್ಕಿ ಡ್ರಾದಲ್ಲಿ 1 ಮಿಲಿಯನ್ ಡಾಲರ್ ಬಹುಮಾನ**

ಇಂದು ನನ್ನ ತಂದೆಯ ನಾಲ್ಕನೆಯ ಪುಣ್ಯತಿಥಿ ಕೂಡ. ಈ ದಿನ ದೊರೆತ ಆಶೀರ್ವಾದ ಇದು ಎಂದು ಅವರು ಸಂಭ್ರಮದ ಕಣ್ಣೀರಿಟ್ಟಿದ್ದಾರೆ.

ತಮ್ಮ ಅದೃಷ್ಟದ ಬಾಗಿಲು ತೆರೆದ ಈ ಶುಭ ಸುದ್ದಿಯನ್ನು ತಾಯಿಯ ಜತೆ ಹಂಚಿಕೊಳ್ಳಲು ಬಯಸಿದ್ದು, ಸಿಂಗಪುರದಲ್ಲಿ ಇಷ್ಟು ವರ್ಷಗಳ ಕಾಲ ಕೆಲಸ ಮಾಡಿದ ಕೃತಜ್ಞತೆಯ ಸಂಕೇತವಾಗಿ ಈ ಬಹುಮಾನದ ಒಂದು ಭಾಗವನ್ನು ಸಮುದಾಯಕ್ಕೆ ದಾನ ನೀಡಲು ಬಯಸಿರುವುದಾಗಿ ತಿಳಿಸಿದ್ದಾರೆ.

**ಹೆಂಡತಿ ಮಾತು ಕೇಳಿ ಲಾಟರಿ ಗೆದ್ದ ವ್ಯಕ್ತಿ:** ಚಿದಂಬರಂ ಗೆದ್ದಿರುವುದು ಮೊದಲ ಸ್ಥಾನದ ಲಕ್ಕಿ ಡ್ರಾ. ಅವರಲ್ಲದೆ ಇನ್ನೂ ಅನೇಕರು 5 ಸಾವಿರ ಡಾಲರ್ ಮೊತ್ತದ ಮಾಸಿಕ ಡ್ರಾಗಳಲ್ಲಿ ಬಹುಮಾನಗಳನ್ನು ಗೆದ್ದಿದ್ದಾರೆ. ಹೀಗೆ ಹೆಂಡತಿ ಮಾತು ಕೇಳಿ ದೆಸೆ ಬದಲಿಸಿಕೊಂಡವರಲ್ಲಿ ಚಿದಂಬರಂ ಮೊದಲಿಗರೇನಲ್ಲ. 2023ರ ಏಪ್ರಿಲ್‌ನಲ್ಲಿ ಮಲೇಷ್ಯಾದ ಕ್ಲಾಂಗ್‌ನಲ್ಲಿ ವ್ಯಕ್ತಿಯೊಬ್ಬ ಹೆಂಡತಿ ಸಲಹೆಯಂತೆ ಖರೀದಿಸಿದ ಲಾಟರಿಯಿಂದ 9 ಲಕ್ಷ ಡಾಲರ್ ಮೊತ್ತದ ಬಹುಮಾನ ಗಳಿಸಿದ್ದ. ಚೆಂಗ್ ಎಂಬಾತ ಸಾಮಾನ್ಯವಾಗಿ ಲಾಟರಿ ಖರೀದಿಸುತ್ತಿದ್ದರೂ, ಪತ್ನಿ ಕೊಟ್ಟ ಸಲಹೆಯಂತೆ ಮೊದಲ ಬಾರಿಗೆ ಬಿಗ್ ಸ್ವೀಪ್ ಲಾಟರಿ ಟಿಕೆಟ್ ಖರೀದಿ ಮಾಡಿದ್ದ.

## ಮಿನಿ ನ್ಯೂಸ್

### ಪಾಕ್‌ನಿಂದ ಕಳ್ಳಸಾಗಣೆ ಮಾಡಲಾಗುತ್ತಿದ್ದ ಶಸ್ತ್ರಾಸ್ತ್ರ ವಶ

**ಚಂಡೀಗಢ:** ಪಾಕಿಸ್ತಾನದಿಂದ ದೇಶಕ್ಕೆ ಕಳ್ಳಸಾಗಣೆ ಮಾಡಲಾಗಿದ್ದ ಎಂಟು ಅತ್ಯಾಧುನಿಕ ಪಿಸ್ತೂಲ್‌ಗಳನ್ನು ಪಂಜಾಬ್ ಪೊಲೀಸರು ಪತ್ತೆ ಮಾಡಿದ ನಂತರ ಇಬ್ಬರನ್ನು ಬಂಧಿಸಿದ್ದಾರೆ ಎಂದು ಉನ್ನತ ಅಧಿಕಾರಿ ಯೊಬ್ಬರು ತಿಳಿಸಿದ್ದಾರೆ. ಇಬ್ಬರನ್ನು ಅಮತಸರದ ನೂರ್ಪುರ್ ಪಾದ್ರಿಯಿಂದ ಬಂಧಿಸಲಾಗಿದೆ ಎಂದು ಪೊಲೀಸ್ ಮಹಾನಿರ್ದೇಶಕ ಗೌರವ್ ಯಾದವ್ ತಿಳಿಸಿದ್ದಾರೆ. ಅಕ್ರಮ ಶಸ್ತ್ರಾಸ್ತ್ರ ಕಳ್ಳಸಾಗಣೆ ಜಾಲಗಳಿಗೆ ದೊಡ್ಡ ಹೊಡೆತವಾಗಿ, ಅಮತಸರದ ಘರಿಂಡಾ ಬಳಿಯ ನೂರ್ಪುರ್ ಪಾದ್ರಿಯಿಂದ 2 ವ್ಯಕ್ತಿಗಳನ್ನು ಅಮೃತಸರ ಬಂಧಿಸಿದೆ, ಅವರು ಪಾಕಿಸ್ತಾನದಿಂದ ಕಳ್ಳಸಾಗಣೆಯಾದ ಶಸ್ತ್ರಾಸ್ತ್ರ ರವಾನೆಯನ್ನು ಹಸ್ತಾಂತರಿಸಲು ಮತ್ತೊಬ್ಬ ಆಪರೇಟಿವ್‌ಗಾಗಿ ಕಾಯುತ್ತಿದ್ದಾಗ ಬಂಧಿಸಲಾಗಿದೆ ಎಂದು ಯಾದವ್ ಫೀನಲ್ಲಿ ಪೋಸ್ಟ್ ಮಾಡಿದ್ದಾರೆ.

ಅಮತಸರದಲ್ಲಿ ಶಸ್ತ್ರಾಸ್ತ್ರ ಕಾಯ್ದೆಯಡಿ ಪ್ರಕರಣವನ್ನು ದಾಖಲಿಸಲಾಗಿದೆ, ಹಿಂದುಳಿದ ಮತ್ತು ಮುಂದಕ್ಕೆ ಸಂಪರ್ಕವನ್ನು ಸ್ಥಾಪಿಸಲು ತನಿಖೆ ನಡೆಯುತ್ತಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಎಂಟು ಅತ್ಯಾಧುನಿಕ ಶಸ್ತ್ರಾಸ್ತ್ರಗಳನ್ನು ವಶಪಡಿಸಿಕೊಂಡಿರುವುದಾಗಿ ಪೊಲೀಸರು ತಿಳಿಸಿದ್ದಾರೆ ನಾಲ್ಕು ಗ್ಲೋಕ್ ಪಿಸ್ತೂಲ್‌ಗಳು (ಆಸ್ಟ್ರಿಯಾದಲ್ಲಿ ತಯಾರಿಸಲ್ಪಟ್ಟಿದೆ), ಎರಡು ತುರ್ಕಿಯೆ 9 ಎಂಎಂ ಪಿಸ್ತೂಲ್‌ಗಳು ಮತ್ತು ಎರಡು ಎಕ್ಸ್-ಶಾಟ್ ಜಿಗಾನಾ ಪಿಸ್ತೂಲ್ಗಳು, ಜೊತೆಗೆ 10 ಸುತ್ತು ಗುಂಡುಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.

### ಮೂವರು ಉಗ್ರರ ಬಂಧನ

**ಇಂಫಾಲ್:** ಎರಡು ನಿಷೇಧಿತ ಗುಂಪುಗಳಿಗೆ ಸೇರಿದ ಮೂವರು ಭಯೋತ್ಪಾದಕರನ್ನು ಪೊಲೀಸರು ಬಂಧಿಸಿದ್ದಾರೆ.

ಇಂಫಾಲ್ ಪಶ್ಚಿಮ ಜಿಲ್ಲೆ ಮೂಲದ ಚೋಂಗ್ಥಮ್ ಶ್ಯಾಮಚಂದ್ರ ಸಿಂಗ್ (23), ಇಂಫಾಲ್ ಪೂರ್ವ ಜಿಲ್ಲೆಯ ಮೈಬಮ್ ಸೂರಜ್ ಖಾನ್ (32), ಬೋಗಿಮಯುಮ್ ಸಾಹಿದ್ ಖಾನ್ (30) ಬಂಧಿತರು. ಇವರಿಂದ 5.56ಎಂಎಂ ಐನ್ಸಸ್ ಲೈವ್ ಕಾರ್ಟ್ರಿಡ್ಜ, ಪ್ರಕರಣದಲ್ಲಿ 32 ಮದ್ದುಗುಂಡು ಮತ್ತು ಮೂರು ಮೊಬೈಲ್ ಫೋನ್‌ಗಳನ್ನು ವಶಕ್ಕೆ ಪಡೆಯಲಾಗಿದೆ. ಬಂಧಿತರು ಅಕ್ರಮವಾಗಿ ಶಸ್ತ್ರಾಸ್ತ್ರಗಳನ್ನು ಹೊಂದಿದ್ದು, ಜನರನ್ನು ಸುಲಿಗೆ ಮಾಡುತ್ತಿದ್ದರು. ಇವರು ಕಂಗ್ಲೇಪಕ್ ಕಮ್ಯುನಿಸ್ಟ್ ಪಾರ್ಟಿ (ಪೀಪಲ್ಸ್ ವಾರ್ ಗ್ರೂಪ್) ಸಂಘಟನೆಗೆ ಸೇರಿದವರು ಎಂದು ಪೊಲೀಸರು ತಿಳಿಸಿದ್ದಾರೆ.

ಮತ್ತೊಂದು ಘಟನೆಯಲ್ಲಿ ನಿಷೇಧಿತ ಯುನೈಟೆಡ್ ನ್ಯಾಶನಲ್ ಲಿಬರೇಶನ್ ಫ್ರಂಟ್ (ನಿಂಗೋನ್ ಮಚಾ ಗುಂಪು)ಗೆ ಸೇರಿದ ಉಗ್ರನೊಬ್ಬನನ್ನು ಅಕ್ರಮ ಶಸ್ತ್ರಾಸ್ತ್ರಗಳನ್ನು ಹೊಂದಿದ್ದಕ್ಕಾಗಿ ಬಂಧಿಸಲಾಗಿದೆ. ಬಂಧಿತ ತೌಬಲ್ ಜಿಲ್ಲೆಯ ಲಿಲಾಂಗ್ ಹೌರೂ ಸಂಗೊಂಶುಂಘಮ್ ವಾರಿಶ್ (25) ಎಂದು ಗುರುತಿಸಲಾಗಿದ್ದು, ಈತನಿಂದಲೂ 32 ಪಿಸ್ತೂಲ್ ಮತ್ತು ಮದ್ದುಗುಂಡು ವಶಕ್ಕೆ ಪಡೆಯಲಾಗಿದೆ. ಭದ್ರತಾ ಪಡೆ ಗುರುವಾರ ಕಾಂಗ್ಪೊಕ್ಪಿ ಜಿಲ್ಲೆಯ ಎಸ್ ಮೊಂಗ್ಬಿ ಪರ್ವತದಲ್ಲಿ ಪರಿಶೀಲನೆ ವೇಳೆ ಶಸ್ತ್ರಾಸ್ತ್ರ ಮತ್ತು ಮದ್ದುಗುಂಡುಗಳನ್ನು ವಶಪಡಿಸಿಕೊಂಡಿದ್ದಾರೆ. 303 ರೈಫಲ್, 9 ಎಂಎಂ ಪಿಸ್ತೂಲ್, ಎರಡು ಎಸ್ಬಿಬಿಎಲ್ ಗನ್, 5.56 ಎಂಎಂ ಐಎನ್‌ಎಸ್‌ಎಎಸ್ ಎಲ್‌ಎಂಜಿ ಮ್ಯಾಗಜೀನ್, ಎರಡು ಹ್ಯಾಂಡ್ ಗ್ರೆನೇಡ್‌ಗಳು, ಎರಡು ಡಿಟೋನೇಟರ್‌ಗಳು, 16 ಕಾಟ್ರಿಡ್ಜಗಳು ಮತ್ತು ಮೂರು ಟಿಯರ್ ಸೋಕ್ ಗ್ರೆನೇಡ್‌ಗಳನ್ನು ವಶಪಡಿಸಿಕೊಳ್ಳಲಾಗಿದೆ.

### ಮಾಲಿನ್ಯ ಜೊತೆಗೆ ಚಳಿಯ ದಾಳಿ

**ನವದೆಹಲಿ:** ದೆಹಲಿಯಲ್ಲಿ ಮಾಲಿನ್ಯ ಜೊತೆಗೆ ಚಳಿಯ ದಾಳಿ ಮುಂದುವರೆದಿದೆ. ಶನಿವಾರ ಬೆಳಗ್ಗೆ ದೆಹಲಿಯ ಹಲವು ಪ್ರದೇಶಗಳಲ್ಲಿ ಮತ್ತೊಮ್ಮೆ ವಿಷಪೂರಿತ ಹೊಗೆ ಕಾಣಿಸಿಕೊಂಡಿದೆ. ರಾಷ್ಟ್ರ ರಾಜಧಾನಿ ದೆಹಲಿಯಲ್ಲಿ ಕಳೆದ ಎರಡು ವಾರಗಳಿಂದ ವಾಯು ಗುಣಮಟ್ಟ ತೀವ್ರ ಅಪಾಯಕಾರಿ ಹಂತಕ್ಕೆ ಕುಸಿದಿದೆ. ದೆಹಲಿ ಸರ್ಕಾರ ವಾಯು ಗುಣಮಟ್ಟ ಹೆಚ್ಚಿಸಲು ಸರ್ವ ಪ್ರಯತ್ನ ನಡೆಸಿದೆ. ಆದರೂ ಸಹ ದೆಹಲಿಯಲ್ಲಿ ಗಾಳಿಯ ಗುಣಮಟ್ಟದಲ್ಲಿ ಯಾವುದೇ ಗಮನಾರ್ಹ ಸುಧಾರಣೆಯಾಗಿಲ್ಲ ಇದು ದೆಹಲಿ ಸರ್ಕಾರಕ್ಕೆ ಬಹು ದೊಡ್ಡ ತಲೆನೋವಾಗಿ ಪರಿಣಮಿಸಿದೆ.

ಸಿಪಿಸಿಬಿ ಪ್ರಕಾರ, ರಾಜಧಾನಿಯ ಹೆಚ್ಚಿನ ಪ್ರದೇಶಗಳಲ್ಲಿ ಎಕ್ಯೂಐ 355ಕ್ಕೂ ಮೀರಿದೆ. ಇದೇ ವೇಳೆ ದೆಹಲಿಯ ಜನರ ಮೇಲೂ ಹವಾಮಾನದ ಪ್ರಭಾವ ಬಾಧಿಸುತ್ತಿದೆ. ಒಂದೆಡೆ ಚಳಿಯ ಪರಿಣಾಮ ಕಾಣತೊಡಗಿದರೆ ಮತ್ತೊಂದೆಡೆ ಮಾಲಿನ್ಯದ ಮಟ್ಟ ಹಾಗೇ ಉಳಿದಿದೆ. ಆನಂದ್ ವಿಹಾರ್ ಪ್ರದೇಶದಲ್ಲಿ ಶನಿವಾರ ಬೆಳಿಗ್ಗೆ ಗಾಳಿಯ ಗುಣಮಟ್ಟ 377 ದಾಖಲಾಗಿದೆ, ಇದು ತುಂಬಾ ಕಳಪೆಯಾಗಿದೆ. ಅಪಾಯದ ಸ್ಥಿತಿ ಮುಂದುವರಿದಿದೆ ಎಂದು ಕೇಂದ್ರ ಮಾಲಿನ್ಯ ನಿಯಂತ್ರಣ ಮಂಡಳಿ (ಸಿಪಿಸಿಬಿ) ಮಾಹಿತಿ ನೀಡಿದೆ.

### ಒಪ್ಪಿತ ಲೈಂಗಿಕ ಸಂಪರ್ಕವೂ ಅತ್ಯಾಚಾರ





**ನಾಗಪುರ:** ಹದಿನೆಂಟಕ್ಕಿಂತ ಕಡಿಮೆ ವಯಸ್ಸಿನ ಪತ್ನಿ ಜತೆಗಿನ ಒಪ್ಪಿತ ಲೈಂಗಿಕ ಸಂಪರ್ಕವೂ ಅತ್ಯಾಚಾರ ಎನಿಸುತ್ತದೆ ಎಂದು ಮುಂಬೈ ಹೈಕೋರ್ಟ್‌ನ ನಾಗ್ಪುರ ಪೀಠ ತೀರ್ಪು ನೀಡಿದೆ. ಇಂಡಿಪೆಂಡೆಂಟ್ ಥಾಟ್ ಮತ್ತು ಭಾರತ ಸರ್ಕಾರ ನಡುವಿನ ಪ್ರಕರಣದಲ್ಲಿ ಸುಪ್ರೀಂಕೋರ್ಟ್ ನೀಡಿದ ತೀರ್ಪಿನ ಆಧಾರದಲ್ಲಿ ಹೈಕೋರ್ಟ್, ಆರೋಪಿಗೆ 10 ವರ್ಷ ಕಠಿಣ ಶಿಕ್ಷೆ ವಿಧಿಸಿ ವಿಚಾರಣಾ ನ್ಯಾಯಾಲಯ ನೀಡಿದ್ದ ತೀರ್ಪನ್ನು ಎತ್ತಿಹಿಡಿದಿದೆ. ಭಾರತೀಯ ದಂಡಸಂಹಿತೆಯಡಿ ನೀಡಿರುವ ವೈವಾಹಿಕ ಅತ್ಯಾಚಾರದ ವಿನಾಯ್ತಿಯನ್ನು ಅಪ್ರಾಪ್ತ ವಯಸ್ಸಿನವರಿಗೆ ವಿಸ್ತರಿಸುವಂತಿಲ್ಲ ಎಂದು ನ್ಯಾಯಮೂರ್ತಿ ಗೋವಿಂದ ಸನಪ್ ತೀರ್ಪು ನೀಡಿದ್ದಾರೆ. ವಿವಾಹ ಬಂಧನಕ್ಕೆ ಒಳಪಟ್ಟಿದ್ದರೂ, 18 ವರ್ಷಕ್ಕಿಂತ ಕೆಳ ವಯಸ್ಸಿನ ಯುವತಿ ಜತೆಗಿನ ಸಂಭೋಗ ಅತ್ಯಾಚಾರವಾಗಿ ಪರಿಗಣಿಸಲ್ಪಡುತ್ತದೆ ಎಂದು ಸ್ಪಷ್ಟಪಡಿಸಿದರು.

ಈ ಪ್ರಕರಣ 2019ಕ್ಕೆ ಸಂಬಂಧಿಸಿದ್ದಾಗಿದ್ದು, ಅಪ್ರಾಪ್ತ ವಯಸ್ಸಿನ ಯುವತಿ ಮೂರು ನಾಲ್ಕು ವರ್ಷಗಳಿಂದ ಆರೋಪಿಯ ಜತೆ ಸಂಬಂಧ ಹೊಂದಿದ್ದಳು. ವಾರ್ಧಾ ನಿವಾಸಿಯಾಗಿದ್ದ ಯುವತಿ ಆ ವ್ಯಕ್ತಿ ಜತೆಗೆ ಲೈಂಗಿಕತೆಯನ್ನು ನಿರಾಕರಿಸಿದ್ದಳು. ಹಣಕಾಸು ಅಡಚಣೆ ಕಾರಣದಿಂದ ಆಕೆ ಬೇರೆ ಊರಿಗೆ ಸ್ಥಳಾಂತರಗೊಂಡರೂ, ವ್ಯಕ್ತಿ ಆಕೆಯನ್ನು ಹಿಂಬಾಲಿಸಿದ್ದ. ಕೆಲಸಕ್ಕೆ ಕರೆದೊಯ್ಯುವ ನೆಪದಲ್ಲಿ ಆ ವ್ಯಕ್ತಿ ಆಕೆಯ ವಿಶ್ವಾಸ ಸಂಬಂಧಿಸಿ, ವಿವಾಹದ ಭರವಸೆ ನೀಡಿ ಲೈಂಗಿಕ ಸಂಬಂಧ ಬೆಳೆಸಿದ್ದ. ಆಕೆ ಗರ್ಭಿಣಿಯಾಗಿದ್ದು, ಬಳಿಕ ಗಡಿಬಿಡಿಯಲ್ಲಿ ಆಕೆಯನ್ನು ಆರೋಪಿ ವಿವಾಹವಾಗಿದ್ದ.



## ಜೊತೆ ನಟಿಸೋಕೆ ರಮ್ಯಾ ಕೃಷ್ಣಗೆ ಸಖತ್ ಭಯ

ರಮ್ಯಾ ಕೃಷ್ಣ ಒಂದು ಕಾಲದಲ್ಲಿ ತಮ್ಮ ಸೌಂದರ್ಯ ಮತ್ತು ನಟನೆಯಿಂದ ಮೆಚ್ಚುಗೆ ಪಡೆದವರು. ಅವರು ಅನೇಕ ಸೂಪರ್ ಹಿಟ್ ಸಿನಿಮಾಗಳಲ್ಲಿ ನಟಿಸಿದ್ದಾರೆ. ರಮ್ಯಾ ಕೃಷ್ಣ ಅವರು ಕನ್ನಡದಲ್ಲೂ ನಟಿಸಿ ಭೇಷ್ ಎನಿಸಿಕೊಂಡಿದ್ದಾರೆ. ಇದರ ಜೊತೆಗೆ ತೆಲುಗು ಮತ್ತು ತಮಿಳು ಭಾಷೆಗಳಲ್ಲಿ ಸ್ಟಾರ್ ಆಗಿ ಮಿಂಚಿದ್ದಾರೆ. ಹಲವು ಸ್ಟಾರ್ ಹೀರೋಗಳ ಎದುರು ನಟಿಸಿರುವ ರಮ್ಯಾ ಕೃಷ್ಣ ಈಗಲೂ ಅಷ್ಟೇ ಸುಂದರವಾಗಿದ್ದಾರೆ. ಹಲವು ಸಿನಿಮಾಗಳಲ್ಲಿ ನಾಯಕಿಯಾಗಿ ನಟಿಸಿದ್ದ ರಮ್ಯಾ ಕೃಷ್ಣ ನೆಗೆಟಿವ್ ಪಾತ್ರಗಳಲ್ಲೂ ರಂಜಿಸಿದ್ದಾರೆ. ವಿಶೇಷವಾಗಿ ರಮ್ಯಾ ಕೃಷ್ಣ ಅವರು ಒಂದು ಅಪರೂಪದ ವಿಚಾರ ಹಂಚಿಕೊಂಡಿದ್ದಾರೆ. ಅವರಿಗೆ ಓರ್ವ ಹೀರೋ ಜೊತೆ ನಟಿಸಲು ಭಯವಾಗಿತ್ತಂತೆ. 'ಬಾಹುಬಲಿ' ಚಿತ್ರದಲ್ಲಿ ರಾಜಮಾತೆ ಶಿವಗಾಮಿ ಪಾತ್ರದಲ್ಲಿ ಅದ್ಭುತವಾಗಿ ನಟಿಸಿದ್ದರು ರಮ್ಯಾ ಕೃಷ್ಣ. ಈ ಪಾತ್ರ ಸಖತ್ ಪವರ್‌ಫುಲ್ ಆಗಿತ್ತು. ಈಗ ಸಿನಿಮಾಗಳಲ್ಲಿ ಅವರು ಪೋಷಕ ಪಾತ್ರಗಳ ಮೂಲಕ ಮಿಂಚುತ್ತಿದ್ದಾರೆ. ಈ ನಡುವೆ ರಮ್ಯಾ ಕೃಷ್ಣ ಈ ಹಿಂದೆ ಮಾಡಿದ ಕಾಮೆಂಟ್‌ಗಳು ಈಗ ವೈರಲ್ ಆಗುತ್ತಿವೆ. ತಮಿಳು, ತೆಲುಗು, ಮಲಯಾಳಂ, ಕನ್ನಡ ಮತ್ತು ಹಿಂದಿ ಭಾಷೆಗಳಲ್ಲಿ ನಟಿಸಿರುವ ರಮ್ಯಾ ಕೃಷ್ಣ, ಕಮಲ್ ಹಾಸನ್ ಬಗ್ಗೆ ಮಾತನಾಡಿದ್ದ ಮಾತು ಎಲ್ಲರ ಗಮನ ಸೆಳೆದಿದೆ. ಕಮಲ್ ಸರ್ ಜೊತೆ ನಟಿಸಲು ನನಗೆ ಭಯವಾಗಿತ್ತು. ಯಾವುದೇ ಕಲಾವಿದರಿಗೆ ಅವರೊಂದಿಗೆ ನೇರ ಸಂಭಾಷಣೆ ನಡೆಸಲು ಭಯವಾಗುತ್ತದೆ' ಎಂದು ರಮ್ಯಾ ಕೃಷ್ಣ ಅವರು ಹೇಳಿದ್ದರು. 'ಕಮಲ್ ಹಾಸನ್ ಅವರೇ ನನ್ನ ಗುರು. ನಾನು ಅವರನ್ನೇ ಹಿಂಬಾಲಿಸುತ್ತೇನೆ' ಎಂದು ಕೂಡ ಕಮಲ್ ಹಾಸನ್ ಅವರು ಹೇಳಿದ್ದರು. ಈ ಮೊದಲು ಕಮಲ್ ಹಾಸನ್ ಅವರಿಗೆ ಕೊವಿಡ್ ಆಗಿತ್ತು. ಆ ಸಂದರ್ಭದಲ್ಲಿ ರಮ್ಯಾ ಕೃಷ್ಣ ಅವರು ಬಿಗ್ ಬಾಸ್ ನಡೆಸಿಕೊಟ್ಟಿದ್ದರು. ಆಗ ಅವರು ಖಡಕ್ ಆಗಿ ಬಿಗ್ ಬಾಸ್ ನಡೆಸಿಕೊಟ್ಟು ಗಮನ ಸೆಳೆದಿದ್ದರು.




## ಬಾಲಿವುಡ್‌ಗೆ ಕಿಸ್ಸಿಕ್ ಹೀರೋಯಿನ್ ಎಂಟ್ರಿ ಕೊಡ್ತಿರೋದು ನಿಜನಾ

**ಸೋಶಿಯಲ್ ಮೀಡಿಯಾದಲ್ಲಿ ವೈರಲ್**

ಕನ್ನಡತಿ ಶ್ರೀಲೀಲಾ ಅವರು ಟಾಲಿವುಡ್‌ನಲ್ಲಿ ಬೇಡಿಕೆಯ ನಟಿಯರಲ್ಲಿ ಒಬ್ಬರಾಗಿದ್ದಾರೆ. ಇದೀಗ ಬಾಲಿವುಡ್‌ಗೆ ಪಾದಾರ್ಪಣೆ ಮಾಡೋಕೆ ನಟಿ ಸಜ್ಜಾಗಿದ್ದಾರೆ ಎನ್ನಲಾದ ವಿಚಾರಕ್ಕೆ ಶ್ರೀಲೀಲಾ ಸ್ಪಷ್ಟನೆ ನೀಡಿದ್ದಾರೆ. ಸಂದರ್ಶನವೊಂದರಲ್ಲಿ ನಟಿ ಮಾತನಾಡಿ, ಹಿಂದಿ ಸಿನಿಮಾದಲ್ಲಿ ಕೆಲಸ ಮಾಡಲಿರುವ ವಿಚಾರ ನಿಜ ಎಂದು ಒಪ್ಪಿಕೊಂಡಿದ್ದಾರೆ.

ತೆಲುಗು ನಟ ರಾಣಾ ದಗ್ಗುಬಾಟಿ ಶೋಗೆ ಶ್ರೀಲೀಲಾ ಗೆಸ್ಟ್ ಆಗಿ ತೆರಳಿದರು. ಈ ಕುರಿತಾದ ಪ್ರೋಮೋ ಕೂಡ ಸೋಶಿಯಲ್ ಮೀಡಿಯಾದಲ್ಲಿ ವೈರಲ್ ಆಗಿದೆ. ಬಾಲಿವುಡ್ ಡೆಬ್ಯೂ ಬಗ್ಗೆ ನಟಿಯನ್ನು ರಾಣಾ ಪ್ರಶ್ನಿಸಿದ್ದಾರೆ. ಬಾಲಿವುಡ್‌ಗೆ ಎಂಟ್ರಿ ಕೊಡುತ್ತಿರುವ ವಿಚಾರ ನಿಜ. ಬಾಲಿವುಡ್‌ನಲ್ಲಿ ಮೊದಲ ಬಾರಿಗೆ ಕೆಲಸ ಮಾಡುತ್ತಿದ್ದೇನೆ. ಹೊಸದಾಗಿದೆ ಮತ್ತು ವಿಭಿನ್ನವಾಗಿದೆ ಎಂದು ನಟಿ ಮಾತನಾಡಿದ್ದಾರೆ. ಆದರೆ ಯಾವ ಸಿನಿಮಾ, ಯಾರಿಗೆ ಜೋಡಿಯಾಗಿ ನಟಿಸುತ್ತಾರೆ ಎಂಬ ವಿಚಾರವನ್ನು ಅವರೆಲ್ಲೂ ತಿಳಿಸಿಲ್ಲ. ಇದರ ಎಪಿಸೋಡ್ ಸೆ.30ರಂದು ಒಟಿಟಿಯಲ್ಲಿ ಪ್ರಸಾರವಾಗಿದೆ. ಅಲ್ಲಿ ಇನ್ನಷ್ಟು ಮಾಹಿತಿ ಸಿಗುತ್ತಾ ಎಂದು ಕಾದುನೋಡಬೇಕಿದೆ. ಇನ್ನೂ ಕೆಲ ತಿಂಗಳುಗಳಿಂದ ಶ್ರೀಲೀಲಾ ಬಾಲಿವುಡ್ ಎಂಟ್ರಿ ಬಗ್ಗೆ ಸಖತ್ ಚರ್ಚೆ ಆಗಿತ್ತು. ಆದರೆ ಎಲ್ಲೂ ಅಧಿಕೃತ ಮಾಹಿತಿ ಸಿಕ್ಕಿರಲಿಲ್ಲ. ಈಗ ನಟಿಯ ಕಡೆಯಿಂದ ಉತ್ತರ ಸಿಕ್ಕಿದೆ. ಅಂದಹಾಗೆ, ಶ್ರೀಲೀಲಾ 'ಪುಷ್ಪ 2' ಸಿನಿಮಾದಲ್ಲಿ ಅಲ್ಲು ಅರ್ಜುನ್ ಜೊತೆ 'ಕಿಸ್ಸಿಕ್' ಹಾಡಿಗೆ ಸೊಂಟ ಬಳುಕಿಸಿದ್ದಾರೆ. ಡಿ.5ಕ್ಕೆ ಸಿನಿಮಾ ರಿಲೀಸ್ ಆಗಲಿದೆ. ಜೊತೆಗೆ ಡಿ.20ರಂದು ಶ್ರೀಲೀಲಾ, ನಿತಿನ್ ನಟನೆಯ 'ರಾಬಿನ್‌ಹುಡ್' ಸಿನಿಮಾ ರಿಲೀಸ್‌ಗೆ ರೆಡಿಯಿದೆ.



## ಧನುಷ್ ವಿಚ್ಛೇದನಕ್ಕೆ ಟಾಂಗ್ ಕೊಟ್ರಾ ನಯನತಾರಾ

ನಟಿ ನಯನತಾರಾ ಹಾಗೂ ಧನುಷ್ ಮಧ್ಯೆ ಇರುವ ಕಿತ್ತಾಟ ದಿನ ಕಳೆದಂತೆ ಹೆಚ್ಚುತ್ತಿದೆ. ಧನುಷ್ ನಿರ್ಮಾಣ ಮಾಡಿದ 'ನಾನುಂ ರೌಡಿ ದಾನ್' ಸಿನಿಮಾದ ಕೆಲ ದೃಶ್ಯಗಳ ಬಳಕೆಗೆ ಅವಕಾಶ ಕೊಟ್ಟಿಲ್ಲ ಎಂದು ನಯನತಾರಾ ಸಿಟ್ಟಾಗಿದ್ದರು. ಈ ವಿಚಾರವಾಗಿ ಓಪನ್ ಲೆಟರ್ ಕೂಡ ಬರೆದಿದ್ದರು. ಈಗ ಕರ್ಮದ ಬಗ್ಗೆ ಕೆಲ ಸಾಲುಗಳನ್ನು ನಯನತಾರಾ ಹಂಚಿಕೊಂಡಿದ್ದಾರೆ. ಈ ವಿಚಾರ ಚರ್ಚೆ ಆಗುತ್ತಿದೆ.

ಸೆಲೆಬ್ರಿಟಿಗಳು ಏನೇ ಪೋಸ್ಟ್ ಮಾಡಿದರೂ ಅದಕ್ಕೊಂದು ಅರ್ಥ ಹುಡುಕಲಾಗುತ್ತದೆ. ಅದರಲ್ಲೂ ವಿವಾದಗಳು ನಡೆಯುವಾಗ ಹಂಚಿಕೊಳ್ಳುವ ಸಾಲುಗಳು ಚರ್ಚೆಯನ್ನು ಹುಟ್ಟುಹಾಕುತ್ತವೆ. ನಯನತಾರಾ ಹಂಚಿಕೊಂಡಿರೋ ಸಾಲುಗಳು ಈಗ ಚರ್ಚೆಗೆ ಎಡೆಮಾಡಿಕೊಟ್ಟಿದೆ.

ಇನ್‌ಸ್ಟಾಗ್ರಾಮ್ ಸ್ಟೇಟಸ್‌ನಲ್ಲಿ ನಯನತಾರಾ ಈ ಬಗ್ಗೆ ಪೋಸ್ಟ್ ಮಾಡಿದ್ದಾರೆ. 'ಕರ್ಮ ಹೇಳುತ್ತದೆ: ಸುಳ್ಳುಗಳಿಂದ ನೀವು ಯಾರದ್ದಾದರೂ ಜೀವನವನ್ನು ನಾಶ ಮಾಡಿದರೆ ಅದನ್ನು ಸಾಲದ ರೀತಿ ಸ್ವೀಕರಿಸು. ನಂತರ ಬಡ್ಡಿ ಸಮೇತ ಅದು ನಿನಗೆ ಬರುತ್ತದೆ' ಎಂದು ಪೋಸ್ಟ್ ಮಾಡಿದ್ದಾರೆ.

ಧನುಷ್, ಐಶ್ವರ್ಯಾ ರಜನಿಕಾಂತ್ ವಿಚ್ಛೇದನ ಪ್ರಕರಣ ಕೋರ್ಟ್‌ನಲ್ಲಿ ನಡೆಯುತ್ತಿತ್ತು.

ಇಬ್ಬರೂ ಬೇರೆ ಆಗಲು ಇತ್ತೀಚೆಗೆ ಕೋರ್ಟ್ ಅಧಿಕೃತವಾಗಿ ಒಪ್ಪಿಗೆ ಕೊಟ್ಟಿದೆ. ಈ ವಿಚಾರವನ್ನು ಇಟ್ಟುಕೊಂಡು ನಯನತಾರಾ ಅವರು ಈ ರೀತಿಯ ಪೋಸ್ಟ್ ಮಾಡಿದರೆ ಎನ್ನುವ ಕುತೂಹಲ ಅನೇಕರಿಗೆ ಮೂಡಿದೆ. ನಯನತಾರಾ ಹಾಗೂ ಧನುಷ್ ವಿವಾದ ಏನು ನಯನತಾರಾ ಅವರು ವಿಘ್ನೇಶ್ ಶಿವನ್ ಅವರನ್ನು ಮದುವೆ ಆದರು. ಇವರ ಮದುವೆಯನ್ನು ಡ್ಯಾಕ್ಯುಮೆಂಟರಿ ರೀತಿ ಮಾಡಿ ನೆಟ್‌ಫ್ಲಿಕ್ಸ್‌ಗೆ ಕೊಡಲಾಗಿದೆ. ಈ ಡಾಕ್ಯುಮೆಂಟರಿಯಲ್ಲಿ ಸೇರಿಸಲು ತಾವು ಹಾಗೂ ವಿಘ್ನೇಶ್ ಒಟ್ಟಾಗಿ ಕೆಲಸ ಮಾಡಿದ ಮೊದಲ ಸಿನಿಮಾ 'ನಾನುಂ ರೌಡಿ ದಾನ್' ಸಿನಿಮಾದ ಕೆಲ ದೃಶ್ಯಗಳನ್ನು ನಯನತಾರಾ ಅವರು ಧನುಶ್ ಬಳಿ ಕೇಳಿದ್ದರು. ಆದರೆ, ಇದಕ್ಕೆ ಧನುಶ್ ಹಣಕ್ಕೆ ಬೇಡಿಕೆ ಇಟ್ಟಿದ್ದರು. ಇದಕ್ಕೆ ಒಪ್ಪದ ನಯನತಾರಾ ಹಾಗೆಯೇ ದೃಶ್ಯಗಳ ಬಳಕೆ ಮಾಡಿಕೊಂಡಿದ್ದರು. ಇದರಿಂದ ಧನುಶ್ ಕಾನೂನು ಹೋರಾಟಕ್ಕೆ ಮುಂದಾದರು. ಇದರಿಂದ ಸಿಟ್ಟಾದ ನಯನತಾರಾ ಅವರು ಉದ್ದನೆಯ ಸಾಲುಗಳನ್ನು ಬರೆದುಕೊಂಡಿದ್ದರು.




## ನಟಿಸಿದ್ದ ಈ ನಟಿಯ ಅದ್ದೂರಿ ವಿವಾಹ


ಸೆಲೆಬ್ರಿಟಿಗಳ ವಿಚ್ಛೇದನ ವಿಚಾರ ಯಾವಾಗಲೂ ಸದಾ ಚರ್ಚೆಯಲ್ಲಿ ಇರುತ್ತದೆ. ಸಮಂತಾ-ನಾಗ ಚೈತನ್ಯ ವಿಚ್ಛೇದನ ನಡೆದು ಮೂರು ವರ್ಷಗಳೇ ಕಳೆದರೂ ಈಗಲೂ ಸುದ್ದಿ ಆಗುತ್ತಿದೆ. ಇತ್ತೀಚೆಗೆ ಸಂಗೀತ ಸಂಯೋಜಕ ಎಆರ್ ರೆಹಮಾನ್ ಅವರು ಪತ್ನಿ ಸೈರಾ ಬಾನುಗೆ ವಿಚ್ಛೇದನ ನೀಡಿದ್ದು ಸುದ್ದಿ ಆಗಿತ್ತು. ಈ ದಂಪತಿ ಮದುವೆ ಆಗಿ 29 ವರ್ಷಗಳು ಕಳೆದಿದ್ದವು. ಅಚ್ಚರಿಯ ಸಂಗತಿ ಎಂದರೆ ಕನ್ನಡದಲ್ಲಿ ನಟಿಸಿದ್ದ ಎಸ್ತರ್ ನೊರೋನಾ ಕೇವಲ 16 ದಿನಕ್ಕೆ ಗಂಡನಿಂದ ದೂರ ಆಗಿದ್ದರು. ಆ ಬಗ್ಗೆ ಇಲ್ಲಿದೆ ಮಾಹಿತಿ. ಎಸ್ತರ್ ನೊರೋನಾ 2012ರಲ್ಲಿ ಚಿತ್ರರಂಗಕ್ಕೆ ಕಾಲಿಟ್ಟರು. ಮೊದಲು ಹಿಂದಿ ಸಿನಿಮಾಗಳಲ್ಲಿ ನಟಿಸಿದರು. ಆ ಬಳಿಕ 2014ರಲ್ಲಿ 'ಉಸಿರಿಗಿಂತ ನೀನೆ ಹತ್ತಿರ' ಚಿತ್ರದ ಮೂಲಕ ಕನ್ನಡಕ್ಕೆ ಕಾಲಿಟ್ಟರು. ನಾವಿಕ', 'ಅತಿರಥ' 'ಲಂಕೆ' ಮೊದಲಾದ ಕನ್ನಡ ಸಿನಿಮಾಗಳಲ್ಲಿ ಅವರು ನಟಿಸಿದ್ದಾರೆ. ಎಸ್ತರ್ ಹಲವು ವರ್ಷಗಳ ಕಾಲ ಹುಡುಗನೊಬ್ಬನ ಜೊತೆ ಡೇಟ್ ಮಾಡಿದ್ದರು. ಮದುವೆ ಆದ ಬಳಿಕ ಇವರ ಸಂಸಾರ ಹೆಚ್ಚುದಿನ ನಡೆಯಲಿಲ್ಲ. ಎಸ್ತರ್ ಅವರು 2019ರಲ್ಲಿ ನೋಯೆಲ್ ಸೀನ್ ಎಂಬುವವರನ್ನು ಮದುವೆ ಆದರು. ಇವರ ನಿಶ್ಚಿತಾರ್ಥ ನಡೆದು ವರ್ಷವೇ ಕಳೆದಿತ್ತು.

## ಅಲ್ಲು ಅರ್ಜುನ್, ರಶ್ಮಿಕಾ ಮಂದಣ್ಣ ರೊಮ್ಯಾಂಟಿಕ್ ಡ್ಯಾನ್ಸ್

ಕನ್ನಡದ ನಟಿ ರಶ್ಮಿಕಾ ಮಂದಣ್ಣ ಮತ್ತು ಅಲ್ಲು ಅರ್ಜುನ್ ನಟಿಸಿರುವ ಪುಷ್ಪ 2 ಸಿನಿಮಾ ಡಿ.5ರಂದು ಬಹುಭಾಷೆಯಲ್ಲಿ ರಿಲೀಸ್‌ಗೆ ಸಜ್ಜಾಗಿದೆ. ಇದೀಗ ಅಲ್ಲು ಅರ್ಜುನ್ ಮತ್ತು ರಶ್ಮಿಕಾ ಹೆಜ್ಜೆ ಹಾಕಿರುವ ರೊಮ್ಯಾಂಟಿಕ್ ಹಾಡಿನ ಪ್ರೋಮೋ ರಿಲೀಸ್ ಆಗಿದೆ. ಪುಷ್ಪ 2'ನಲ್ಲಿ ಪುಷ್ಪರಾಜ್ ಮತ್ತು ಶ್ರೀವಲ್ಲಿ ಕಲರ್ ಫುಲ್ ಲೋಕೇಷನ್‌ನಲ್ಲಿ ಹೆಜ್ಜೆ ಹಾಕಿದ್ದಾರೆ. ಸದ್ಯ ಹಾಡಿನ ಪ್ರೋಮೋವನ್ನು ಚಿತ್ರತಂಡ ರಿವೀಲ್ ಮಾಡಿದೆ. ಡಿ.1ರಂದು ಚಿತ್ರದ ಫುಲ್ ಸಾಂಗ್ ರಿಲೀಸ್ ಮಾಡೋದಾಗಿ ತಿಳಿಸಿದೆ. ಸದ್ಯ ಚಿತ್ರದ ಹಾಡಿನ ಪ್ರೋಮೋ ನೋಡಿಯೇ ಅಭಿಮಾನಿಗಳು ಥ್ರಿಲ್ ಆಗಿದ್ದಾರೆ. ಅಂದಹಾಗೆ, ಡಿ.5ರಂದು ರಿಲೀಸ್ ಆಗಲಿರುವ 'ಪುಷ್ಪ 2' ಚಿತ್ರದಲ್ಲಿ ಅಲ್ಲು ಅರ್ಜುನ್, ರಶ್ಮಿಕಾ, ಶ್ರೀಲೀಲಾ, ಡಾಲಿ ಧನಂಜಯ, ಅನಸೂಯ, ಫಹಾದ್ ಫಾಸಿಲ್ ಸೇರಿದಂತೆ ಅನೇಕರು ನಟಿಸಿದ್ದಾರೆ.







## ಫ್ಯಾನ್ಸ್‌ಗೆ ಸ್ಪಷ್ಟನೆ ನೀಡಿದ ಆರ್‌ಸಿಬಿ

18ನೇ ಆವೃತ್ತಿಯ ಐಪಿಎಲ್ ಆರಂಭಕ್ಕೂ ಮುನ್ನವೇ ಕನ್ನಡಿಗರ ಕೋಪಕ್ಕೆ ಗುರಿಯಾಗಿದ್ದ ಆರ್‌ಸಿಬಿ ಫ್ರಾಂಚೈಸಿ ಇದೀಗ ತನ್ನ ನಡೆಯನ್ನು ಸಮರ್ಥಿಸಿಕೊಂಡಿರುವುದಲ್ಲದೆ ಕನ್ನಡಿಗರಲ್ಲಿ ತನ್ನ ಮುಂದಿನ ಯೋಜನೆಗಳ ಬಗ್ಗೆಯೂ ಮಾಹಿತಿ ಹಂಚಿಕೊಂಡಿದೆ. ವಾಸ್ತವವಾಗಿ ಐಪಿಎಲ್ ಮೆಗಾ ಹರಾಜು ಮುಗಿದ ಬಳಿಕ ಆರ್‌ಸಿಬಿ ಫ್ರಾಂಚೈಸಿ, ಹಿಂದಿ ಬಾಷೆಯಲ್ಲಿ ತನ್ನ ಅಧಿಕೃತ ಎಕ್ಸ್ ಖಾತೆಯನ್ನು ತೆರೆದು ಆಟಗಾರರ ಹಾಗೂ ತಂಡದ ಬಗ್ಗೆ ಕನ್ನಡದ ಜೊತೆಗೆ ಹಿಂದಿಯಲ್ಲೂ ಮಾಹಿತಿ ನೀಡಲಾರಂಭಿಸಿತ್ತು. ಆರ್‌ಸಿಬಿಯ ಈ ನಡೆಗೆ ಕನ್ನಡಿಗರಿಂದ ತೀವ್ರ ವಿರೋಧ ವ್ಯಕ್ತವಾಗಿತ್ತು. ಕೂಡಲೇ ಆರ್‌ಸಿಬಿ ಹಿಂದಿ ಖಾತೆಯನ್ನು ರದ್ದುಗೊಳಿಸದಿದ್ದರೆ, ಉಗ್ರ ಹೋರಾಟ ನಡೆಸುವುದಾಗಿ ಕನ್ನಡ ಪರ ಸಂಘಟನೆಗಳು ಆಕ್ರೋಶ ಹೊರಹಾಕಿದ್ದವು. ದಿನದಿಂದ ದಿನಕ್ಕೆ ಈ ವಿವಾದ ತೀವ್ರ ಸ್ವರೂಪ ಪಡೆದುಕೊಳ್ಳುತ್ತಿರುವುದನ್ನು ಗಮನಿಸಿದ ಫ್ರಾಂಚೈಸಿ, ಕನ್ನಡಿಗರ ಆಕ್ರೋಶವನ್ನು ತಿಳಿಗೊಳಿಸುವ ಕೆಲಸಕ್ಕೆ ಕೈಹಾಕಿದೆ. ಆರ್‌ಸಿಬಿ ಮುಂಚೂಣಿಯಲ್ಲಿದೆ ಈಗ ಎದ್ದಿರುವ ವಿವಾದಕ್ಕೆ ಸ್ಪಷ್ಟನೆ ನೀಡುವುದರ ಜೊತೆಗೆ ಭವಿಷ್ಯದ ಯೋಜನೆಗಳ ಬಗ್ಗೆಯೂ ಮಾಹಿತಿ ಹಂಚಿಕೊಂಡಿರುವ ಫ್ರಾಂಚೈಸಿ, ' ಆರ್‌ಸಿಬಿಗೆ ಪ್ರಪಂಚದಾದ್ಯಂತ ಕೋಟ್ಯಾಂತರ ಅಭಿಮಾನಿಗಳಿದ್ದಾರೆ. ಹೀಗಾಗಿ ಅವರಿಗೆ ಮತ್ತಷ್ಟು ಹತ್ತಿರವಾಗಲು ಆರ್‌ಸಿಬಿ ಸೋಶಿಯಲ್ ಮೀಡಿಯಾದಲ್ಲಿ ಸದಾ ಸಕ್ರಿಯವಾಗಿದೆ. ಕಳೆದ ಐದು ವರ್ಷಗಳಲ್ಲಿ (2020-2024), ಸಾಮಾಜಿಕ ಜಾಲತಾಣಗಳಲ್ಲಿ ಹೆಚ್ಚು ಸಕ್ರಿಯವಾಗಿರುವ ಐಪಿಎಲ್ ಫ್ರಾಂಚೈಸಿಗಳಲ್ಲಿ ಆರ್‌ಸಿಬಿ ಮುಂಚೂಣಿಯಲ್ಲಿದೆ.

**ಆರ್‌ಸಿಬಿಯ ಬಹುಭಾಷಾ ಸೂತ್ರ:** ಹೀಗಾಗಿ ಕೋಟ್ಯಾಂತರ ಅಭಿಮಾನಿಗಳನ್ನು ಒಳಗೊಳ್ಳುವಿಕೆಗೆ ನಡೆಯುತ್ತಿರುವ ಬದ್ಧತೆಯ ಭಾಗವಾಗಿ ಆರ್‌ಸಿಬಿ ಇದೀಗ ಬಹುಭಾಷಾ ಸೂತ್ರವನ್ನು ಅಳವಡಿಸಿಕೊಳ್ಳಲು ಮುಂದಾಗಿದೆ. ಇದಕ್ಕೆ ಮೊದಲ ಹೆಜ್ಜೆಯಾಗಿ ಕರ್ನಾಟಕ ರಾಜ್ಯೋತ್ಸವದಂದು ಆರ್‌ಸಿಬಿಯ ಕನ್ನಡ ಇನ್‌ಸ್ಟಾಗ್ರಾಮ್ ಖಾತೆಯನ್ನು ತೆರೆಯಲಾಯಿತು. ಇದಕ್ಕೆ ಅಭೂತಪೂರ್ವ ಜನಮನ್ನಣೆ ಸಿಕ್ಕಿದ್ದು, ಕೇವಲ ಒಂದು ತಿಂಗಳಲ್ಲಿ 1.6 ಲಕ್ಷಕ್ಕೂ ಹೆಚ್ಚು ಫಾಲೋವರ್ಸ್‌ಗಳನ್ನು ಪಡೆದುಕೊಂಡಿದೆ. ಇದು ತನ್ನ ಸ್ಥಳೀಯ ಅಭಿಮಾನಿಗಳಿಗೆ ತಂಡದ ಸಮರ್ಪಣೆಯನ್ನು ಎತ್ತಿ ತೋರಿಸುತ್ತದೆ. ಹೀಗಾಗಿ ಮುಂಬರುವ ದಿನಗಳಲ್ಲಿ ಭಾರತದ ಇತರ ಭಾಷೆಗಳಲ್ಲೂ ಸೋಶಿಯಲ್ ಮೀಡಿಯಾ ಖಾತೆ ಆರಂಭಿಸಿ ಮಾಹಿತಿ ಹಂಚಿಕೊಳ್ಳುವುದಾಗಿ ತಿಳಿಸಿದೆ.

**ಪ್ರತಿ ವರ್ಷ 1,000 ಕ್ಕೂ ಹೆಚ್ಚು ವೀಡಿಯೊ:** ಯಾವುದೇ ಪೋಸ್ಟ್‌ಗಳನ್ನು ಹಂಚಿಕೊಳ್ಳುವಾಗ ಕನ್ನಡಕ್ಕೆ ಮೊದಲ ಆಧ್ಯತೆ ನೀಡಲಿದ್ದು, ಆ ಬಳಿಕ ಭಾರತದ ಇತರೆ ಭಾಷೆಗಳಿಗೆ ಡಬ್ ಮಾಡಲಾಗುತ್ತದೆ. ಮುಂಬರುವ ದಿನಗಳಲ್ಲಿ ಸುಧಾರಿತ ತಂತ್ರಜ್ಞಾನವನ್ನು ಬಳಸಿಕೊಂಡು ಪ್ರತಿ ವರ್ಷ 1,000 ಕ್ಕೂ ಹೆಚ್ಚು ವೀಡೀಯೊಗಳನ್ನು ಸೋಶಿಯಲ್ ಮೀಡಿಯಾದಲ್ಲಿ ಪೋಸ್ಟ್ ಮಾಡುವ ಗುರಿ ಹೊಂದಿದ್ದು, ವಿವಿಧ ಭಾರತೀಯ ಭಾಷೆಗಳಿಗೆ ಡಬ್ ಮಾಡಲು ಆರ್‌ಸಿಬಿ ಯೋಜಿಸಿದೆ.

## ಮೊದಲ ಪಂದ್ಯದಲ್ಲೇ ಪಾಕಿಸ್ತಾನದ ವಿರುದ್ಧ ಮುಗ್ಗರಿಸಿದ ಭಾರತ



ಯುಎಇಯಲ್ಲಿ ನಿನ್ನೆಯಿಂದ ಆರಂಭವಾಗಿರುವ ಪುರುಷರ ಅಂಡರ್-19 ಏಷ್ಯಾ ಕಪ್ ಪಂದ್ಯಾವಳಿಯಲ್ಲಿ ಟೀಂ ಇಂಡಿಯಾ ತನ್ನ ಮೊದಲ ಪಂದ್ಯದಲ್ಲಿ ಸಾಂಪ್ರಾದಾಯಿಕ ಎದುರಾಳಿ ಪಾಕಿಸ್ತಾನವನ್ನು ಎದುರಿಸಿತ್ತು.

ಆದರೆ ಉಭಯ ತಂಡಗಳ ನಡುವೆ ನಡೆದ ಈ ಹೈವೋಲ್ಟೇಜ್ ಕದನವನ್ನು ಏಕಪಕ್ಷೀಯವಾಗಿ ಗೆದ್ದುಕೊಳ್ಳುವಲ್ಲಿ ಪಾಕಿಸ್ತಾನ ಯುವ ಪಡೆ ಯಶಸ್ವಿಯಾಗಿದೆ. ದುಬೈ ಅಂತರಾಷ್ಟ್ರೀಯ ಕ್ರಿಕೆಟ್ ಸ್ಟೇಡಿಯಂನಲ್ಲಿ ನಡೆದ ಈ ಪಂದ್ಯದಲ್ಲಿ ಟೀಂ ಇಂಡಿಯಾ, ಪಾಕಿಸ್ತಾನದ ವಿರುದ್ಧ 43 ರನ್‌ಗಳ ಸೋಲನುಭವಿಸಿದೆ. ಭಾರತ ತಂಡದ ಪರ ಬ್ಯಾಟಿಂಗ್ ಹಾಗೂ ಬೌಲಿಂಗ್ ಎರಡೂ ವಿಭಾಗದ ವೈಫಲ್ಯವೇ ಈ ಪಂದ್ಯದ ಸೋಲಿಗೆ ಪ್ರಮುಖ ಕಾರಣವಾಗಿದ್ದು, ಇದೀಗ ಸೋಲಿನೊಂದಿಗೆ ಟೀಂ ಇಂಡಿಯಾ ತನ್ನ ಅಭಿಯಾನವನ್ನು ಆರಂಭಿಸಿದೆ.

**ಬೃಹತ್ ಮೊತ್ತ ಕಲೆಹಾಕಿದ ಪಾಕ್**

ಈ ಪಂದ್ಯದಲ್ಲಿ ಪಾಕಿಸ್ತಾನ ತಂಡ ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಮಾಡಲು ನಿರ್ಧರಿಸಿತು. ಅದರಂತೆ ಮೊದಲು ಬ್ಯಾಟ್ ಮಾಡಿದ ಪಾಕಿಸ್ತಾನ ನಿಗದಿತ 50 ಓವರ್‌ಗಳಲ್ಲಿ 7 ವಿಕೆಟ್ ನಷ್ಟಕ್ಕೆ 281 ರನ್ ಗಳಿಸಿತು. ಪಾಕ್ ಪರ ಇನ್ನಿಂಗ್ಸ್ ಆರಂಭಿಸಿದ್ದ ಉಸ್ಮಾನ್ ಖಾನ್ ಮತ್ತು ಶಹಜೇಬ್ ಖಾನ್ ಅಮೋಘ ಬ್ಯಾಟಿಂಗ್ ಪ್ರದರ್ಶಿಸಿದರು. ಇಬ್ಬರೂ ಆಟಗಾರರು ಮೊದಲ ವಿಕೆಟ್‌ಗೆ 160 ರನ್‌ಗಳ ಜೊತೆಯಾಟ ನೀಡಿದರು. ಈ ವೇಳೆ ಉಸ್ಮಾನ್ ಖಾನ್ 94 ಎಸೆತಗಳಲ್ಲಿ 60 ರನ್ ಗಳಿಸಿದರೆ, ಶಹಜೇಬ್ ಖಾನ್ 147 ಎಸೆತಗಳಲ್ಲಿ 10 ಸಿಕ್ಸರ್ ಮತ್ತು 5 ಬೌಂಡರಿ ಸಹಿತ ಒಟ್ಟು 159 ರನ್ ಕಲೆಹಾಕಿದರು. ಮತ್ತೊಂದೆಡೆ, ಭಾರತದ ಪರ ಸಮರ್ಥ್ ನಾಗರಾಜ್ ಗರಿಷ್ಠ 3 ವಿಕೆಟ್ ಪಡೆದರೆ, ಆಯುಷ್ ಮ್ಹಾತ್ರೆ 2 ವಿಕೆಟ್ ಮತ್ತು ಯುಧಾಜಿತ್ ಗುಹಾ-ಕಿರಣ್ ಚೋರ್ಮಲೆ ತಲಾ ಒಂದು ವಿಕೆಟ್ ಪಡೆದರು. ತನ್ನ ಚೊಚ್ಚಲ ಪಂದ್ಯವನ್ನು ಸೋತಿರುವ ಭಾರತ ಇದೀಗ ಡಿ. 2 ರಂದು ಶಾರ್ಜಾದಲ್ಲಿ ಜಪಾನ್ ತಂಡವನ್ನು ಎದುರಿಸಲಿದೆ.

ಆ ನಂತರ ತನ್ನ ಗುಂಪು ಹಂತದ ಕೊನೆಯ ಪಂದ್ಯದಲ್ಲಿ ಯುಎಇ ತಂಡವನ್ನು ಡಿಸೆಂಬರ್ 4 ರಂದು ಎದುರಿಸಲಿದೆ. ಇದಾದ ನಂತರ ಎರಡೂ ಗುಂಪುಗಳ ತಲಾ 2 ಅಗ್ರ ತಂಡಗಳು ಸೆಮಿಫೈನಲ್‌ಗೆ ಅರ್ಹತೆ ಪಡೆಯುತ್ತವೆ. ಎರಡು ಸೆಮಿಫೈನಲ್ ಗಳಲ್ಲಿ ಗೆಲ್ಲುವ ತಂಡಗಳು ಡಿಸೆಂಬರ್ 8 ರಂದು ಪ್ರಶಸ್ತಿಗಾಗಿ ಸೆಣಸಾಡಲಿವೆ.

### ಭಾರತದ ಬ್ಯಾಟಿಂಗ್ ವಿಫಲ

**282 ರನ್‌ಗಳ ಗುರಿಗೆ ಉತ್ತರವಾಗಿ ಭಾರತದ ಬ್ಯಾಟಿಂಗ್ ಸಂಪೂರ್ಣ ವಿಫಲವಾಯಿತು. ತಂಡ 28 ರನ್ ಗಳಿಸುವಷ್ಟರಲ್ಲಿ ಆಯುಷ್ ಮ್ಹಾತ್ರೆ ರೂಪದಲ್ಲಿ ಮೊದಲ ವಿಕೆಟ್ ಕಳೆದುಕೊಂಡಿತು. ಇದಾದ ಬಳಿಕವೂ ಭಾರತದ ಪೆವಿಲಿಯನ್ ಪರೇಡ್ ಮುಂದುವರೆಯಿತು. ಅದರ ಪರಿಣಾಮವಾಗಿ ಭಾರತ ತಂಡದ ಅರ್ಧದಷ್ಟು ಮಂದಿ ಕೇವಲ 134 ರನ್‌ಗಳಿಗೆ ಪೆವಿಲಿಯನ್ ಸೇರಿಕೊಂಡರು. ಆದರೆ, ತಂಡದ ಪರ ಏಕಾಂಗಿ ಹೋರಾಟ ನೀಡಿದ ನಿಖಿಲ್ ಕುಮಾರ್ 77 ಎಸೆತಗಳಲ್ಲಿ 67 ರನ್ ಬಾರಿಸಿದರಾದರೂ ತಂಡವನ್ನು ಗೆಲುವಿನ ದಡ ಮುಟ್ಟಿಸಲು ಅವರಿಗೆ ಸಾಧ್ಯವಾಗಲಿಲ್ಲ. ಏಕೆಂದರೆ ಇಡೀ ತಂಡವು ಕೇವಲ 47.1 ಓವರುಗಳಲ್ಲಿ ಆಲೌಟ್ ಆಗುವ ಮೂಲಕ 237 ರನ್‌ಗಳಿಸಲಷ್ಟೇ ಶಕ್ತವಾಯಿತು.**

## ಡಬ್ಲ್ಯುಟಿಸಿ ಪಾಯಿಂಟ್ ಪಟ್ಟಿಯಲ್ಲಿ 2ನೇ ಸ್ಥಾನಕ್ಕೇರಿದ ಆಫ್ರಿಕಾ



ವಿಶ್ವ ಟೆಸ್ಟ್ ಚಾಂಪಿಯನ್‌ಶಿಪ್ ಫೈನಲ್ ರೇಸ್‌ನಲ್ಲಿರಿವ ದಕ್ಷಿಣ ಆಫ್ರಿಕಾ ತಂಡ ಶ್ರೀಲಂಕಾ ವಿರುದ್ಧ ಅಮೋಘ ಜಯ ಸಾಧಿಸುವ ಮೂಲಕ ಪಟ್ಟಿಯಲ್ಲಿ ಎರಡನೇ ಸ್ಥಾನಕ್ಕೇರಿದೆ. ಹೀಗಾಗಿ ಆಸ್ಟ್ರೇಲಿಯಾ ಮೂರನೇ ಸ್ಥಾನಕ್ಕೆ ಕುಸಿದಿದೆ. ಇದೀಗ ಟೀಂ ಇಂಡಿಯಾ ಕೂಡ ಮೊದಲ ಸ್ಥಾನ ಕಳೆದುಕೊಳ್ಳುವ ಆತಂಕದಲ್ಲಿದೆ. 2023-25ರ ವಿಶ್ವ ಟೆಸ್ಟ್ ಚಾಂಪಿಯನ್‌ಶಿಪ್ ಫೈನಲ್ ರೇಸ್ ಪಂದ್ಯದಿಂದ ಪಂದ್ಯಕ್ಕೆ ಕುತೂಹಲಕಾರಿ ಘಟ್ಟ ತಲುಪುತ್ತಿದೆ. ಭಾರತ, ಆಸ್ಟ್ರೇಲಿಯಾ, ದಕ್ಷಿಣ ಆಫ್ರಿಕಾ, ಶ್ರೀಲಂಕಾ ಮತ್ತು ನ್ಯೂಜಿಲೆಂಡ್ ಸೇರಿದಂತೆ ಒಟ್ಟು 5 ತಂಡಗಳು ಫೈನಲ್ ತಲುಪಲು ಸ್ಪರ್ಧಿಗಳಾಗಿವೆ. ಇತ್ತೀಚೆಗಷ್ಟೇ ಪರ್ತ್ ಟೆಸ್ಟ್‌ನಲ್ಲಿ ಆಸ್ಟ್ರೇಲಿಯವನ್ನು ಸೋಲಿಸುವ ಮೂಲಕ ಟೀಂ ಇಂಡಿಯಾ ಪಾಯಿಂಟ್ಸ್ ಪಟ್ಟಿಯಲ್ಲಿ ಮತ್ತೊಮ್ಮೆ ಮೊದಲ ಸ್ಥಾನ ಗಳಿಸಿತ್ತು.

ಆದರೆ ಇದೀಗ ಆಸ್ಟ್ರೇಲಿಯಾಕ್ಕೆ ಮತ್ತೊಂದು ದೊಡ್ಡ ಹೊಡೆತ ಬಿದ್ದಿದ್ದು, ಮೊದಲ ಟೆಸ್ಟ್ ಸೋತಿರುವ ಕಾಂಗರೂ ಪಡೆ ಟಾಪ್-2ರಿಂದಲೂ ಹೊರಗುಳಿದಿದೆ. ಅದೇ ಸಮಯದಲ್ಲಿ ಈ ಹಿಂದೆ 5 ನೇ ಸ್ಥಾನದಲ್ಲಿ ದಕ್ಷಿಣ ಆಫ್ರಿಕಾ ನೇರವಾಗಿ ಎರಡನೇ ಸ್ಥಾನಕ್ಕೆ ಬಂದಿದೆ. ಅಂದರೆ ಫೈನಲ್ ರೇಸ್‌ನಲ್ಲಿ ಆಫ್ರಿಕಾ ತಂಡಕ್ಕೆ ಭಾರಿ ಮುನ್ನಡೆ ಸಿಕ್ಕಿದೆ.


ಪ್ರಸ್ತುತ ಶ್ರೀಲಂಕಾ ಹಾಗೂ ದಕ್ಷಿಣ ಆಫ್ರಿಕಾ ನಡುವೆ 2 ಪಂದ್ಯಗಳ ಟೆಸ್ಟ್ ಸರಣಿ ನಡೆಯುತ್ತಿದೆ. ಸರಣಿಯ ಮೊದಲ ಪಂದ್ಯ ಕಿಂಗ್ಸ್ಮೀಡ್ ಡರ್ಬಿಯಲ್ಲಿ ನಡೆಯಿತು. ಈ ಪಂದ್ಯದಲ್ಲಿ ದಕ್ಷಿಣ ಆಫ್ರಿಕಾ ತಂಡ 233 ರನ್‌ಗಳ ಜಯ ಸಾಧಿಸಿತ್ತು.

ಈ ಗೆಲುವಿನೊಂದಿಗೆ ದಕ್ಷಿಣ ಆಫ್ರಿಕಾ ವಿಶ್ವ ಟೆಸ್ಟ್ ಚಾಂಪಿಯನ್‌ಶಿಪ್‌ನ ಅಂಕಪಟ್ಟಿಯನ್ನು ಸಂಪೂರ್ಣವಾಗಿ ಬದಲಾಯಿಸಿದೆ. ದಕ್ಷಿಣ ಆಫ್ರಿಕಾ ಇದುವರೆಗೆ ಆಡಿರುವ 9 ಪಂದ್ಯಗಳಲ್ಲಿ 5 ಗೆಲುವು ಮತ್ತು 3 ಸೋಲುಗಳೊಂದಿಗೆ 59.25 ಶೇಕಡಾವಾರು ಅಂಕಗಳೊಂದಿಗೆ ಎರಡನೇ ಸ್ಥಾನಕ್ಕೇರಿದೆ. ಇದರಿಂದಾಗಿ ಆಸ್ಟ್ರೇಲಿಯಾ ತಂಡ ಮೂರನೇ ಸ್ಥಾನಕ್ಕೆ ಜಾರಿದೆ.

ಮತ್ತೊಂದೆಡೆ ಶ್ರೀಲಂಕಾ ತಂಡ 3ನೇ ಸ್ಥಾನದಿಂದ 5ನೇ ಸ್ಥಾನಕ್ಕೆ ಕುಸಿದಿದ್ದು ಅದರ ಶೇಕಡಾವಾರು ಅಂಕಗಳು 50.00 ಆಗಿವೆ. ಉಳಿದಂತೆ ಟೀಂ ಇಂಡಿಯಾ 15 ಪಂದ್ಯಗಳಲ್ಲಿ 9 ಗೆಲುವು, ಶೇ.61.11 ಅಂಕಗಳೊಂದಿಗೆ ಅಗ್ರಸ್ಥಾನ ಕಾಯ್ದುಕೊಂಡಿದ್ದರೆ, ಆಸ್ಟ್ರೇಲಿಯ ತಂಡ 13 ಪಂದ್ಯಗಳಲ್ಲಿ 8 ಗೆಲುವು ಮತ್ತು 57.69 ಶೇಕಡಾ ಅಂಕಗಳೊಂದಿಗೆ ಮೂರನೇ ಸ್ಥಾನಕ್ಕೆ ಜಾರಿದೆ.

ಇದರರ್ಥ ದಕ್ಷಿಣ ಆಫ್ರಿಕಾ ಈಗ ಟೀಂ ಇಂಡಿಯಾವನ್ನು ಹಿಂದಿಕ್ಕುವ ಅವಕಾಶವನ್ನು ಹೊಂದಿದೆ. ಹೀಗಾಗಿ ಟೀಂ ಇಂಡಿಯಾ ಅಡಿಲೇಡ್ ಟೆಸ್ಟ್‌ನಲ್ಲಿ ಯಾವುದೇ ಬೆಲೆ ತೆತ್ತಾದರೂ ಗೆಲ್ಲಲೇಬೇಕು.

## ಪಾಕ್ ವಿರುದ್ಧ 1 ರನ್‌ಗೆ ಔಟಾದರೂ ಇತಿಹಾಸ ಬರೆದ 13 ವರ್ಷದ ವೈಭವ್



ಐಪಿಎಲ್ ಮೆಗಾ ಹರಾಜಿನಲ್ಲಿ ಕೇವಲ 13 ವರ್ಷಕ್ಕೆ ಕೋಟಿ ಸಂಭಾವನೆ ಪಡೆದು ದಾಖಲೆ ಸೃಷ್ಟಿಸಿದ್ದ ಬಿಹಾರದ ವೈಭವ್ ಸೂರ್ಯವಂಶಿ ಇದೀಗ 19 ವರ್ಷದೊಳಗಿನವರ ಏಷ್ಯಾ ಕಪ್‌ನಲ್ಲಿ ಮತ್ತೊಂದು ಇತಿಹಾಸಕ್ಕೆ ಸಾಕ್ಷಿಯಾಗಿದ್ದಾರೆ. ಐಪಿಎಲ್ ಮೆಗಾ ಹರಾಜಿನಲ್ಲಿ 1 ಕೋಟಿ 10 ಲಕ್ಷ ರೂಪಾಯಿಗೆ ರಾಜಸ್ಥಾನ್ ರಾಯಲ್ಸ್ ತಂಡವನ್ನು ಸೇರಿಕೊಂಡಿದ್ದ ವೈಭವ್, ಐಪಿಎಲ್‌ಗೆ ಆಯ್ಕೆಯಾದ ಅತ್ಯಂತ ಕಿರಿಯ ಆಟಗಾರ ಎನಿಸಿಕೊಂಡಿದ್ದರು. ಇದೀಗ ಅವರು ಪ್ರಸ್ತುತ ಯುಎಇಯಲ್ಲಿ ನಡೆಯುತ್ತಿರುವ ಪುರುಷರ ಅಂಡರ್-19 ಏಷ್ಯಾ ಕಪ್‌ನಲ್ಲಿ ಟೀಂ ಇಂಡಿಯಾ ಪರ ಕಣಕ್ಕಿಳಿದಿದ್ದು, ತಮ್ಮ ಚೊಚ್ಚಲ ಪಂದ್ಯದಲ್ಲೇ ಇತಿಹಾಸ ಸೃಷ್ಟಿಸಿದ್ದಾರೆ. ಸೂರ್ಯವಂಶಿಯ ವಿಶೇಷ ದಾಖಲೆ ದುಬೈನ ದುಬೈ ಅಂತರಾಷ್ಟ್ರೀಯ ಕ್ರಿಕೆಟ್ ಸ್ಟೇಡಿಯಂನಲ್ಲಿ ನಡೆಯುತ್ತಿರುವ ಪಾಕಿಸ್ತಾನ ವಿರುದ್ಧದ ಏಕದಿನ ಪಂದ್ಯದಲ್ಲಿ ವೈಭವ್ ಸೂರ್ಯವಂಶಿ ಟೀಂ ಇಂಡಿಯಾ ಪರ ಪಾದಾರ್ಪಣೆ ಮಾಡುವ ಅವಕಾಶ ಪಡೆದರು. ಅಂಡರ್-19 ಕ್ರಿಕೆಟ್‌ನಲ್ಲಿ ಇದು ಅವರ ಮೊದಲ ಏಕದಿನ ಪಂದ್ಯವಾಗಿದ್ದು, ಈ ಮೂಲಕ ಅವರು ಭಾರತದ ಪರ ಅಂಡರ್-19 ಏಕದಿನ ಪಂದ್ಯವನ್ನಾಡಿದ ಅತ್ಯಂತ ಕಿರಿಯ ಆಟಗಾರ ಎನಿಸಿಕೊಂಡಿದ್ದಾರೆ.

**Printed by : A. BALACHANDRA, Printed at : RAJHANS ENTERPRISES** No. 134, 4th Main Road, Industrial Town, Rajajinagar, Bengaluru 560044, Karnataka. **Owned By, Published By, Editor :T. HOMBE GOWDA,** No. 1230, Jayamahal, Ground Floor, 13th Cross, 2nd Phase, Girinagar, Bengaluru 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
**ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966**